ಸಂಪುಟ: 21, ಸಂಚಿಕೆ: 341, ಪುಟಗಳು: 8, ಬುಧವಾರ, 18 ಸೆಪ್ಟೆಂಬರ್ 2024 RNI NO. KARKAN/2002/08054
epaper: www.sanjemugilu.com



ನೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



### ಸುಭಾಷಿತ

ಕೂರಬೇಡಿ, ನಿಲ್ಲಬೇಡಿ, ಇಳಿಯಬೇಡಿ, ಏರುತ್ತಾ ಇರಿ..
। ಮಾಸ್ತಿ ವೆಂಕಟೇಶ ಅಯ್ಯಂಗಾರ್

### ಪಂಚಾಂಗ

(ಬುಧವಾರ 18, ಸೆಪ್ಟೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ವರ್ಷ ಋತು,
- ಭಾದ್ರಪದ ಮಾಸ, ಶುಕ್ಲ ಪಕ್ಷ,
- ತಿಥಿ: ಪೌರ್ಣಮಿ ಉಪರಿ ಪಾಡ್ಯ
- ನಕ್ಷತ್ರ: ಪೂರ್ವಭಾದ್ರ
- ರಾಹುಕಾಲ: 12:17 ರಿಂದ 1:48
- ಗುಳಿಕಕಾಲ: 10:46 ರಿಂದ 12:17
- ಯಮಗಂಡಕಾಲ: 7:44 ರಿಂದ 9:15

## ಸಂಕ್ಷಿಪ್ತ ಸುದ್ದಿ

### ಹಣಗೆರೆಕಟ್ಟೆಯಲ್ಲಿ ಪ್ಯಾಲೆಸ್ತೀನ್ ಪರ ಫ್ಲೆಕ್ಸ್ ಕ್ರಮಕ್ಕೆ ಸಚಿವರ ಆಗ್ರಹ



**ಶಿವಮೊಗ್ಗ:** ಹಿಂದೂ ಮತ್ತು ಮುಸ್ಲೀಮರ ಧಾರ್ಮಿಕ ಸ್ಥಳವಾಗಿರುವ ಹಣಗೆರೆಕಟ್ಟೆಯಲ್ಲಿ ಪ್ಯಾಲೆಸ್ತೀನ್ ಪರವಾಗಿ ಹಾಕಿರುವ ಫ್ಲೆಕ್ಸ್ ಈಗ ವಿವಾದಕ್ಕೆ ಕಾರಣವಾಗಿದೆ. ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನ ಹಣಗೆರೆಕಟ್ಟೆಯಲ್ಲಿ ನಿನ್ನೆ ಪ್ಯಾಲೆಸ್ತೀನ್ ಪರವಾದ ಫ್ಲೇಕ್ಸ್ ಕಟ್ಟಲಾಗಿತ್ತು. ಇದಕ್ಕೆ ಮಾಜಿ ಗೃಹ ಸಚಿವ ಆರಗ ಜ್ಞಾನೇಂದ್ರ ಅವರು ಆಕ್ರೋಶ ವ್ಯಕ್ತಪಡಿಸಿದ್ದು ಕಿಡಿಗೇಡಿಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸಿದ್ದಾರೆ. ಪ್ರಕರಣ ಸಂಬಂಧ ಶಿವಮೊಗ್ಗ ಎಸ್ಪಿಯವರಿಗೆ ಪತ್ರ ಬರೆದಿದ್ದಾರೆ. ಸದ್ಯ ಮುಂಜಾಗ್ರತ ಕ್ರಮವಾಗಿ ಸ್ಥಳದಲ್ಲಿ ಪೊಲೀಸ್ ಭದ್ರತೆ ನಿಯೋಜನೆ ಮಾಡಲಾಗಿದೆ. ಮೊನ್ನೆ ಈದ್ ಮಿಲಾದ್ ಹಬ್ಬ ಹಿನ್ನೆಲೆ ಹಣಗೆರೆ ಕಟ್ಟೆಯ ದರ್ಗಾದ ಬಳಿ ಫ್ಲೆಕ್ಸ್ ಅಳವಡಿಸಲಾಗಿತ್ತು. ಆದರೆ ಹಬ್ಬದ ಸಂಬಂಧ ಹೊರತುಪಡಿಸಿ ವಿ ಸ್ಟ್ಯಾಂಡ್ ವಿತ್ ಪ್ಯಾಲೆಸ್ತೀನ್ ಎಂಬ ಫ್ಲೆಕ್ಸ್ ಪುಟ 2

### ಬಿಎಂಟಿಸಿ ಬಸ್‌ಗೆ ವಿಶೇಷ ಚೇತನ ಬಲಿ




**ಬೆಂಗಳೂರು:** ಬಿಎಂಟಿಸಿ ಬಸ್ ಅಪಘಾತಕ್ಕೆ ವಿಶೇಷ ಚೇತನ ಬಲಿಯಾಗಿರುವ ಘಟನೆ ನಗರದ ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ನಡೆದಿದೆ. ಯಶವಂತಪುರದಿಂದ ಬಸ್ ಮೆಜೆಸ್ಟಿಕ್‌ಗೆ ಬರುತ್ತಿದ್ದ ವೇಳೆ ಮೆಜೆಸ್ಟಿಕ್ ಬಿಎಂಟಿಸಿ ಬಸ್ ನಿಲ್ದಾಣದ ಎಂಟ್ರಿ ಗೇಟ್ ಬಳಿ ಅವಘಡ ಸಂಭವಿಸಿದೆ. ಘಟನೆಗೆ ಅತಿವೇಗದ ಚಾಲನೆಯೇ ಕಾರಣ ಎಂದು ಸಂಬಂಧಪಟ್ಟ ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಗೆ ಕಾರಣವಾದ ಬಿಎಂಟಿಸಿ ಚಾಲಕ ಗೋಪಾಲಯ್ಯನನ್ನ ಉಪ್ಪಾರಪೇಟೆ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಉಪ್ಪಾರಪೇಟೆ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಡಿಸಿಎಂ ಗಡುವಿನೊಳಗೆ 6000 ರಸ್ತೆ ಗುಂಡಿ ಮುಚ್ಚಿದ ಬಿಬಿಎಂಪಿ

**ಬೆಂಗಳೂರು:** ಬೆಂಗಳೂರಿನ ರಸ್ತೆ ಗುಂಡಿಗಳನ್ನು ಮುಚ್ಚಲು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ 15 ದಿನಗಳ ಗಡುವು ನೀಡಿದ ನಂತರ ಬಿಬಿಎಂಪಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಮರೋಪಾದಿಯಲ್ಲಿ ಕೆಲಸ ಮಾಡಿದ್ದಾರೆ. ಪರಿಣಾಮವಾಗಿ ಬಿಬಿಎಂಪಿ ಈವರೆಗೆ ಸುಮಾರು 6,000 ಗುಂಡಿಗಳನ್ನು ಮುಚ್ಚಿದೆ ಮತ್ತು 32,200 ಚದರ ಮೀಟರ್ ಹಾನಿಗೊಳಗಾದ ರಸ್ತೆ ಮೇಲ್ಮೈಗಳನ್ನು ಸರಿಪಡಿಸಿದೆ ಎಂದು ಮೂಲಗಳು ತಿಳಿಸಿವೆ.

ಇನ್ನೆರಡು ದಿನಗಳಲ್ಲಿ ಎಲ್ಲ ರಸ್ತೆಗುಂಡಿಗಳನ್ನು ಮುಚ್ಚಲಾಗುವುದು ಎಂದು ಬಿಬಿಎಂಪಿ ಅಧಿಕಾರಿಗಳು ಭರವಸೆ ನೀಡಿದ್ದಾರೆ. ಆದರೆ ಹೊಸ ಗುಂಡಿಗಳು ಕಾಣಿಸಿಕೊಳ್ಳುವ ಸಾಧ್ಯತೆ ಇದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.



'ರಸ್ತೆ ಗುಂಡಿ ಗಮನ' ಆಪ್ ಮೂಲಕ ಸುಮಾರು 1,300 ದೂರುಗಳನ್ನು ಸ್ವೀಕರಿಸಲಾಗಿದೆ. ಈ ಪೈಕಿ ಸುಮಾರು 300 ದೂರುಗಳು ರಸ್ತೆ ಗುಂಡಿಗಳಿಗೆ ಸಂಬಂಧಿಸಿದ್ದಲ್ಲ. ಪ್ರಾಥಮಿಕವಾಗಿ ಗುಂಡಿಗೆ ಸಂಬಂಧಿಸಿದ ಸಮಸ್ಯೆಗಳತ್ತ ಗಮನ ಹರಿಸಲಾಗಿದೆ. ಉಳಿದ ಸಮಸ್ಯೆಗಳನ್ನು ಎರಡು ದಿನಗಳಲ್ಲಿ ಪರಿಹರಿಸುವ ನಿರೀಕ್ಷೆಯಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ.

**ಗುಂಡಿ ದುರಸ್ತಿಗೆ ಪ್ರತಿ ವಾರ್ಡ್‌ಗೆ ವಾರ್ಷಿಕ 15 ಲಕ್ಷ ರೂ.:** ರಸ್ತೆಗಳಲ್ಲಿನ ಗುಂಡಿಗಳ ದುರಸ್ತಿಗೆ ಬಿಬಿಎಂಪಿಯು ಪ್ರತಿ ವಾರ್ಡ್‌ಗೆ ವಾರ್ಷಿಕ 15 ಲಕ್ಷ ರೂ.ಗಳನ್ನು ನಿಗದಿಪಡಿಸಿದೆ. ಇದು ವರ್ಷಕ್ಕೆ ಒಟ್ಟು ಸುಮಾರು 30 ಕೋಟಿ ರೂ. ಆಗುತ್ತದೆ. ಪ್ರಮುಖ ರಸ್ತೆಗಳಿಗೆ ಹೆಚ್ಚುವರಿಯಾಗಿ 15 ಕೋಟಿ ರೂ.ಗಳನ್ನು ಮೀಸಲಿಡಲಾಗಿದೆ. ಒಟ್ಟಾರೆಯಾಗಿ ಗುಂಡಿ ದುರಸ್ತಿ ಬಜೆಟ್ 45 ಕೋಟಿ ರೂ. ಆಗಿದ್ದು, ಇಲ್ಲಿಯವರೆಗೆ ಅಂದಾಜು 15 ಕೋಟಿ ರೂ. ವ್ಯಯಿಸಲಾಗಿದೆ.

ಮೆಟ್ರೊ ಕಾಮಗಾರಿ ನಡೆಯುತ್ತಿರುವ ಹೊರ ವರ್ತುಲ ರಸ್ತೆಯಲ್ಲಿ ಸರ್ವೀಸ್ ರಸ್ತೆಗಳನ್ನು ನಿರ್ವ?ಸುವ ಜವಾಬ್ದಾರಿ ಬಿಬಿಎಂಪಿ ಮೇಲಿದೆ. ಮೆಟ್ರೋ ಅಧಿಕಾರಿಗಳು ಮುಖ್ಯ ಮಾರ್ಗಗಳನ್ನು ನಿರ್ವಹಿಸುತ್ತಾರೆ ಎಂದು ಗಿರಿನಾಥ್ ತಿಳಿಸಿದ್ದಾರೆ.

ಹೊರ ವರ್ತುಲ ರಸ್ತೆ ಮತ್ತು ಹೆಚ್ಚಿನ ದಟ್ಟಣೆಯ ಕಾರಿಡಾರ್‌ಗಳನ್ನು ಸುಧಾರಿಸಲು ಬಿಬಿಎಂಪಿ 270 ಕೋಟಿ ರೂ.ಗಳ ಯೋಜನೆಯನ್ನು ಹಮ್ಮಿಕೊಂಡಿದೆ ಮತ್ತು ಪ್ರಸ್ತುತ ಕಾಮಗಾರ ನಡೆಯುತ್ತಿದೆ ಎಂದು ಅವರು ತಿಳಿಸಿದ್ದಾರೆ.

### ತ.ನಾಡಿನ ಉಪ ಮುಖ್ಯಮಂತ್ರಿಯಾಗಿ ಉದಯನಿಧಿ ಸ್ಟಾಲಿನ್
# ನೇಮಕ ಸಾಧ್ಯತೆ

**ತಮಿಳುನಾಡು:** ತಮಿಳುನಾಡಿನ ಉಪಮುಖ್ಯಮಂತ್ರಿಯಾಗಿ ಡಿಎಂಕೆ ನಾಯಕ ಉದಯನಿಧಿ ಸ್ಟಾಲಿನ್ ಅವರನ್ನು ನೇಮಕ ಮಾಡುವ ಸಾಧ್ಯತೆಯಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಇಂಡಿಯಾ ಟುಡೇ ಈ ಕುರಿತು ವರದಿ ಮಾಡಿದೆ, ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಅವರ ಪುತ್ರ ಉದಯನಿಧಿ ಸ್ಟಾಲಿನ್ ಅವರು ಪ್ರಸ್ತುತ ರಾಜ್ಯದ ಕ್ರೀಡಾ ಮತ್ತು ಯುವ ಕಲ್ಯಾಣ ಸಚಿವರಾಗಿದ್ದಾರೆ ಶೀಘ್ರವೇ ಅವರು ಉಪಮುಖ್ಯಮಂತ್ರಿ ಸ್ಥಾನಕ್ಕೇರಲಿದ್ದಾರೆ ಎಂದು ಹೇಳಲಾಗುತ್ತಿದೆ.

ಅಮೆರಿಕಕ್ಕೆ ತೆರಳುವ ಮುನ್ನ ಎಂಕೆ ಸ್ಟಾಲಿನ್ ಕೂಡ ಉದಯನಿಧಿ ಸ್ಟಾಲಿನ್ ಅವರನ್ನು ಉಪಮುಖ್ಯಮಂತ್ರಿ ಹುದ್ದೆಗೆ ಏರಿಸುವ ಸುಳಿವು ನೀಡಿದ್ದರು. ಬದಲಾವಣೆ ಮಾತ್ರ ನಿಶ್ಚಿತ ಮತ್ತು ಜನರು ನಿರೀಕ್ಷಿಸುತ್ತಿರುವುದು ಶೀಘ್ರದಲ್ಲೇ ಸಂಭವಿಸುತ್ತದೆ ಎಂದು ಈ ತಿಂಗಳ ಆರಂಭದಲ್ಲಿ ಯುಎಸ್ ಗೆ ಭೇಟಿ ನೀಡುವ ಮುನ್ನ ಹೇಳಿದ್ದರು.

ಉದಯನಿಧಿ ಸ್ಟಾಲಿನ್ ಕ್ರೀಡಾ ಮತ್ತು ಯುವ ಕಲ್ಯಾಣ ಸಚಿವರಾಗಿರುವುದರ ಜೊತೆಗೆ ವಿಶೇಷ ಕಾರ್ಯಕ್ರಮ ಅನುಷ್ಠಾನದ ಪ್ರಮುಖ ಖಾತೆಯನ್ನು ಸಹ ನಿರ್ವಹಿಸುತ್ತಾರೆ.

ಚೆನ್ನೈ ಮೆಟ್ರೋ ರೈಲು ಹಂತ-2 ರಂತಹ ಪ್ರಮುಖ ಯೋಜನೆಗಳ ಅನುಷ್ಠಾನವನ್ನು ಪರಿಶೀಲಿಸುತ್ತಾರೆ. ಸನಾತನ ಧರ್ಮ ನಿರ್ಮೂಲನೆ ಅಗತ್ಯ ಎಂದು ತಮಿಳುನಾಡು ಸಚಿವ ಉದಯನಿಧಿ ಸ್ಟ್ಯಾಲಿನ್ ಅವರು ಹೇಳಿಕೆ ನೀಡಿದ್ದರು.

ಸನಾತನ ಧರ್ಮವು ಸಾಮಾಜಿಕ ನ್ಯಾಯ ಮತ್ತು ಸಮಾನತೆಗೆ ವಿರುದ್ಧವಾಗಿದೆ ಮತ್ತು ಅದನ್ನು ಮಲೇರಿಯಾ ಮತ್ತು ಡೆಂಗ್ಯೂ ರೀತಿಯಲ್ಲಿ ನಿರ್ಮೂಲನೆ ಮಾಡಬೇಕು ಎಂದು ಹೇಳಿದ್ದರು. ಈ ಹೇಳಿಕೆಗೆ ವಿವಿಧ ವಲಯಗಳಿಂದ ವ್ಯಾಪಕ ಖಂಡನೆ ವ್ಯಕ್ತವಾಗಿತ್ತು.



### ನಂದಿನಿ ಹಾಲಿನ ದರ ಹೆಚ್ಚಳವಲ್ಲ, ಬಾಕಿ ಇರುವ ಪ್ರೋತ್ಸಾಹ ಧನ ಬಿಡುಗಡೆ ಮಾಡಲಿ
## ಹಾಲು ಉತ್ಪಾದಕರ ಆಗ್ರಹ



**ಕೋಲಾರ:** ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳು ಹೈನೋದ್ಯಮದಲ್ಲಿ ಕರ್ನಾಟಕದಲ್ಲೇ ಎರಡನೇ ಸ್ಥಾನ ಪಡೆದುಕೊಂಡಿವೆ. ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹೈನೋದ್ಯಮ ನಂಬಿ ಸಾವಿರಾರು ಕುಟುಂಬಗಳು ಜೀವನ ನಡೆಸುತ್ತಿವೆ. ಲಕ್ಷಾಂತರ ಜನ ಹಾಲು ಉತ್ಪಾದಕರಿದ್ದಾರೆ. ಬಯಲು ಸೀಮೆಯ ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳು ಕಳೆದ ಎರಡು ವರ್ಷಗಳಿಂದ ಬರಗಾಲಕ್ಕೆ ತುತ್ತಾಗಿವೆ. ಹೀಗಿರುವಾಗ ರಾಜ್ಯದಲ್ಲಿ ರೈತರು ಹಾಗೂ ಹಾಲು ಉತ್ಪಾದಕರ ನೆರವಿಗೆ ನಿಲ್ಲಬೇಕಿದ್ದ ರಾಜ್ಯ ಸರ್ಕಾರ ರೈತ ವಿರೋಧಿ ದೋರಣೆ ಅನುಸರಿಸುತ್ತಿದೆ ಎಂದು ರೈತರು ಆರೋಪಿಸಿದ್ದಾರೆ.

ಹಾಲು ಉತ್ಪಾದಕರ ನೆರವಿಗೆ ನಿಲ್ಲುವ ಉದ್ದೇಶದಿಂದ ನಂದಿನಿ ಹಾಲಿನ ದರವನ್ನು ಸುಮಾರು 5 ರೂಪಾಯಿ ಏರಿಕೆ ಮಾಡಿ ಅದನ್ನು ನೇರವಾಗಿ ರೈತರಿಗೆ ಕೊಡುವುದಾಗಿ ಇತ್ತೀಚೆಗಷ್ಟೇ ಸಿಎಂ ಸಿದ್ದರಾಮಯ್ಯ ಹೇಳಿದ್ದರು. ಈ ಹೇಳಿಕೆ ರಾಜ್ಯದಲ್ಲಿ ಸಾಕಷ್ಟು ಸದ್ದು ಮಾಡಿದೆ. ಪುಟ 2

# ಬಿಯರ್ ಪ್ರಿಯರಿಗೆ ಮತ್ತೆ ಶಾಕ್
### ಅಕ್ಟೋಬರ್ 1ರಿಂದಲೇ ಪರಿಷ್ಕೃತ ದರ ಜಾರಿಗೆ ಸಾಧ್ಯತೆ!

**ಬೆಂಗಳೂರು:** ಒಂದೇ ವರ್ಷದ ಅವಧಿಯಲ್ಲಿ ಎರಡು ಬಾರಿ ಮದ್ಯ ಪ್ರಿಯರಿಗೆ ಶಾಕ್ ನೀಡಿದ್ದ ಸರ್ಕಾರ ಈಗ ಮತ್ತೊಮ್ಮೆ ಶಾಕ್ ಕೊಡಲು ಮುಂದಾಗಿದೆ. ಅಕ್ಟೋಬರ್ ಮೊದಲ ವಾರದಿಂದಲೇ ಮತ್ತೆ ಪರಿಷ್ಕೃತ ದರ ಜಾರಿ ಮಾಡುವ ಸಾಧ್ಯತೆಯಿದೆ ಎಂದು ಉನ್ನತ ಮೂಲಗಳಿಂದ ತಿಳಿದುಬಂದಿದೆ.

ಈಗಾಗಲೇ ಒಂದು ವರ್ಷದ ಅವಧಿಯಲ್ಲಿ ಎರಡು ಬಾರಿ ಮದ್ಯ ದರ ಏರಿಕೆ ಮಾಡಿ ಸರ್ಕಾರ ಶಾಕ್ ನೀಡಿತ್ತು. ಇದೀಗ ಮತ್ತೆ ಸರ್ಕಾರ ಶಾಕ್ ನೀಡಲು ಮುಂದಾಗಿದೆ.

ಹೌದು. 2023ರ ಜುಲೈನಲ್ಲಿ ಮಂಡಿಸಿದ್ದ ಬಜೆಟ್‌ನಲ್ಲಿ ಸಿಎಂ ಸಿದ್ದರಾಮಯ್ಯನವರು ಐಎಂಎಲ್ ಮೇಲೆ ಶೇ.20 ಮತ್ತು ಬಿಯರ್ ಮೇಲೆ ಶೇ.10 ಅಬಕಾರಿ ಸುಂಕ ಹೆಚ್ಚಿಸಿದ್ದರು. ಇದಕ್ಕೂ ಮುನ್ನ ರಾಜ್ಯದಲ್ಲಿ ತಯಾರಿಸಲಾದ ಅಥವಾ ಆಮದು ಮಾಡಿಕೊಳ್ಳುವ ಬಿಯರ್ ಬಾಟಲ್ ಮೇಲೆ ಹೆಚ್ಚುವರಿ ಅಬಕಾರಿ ಸುಂಕವನ್ನು ಶೇ.10ರಷ್ಟು ಹೆಚ್ಚಿಸಲಾಗಿತ್ತು.



ಈಗ ಮತ್ತೊಮ್ಮೆ ಬಿಯರ್ ಬೆಲೆ ಏರಿಕೆ ಬಗ್ಗೆ ಅಬಕಾರಿ ಇಲಾಖೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಇದಕ್ಕೆ ಸರ್ಕಾರ ಅಸ್ತು ಅಂದಿದ್ದು, ಅ.1 ರಿಂದ ಬೆಲೆ ಏರಿಕೆಯಾಗುವ ಸಾಧ್ಯತೆ ಖಚಿತವಾದಂತಿದೆ. ಪುಟ 2

# ಸಿಲಿಕಾನ್ ಸಿಟಿಯ ಬಸ್‌ಗಳಷ್ಟೇ ಅಲ್ಲ, ಇನ್ಮುಂದೆ ಬಸ್ ಸ್ಟಾಪ್‌ಗಳೂ ಸ್ಮಾರ್ಟ್!

**ಬೆಂಗಳೂರು:** ರಾಜಧಾನಿಯ ಬಸ್‌ಗಳು ಸ್ಮಾರ್ಟ್ ಆಗುತ್ತಿದ್ದಂತೆ ಇದೀಗ ಬಸ್ ತಂಗುದಾಣಗಳೂ ಸ್ಮಾರ್ಟ್ ಆಗುತ್ತಿವೆ. ಹೆಣ್ಣುಮಕ್ಕಳ ಸುರಕ್ಷತೆಯನ್ನ ಆದ್ಯತೆಯನ್ನಾಗಿಸಿಕೊಂಡು ಬೆಂಗಳೂರಿನ ಬಸ್ ಸ್ಟಾಪ್‌ಗಳನ್ನ ಸ್ಮಾರ್ಟ್ ಆಗಿಸುವ ಯೋಜನೆ ಕಾರ್ಯರೂಪಕ್ಕೆ ಬಂದಿದೆ.

ಹೌದು, ಇನ್ಮುಂದೆ ಕೇವಲ ಬಸ್‌ಗಳಲ್ಲಷ್ಟೇ ಅಲ್ಲ, ಬಸ್ ನಿಲ್ದಾಣಗಳನ್ನೂ ಸ್ಮಾರ್ಟ್ ಆಗಿಸುವ ಮೂಲಕ ಹೆಣ್ಣುಮಕ್ಕಳ ಸುರಕ್ಷತೆಗೆ ಹೆಚ್ಚಿನ ಗಮನ ನೀಡಲಾಗುತ್ತದೆ. ಸೇಪಿಯನ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಸಿಎಸ್‌ಆರ್ ಅನುದಾನದಿಂದ ಶಿಲ್ಪಾ ಫೌಂಡೇಷನ್ ನಗರದ 3 ಕಡೆಗಳಲ್ಲಿ ಸ್ಮಾರ್ಟ್ ನಿಲ್ದಾಣ ನಿರ್ಮಿಸಿದೆ. ಈ ಮೂಲಕ ರಾಜಧಾನಿಯ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಆರಂಭಿಸಿರುವ ಬ್ರ್ಯಾಂಡ್ ಬೆಂಗಳೂರು ಯೋಜನೆಗೆ ಇನ್ನಷ್ಟು ಬಲ ನೀಡುತ್ತಿದೆ. ಪುಟ 2



### ಅಭಿಮಾನ್ ಸ್ಟುಡಿಯೋದಲ್ಲಿರೋ ವಿಷ್ಣು ಸ್ಮಾರಕಕ್ಕೆ ಪೂಜೆ ಸಲ್ಲಿಸದಂತೆ ತಡೆ
# ಪ್ರತಿಭಟನೆಗೆ ವಿಷ್ಣು ಫ್ಯಾನ್ಸ್ ನಿರ್ಧಾರ

**ಬೆಂಗಳೂರು:** ಅಭಿಮಾನ್ ಸ್ಟುಡಿಯೋದಲ್ಲಿರೋ ವಿಷ್ಣು ಸ್ಮಾರಕಕ್ಕೆ ಪೂಜೆ ಸಲ್ಲಿಸದಂತೆ ನಟ ಬಾಲಣ್ಣ ಅವರ ಮಕ್ಕಳಿಂದ ತಡೆಯೊಡ್ಡಿದ ಹಿನ್ನೆಲೆ ಅಭಿಮಾನ್ ಸ್ಟುಡಿಯೋ ಮುಂದೆ ದಿ. ಡಾ.ವಿಷ್ಣುವರ್ಧನ್ ಅಭಿಮಾನಿಗಳು ಪ್ರತಿಭಟನೆಗೆ ಮುಂದಾಗಿದ್ದಾರೆ.

ದಿ. ಡಾ.ವಿಷ್ಣುವರ್ಧನ್ ಅವರ 74ನೇ ಜನ್ಮದಿನದ ಅಂಗವಾಗಿ ಸಾವಿರಾರು ಅಭಿಮಾನಿಗಳು ಬೆಂಗಳೂರಿನ ಅಭಿಮಾನ್ ಸ್ಟುಡಿಯೋ ಸ್ಮಾರಕಕ್ಕೆ ಪೂಜೆ ಸಲ್ಲಿಸಲು ಆಗಮಿಸಿದ್ದಾರೆ. ದೂರದೂರುಗಳಿಂದ ಬೆಳ್ಳಂಬೆಳಗ್ಗೆಯೇ ಬಂದು ಸಾಲುಗಟ್ಟಿ ನಿಂತಿದ್ದಾರೆ. ಆದ್ರೆ ವಿಷ್ಣು ಸ್ಮಾರಕಕ್ಕೆ ಪೂಜೆ ಸಲ್ಲಿಸದಂತೆ ನಟ ಬಾಲಣ್ಣ ಅವರ ಮಕ್ಕಳು ತಡೆಯೊಡ್ಡಿದ್ದಾರೆ. ಸ್ಟುಡಿಯೋ ಗೇಟ್ ಬೀಗ ಹಾಕಿ ಸ್ಮಾರಕ ಮೈಸೂರಿನಲ್ಲಿ ಆಗಿರುವುದರಿಂದ ಅಲ್ಲಿಗೇ ಹೋಗಿ ಪೂಜೆ ಮಾಡುವಂತೆ ಖಾರವಾಗಿ ಹೇಳಿದ್ದಾರೆ. ಇದರಿಂದ ಆಕ್ರೋಶಗೊಂಡ ಅಭಿಮಾನಿಗಳು ಸ್ಮಾರಕದ ಗೇಟ್ ಬಳಿ ಪ್ರತಿಭಟನೆಗೆ ನಿರ್ಧರಿಸಿದ್ದಾರೆ.



ವಿಷ್ಣುವರ್ಧನ್ ಹೆಸರಿನಲ್ಲಿ ಅಭಿಮಾನಿ ಸ್ಟುಡಿಯೋದಲ್ಲಿ ಯಾವುದೇ ಕಾರ್ಯಕ್ರಮ, ಸಂಭ್ರಮಾಚಾರಣೆ ಮಾಡದಂತೆ ನಟ ಬಾಲಣ್ಣ ಅವರ ಮಕ್ಕಳು ಕೋರ್ಟಿನಿಂದ ತಡೆಯಾಜ್ಞೆ ತಂದಿದ್ದಾರೆ. ಆದ್ರೆ ಅಭಿಮಾನಿಗಳು ಪೂಜೆ ಸಲ್ಲಿಸೋಕೆ ಜಿಲ್ಲಾಧಿಕಾರಿ ಅನುಮತಿ ನೀಡಿದ್ದಾರೆ. ಇದರ ಹೊರತಾಗಿಯೂ ಕೋರ್ಟ್ ತಡೆಯಾಜ್ಞೆ ನೆಪ ಹೇಳಿ ಕೆಂಗೇರಿ ಪೊಲಿಸರು ಅನುಮತಿಗೆ ನಿರಾಕರಿಸಿದ್ದಾರೆ.

ಇದರಿಂದ ಅಸಮಾಧಾನಗೊಂಡ ನೂರಾರು ಸಂಖ್ಯೆಯ ವಿಷ್ಣುವರ್ಧನ್ ಅಭಿಮಾನಿಗಳು ಅಭಿಮಾನ್ ಸ್ಟುಡಿಯೋ ಗೇಟ್ ಬಳಿಯೇ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದಾರೆ. ಇದರಿಂದ ಹುಟ್ಟು ಹಬ್ಬದ ದಿನವೇ ಅಭಿಮಾನ್ ಸ್ಟೂಡಿಯೋ ಮಾಲೀಕರು ಮತ್ತು ವಿಷ್ಣು ಫ್ಯಾನ್ಸ್‌ನಡುವೆ ಶೀತಲ ಸಮರ ಮುಂದುವರಿದಿದೆ.

### ಕುಲಪತಿ ನೇಮಕ ನಿರ್ಧಾರ ಸರ್ಕಾರದ ಸುಪರ್ದಿಗೆ
# ಸಚಿವ ಸಂಪುಟ ಸಭೆಯಲ್ಲಿ ರಾಜ್ಯಪಾಲರಿಗೆ ಟಕ್ಕರ್

**ಬೆಂಗಳೂರು:** ಕರ್ನಾಟಕದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮತ್ತು ರಾಜ್ಯ ಕಾಂಗ್ರೆಸ್ ಸರ್ಕಾರದ ನಡುವಣ ಜಟಾಪಟಿ ಸದ್ಯಕ್ಕೆ ಬಗೆಹರಿಯು ಲಕ್ಷಣ ಕಾಣಿಸುತ್ತಿಲ್ಲ. ಕಾಂಗ್ರೆಸ್ ಸರ್ಕಾರ ರಚನೆಯಾದ ನಂತರದ ಪ್ರಕರಣಗಳ ವಿವರ ಕೋರಿ ಮುಖ್ಯ ಕಾರ್ಯದರ್ಶಿಗಳಿಗೆ ರಾಜ್ಯಪಾಲರು ಪತ್ರ ಬರೆದ ಬೆನ್ನಲ್ಲೇ ಕಾಂಗ್ರೆಸ್ ನಾಯಕರು ಸಚಿವ ಸಂಪುಟ ಸಭೆಯ ಮೂಲಕ ಅವರಿಗೆ ಟಕ್ಕರ್ ನೀಡಿದ್ದಾರೆ.



ಕಲ್ಯಾಣ ಕರ್ನಾಟಕದ ಕಲಬುರಗಿಯಲ್ಲಿ ಮಂಗಳವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ, ರಾಜ್ಯಪಾಲರ ಧೋರಣೆ ಬಗ್ಗೆ ಆಕ್ರೋಶ ವ್ಯಪ್ತವಾಯಿತು. ಸಿಎಂ ಸಿದ್ದರಾಮಯ್ಯ ಆದಿಯಾಗಿ ಸಂಪುಟ ಸಹೋದ್ಯೋಗಿಗಳು ರಾಜ್ಯಪಾಲರ ನಡೆಯ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

**ಸಚಿವ ಸಂಪುಟ ಅಸಮಾಧಾನವೇನು?:** ರಾಜ್ಯಪಾಲರ ಇತ್ತೀಚಿನ ನಡೆ ಸರಿಯಾದುದಲ್ಲ. ಅನಗತ್ಯವಾಗಿ ಪತ್ರ ಬರೆದು ವಿವರಣೆ ಕೇಳುತ್ತಾರೆ. ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ವಿವರಣೆ ಕೇಳಿ ಪತ್ರ ಬರೆದಿದ್ದಾರೆ. ರಾಜ್ಯಪಾಲರ ಈ ನಡೆ ಸರಿಯಾದುದಲ್ಲ. ಸರ್ಕಾರದ ವಿರುದ್ಧ ಗೊಂದಲ ಸೃಷ್ಟಿಯಾಗುವಂತೆ ಮಾಡುತ್ತಿದ್ದಾರೆ. ಬಿಜೆಪಿಯ ಅಣತಿಯಂತೆ ಕೆಲಸ ಮಾಡುತ್ತಿದ್ದಾರೆಂದು ರಾಜ್ಯಪಾಲರ ವಿರುದ್ಧ ಸಚಿವರು ಕಿಡಿ ಕಾರಿದರು. ಪುಟ 2

# ಎಲೆಕ್ಟ್ರಾನಿಕ್ ಸಿಟಿಯಲ್ಲಿ ಚಿರತೆ ಪ್ರತ್ಯಕ್ಷ: ಸಿಸಿಟಿವಿಯಲ್ಲಿ ಓಡಾಟದ ದೃಶ್ಯ ಸೆರೆ



**ಬೆಂಗಳೂರು/ಎಲೆಕ್ಟ್ರಾನಿಕ್ ಸಿಟಿ:** ಸಿಲಿಕಾನ್ ಸಿಟಿ ಬೆಂಗಳೂರು ಹೊರವಲಯದ ಜನರಿಗೆ ಚಿರತೆ ಕಾಟ ಸದ್ಯಕ್ಕೆ ತಪ್ಪುವಂತೆ ಕಾಣುತ್ತಿಲ್ಲ. ಪದೇ ಪದೇ ಚಿರತೆ ಒಂದಿಲ್ಲೊಂದು ಕಡೆ ಕಾಣಿಸಿಕೊಳ್ಳುತ್ತಿದ್ದು, ಜನರ ನಿದ್ದೆಗೆಡಿಸಿದೆ. ಆದರೆ ಈ ಬಾರಿ ಚಿರತೆ ನೇರ ಐಟಿಬಿಟಿ ಹಬ್‌ಗೆ ಎಂಟ್ರಿ ಕೊಟ್ಟಿದ್ದು, ಐಟಿಸಿಟಿ ಮಂದಿಯನ್ನ ಬೆಚ್ಚಿಬೀಳಿಸಿದೆ.

ನಸುಕಿನ ಜಾವ ಮೂರು ಗಂಟೆ ಸಮಯದಲ್ಲಿ ಹೆದ್ದಾರಿಯಲ್ಲಿ ವಾಹನಗಳ ಓಡಾಟದ ಸಂಖ್ಯೆ ಕಡಿಮೆ ಇತ್ತು. ಈ ವೇಳೆ ರಸ್ತೆ ದಾಟಿ ಚಿರತೆ ಹೋಗುತ್ತಿರುವ ದೃಶ್ಯವನ್ನ ಕಂಡು ಅಲ್ಲಿನ ಜನರು ಬೆಚ್ಚಿಬಿದ್ದಿದ್ದಾರೆ. ಸಿಲಿಕಾನ್ ಸಿಟಿ ಬೆಂಗಳೂರಿನ ಐಟಿಬಿಟಿ ಹಬ್ ಎಂದೇ ಖ್ಯಾತಿಗಳಿಸಿರುವ ಎಲೆಕ್ಟ್ರಾನಿಕ್ ಸಿಟಿ ಮೊದಲನೇ ಹಂತದ ಟೋಲ್ ಗೇಟ್ ಬಳಿ ಚಿರತೆಯೊಂದು ರಸ್ತೆ ದಾಟಿ ಹೋಗಿದೆ. ನಸುಕಿನ ಜಾವ ಮೂರು ಗಂಟೆ ಸಮಯದಲ್ಲಿ ಎಲೆಕ್ಟ್ರಾನಿಕ್ ಸಿಟಿಯ ಪನಕ್ ಇಂಡಿಯಾ ಕಂಪನಿ ಭಾಗದಿಂದ ಎನ್‌ಟಿಟಿಎಫ್ ಗ್ರೌಂಡ್ ಭಾಗಕ್ಕೆ ಹೋಗಿದೆ. ಟೋಲ್ ಪ್ಲಾಜಾನಲ್ಲಿ ಕೆಲಸ ಮಾಡುತ್ತಿದ್ದ ಸಿಬ್ಬಂದಿ ಸಿಸಿಟಿವಿ ಕಡೆ ಕಣ್ಣಾಡಿಸಿದಾಗ ಚಿರತೆ ಓಡಾಡಿರೋ ದೃಶ್ಯ ಕಂಡು ಶಾಕ್ ಆಗಿದ್ದಾರೆ.

ಇನ್ನೂ ಇಷ್ಟು ದಿನಗಳ ಕಾಲ ಚಿರತೆ ಆನೇಕಲ್ ಭಾಗದ ಜಿಗಣಿ, ಕ್ಯಾಲಸನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಕಡೆಗಳಲ್ಲಿ ಕಾಣಿಸಿಕೊಳ್ಳುತ್ತಿತ್ತು. ಅರಣ್ಯ ಇಲಾಖೆಯು ಸಹ ಅಷ್ಟಾಗಿ ತಲೆ ಕೆಡಿಸಿಕೊಂಡಿರಲಿಲ್ಲ. ಆದರೆ ಇದೀಗ ಎಲೆಕ್ಟ್ರಾನಿಕ್ ಸಿಟಿಯಂತಹ ಸಾವಿರಾರು ಐಟಿಬಿಟಿ ಕಂಪನಿಗಳಿರುವ ಪ್ರದೇಶದಲ್ಲಿ ಲಕ್ಷಾಂತರ ಮಂದಿ ಕೆಲಸ ಮಾಡುತ್ತಾರೆ. ಇಂತಹ ಜಾಗದಲ್ಲಿ ಚಿರತೆ ಕಾಣಿಸಿಕೊಂಡಿದ್ದು ಐಟಿಸಿಟಿ ಮಂದಿಯನ್ನ ಆತಂಕಕ್ಕೀಡಾಗುವಂತೆ ಮಾಡಿದೆ. ವಿಷಯ ತಿಳಿಯುತ್ತಿದ್ದಂತೆ ಕೆಆರ್‌ಪುರಂ ಜೋನ್ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಗತ್ಯವಿದ್ದಲ್ಲಿ ಬೋನ್ ಇಟ್ಟು ಚಿರತೆಯನ್ನು ಸೆರೆಹಿಡಿಯುವ ಪ್ಲಾನ್ ಮಾಡಿದ್ದಾರೆ.

# ಟೊಮೆಟೋ ಬೆಳೆ ಲಾಸ್: ಸಾಲ ತೀರಿಸಲು ಲ್ಯಾಪ್ ಟಾಪ್ ಕಳ್ಳತನ ಮಾಡಿದ್ದ ಟೆಕ್ಕಿ ಅರೆಸ್ಟ್



**ಬೆಂಗಳೂರು:** ಟೊಮೆಟೋ ಬೆಳೆಯಿಂದ ನಷ್ಟ ಆಗಿದ್ದಕ್ಕೆ ಲ್ಯಾಪ್‌ಟಾಪ್ ಕಳ್ಳತನ ಮಾಡಿ ಮಾರುತ್ತಿದ್ದ ಟೆಕ್ಕಿಯೊಬ್ಬನನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ವ್ಯಕ್ತಿಯನ್ನು ಮುರುಗೇಶ ಎಂದು ಗುರುತಿಸಲಾಗಿದ್ದು, ಸಿಸ್ಟಮ್ ಆಡ್ಮಿನ್ ಆಗಿ ಕೆಲಸ ಮಾಡುತ್ತಿದ್ದ. ಜೊತೆಗೆ ಕೃಷಿಯಲ್ಲಿ ತೊಡಗಿಕೊಂಡಿದ್ದನು ಎನ್ನಲಾಗಿದೆ. ಮುರುಗೇಶ 6 ಎಕರೆಯಲ್ಲಿ ಟೊಮೆಟೋ ಬೆಳೆದಿದ್ದ. ಅದಕ್ಕಾಗಿ ಹೊಸೂರಿನಲ್ಲಿ ಸಾಲ ಮಾಡಿದ್ದ. ಆದರೆ ಬೆಳೆ ಕೈಕೊಟ್ಟ ಕಾರಣ ಸಾಕಷ್ಟು ನಷ್ಟವನ್ನು ಅನುಭವಿಸಿದ್ದ. ಸಾಲ ತೀರಿಸಲಾಗದೇ ಕಳೆದ ಆರು ತಿಂಗಳಿನಿಂದ ಮುರುಗೇಶ ಲ್ಯಾಪ್‌ಟಾಪ್ ಸರ್ವಿಸ್, ರಿಪೇರಿ ಮಾಡುವ ಕೆಲಸದಲ್ಲಿ ತೊಡಗಿದ್ದ. ಹೀಗೆ ಕೆಲಸದ ನೆಪ ಹೂಡಿ ಹಲವಾರು ಲ್ಯಾಪ್‌ಟಾಪ್ ಕದ್ದಿದ್ದ. ತಾನು ಕೆಲಸ ಮಾಡುತ್ತಿದ್ದ ಕಂಪನಿಯಲ್ಲಿಯೂ ಇದೇ ನೆಪ ಹೇಳಿ ಲ್ಯಾಪ್‌ಟಾಪ್‌ನ್ನು ಕಳ್ಳತನ ಮಾಡಿದ್ದ. ಈ ಬಗ್ಗೆ ಕಂಪನಿಯವರು ಪ್ರಶ್ನೆ ಮಾಡಿದಾಗ ರಜೆ ಹಾಕಿ ಪಾರಾಗಿದ್ದ. ಜೊತೆಗೆ ಕದ್ದ ಲ್ಯಾಪ್‌ಟಾಪ್‌ಗಳನ್ನು ಹೊಸೂರಿನಲ್ಲಿ ಮಾರಾಟ ಮಾಡಿದ್ದ. ಸದ್ಯ ಟೆಕ್ಕಿ ಮುರುಗೇಶನನ್ನು ಬಂಧಿಸಲಾಗಿದ್ದು, 22 ಲಕ್ಷ ಮೌಲ್ಯದ 50 ಲ್ಯಾಪ್‌ಟಾಪ್‌ಗಳನ್ನು ವಶಕ್ಕೆ ಪಡೆಯಲಾಗಿದೆ. ವೈಟ್‌ಫೀಲ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಲಬುರಗಿಯಲ್ಲಿ ದಶಕದ ಬಳಿಕ ಸಚಿವ ಸಂಪುಟ ಸಭೆ

# 11,770 ಕೋಟಿ ರೂ. ಅನುದಾನಕ್ಕೆ ಸಂಪುಟ ಅಸ್ತು

**ಕಲಬುರಗಿ:** ಕಲ್ಯಾಣ ಕರ್ನಾಟಕದ ಉತ್ಸವದ ದಿನದಂದೇ ಆ ಭಾಗಕ್ಕೆ ಕಾಂಗ್ರೆಸ್ ಸರ್ಕಾರ ಬಿಗ್ ಗಿಫ್ಟ್ ನೀಡಿದೆ. ಕಲಬುರಗಿಯಲ್ಲಿ ದಶಕದ ಬಳಿಕ ಸಂಪುಟ ಸಭೆ ನಡೆಸಿದ ಸಿಎಂ ಸಿದ್ದರಾಮಯ್ಯ ಹಲವು ಮಹತ್ವದ ನಿರ್ಣಯಗಳನ್ನು ಕೈಗೊಂಡಿದ್ದಾರೆ.



ನಿನ್ನೆ ಚರ್ಚೆಯಾದ ಒಟ್ಟು 56 ವಿಷಯಗಳ ಪೈಕಿ 46 ಕಲ್ಯಾಣ ಕರ್ನಾಟಕಕ್ಕೆ ಸಂಬಂಧಪಟ್ಟಿವೆ. ಸುಮಾರು 12,692 ಕೋಟಿ ಪೈಕಿ ಈ ಭಾಗಕ್ಕೆ 11,770 ಕೋಟಿ ಅನುದಾನ ನೀಡಲಾಗಿದೆ. ಬೀದರ್ ಹಾಗು ರಾಯಚೂರು ಪಟ್ಟಣಗಳನ್ನ ಮಹಾನಗರ ಪಾಲಿಕೆಗಳನ್ನಾಗಿ ಮೇಲ್ದರ್ಜೆಗೆ ಏರಿಸಲಾಗಿದೆ. ಕಲ್ಯಾಣ ಕರ್ನಾಟಕದ ಪ್ರತ್ಯೇಕ ಸಚಿವಾಲಯಕ್ಕೆ ಅನುಮೋದನೆ ಕೊಡಲಾಗಿದೆ.

ಬೀದರ್-ಕಲಬುರಗಿ ಜನವಸತಿ ಪ್ರದೇಶದ ಕುಡಿಯುವ ನೀರಿಗಾಗಿ 7200 ಕೋಟಿ ವೆಚ್ಚ ಮಾಡಲು ಸಂಪುಟ ಅನುಮತಿ ನೀಡಿದೆ. ಇದರಲ್ಲಿ ಕೇಂದ್ರ, ಸರ್ಕಾರ ಅರ್ಧ ಪಾಲನ್ನು ಭರಿಸಲಿದೆ. ಅನುಭವ ಮಂಟಪದಿಂದ ಅಂಜನಾದ್ರಿ ಬೆಟ್ಟದವರೆಗೆ ಇರುವ ಪ್ರವಾಸೋದ್ಯಮ ಸ್ಮಾರಕ ಉಳಿಸಿ ಅಭಿವೃದ್ಧಿ ಮಾಡಲು ಸಂಪುಟ ಒಪ್ಪಿಗೆ ನೀಡಿದೆ. ತುಂಬಿದ ತುಂಗಭದ್ರಾ ಜಲಾಶಯಕ್ಕೆ ಸೆಪ್ಟೆಂಬರ್ 22ರಂದು ಸಿಎಂ ಬಾಗೀನ ಅರ್ಪಿಸಲಿದ್ದಾರೆ. ಅದೇ ದಿನ, ಡ್ಯಾಂನಲ್ಲಿ ನೀರುಳಿಯುವಂತೆ ಮಾಡಿದ ತಂತ್ರಜ್ಞರನ್ನು ಸಮ್ಮಾನಿಸಲಿದ್ದಾರೆ.

ಈ ಬಗ್ಗೆ ಸಿಎಂ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗ ಅಭಿವೃದ್ಧಿಯಾಗದ ಹೊರತು ರಾಜ್ಯದ ಅಭಿವೃದ್ಧಿ ಅಸಾಧ್ಯ. ಇಲ್ಲಿನ ಜನರ ತಲಾದಾಯ ವೃದ್ಧಿ ಜೊತೆಗೆ ಶಿಕ್ಷಣ, ಆರೋಗ್ಯ, ಮೂಲಸೌಕರ್ಯ ಸುಧಾರಣೆ ಸೇರಿದಂತೆ ಸರ್ವಾಂಗೀಣ ಅಭಿವೃದ್ಧಿ ನಮ್ಮ ಗುರಿಯಾಗಿದ್ದು, ದೇಶದ ಏಕತೆ ಮತ್ತು ಸಮಗ್ರತೆ ಕಾಪಾಡಲು ಬದ್ಧರಾಗಿ ದೃಢಸಂಕಲ್ಪ ಮಾಡುವುದರ ಮೂಲಕ ನವ ಭಾರತ ಮತ್ತು ನವ ಕರ್ನಾಟಕ ನಿರ್ಮಿಸೋಣ ಎಂದರು.

**ಮೆಗಾ ಟೆಕ್ಸ್‌ಟೈಲ್, ಸ್ಮಾರ್ಟ್ ಸಿಟಿ:** ರಾಜ್ಯ ಹಾಗೂ ಕೇಂದ್ರ, ಸರ್ಕಾರದ ಸಹಭಾಗಿತ್ವದಲ್ಲಿ ಕಲಬುರಗಿ ತಾಲೂಕಿನ ನದಿಸಿನ್ನೂರ-ಹೊನ್ನಕಿರಣಗಿ ಬಳಿ 1,000 ಎಕರೆ ಪ್ರದೇಶದಲ್ಲಿ ಪಿ.ಪಿ.ಪಿ. ಮಾದರಿಯಲ್ಲಿ ಮೆಗಾ ಟೆಕ್ಸ್‌ಟೈಲ್ ಪಾರ್ಕ್‌ಗಳನ್ನು ಸ್ಥಾಪಿಸಲಾಗುತ್ತಿದೆ. ಈ ಯೋಜನೆಗೆ ಪೂರಕವಾದ ಮೂಲ ಸೌಕರ್ಯಕ್ಕಾಗಿ 50 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುತ್ತಿದ್ದು, ಇದರಿಂದ 1 ಲಕ್ಷ ಜನರಿಗೆ ನೇರ ಹಾಗೂ 2 ಲಕ್ಷ ಜನರಿಗೆ ಪರೋಕ್ಷ ಉದ್ಯೋಗ ಸೃಷ್ಟಿಯಾಗಲಿದೆ. ರಾಜ್ಯ ಸರ್ಕಾರದಿಂದಲೇ ಸುಮಾರು 1,685 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕಲಬುರಗಿ ನಗರವನ್ನು ಸ್ಮಾರ್ಟ್ ಸಿಟಿಯನ್ನಾಗಿ ಅಭಿವೃದ್ಧಿಪಡಿಸಲು ಯೋಚಿಸಲಾಗುತ್ತಿದೆ ಎಂದು ಹೇಳಿದರು.

**ಏಮ್ಸ್‌ಗೆ ಅಗತ್ಯ ನೆರವು:** ರಾಯಚೂರಿನಲ್ಲಿ ಏಮ್ಸ್ ಸಂಸ್ಥೆಯನ್ನು ಸ್ಥಾಪಿಸಲು ನಮ್ಮ ಸರ್ಕಾರವು ಅಗತ್ಯವಿರುವ ಎಲ್ಲ ನೆರವನ್ನು ಒದಗಿಸಲು ಸಿದ್ಧವಿದೆ. ಕೇಂದ್ರ, ಸರ್ಕಾರವು ಕೂಡಲೆ ಏಮ್ಸ್ ಸಂಸ್ಥೆ ಪ್ರಾರಂಭಿಸಲು ಕ್ರಮ ವಹಿಸಬೇಕೆಂದು ಒತ್ತಾಯಿಸಿ, ರಾಜ್ಯದಲ್ಲಿ ಈಗಾಗಲೇ ನಾಲ್ಕು ಜಿಲ್ಲೆಗಳಲ್ಲಿ ಹ್ಯೂಮನ್ ಮಿಲ್ಕ್ ಬ್ಯಾಂಕ್ ಘಟಕಗಳನ್ನು ಸ್ಥಾಪಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ರಾಯಚೂರು ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಹೊಸ ಘಟಕಗಳನ್ನು ಸ್ಥಾಪಿಸಲಾಗುವುದು ಎಂದು ನುಡಿದರು.

ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳ ವ್ಯಾಪ್ತಿಯ 18 ಹೊಸ ತಾಲೂಕುಗಳಲ್ಲಿ ಕಂದಾಯ ಇಲಾಖೆ ಮತ್ತು ಮಂಡಳಿಯ ಸಹಭಾಗಿತ್ವದಲ್ಲಿ ತಾಲ್ಲೂಕು ಆಡಳಿತ ಭವನಗಳನ್ನು (ಮಿನಿ ವಿಧಾನ ಸೌಧ) ನಿರ್ಮಾಣ ಮಾಡಲು ಮಂಡಳಿಯಿಂದ 130 ಕೋಟಿ ರೂ.ವೆಚ್ಚ ಮಾಡಲಾಗುತ್ತಿದೆ. ರಾಯಚೂರು ಜಿಲ್ಲೆಯ ಮಾನ್ವಿ ತಾಲೂಕಿನ ಚಿಕ್ಕಲಪರ್ವಿ ಹತ್ತಿರ ತುಂಗಭದ್ರಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ 397 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲು ಇತ್ತೀಚೆಗೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದರು.

## ಅಕ್ರಮ ಆಸ್ತಿ ಗಳಿಕೆ ಕೇಸ್

# ಡಿಕೆಶಿ, ಸಿಬಿಐಗೆ ಸುಪ್ರೀಂ ನೋಟಿಸ್

**ನವದೆಹಲಿ:** ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧದ ಅಕ್ರಮ ಆಸ್ತಿ ಗಳಿಕೆ ಪ್ರಕರಣ ಸಿಬಿಐ ತನಿಖೆಗೆ ನೀಡಿದ ಆದೇಶ ವಾಪಸ್ ಪಡೆದ ರಾಜ್ಯ ಸರ್ಕಾರದ ಆದೇಶದ ವಿರುದ್ಧ ಶಾಸಕ ಬಸನಗೌಡ ಯತ್ನಾಳ್ ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯನ್ನು ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ಡಿಕೆಶಿ ಮತ್ತು ಸಿಬಿಐಗೆ ನೋಟಿಸ್ ನೀಡಿದೆ.

ನ್ಯಾ. ಸೂರ್ಯಕಾಂತ್ ನೇತೃತ್ವದ ದ್ವಿ ಸದಸ್ಯ ಪೀಠ ವಿಚಾರಣೆ ನಡೆಸಿತು. ರಾಜ್ಯ ಸರ್ಕಾರ ನೀಡಿರುವ ಲೋಕಾಯುಕ್ತ ತನಿಖೆಗೆ ತಡೆ ನೀಡಬೇಕು ಮತ್ತು ಸರ್ಕಾರ ಮಾಡಿರುವ ಆದೇಶಕ್ಕೆ ತಡೆ ನೀಡಬೇಕು ಎಂದು ಯತ್ನಾಳ್ ಪರ ವಕೀಲರು ಮನವಿ ಮಾಡಿದರು. ಲೋಕಾಯುಕ್ತ ತನಿಖೆ ತಡೆ ನೀಡಲು ಸುಪ್ರೀಂಕೋರ್ಟ್ ನಿರಾಕರಿಸಿತು. ಒಂದು ವೇಳೆ ತನಿಖೆ ನ್ಯಾಯಬದ್ಧವಾಗಿಲ್ಲ ಎಂದಾದರೆ ಮತ್ತೆ ಸುಪ್ರೀಂಕೋರ್ಟ್ ಸಂಪರ್ಕ ಮಾಡಬಹುದು ಎಂದು ಸೂಚಿಸಿತು.



ಪ್ರತಿವಾದಿಗಳಾದ ಡಿ.ಕೆ ಶಿವಕುಮಾರ್ ಮತ್ತು ಸಿಬಿಐಗೆ ನೋಟಿಸ್ ನೀಡಲಾಗವುದು. ಸಿಬಿಐ ಈವರೆಗೂ ಯಾವುದೇ ಅರ್ಜಿ ಸಲ್ಲಿಸಿಲ್ಲ, ಅದರ ಮುಂದಿನ ನಡೆ ಏನು ಎಂಬುದನ್ನು ತಿಳಿಸಬೇಕು. ಡಿ.ಕೆ ಶಿವಕುಮಾರ್ ಮೂರು ವಾರಗಳಲ್ಲಿ ಆಕ್ಷಪಣೆ ಸಲ್ಲಿಸಲಿ. ಬಳಿಕ ಇನ್ನೊಂದು ವಾರದಲ್ಲಿ ಯತ್ನಾಳ್ ಆಕ್ಷೇಪಣೆಗೆ ಪ್ರತಿಕ್ರಿಯೆ ನೀಡಬೇಕು ಎಂದ ಕೋರ್ಟ್ ನಾಲ್ಕು ವಾರಗಳ ಬಳಿಕ ವಿಚಾರಣೆ ನಡೆಸುವುದಾಗಿ ತಿಳಿಸಿತು.

**ಏನಿದು ಪ್ರಕರಣ?:** ಅಕ್ರಮ ಆಸ್ತಿ ಗಳಿಕೆ ಪ್ರಕರಣದ ತನಿಖೆಯನ್ನು ಲೋಕಾಯುಕ್ತಕ್ಕೆ ನೀಡಿದ್ದನ್ನು ಪ್ರಶ್ನಿಸಿ ಸಿಬಿಐ ಮತ್ತು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೈಕೋರ್ಟ್ ಮೊರೆ ಹೋಗಿದ್ದರು. ವಿಚಾರಣೆ ನಡೆಸಿದ ಹೈಕೋರ್ಟ್ ಲೋಕಾಯುಕ್ತದಲ್ಲಿ ತನಿಖೆ ಮುಂದುವರೆಸಬಹುದು ಎಂದು ಆದೇಶದಲ್ಲಿ ತಿಳಿಸಿತ್ತು. ರಾಜ್ಯ ಸರ್ಕಾರ- ಸಿಬಿಐ ನಡುವೆ ಘರ್ಷಣೆಗೆ ಕಾರಣವಾದ ಪ್ರಕರಣ ಸುಪ್ರೀಂಕೋರ್ಟ್‌ನಲ್ಲಿ ಬಗೆಹರಿಯುವುದು ಸೂಕ್ತ ಎಂದು ಅಭಿಪ್ರಾಯಪಟ್ಟು ಯತ್ನಾಳ್ ಮತ್ತು ಸಿಬಿಐ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ಯತ್ನಾಳ್ ಮೇಲ್ಮನವಿ ಸಲ್ಲಿಸಿದ್ದರು.

# ಗಣೇಶ ಮೂರ್ತಿ ವಿಸರ್ಜನೆ ವೇಳೆ ಮೂವರಿಗೆ ಚಾಕು ಇರಿತ : ಪರಿಸ್ಥಿತಿ ಉದ್ವಿಗ್ನ



**ಬೆಳಗಾವಿ:** ಗಣೇಶ ವಿಸರ್ಜನೆ ವೇಳೆ ಮೂವರಿಗೆ ಚಾಕು ಇರಿದಿರುವ ಘಟನೆ ನಗರದ ಚೆನ್ನಮ್ಮ ವೃತ್ತದ ಬಳಿ ನಡೆದಿದೆ.

ಗಾಯಾಳುಗಳನ್ನು ಸಮಾಜ ಕಲ್ಯಾಣ ವಸತಿ ನಿಲಯದ ವಿದ್ಯಾರ್ಥಿಗಳಾದ ಪ್ರವೀಣ್ ಗುಂಡ್ಯಾಗೋಳ್, ದರ್ಶನ್ ಪಾಟೀಲ್ ಮತ್ತು ಸತೀಶ್ ಪೂಜಾರಿ ಎಂದು ಗುರುತಿಸಲಾಗಿದೆ.

ಘಟನೆ ಸಂಬಂಧ ಬೆಳಗಾವಿ ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾಹಿತಿ ನೀಡಿದ್ದಾರೆ. ಪ್ರವೀಣ್ ಗುಂಡ್ಯಾಗೋಳ್ ಎಂಬವರ ಸ್ಥಿತಿ ಗಂಭೀರವಾಗಿದ್ದು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಇನ್ನುಳಿದ ಇಬ್ಬರಿಗೆ ಬಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಗಣೇಶ ವಿಸರ್ಜನಾ ಮೆರವಣಿಗೆ ವೇಳೆ ಈ ಘಟನೆ ನಡೆದಿದ್ದು, ಡ್ಯಾನ್ಸ್ ಮಾಡುವಾಗ ಕಾಲು ತಾಕಿದ್ದಕ್ಕೆ ಹುಡುಗರು ಕಿರಿಕ್ ಮಾಡಿಕೊಂಡಿದ್ದರು. ಬಳಿಕ ಮೆರವಣಿಗೆಯಿಂದ ಹೊರಬಂದು ಗಲಾಟೆ ಮಾಡಿದ್ದಾರೆ. ಈ ವೇಳೆ ಯುವಕರ ಗ್ಯಾಂಗ್‌ವೊಂದು ಮೂವರು ಹಾಸ್ಟೆಲ್ ವಿದ್ಯಾರ್ಥಿಗಳ ಹೊಟ್ಟೆ, ಬೆನ್ನು, ಕುತ್ತಿಗೆ ಭಾಗಕ್ಕೆ ಚಾಕುವಿನಿಂದ ಇರಿದು, ಸ್ಥಳದಿಂದ ಪಾರಾಗಿದ್ದಾರೆ.

ಬೈಕ್‌ನಲ್ಲಿ ಪಾರಾಗುತ್ತಿದ್ದ ಯುವಕರನ್ನು ಸಿಪಿಐ ವಿಶ್ವನಾಥ್ ಕಬ್ಬೂರ ಮತ್ತು ಇತರ ಸಿಬ್ಬಂದಿ ಸೆರೆಹಿಡಿದಿದ್ದಾರೆ. ಪೊಲೀಸರ ತನಿಖೆಯ ಬಳಿಕ ಚರ್ಚ್ ಗಲ್ಲಿಯ ಯುವಕರ ಗ್ಯಾಂಗ್ ಈ ಕೃತ್ಯ ಎಸಗಿದ್ದು, ವೈಯಕ್ತಿಕ ಕಾರಣದಿಂದ ಚಾಕು ಇರಿದಿದ್ದಾರೆ. ಗಾಂಜಾ ಮತ್ತಿನಲ್ಲಿ ಚಾಕು ಇರಿದಿದ್ದಾರೆ ಎಂದು ಪ್ರಾಥಮಿಕ ಮೂಲಗಳಿಂದ ತಿಳಿದುಬಂದಿದೆ. ಈ ಬಗ್ಗೆ ತನಿಖೆ ನಡೆಸಲಾಗುತ್ತಿದೆ. ಉಳಿದವರ ಬಗ್ಗೆಯೂ ಮಾಹಿತಿ ಸಿಕ್ಕಿದೆ. ಶೀಘ್ರ ಬಂಧಿಸುತ್ತೇವೆ ಎಂದು ತಿಳಿಸಿದ್ದಾರೆ.

# ರಾಜ್ಯದಲ್ಲಿ ಅಪರಾಧಿಗಳ ಮೇಲುಗೈ, ರಾಜ್ಯ ಪೊಲೀಸರಿಗೆ ಸತ್ವ ಇಲ್ಲ

**ಬೆಂಗಳೂರು:** ಚಿಕರ್ನಾಟಕ ರಾಜ್ಯದಲ್ಲಿ ಅಪರಾಧಿಗಳ ಮೇಲುಗೈ ಆಗುತ್ತಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕಳವಳ ವ್ಯಕ್ತಪಡಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ರಾಜ್ಯದಲ್ಲಿ ದೇಶದ್ರೋಹಿಗಳು ಮೇಲುಗೈ ಸಾಧಿಸುತ್ತಿದ್ದಾರೆ. ರಾಜ್ಯ ಪೊಲೀಸರು ಸತ್ವ ಕಳೆದುಕೊಂಡಿದ್ದಾರೆ. ಅವರ ಕೈಯನ್ನು ರಾಜ್ಯ ಸರ್ಕಾರ ಕಟ್ಟಿ ಹಾಕಿದೆ. ಸರ್ಕಾರ ಹೇಳುವ ಕೆಲಸವಷ್ಟೇ ರಾಜ್ಯ ಪೊಲೀಸ್ ಮಾಡುತ್ತಿದೆ. ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿದವರಿಗೆ ಶಿಕ್ಷೆ ವಿಧಿಸಿಲ್ಲ. ದೇಶದ್ರೋಹಕ್ಕೆ ಕುಮ್ಮಕ್ಕು ಕೊಡುವ ಸರ್ಕಾರ ಅಧಿಕಾರದಲ್ಲಿದೆ ಎಂದು ಟೀಕಿಸಿದರು.

ಬೆಂಗಳೂರು, ಮೈಸೂರು, ಕೊಡಗು, ಹಾಸನ, ಕೋಲಾರ, ನಾಗಮಂಗಲ ಸೇರಿ ಬೇರೆ ಬೇರೆ ಜಾಗಗಳಲ್ಲಿ ಇವತ್ತು ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೇಳಿಬರುತ್ತಿದೆ. ಪ್ಯಾಲೆಸ್ತೀನ್ ಧ್ವಜ ಹಾರುತ್ತಿದೆ. ಆದರೆ, ರಾಜ್ಯ ಸರ್ಕಾರ ಓಲೈಕೆ ರಾಜಕೀಯದಲ್ಲಿ



ನಿರತವಾಗಿದೆ. ದೇಶದ್ರೋಹ ಮಾಡಿದರೂ ಅಡ್ಡಿ ಇಲ್ಲ, ನಮಗೆ ವೋಟ್ ಬ್ಯಾಂಕ್ ಬೇಕು ಎಂಬ ಮಾನಸಿಕತೆ ಇರುವ ಸಿದ್ದರಾಮಯ್ಯನವರಿಂದ ನಾವು ದೇಶಪ್ರೇಮ, ಕಾನೂನಿನ ಅನುಷ್ಠಾನ ನಿರೀಕ್ಷೆ ಮಾಡುವುದು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

ನಾಗಮಂಗಲದಲ್ಲಿ ಗಣಪತಿಗೆ ಅವಮಾನ ಮಾಡಿದವರ ವಿರುದ್ಧ ಕ್ರಮ ಆಗಲಿ. ಗಲಭೆಗೆ ಕೇರಳದ ನಂಟು ಇದೆ. ಮಾಸ್ಕ್ ಹಾಕಿಬಂದವರು ಯಾರು? ಪೆಟ್ರೋಲ್ ಬಾಂಬ್, ಕಲ್ಲು ತೂರಿದವರು ಯಾರು? ಎಂದು ತನಿಖೆಯಾಗಲು ಎನ್‌ಐಎಗೆ ವಹಿಸಬೇಕು. ಇದು ಸಣ್ಣ ಘಟನೆ ಎಂದು ಪರಮೇಶ್ವರ್ ಹೇಳಿದ್ದಾರೆ. ಎನ್‌ಐಎಗೆ ತನಿಖೆ ವಹಿಸಿದರೆ ಸತ್ಯ ಹೊರಗೆ ಬರಲಿದೆ ಎಂದು ಆಗ್ರಹಿಸಿದರು.

# ಮುತಾಲಿಕ್‌ಗೆ ಬೆಂಕಿ ಹಚ್ಚೋದು ಬಿಟ್ಟರೆ ಬೇರೇನು ಗೊತ್ತಿಲ್ಲ

**ಹುಬ್ಬಳ್ಳಿ:** ಪ್ರಮೋದ್ ಮುತಾಲಿಕ್ ತಾಕತ್ತು ನಾನು ನೋಡುವುದು ಬೇಕಾಗಿಲ್ಲ. ಅವನ ಎಲ್ಲಾ ತಾಕತ್ತು ನಾನು ನೋಡಿದ್ದೇನೆ. ಅವನಿಗೆ ಬೆಂಕಿ ಹಚ್ಚುವುದು ಬಿಟ್ಟರೆ ಬೇರೇನು ಗೊತ್ತಿಲ್ಲ. ಅವನ್ನು ನಾನು ಕೇರ್ ಮಾಡಲ್ಲಾ ಎಂದು ಕಾಂಗ್ರೆಸ್ ಶಾಸಕ ಹಾಗೂ ಸ್ಲಂ ಬೋರ್ಡ್ ಅಧ್ಯಕ್ಷ ಪ್ರಸಾದ್ ಅಬ್ಬಯ್ಯ ವಾಗ್ದಾಳಿ ನಡೆಸಿದ್ದಾರೆ.

ಹುಬ್ಬಳ್ಳಿ ಮಂಟೂರು ರಸ್ತೆಯಲ್ಲಿನ ಸ್ಮಶಾನದಲ್ಲಿ ಇಂದಿರಾ ಕ್ಯಾಂಟೀನ್ ನಿರ್ಮಾಣ ಮಾಡುತ್ತಿರುವ ಹಿನ್ನೆಲೆ ಹಿಂದೂ ಸ್ಮಶಾನದಲ್ಲಿ ಕ್ಯಾಂಟೀನ್ ಕಟ್ಟುವುದಲ್ಲ, ಅಬ್ಬಯ್ಯಗೆ ತಾಕತ್ತು ಇದ್ದರೆ ಕಬರಸ್ತಾನದಲ್ಲಿ ಕ್ಯಾಂಟೀನ್ ಕಟ್ಟಲಿ ಎಂದು ಮುತಾಲಿಕ್ ಸವಾಲು ಹಾಕಿದ್ದರು. ಶ್ರೀರಾಮಸೇನೆ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಮೇಲೆ ಏಕವಚನದಲ್ಲಿ ವಾಗ್ದಾಳಿ ನಡೆಸಿದ್ದಾರೆ. ಅವನೆಲ್ಲಾ ನಾನು ತಲೆಗೆ ತೆಗೆದುಕೊಳ್ಳೊದಿಲ್ಲ. ಪ್ರಮೋದ್ ಮುತಾಲಿಕ್ ದೊಡ್ಡ ಇಂಟರ್ ನ್ಯಾಷನಲ್ ಲೀಡರ್ ಅಲ್ಲ. ಅವನು ಹೇಳಿದ ತಕ್ಷಣ ನಾನು ತಾಕತ್ತು ತೋರಿಸೋದು ಬೇಕಿಲ್ಲ. ನನಗೆ ನನ್ನ ಜನ ಬೇಕು. ನನ್ನ ಲೀಡರ್ ಬೇಕು. ನನ್ನನ್ನು ಜನ ಆರಿಸಿದ್ದು. ಮುತಾಲಿಕ್ ಅಲ್ಲಾ ಎಂದು ತಿರುಗೇಟು ನೀಡಿದ್ದಾರೆ.

# ಕಲಬುರಗಿ ಜೈಲಿಗೆ ವಿಲ್ಸನ್ ಗಾರ್ಡನ್ ನಾಗ ಶಿಫ್ಟ್

**ಬೆಂಗಳೂರು:** ದರ್ಶನ್‌ಗೆ ರಾಜಾಥಿತ್ಯ ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಲ್ಸನ್ ಗಾರ್ಡನ್ ನಾಗನನ್ನು ಪರಪ್ಪನ ಅಗ್ರಹಾರ ಜೈಲಿನಿಂದ ಕಲಬುರಗಿ ಜೈಲಿಗೆ ಶಿಫ್ಟ್ ಮಾಡಲು ಕೋರ್ಟ್ ಆದೇಶ ಪ್ರಕಟಿಸಿದೆ.

ವಿಲ್ಸನ್ ಗಾರ್ಡನ್ ನಾಗ ಸೇರಿ ಕೋಕಾ ಕೇಸ್ ಅಲ್ಲಿ ಬಂಧನ ಆಗಿದ್ದ 20 ಜನರೂ ಕೂಡ ಬೇರೆ ಬೇರೆ ಜೈಲಿಗೆ ವರ್ಗವಾಗಿದ್ದಾರೆ.

ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೊಲೆ ಆರೋಪಿ ನಟ ದರ್ಶನ್‌ಗೆ ರಾಜಾಥಿತ್ಯ ಕೊಟ್ಟಿದ್ದ ಆರೋಪ ವಿಲ್ಸನ್ ಗಾರ್ಡನ್ ನಾಗನ ಮೇಲಿತ್ತು. ನಾಗನ ಶಿಫ್ಟ್ ಮಾಡಲು ಜೈಲು ಅಧಿಕಾರಿಗಳು ಹಾಗೂ ಬೆಂಗಳೂರು ಪೊಲೀಸರು ಕೋರ್ಟ್ ಮೊರೆ ಹೋಗಿದ್ದರು.

ಕಳೆದ ವರ್ಷ ಆಗಸ್ಟ್‌ನಲ್ಲಿ ಸಿದ್ದಪುರ



ಮಹೇಶ್‌ನನ್ನ ನಾಗ ತಂಡ ಕೊಚ್ಚಿ ಕೊಲೆ ಮಾಡಿತ್ತು. ಪರಪ್ಪನ ಅಗ್ರಹಾರ ಜೈಲಿನಿಂದ ಹೊರಗಡೆ ಬಂದ ಕೇವಲ ಇನ್ನೂರು ಮೀಟರ್ ಅಂತರದಲ್ಲೇ ಸಿದ್ದಪುರ ಮಹೇಶನನ್ನು ಆರೋಪಿಗಳು ಕೊಲೆ ಮಾಡಿದ್ದರು. ಈ ಪ್ರಕರಣದಲ್ಲಿ ಬರೋಬ್ಬರಿ ಇಪ್ಪತ್ತು ಜನರನ್ನು ಬಂಧನ ಮಾಡಲಾಗಿದೆ. ತಮ್ಮ ವಿರೋಧಿ ತಂಡಕ್ಕೆ ಟಾಂಗ್ ನೀಡಲು ಜೈಲಿನ ಒಳಗಡೆ ನಾಗನ ತಂಡ ಕ್ಲಿಕ್ಕಿಸಿದ ಫೋಟೋ ವೈರಲ್ ಆಗಿತ್ತು.

# ಹಾಲು ಉತ್ಪಾದಕರ ಆಗ್ರಹ

ಸರ್ಕಾರ ಈಗಾಗಲೇ ಎರಡು ಬಾರಿ ರೈತರ ಹೆಸರು ಹೇಳಿಕೊಂಡು ಹಾಲಿನ ದರ ಏರಿಕೆ ಮಾಡಿ ರೈತರಿಗೆ ಕೊಟ್ಟಿಲ್ಲ ಎಂದು ಹಾಲು ಉತ್ಪಾದಕರು ಆರೋಪಿಸಿದ್ದಾರೆ. ಜೊತೆಗೆ ಸರ್ಕಾರಕ್ಕೆ ನಿಜವಾಗಿಯೂ ರೈತರ ಮೇಲೆ ಕಾಳಜಿ ಇದ್ದರೆ ಮೊದಲು ಕಳೆದ 5 ತಿಂಗಳಿನಿಂದ ಹಾಲು ಉತ್ಪಾದಕರಿಗೆ ಬಾಕಿ ಇರುವ ಪ್ರೋತ್ಸಾಹ ಧನವನನ್ನು ಬಿಡುಗಡೆ ಮಾಡಲಿ ಎಂದು ಆಗ್ರಹಿಸಿದ್ದಾರೆ.

**ರೈತರನ್ನು ನಿರ್ಲಕ್ಷಿಸುತ್ತಿದೆ ಸರ್ಕಾರ: ಹಾಲು ಉತ್ಪಾದಕರ ಆರೋಪ:** ಜಿಲ್ಲೆಯಲ್ಲಿ ಮಳೆ ಅಭಾವವಿದೆ, ಕಳೆದ ವರ್ಷದಂತೆ ಈವರ್ಷವೂ ಬರದ ಛಾಯೆ ಗೋಚರಿಸುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ರಾಜ್ಯ ಸರ್ಕಾರ ಹಾಲಿನ ದರ ಹೆಚ್ಚಳದ ಚಿಂತನೆ ನಡೆಸುತ್ತಿದೆ. ಅದರ ಬದಲು ಹಾಲು ಉತ್ಪಾದಕರಿಗೆ ನೀಡಬೇಕಿದ್ದ ಪ್ರೋತ್ಸಾಹಧವನ್ನು ಕೂಡಲೇ ಬಿಡುಗಡೆ ಮಾಡಿ ರೈತರ ಹಾಗೂ ಹಾಲು ಉತ್ಪಾದಕರ ನೆರವಿಗೆ ನಿಲ್ಲಬೇಕಿತ್ತು. ಆದರೆ ಸರ್ಕಾರ ರೈತರನ್ನು ನಿರ್ಲ್ಯಕ್ಷ್ಯ ಮಾಡಿರುವುದಕ್ಕೆ ಇದು ನಿದರ್ಶನ ಎನ್ನುತ್ತಿದ್ದಾರೆ ರೈತರು.

**ಬಿಡುಗಡೆಯಾಗಿಲ್ಲ 75 ಕೋಟಿ ರೂ. ಪ್ರೋತ್ಸಾಹ ಧನ:** ಕೋಲಾರ ಚಿಕ್ಕಬಳ್ಳಾಪುರ ಹಾಲು ಒಕ್ಕೂಟದಲ್ಲಿ ಸರಿ ಸುಮಾರು 1800 ಕ್ಕೂ ಹೆಚ್ಚು ಹಾಲು ಉತ್ಪಾದಕರ ಸ್ವಸಹಾಯ ಸಂಘಗಳಿವೆ. ಲಕ್ಷಾಂತರ ಕುಟುಂಬಗಳು ಹೈನೋದ್ಯಮದ ಮೇಲೆ ಅವಲಂಭಿತವಾಗಿದ್ದು ಜಿಲ್ಲೆಯಲ್ಲಿ ನಿತ್ಯ ಸುಮಾರು ಹತ್ತು ಲಕ್ಷ ಲೀಟರ್ ಗೂ ಹೆಚ್ಚು ಹಾಲು ಉತ್ಪಾದನೆಯಾಗುತ್ತಿದೆ. ಕಳೆದ ವರ್ಷ ಮಳೆ ಇಲ್ಲದೆ ಬೆಳೆದ ಬೆಳೆಗಳೆಲ್ಲಾ ಕೈಕೊಟ್ಟಿದ್ದವು. ಈ ಬಾರಿಯೂ ಮಳೆಯ ಅಭಾವ ಹೆಚ್ಚಾಗಿ ಮೇವಿನ ಕೊರತೆ ಹೆಚ್ಚಾಗುತ್ತಿದೆ. ಆದರೆ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಹಾಲು ಉತ್ಪಾದಕರಿಗೆ ಕಳೆದ 5 ತಿಂಗಳಲ್ಲಿ ನೀಡಬೇಕಿದ್ದ 75 ಕೋಟಿ ರೂಪಾಯಿ ಪ್ರೋತ್ಸಾಹ ಧನವನ್ನು ಸರ್ಕಾರ ಬಿಡುಗಡೆ ಮಾಡಿಲ್ಲ.

ಸದ್ಯ ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಯ ರೈತರಿಗೆ ಸುಮಾರು 75 ಕೋಟಿ ರೂಪಾಯಿ ಹಣ ಬಾಕಿ ಇದೆ. ಈ ಪೈಕಿ ಸಾಮಾನ್ಯ ವರ್ಗದ ಹಾಲು ಉತ್ಪಾದಕರಿಗೆ 5 ತಿಂಗಳ, ಪರಿಶಿಷ್ಟ ಜಾತಿ ಹಾಗೂ ಪಂಗಡಕ್ಕೆ ಸೇರಿದ ಹಾಲು ಉತ್ಪಾದಕರಿಗೆ 2 ತಿಂಗಳ ಹಣ ಬಿಡುಗಡೆ ಬಾಕಿ ಇದೆ. ಈ ಕೂಡಲೇ ಸರ್ಕಾರ ಹಾಲು ಉತ್ಪಾದಕರಿಗೆ ಬಾಕಿ ಇರುವ ಹಣವನ್ನು ಬಿಡುಗಡೆ ಮಾಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.

ಕೋಲಾರ ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ಅಧ್ಯಕ್ಷರು ಮಾತ್ರ ಕೇವಲ 2 ತಿಂಗಳು ಹಣ ಬಾಕಿ ಇದೆ ಎಂದು ಜನರನ್ನು ದಿಕ್ಕುತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ರೈತರು ಆರೋಪಿಸಿದ್ದಾರೆ.

ಒಟ್ಟಿನಲ್ಲಿ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಗಳು ಸದ್ಯ ಹಲವು ವರ್ಗಗಳ ಅನುದಾನಗಳನ್ನು ನುಂಗಿ ಹಾಕಿದೆ ಎಂಬ ಮಾತು ಕೇಳಿಬಂದಿತ್ತು. ಈಗ ಆ ಪಟ್ಟಿಗೆ ಈಗ ಬಹುಶಃ ಹೈನುಗಾರಿಕೆಯೂ ಸೇರಿದೆ. ನಿಜಕ್ಕೂ ಸರ್ಕಾರಕ್ಕೆ ಗ್ಯಾರಂಟಿಗಳಿಂದ ಆರ್ಥಿಕ ಸಮಸ್ಯೆ ಎದುರಾಗಿಲ್ಲ ಎನ್ನುವುದಾದರೆ ಹಾಲು ಉತ್ಪಾದಕರ ಬಾಕಿ ಇರುವ ಪ್ರೋತ್ಸಾಹಧನ ಹಣ ಕೂಡಲೇ ಬಿಡುಗಡೆ ಮಾಡಲಿ ಎಂಬುದು ರೈತರ ಆಗ್ರಹವಾಗಿದೆ.

ಮೊದಲನೇ ಪುಟದಿಂದ...

## ಬಸ್ ಸ್ಟಾಪ್‌ಗಳೂ ಸ್ಮಾರ್ಟ್!

2024ರ ಜನವರಿಯಲ್ಲಿ ಕೆ.ಆರ್. ವೃತ್ತ, ಅಡುಗೋಡಿ, ಕಾಡುಬೀಸನಹಳ್ಳಿನಲ್ಲಿ ಸ್ಮಾರ್ಟ್‌ನಿಲ್ದಾಣ ಕಾಮಗಾರಿ ಕೈಗೊಳ್ಳಲಾಗಿತ್ತು. ಸದ್ಯ ಕಾಮಗಾರಿಗಳು ಮುಗಿದಿವೆ. ಈ ಯೋಜನೆಗೆ ಬಿಬಿಎಂಪಿ ಸಹ ಸಹಕಾರ ಕೊಟ್ಟಿದ್ದು, ನಿಲ್ದಾಣಗಳು ಪ್ರಸಕ್ತ ತಿಂಗಳಿನ 3ನೇ ವಾರದಲ್ಲಿ ಲೋಕಾರ್ಪಣೆಗೆ ಸಜ್ಜಾಗಿವೆ. ತದನಂತರದಿಂದ ಈ ಸ್ಮಾರ್ಟ್ ನಿಲ್ದಾಣಗಳು ಸಾರ್ವಜನಿಕರ ಬಳಕೆಗೆ ಮುಕ್ತವಾಗಲಿವೆ.

ಈ ನಿಲ್ದಾಣಗಳಲ್ಲಿ 360 ಡಿಗ್ರಿ ಸಿಸಿ ಕ್ಯಾಮರಾ, ಪ್ಯಾನಿಕ್ ಬಟನ್, ಮೊಬೈಲ್, ಲ್ಯಾಪ್‌ಟಾಪ್ ಚಾರ್ಜರ್, ಸ್ನ್ಯಾಕ್ ವೆಂಡರ್ ಮಷಿನ್, ಸ್ಯಾನಿಟರಿ ಪ್ಯಾಡ್ ವೆಂಡಿಂಗ್ ಮಷಿನ್, ಹಸಿ, ಒಣ ಕಸ ಹಾಕುವ ಡಬ್ಬಿ, ಬಸ್‌ಗಳು ಸಾಗುವ ಮಾರ್ಗದ ಫಲಕ, ಗುಣಮಟ್ಟ ಅಸನಗಳು, ಕುಡಿಯುವ ನೀರು, ವಿದ್ಯುದ್ದೀಪ ಹಾಗೂ ಸರ್ಕಾರದ ಯೋಜನೆಗಳ ವಿವರ ಮತ್ತು 4 ಡಿಸ್‌ಪ್ಲೇಗಳು ಸೇರಿ ಇತರೆ ಸೌಲಭ್ಯಗಳಿವೆ.

## ಮತ್ತೆ ಶಾಕ್

ಕಳೆದ ಆ.29ರಿಂದ ಪ್ರೀಮಿಯಂ, ಸೆಮಿ ಪ್ರೀಮಿಯಂ ಮದ್ಯದ ದರ ಇಳಿಸಿದ ಬೆನ್ನಲ್ಲೇ ಬಿಯರ್ ದರ ಹೆಚ್ಚಳಕ್ಕೆ ಸರ್ಕಾರ ಮುಂದಾಗಿದ್ದು, ಅ.1ರಿಂದ ಹೊಸ ದರಗಳು ಪರಿಷ್ಕರಣೆಗೊಳ್ಳುವ ಸಾಧ್ಯತೆ ಇದೆ.

ಇನ್ನೂ ಸರ್ಕಾರದ ನಿರ್ಧಾರಕ್ಕೆ ಬಾರ್ ಮಾಲೀಕರು ಬೇಸರ ವ್ಯಕ್ತಪಡಿಸಿದ್ದಾರೆ. ಒಂದೂವರೆ ವರ್ಷದಲ್ಲಿ ಮೂರನೇ ಬಾರಿಗೆ ದರ ಪರಿಷ್ಕರಣೆಯಾಗುತ್ತಿದೆ. ರಾಜ್ಯದಲ್ಲಿ ಬಿಯರ್ ಮಾರಾಟ ಹೆಚ್ಚಾಗಿದೆ. ಈ ಮಧ್ಯೆ ಸರ್ಕಾರ ಸುಂಕ ಹೆಚ್ಚಳ ಮಾಡಿದರೆ ಗ್ರಾಹಕರ ಜೊತೆಗೆ ಮಾರಾಟಗಾರರಿಗೂ ಹೊಡೆತ ಬೀಳಲಿದೆ. ಸರ್ಕಾರ ಏರಿಕೆ ಬದಲು ದರ ಇಳಿಕೆ ಬಗ್ಗೆ ಯೋಚನೆ ಮಾಡಿದರೆ ಹೆಚ್ಚು ಮಾರಾಟವಾಗಲಿದೆ. ಈ ಮೂಲಕ ಸರ್ಕಾರ ಮತ್ತು ಮಾಲೀಕರಿಗೆ ಅನೂಕೂಲವಾಗಲಿದೆ ಎನ್ನುತ್ತಿದ್ದಾರೆ.

## ರಾಜ್ಯಪಾಲರಿಗೆ ಟಕ್ಕರ್

ಅಷ್ಟೇ ಅಲ್ಲದೆ, ರಾಜ್ಯಪಾಲರಿಗೆ ಟಕ್ಕರ್ ನೀಡಲು ನಿರ್ಧರಿಸಿದರು.

**ಕುಲಪತಿ ನೇಮಕ ನಿರ್ಧಾರ ಸರ್ಕಾರದ ಸುಪರ್ದಿಗೆ:** ಕುಲಪತಿ ನೇಮಕದ ನಿರ್ಧಾರವನ್ನು ರಾಜ್ಯ ಸರ್ಕಾರ ತನ್ನ ಸುಪರ್ದಿಗೆ ಪಡೆಯುವ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಯಿತು. ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ನೇಮಕದ ತೀರ್ಮಾನ ಕೈಗೊಳ್ಳಲಾಯಿತು. ಈ ಮೂಲಕ ಇದುವರೆಗೂ ರಾಜ್ಯಪಾಲರಿಗೆ ಇದ್ದ ಅಧಿಕಾರವನ್ನು ಸರ್ಕಾರ ತನ್ನ ಸುಪರ್ದಿಗೆ ತೆಗೆದುಕೊಂಡಂತಾಗಿದೆ. ಈ ಮೂಲಕ ರಾಜ್ಯಪಾಲರಿಗೆ ತಿರುಗೇಟು ನೀಡಿದೆ.

'ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ ತಿದ್ದುಪಡಿ ವಿಧೇಯಕ 2024'ಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿತು. ಇದರಿಂದ ಕುಲಪತಿ ನೇಮಕ ಮಾಡಲು ರಾಜ್ಯ ಸರ್ಕಾರಕ್ಕೇ ಅವಕಾಶ ದೊರೆಯುತ್ತದೆ.

ಮುಡಾ ಪ್ರಾಸಿಕ್ಯೂಷನ್ ಅನುಮತಿ ವಿರುದ್ಧ ಸಿಡಿದೆದ್ದಿದ್ದ ಕಾಂಗ್ರೆಸ್ ನಾಯಕರು ರಾಜಭವನ ಚಲೋ ಹಮ್ಮಿಕೊಂಡಿದ್ದಲ್ಲದೆ, ಹಿಂದಿನ ಬಿಜೆಪಿ ಸರ್ಕಾರದ ಅವಧಿಯ ಪ್ರಕರಣಗಳ ತುರ್ತು ಇತ್ಯರ್ಥಕ್ಕೆ ಮತ್ತು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ರಾಜ್ಯಪಾಲರನ್ನು ಆಗ್ರಹಿಸಿದ್ದರು. ಇದಾದ ಕೆಲವು ದಿನಗಳ ನಂತರ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿದ್ದ ರಾಜ್ಯಪಾಲರು, 20-05-2023 ರಿಂದ, ಅಂದರೆ ಕಾಂಗ್ರೆಸ್ ಸರ್ಕಾರ ರಚನೆಯಾದ ನಂತರ ಈವರೆಗೆ ಲೋಕಾಯುಕ್ತ ಸಂಸ್ಥೆಯಿಂದ ಸ್ವೀಕೃತವಾಗಿರುವ ಸ್ವೀಕೃತಗೊಂಡಿರುವ ಪ್ರಕರಣಗಳ ಮಾಹಿತಿ ನೀಡುವಂತೆ ಕೋರಿದ್ದರು.

## ಆಗ್ರಹ

ಅಳವಡಿಸಲಾಗಿದೆ. ಪ್ಯಾಲೆಸ್ತೀನ್ ಪರ ಫ್ಲೆಕ್ಸ್ ಹಾಕಿದ್ದಕ್ಕೆ ಹಿಂದು ಸಂಘಟನೆಗಳು ಆಕ್ರೋಶ ಹೊರ ಹಾಕಿವೆ.

ಇನ್ನು ಘಟನೆ ಸಂಬಂಧ ಶಿವಮೊಗ್ಗದಲ್ಲಿ ಮಾಜಿ ಗೃಹ ಸಚಿವ ಆರಗ ಜ್ಞಾನೇಂದ್ರ, ಟಿವಿ9ಗೆ ಪ್ರತಿಕ್ರಿಯೆ ನೀಡಿದ್ದಾರೆ. ಹಣಗೆರೆಕಟ್ಟೆ ಹಿಂದೂ ಮುಸ್ಲಿಂ ಭಾವೈಕ್ಯತೆಯ ಕೇಂದ್ರ. ಒಂದೇ ಕಾಂಪೌಂಡ್ ನಲ್ಲಿ ದರ್ಗಾ ಇದೆ, ಭೂತಪ್ಪ ದೇವಸ್ಥಾನವು ಇದೆ. ಹತ್ತಾರು ಸಾವಿರ ಭಕ್ತರು ಪ್ರತಿನಿತ್ಯ ಬಂದು ಹೋಗುವ ಯಾತ್ರಾ ಸ್ಥಳ. ಈದ್ ಮಿಲಾದ್ ಹಬ್ಬದ ವೇಳೆ ಕಿಡಿಗೇಡಿಗಳು ಪ್ಯಾಲೆಸ್ತೀನ್ ಪರ ಫ್ಲೆಕ್ಸ್ ಹಾಕಿದ್ದಾರೆ. ಮಂಗಳೂರು ಕುಕ್ಕರ್ ಬಾಂಬ್ ಬ್ಲ್ಯಾಸ್ಟ್, ರಾಮೇಶ್ವರ ಕೆಫೆ ಸ್ಫೋಟದ ಮೂಲ ತೀರ್ಥಹಳ್ಳಿ. ಪ್ಯಾಲೆಸ್ತೀನ್ ಪರ ಫ್ಲೆಕ್ಸ್ ಹಾಕಿರುವ ಹಿನ್ನೆಲೆ ಏನು? ಅದರ ಮೂಲ ಯಾವುದು? ಅದರ ಹಿಂದೆ ಯಾರ ಕೈವಾಡ ಇದೆ ಎಂಬ ಬಗ್ಗೆ ತನಿಖೆ ಆಗಬೇಕು. ಈ ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸಿ ಎಂದು ಆರಗ ಆಗ್ರಹಿಸಿದ್ದಾರೆ.

# ಸಚಿವ ಆರ್ ಬಿ ತಿಮ್ಮಾಪುರ ಒಡೆತನದ ಕಂಪನಿ ವಿರುದ್ಧ ಸರ್ಕಾರಿ ಭೂಮಿ ಕಬಳಿಕೆ ಆರೋಪ




**ರಾಯಚೂರು:** ಸಚಿವ ಆರ್ ಬಿ ತಿಮ್ಮಾಪುರ ಒಡೆತನದ ಆರ್ ಬಿ ಶುಗರ್ಸ್ ಕಂಪನಿ ವಿರುದ್ಧ ಸರ್ಕಾರಿ ಭೂಮಿ ಕಬಳಿಸಿರುವ ಆರೋಪ ಕೇಳಿಬಂದಿದೆ. ಚಿಕ್ಕ ಉಪ್ಪೇರಿ ಗ್ರಾಮದ ಸರ್ವೆ ನಂ62ರ ಗೈರಾಣಿ ಜಮೀನನ್ನು ಅಕ್ರಮವಾಗಿ ವಶಪಡಿಸಿಕೊಳ್ಳಲಾಗಿದೆ ಎಂದು ರೈತ ಸಂಘ ಲಿಂಗಸುಗೂರು ತಹಶೀಲ್ದಾರ್ ರಿಗೆ ಪತ್ರ ಬರೆದಿದೆ. ಈ ಭೂಮಿ ಆರ್ ಬಿ ಶುಗರ್ಸ್ ಕಂಪನಿ ಹೆಸರಿನಲ್ಲಿದೆ.

**ರೈತ ಸಂಘ ಆರೋಪ:** ಪ್ರಭಾವಿ ವ್ಯಕ್ತಿಗಳು ಸುಣಕಲ್ ಸಿಮಾಂತರದಲ್ಲಿ ಜಮೀನು ಖರೀದಿ ಮಾಡಿ ಅದರ ಪಕ್ಕದಲ್ಲೇ ಇರುವ ಗೈರಾಣಿ ಭೂಮಿಯನ್ನು ಹೆಚ್ಚುವರಿಯಾಗಿ ವಶಪಡಿಸಿಕೊಂಡಿದ್ದಾರೆ. ಆದರೆ, ಈ ಭೂಮಿ ಜಾನುವಾರು ಅಭಿವೃದ್ಧಿಗಾಗಿ ಸೀಮಿತವಾಗಿದೆ. ಈ ಭೂಮಿಯಲ್ಲಿ ಸಕ್ಕರೆ ಕಾರ್ಖಾನೆ ನಿರ್ಮಿಸುವ ವಂದತಿ ಹಬ್ಬಿದ್ದು, ಸುತ್ತಮುತ್ತಲಿನ ಗ್ರಾಮಕ್ಕೆ ಪರಿಸರ ಮಾಲಿನ್ಯವಾಗಲಿದೆ. ಹಾಗೂ ಕಲುಷಿತ ತ್ಯಾಜ್ಯ ಪಕ್ಕದಲ್ಲಿರುವ ಕೃಷ್ಣ ನದಿಗೆ ಹರಿದು ಬರುವ ಸಾಧ್ಯತೆ ಇದೆ.

ಇದರಿಂದ ರೈತರ ಬೆಳೆಗೆ ಮತ್ತು ಜಾನುವಾರುಗಳಿಗೆ ತೊಂದರೆಯಾಗಲಿದೆ. ಹೀಗಾಗಿ ಸಕ್ಕರೆ ಕಾರ್ಖಾನೆ ನಿರ್ಮಾಣವಾಗದಂತೆ ತಡೆ ಹಿಡಿದು, ಸರ್ಕಾರಿ ಗೈರಾಣಿ ಭೂಮಿಯನ್ನು ರಕ್ಷಿಸಿ ದನಕರುಗಳು, ಕುರಿ ಮತ್ತು ಮೇಕೆಗಳಿಗೆ ಮೀಸಲಿಡಬೇಕು ಎಂದು ರೈತ ಸಂಘ ಪತ್ರದಲ್ಲಿ ಉಲ್ಲೇಖಿಸಿದೆ. ಅಲ್ಲದೆ ಚಿಕ್ಕ ಉಪ್ಪೇರಿ ಗ್ರಾಮದ ಮಧ್ಯದಲ್ಲಿ 50 ಫೀಟ್ ರಸ್ತೆ ನಿರ್ಮಾಣ ಮಾಡಲು ನಿರ್ಧರಿಸಲಾಗಿದ್ದು, ಇದನ್ನು ತಡೆಯಬೇಕು ಎಂದು ಒತ್ತಾಯಿಸಿದೆ.

ಇದಲ್ಲದೇ ಅರಣ್ಯ ಹಾಗೂ ಕಂದಾಯ ಇಲಾಖೆಯ ಭೂಮಿ ಕೂಡ ಕಬಳಿಕೆ ಮಾಡಿರುವ ಆರೋಪ ಕೇಳಿಬಂದಿದೆ. ಕಂದಾಯ ಇಲಾಖೆಯ 49 ಎಕರೆ, ಹಾಗೂ ಅರಣ್ಯ ಇಲಾಖೆಯ 43 ಎಕರೆ ಕಬಳಿಕೆ ಮಾಡಿರುವ ಆರೋಪವಿದೆ.

# ವಿಶ್ವೇಶ್ವರಯ್ಯ ಅವರಿಂದ ವಿಶ್ವವೇ ಸ್ಮರಿಸುವ ಕಾರ್ಯ



ಹುಳಿಯಾರಿನ ಬರಗೀಹಳ್ಳಿ ವೆಲ್ಡಿಂಗ್ ಶಾಪ್‌ನಲ್ಲಿ ಪ್ರತಿ ವರ್ಷದಂತೆ ಈ ವರ್ಷವು ಕೂಡ ಆಯೋಜಿಸಿದ್ದ ವಿಶ್ವ ಎಂಜಿನಿಯರ್ಸ್ ದಿನಾಚರಣೆ ಆಚರಿಸಲಾಯಿತು.

**ಹುಳಿಯಾರು:** ಸರ್.ಎಂ.ವಿಶ್ವೇಶ್ವರಯ್ಯನವರು ವಿಶ್ವವೇ ಸ್ಮರಿಸುವಂತಹ ಕೆಲಸ ಮಾಡಿದ್ದಾರೆ. ಅವರ ಕಾರ್ಯಗಳು ಇಂದಿಗೂ ಮಾದರಿಯಾಗಿವೆ ಎಂದು ಹುಳಿಯಾರು ಪಟ್ಟಣ ಪಂಚಾಯ್ತಿ ಸದಸ್ಯ ಎಸ್‌ಆರ್‌ಎಸ್ ದಯಾನಂದ್ ತಿಳಿಸಿದರು.

ಹುಳಿಯಾರಿನ ಬರಗೀಹಳ್ಳಿ ವೆಲ್ಡಿಂಗ್ ಶಾಪ್‌ನಲ್ಲಿ ಪ್ರತಿ ವರ್ಷದಂತೆ ಈ ವರ್ಷವು ಕೂಡ ಆಯೋಜಿಸಿದ್ದ ವಿಶ್ವ ಎಂಜಿನಿಯರ್ಸ್ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು.

ಒಂದು ಕಟ್ಟಡ, ಅಣೆಕಟ್ಟೆ ಕಟ್ಟಿದರೆ ಅದು ಎಷ್ಟು ಕಾಲ ಬಾಳಿಕೆ ಬರಬಹುದೆಂಬ ದೂರದೃಷ್ಟಿ ಅವರಲ್ಲಿತ್ತು. ಒಂದು ಅಣೆಕಟ್ಟೆ ನಿರ್ಮಿಸಿದರೆ ಮಳೆಗಾಲದಲ್ಲಿ ಎಷ್ಟು ನೀರು ನಿಲ್ಲಬಹುದು. ಮಳೆಯಿಲ್ಲದಿದ್ದಾಗ ಏನೇನು ಸಮಸ್ಯೆಗಳಾಗುತ್ತದೆ. ಕೃಷಿಕರಿಗೆ ಇದರಿಂದ ಏನು ಪ್ರಯೋಜನ ಎನ್ನುವ ಚಿಂತನೆ ಅವರಲ್ಲಿತ್ತು. ತಮಿಳುನಾಡು-ಕರ್ನಾಟಕದ ನಡುವೆ ಇಂದಿಗೂ ಕಗ್ಗಂಟಾಗಿ ಉಳಿದಿರುವ ಕಾವೇರಿ ನದಿ ನೀರಿನ ಹಂಚಿಕೆ ಕುರಿತು ಬ್ರಿಟಿಷರ ತಾರತಮ್ಯವನ್ನು ದಾಖಲೆ ಸಮೇತ ವಿರೋಧಿಸಿದ್ದರು. ಅಂತಹ ತಾಕತ್ತು ಅವರಲ್ಲಿ ಇತ್ತು ಎಂದು ಹೇಳಿದರು.

ಈ ಸಂಧರ್ಭದಲ್ಲಿ ಪಟ್ಟಣ ಪಂಚಾಯಿತಿ ಮಾಜಿ ಸದಸ್ಯ ನಾಗರಾಜು, ಯಶವಂತ್, ಗಿರೀಶ್, ಶಾಂತುಪೂಜಾರಿ, ವೆಲ್ಡರ್ ಜಗದೀಶ್ ಉಪಸ್ಥಿತರಿದ್ದರು.

# ಮರೆನಡುಪಾಳ್ಯ ಸರ್ಕಾರಿ ಶಾಲೆಯಲ್ಲಿ ಪ್ರತಿಭಾಕಾರಂಜಿ

**ಹುಳಿಯಾರು:** ಹುಳಿಯಾರು ಹೊಬಳಿಯ ಮರೆನಡು ಪಾಳ್ಯದ ಹಿರಿಯ ಪ್ರಾಥಮಿಕ ಶಾಲಾ ವತಿಯಿಂದ ದಸೂಡಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ಎಲ್ಲ ಶಾಲೆಗಳ ಮಕ್ಕಳು ಉತ್ಸಾಹದಿಂದ ಭಾಗವಹಿಸಿ ಭಾವಗೀತೆ, ಜಾನಪದಗೀತೆಗೆ ನೃತ್ಯ ಮಾಡಿದರು. ಕ್ಲೇಮಾಡಲಿಂಗ್, ಚಿತ್ರಕಲೆಯಲ್ಲಿ ವಿದ್ಯಾರ್ಥಿಗಳು ತಮ್ಮ ಕೈಚಳಕ ತೋರಿಸಿದರು.

ಮಕ್ಕಳು ಪಾಠದ ಜೊತೆಗೆ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಬುದ್ಧಿಶಕ್ತಿ ಬೆಳವಣಿಗೆ ಸಹಾಯವಾಗುತ್ತದೆ. ಜೊತೆಗೆ ಸ್ಪರ್ಧಾತ್ಮಕ ಮನೋಭಾವ ಬೆಳೆಯುತ್ತದೆ ಎಂದು ತಾಲೂಕು ಶಿಕ್ಷಣ ಸಂಪನ್ಮೂಲ ಅಧಿಕಾರಿ ಚಂದ್ರಶೇಖರ್ ಅಭಿಪ್ರಾಯಪಟ್ಟರು. ಶಿಕ್ಷಕರು ಎಲ್ಲ ಮಕ್ಕಳು ಪ್ರತಿಭಾ ಕಾರಂಜಿಯ ಯಾವುದಾದರೊಂದು ಚಟುವಟಿಕೆಯಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಬೇಕು. ಮಕ್ಕಳಲ್ಲಿನ ಹಿಂಜರಿಕೆಯನ್ನು ದೂರ ಮಾಡಬೇಕು. ಅವರಲ್ಲಿ ಆತ್ಮವಿಶ್ವಾಸ, ಧೈರ್ಯ ತುಂಬಿ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸಬೇಕು ಎಂದು ಸಲಹೆ ನೀಡಿದರು.

ಗ್ರಾಮಪಂಚಾಯಿತಿ ಸದಸ್ಯರು ಹಾಗೂ ಲೇಖಕರು ಅಧ ಕೆ. ಮರಿಯಪ್ಪನವರು ಮಾತನಾಡಿ ಪ್ರತಿಭಾಕಾರಂಜಿ ಪ್ರತಿಭಾ ಅನಾವರಣಕ್ಕೆ ಸೂಕ್ತ ವೇದಿಕೆಯಾಗಿದೆ. ಆಸಕ್ತಿದಾಯಕ ಕ್ಷೇತ್ರದಲ್ಲಿ ಮಕ್ಕಳನ್ನು ಪೋಷಕರು ಮತ್ತು ಶಿಕ್ಷಕರು ಪ್ರೋತ್ಸಾಹಿಸಬೇಕು. ಬಾಲ್ಯದಲ್ಲಿ ಅವರ ಪ್ರತಿಭೆಗಳ ಅನಾವರಣಕ್ಕೆ ಪಠ್ಯೇತರ ಚಟುವಟಿಕೆಗಳು ಅಗತ್ಯ ಎಂದರಲ್ಲದೆ ಮಕ್ಕಳು ಟಿವಿ ಮತ್ತು ಮೊಬೈಗಳಿಂದ ಹೊರಬಂದು ಜಾನಪದ ದೇಸಿಯ ಕಲೆಗಳನ್ನು ಮತ್ತು ಸಾಹಿತ್ಯ ಓದುವ, ಬರೆಯುವ ಹವ್ಯಾಸ ಬೆಳಸಿಕೊಳ್ಳಬೇಕು ಎಂದರು.

ಎಸ್‌ಡಿಎಂಸಿ ಅಧ್ಯಕ್ಷರಾದ ರಮೇಶ್, ಮುಖ್ಯ ಶಿಕ್ಷಕ ಪುರಂದರ, ಮರೆನಡು ಕಿರಿಯ ಪ್ರಾಥಮಿಕ ಶಾಲೆ ಮುಖ್ಯಶಿಕ್ಷಕ ವೀರಸಿದ್ದಪ್ಪ, ತಾಲೂಕು ಶಿಕ್ಷಕರ ಸಂಘದ ಉಪಾಧ್ಯಕ್ಷ ಜಯಣ್ಣ, ಗ್ರಾಮ ಪಂಚಾಯಿತಿ ಸದಸ್ಯರಾದ ನರಸಿಂಹಯ್ಯ, ವಿರೂಪಾಕ್ಷ, ತಾಪಂ ಮಾಜಿ ಸದಸ್ಯ ಪ್ರಸನ್ನ, ಗ್ರಾಮಸ್ಥರಾದ ರಂಗಪ್ಪ, ಸೇರಿದಂತೆ ಎಲ್ಲ ಕ್ಲಸ್ಟರ್ ಶಾಲಾ ಮಕ್ಕಳು ಉಪಸ್ಥಿತರಿದ್ದರು.



ಹುಳಿಯಾರು ಹೊಬಳಿಯ ಮರೆನಡು ಪಾಳ್ಯದ ಹಿರಿಯ ಪ್ರಾಥಮಿಕ ಶಾಲಾ ವತಿಯಿಂದ ದಸೂಡಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

# ಲೋಕಅದಾಲತ್‌ನಲ್ಲಿ ಪ್ರಕರಣಗಳ ಇತ್ಯರ್ಥ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಸೆಪ್ಟೆಂಬರ್ 14 ರಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ನೇರಳೆ ವೀರಭದ್ರಯ್ಯ ಭವಾನಿ ಅವರ ನೇತೃತ್ವದಲ್ಲಿ ನಡೆದ ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ ಜಿಲ್ಲೆಯ ಒಟ್ಟು 41,326 ಪ್ರಕರಣಗಳ ಪೈಕಿ ಜಿಲ್ಲೆಯ ಹಾಗೂ ತಾಲ್ಲೂಕಿನ ಎಲ್ಲಾ ನ್ಯಾಯಾಧೀಶರ ಸತತ ಪ್ರಯತ್ನದಿಂದಾಗಿ ನ್ಯಾಯಾಲದಯಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ಒಟ್ಟು 3675 ಪ್ರಕರಣಗಳನ್ನು ಗುರುತಿಸಿದ್ದು, ಅದರಲ್ಲಿ 1798 ಪ್ರಕರಣಗಳು ರಾಜಿಯಾಗಿದ್ದು ಹಾಗೂ 1,46,038 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಗುರುತಿಸಿದ್ದು, ಈ ಪೈಕಿ 1,40,045 ಪ್ರಕರಣಗಳು ರಾಜಿಯಾಗಿದ್ದು, 53,43,51,677 ರೂ. ಗಳಷ್ಟು ರಾಜಿ ಸಂಧಾನದ ಮೂಲಕ ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಇತ್ಯರ್ಥ ಪಡಿಸಲಾಯಿತು. ಆಸ್ತಿ ವಿವಾವದ ಸಿವಿಲ್ ಪ್ರಕರಣಗಳು, ಅಣ್ಣ ತಮ್ಮಂದಿರ ಮಧ್ಯೆ ಇರುವ ಪಾಲು ವಿಭಾಗ ಕೋರಿ ಸಲ್ಲಿಸಿದ ಪ್ರಕರಣಗಳು, ಬ್ಯಾಂಕ್ ಸಾಲದ ವಸೂಲಾತಿ ಪ್ರಕರಣಗಳು, ರಸ್ತೆ ನಿಯಮ ಉಲ್ಲಂಘನೆ ದಂಡ ವಸೂಲಾತಿ ಪ್ರಕರಣಗಳು, ಮರಳು ಕಳ್ಳತನ ಪ್ರಕರಣಗಳು, ರಾಜಿ ಆಗುವಂತಹ ಅಪರಾಧಿ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು ಹೀಗೆ ಹಲವಾರು ಬಗೆಯ ಪ್ರಕರಣಗಳನ್ನು ರಾಜಿ ಸಂದಾನದ ಮೂಲಕ ಇತ್ಯರ್ಥ ಪಡಿಸಲಾಯಿತು. ವೈವಾಹಿಕ ವಿಚ್ಛೇಧನ ಪ್ರಕರಣಗಳಲ್ಲಿ ಒಟ್ಟು 4 ಪ್ರಕರಣಗಳನ್ನು ರಾಜಿ ಮಾಡಿ ಒಂದುಗೂಡಿಸಲಾಯಿತು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಬಿ. ಶಿಲ್ಪ ತಿಳಿಸಿದ್ದಾರೆ.

# ತಾಯಿ ಮಕ್ಕಳನ್ನು ಪತ್ತೆಗೆ ಮನವಿ

**ಚಿಕ್ಕಬಳ್ಳಾಪುರ:** ತಾಲ್ಲೂಕಿನ ಗೌಚೇನಹಳ್ಳಿ ಗ್ರಾಮದ ನಿವಾಸಿ 25 ವರ್ಷದ ತ್ರಿವೇಣಿ, 5 ವರ್ಷದ ಮಗ ಪೃಥ್ವಿ, 3 ವರ್ಷದ ಅಮೂಲ್ಯ ಇವರು ಸೆಪ್ಟೆಂಬರ್ 7 ರಂದು ಬೆಳಗ್ಗೆ 10 ಗಂಟೆಗೆ ಗಂಡನ ಜೊತೆ ಗಲಾಟೆ ಮಾಡಿಕೊಂಡು ಮಕ್ಕಳೊಂದಿಗೆ ನಾಪತ್ತೆಯಾಗಿದ್ದು, ಅವರನ್ನು ಪತ್ತೆ ಮಾಡಿಕೊಡಬೇಕೆಂದು ಮುನಿರಾಜು ರವರು ಮಹಿಳಾ ಪೊಲೀಸ್ ಠಾಣೆಯಲ್ಲಿ ಮನವಿ ಮಾಡಿದ್ದಾರೆ. ಚಹರೆ: ತ್ರಿವೇಣಿ, ವಯಸ್ಸು 25, ಬಣ್ಣ ಗೋಧಿ ಮೈ ಗೆಂಪು ಬಣ್ಣ, ಸಾಧರಣ ಮೈ ಕಟ್ಟು, ಕೋಲು ಮುಖ, ಎತ್ತರ 4.5 ಅಡಿ, ಬಿಳಿ ಬಣ್ಣದ ಚೂಡಿದಾರ್ ಧರಿಸುತ್ತಾರೆ, ಕನ್ನಡ, ತೆಲುಗು ಮಾತನಾಡುತ್ತಾರೆ. ಅಮೂಲ್ಯ, ತಂದೆ: ಮುನಿರಾಜು, ತಾಯಿ :ತ್ರೀವೇಣಿ, ವಯಸ್ಸು:3 ವರ್ಷ, ಜಾತಿ: ಆದಿ ಕರ್ನಾಟಕ, ಬಟ್ಟೆ:ಫಾಕ್, ಕನ್ನಡ, ತೆಲುಗು ಮಾತನಾಡುತ್ತಾರೆ. ಪೃಥ್ವಿ, ತಂದೆ: ಮುನಿರಾಜು, ತಾಯಿ:ತ್ರಿವೇಣಿ, ವಯಸ್ಸು:5 ವರ್ಷ, ಜಾತಿ: ಆದಿ ಕರ್ನಾಟಕ ಜನಾಂಗ, ಬಟ್ಟೆ: ಶರ್ಟ್ ಮತ್ತು ನೀಲಿ ಪ್ಯಾಂಟ್, ಕನ್ನಡ, ತೆಲುಗು ಮಾತನಾಡುತ್ತಾರೆ. ನಾಪತ್ತೆಯಾಗಿರು ಬಗ್ಗೆ ಚಿಕ್ಕಬಳ್ಳಾಪುರ ಮಹಿಳಾ ಪೊಲೀಸ್ ಠಾಣೆಯಲ್ಲಿ ಅವರ ಗಂಡ ಮುನಿರಾಜು ಎಂಬುವರು ದೂರು ನೀಡಿ ನಾಪತ್ತೆ ಆಗಿರುವ ತ್ರಿವೇಣಿ ಮತ್ತು ಮಕ್ಕಳನ್ನು, ಪತ್ತೆಮಾಡಿಕೊಡಬೇಕೆಂದು ಮನವಿ ಮಾಡಿದ್ದಾರೆ. ಇವರ ಬಗ್ಗೆ ಮಾಹಿತಿ ಸಿಕ್ಕರೆ ಹತ್ತಿರ ಪೊಲೀಸ್ ಠಾಣೆಗೆ ತಿಳಿಸಬಹುದು.

# ಜನಸ್ಪಂದನ ಕಾರ್ಯಕ್ರಮ

**ಮೈಸೂರು:** ಜಿಲ್ಲಾ ಮಟ್ಟದ ಜನಸ್ಪಂದನ ಕಾರ್ಯಕ್ರಮ ಸೆಪ್ಟೆಂಬರ್ 23 ಕ್ಕೆ ಜರುಗಲಿದ್ದು, ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ.ಹೆಚ್.ಸಿ ಮಹಾದೇವಪ್ಪನವರ ಅಧ್ಯಕ್ಷತೆಯಲ್ಲಿ ಸಭೆ ಜರುಗಲಿದ್ದು ಜಿಲ್ಲೆಯ ಶಾಸಕರುಗಳು, ಜನಪ್ರತಿನಿಧಿಗಳು ಭಾಗವಹಿಸುವರು. ಜನಸ್ಪಂದನ ಸಭೆಗೆ ಜಿಲ್ಲೆಯ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸಿ, ಪರಿಹಾರ ಪಡೆದುಕೊಳ್ಳಬೇಕಾಗಿ ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿನಿಲಯಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಮೈಸೂರು:** 2024-25ನೇ ಸಾಲಿನ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾತಿ ಪಡೆಯಲು ಬಯಸುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 25% ಮೀಸಲಾತಿಯಿದ್ದು, ಆ ವಿದ್ಯಾರ್ಥಿಗಳು ಕೂಡ ಆನ್‌ಲೈನ್ www.swdhims.karnataka.gov.in ವೆಬ್‌ಸೈಟ್ ಮೂಲಕ ಸೆಪ್ಟೆಂಬರ್ 30 ರೊಳಗೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಅರ್ಜಿ ಸಲ್ಲಿಸಿದ ನಂತರ ಆನ್‌ಲೈನ್ ಅರ್ಜಿ ಪ್ರತಿಯೊಂದಿಗೆ ದೃಢೀಕೃತ ದಾಖಲೆಗಳನ್ನು ಆಯ್ಕೆ ಮಾಡಿರುವ ವಿದ್ಯಾರ್ಥಿನಿಲಯಗಳ ಮೇಲ್ವಿಚಾರಕರುಗಳಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪಡುವಾರಹಳ್ಳಿಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಯ ದೂ.ಸಂ: 0821-2520910 ನ್ನು ಸಂಪರ್ಕಿಸಬಹುದು.

# ಅರ್ಜಿ ಆಹ್ವಾನ

**ಮಂಡ್ಯ:** ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ 23 ಅಸಂಘಟಿತ ಕಾರ್ಮಿಕರಿಗೆ ಅಪಘಾತ ಪರಿಹಾರ ಹಾಗೂ ಸಹಜ ಮರಣ ಪರಿಹಾರ ಸೌಲಭ್ಯಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವವರು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. 18 ರಿಂದ 60 ವರ್ಷದವರಾಗಿರಬೇಕು. ಕರ್ನಾಟಕ ರಾಜ್ಯದ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಡಿ ನೋಂದಾಯಿತರಾಗಿ ಸಂಬಂಧಿಸಿದ ವೃತ್ತಿಯಲ್ಲಿ ಸಕ್ರಿಯನಾಗಿರಬೇಕು. ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು ಎಂದು ಮಂಡ್ಯ ಉಪವಿಭಾಗ ಕಾರ್ಮಿಕ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಶೃಂಗೇರಿ ಶಂಕರ ಮಠದಲ್ಲಿ ಅಷ್ಟಾವಧಾನ ಕಾರ್ಯಕ್ರಮ



**ತುಮಕೂರು:** ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾದ ವತಿಯಿಂದ ನಗರದ ಬಿ.ಹೆಚ್.ನಗರದ ಬಿ.ಹೆಚ್.ರಸ್ತೆಯಲ್ಲಿರುವ ಶ್ರೀಶೃಂಗೇರಿ ಶಂಕರ ಮಠದಲ್ಲಿ ಸೆ.14ರಂದು ಶನಿವಾರ ಅಷ್ಟಾವಧಾನ ಶತಾವಧಾನಿ ಡಾ.ಗಣೇಶ್‌ರವರು ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಸುಮಾರು ಮೂರು ಗಂಟೆಗಳ ಕಾಲ ನಡೆದ ಅವಧಾನ ಕಾರ್ಯಕ್ರಮದಲ್ಲಿ ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾ ಸದಸ್ಯರುಗಳು, ಶಂಕರ ಸೇವಾ ಸಮಿತಿಯ ಭಕ್ತ ಮಂಡಳಿ ಹಾಗೂ ನಗರದ ಪ್ರಮುಖರು ಭಾಗವಹಿಸಿದ್ದರು. ಈ ಅವಧಾನ ಕಾರ್ಯಕ್ರಮವನ್ನು ತುಮಕೂರು ಹೊಯ್ಸಳ ಕರ್ನಾಟಕ ಸಂಘ ಹಾಗೂ ಶ್ರೀಶಂಕರ ಸೇವಾ ಸಮಿತಿ ಸಹಯೋಗದಲ್ಲಿ ಕಾರ್ಯಕ್ರಮನ್ನು ನಡೆಸಲಾಯಿತ್ತು. ಕಾರ್ಯಕ್ರಮಕ್ಕೆ ಜನರು ಕಿಕ್ಕಿರಿದು ಸೇರಿದ್ದರು. ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾದ ಅಧ್ಯಕ್ಷರಾದ ಹೆಚ್.ಎನ್.ಚಂದ್ರಶೇಖರ್ ಹೆಬ್ಬಳಲುರವರು ಭಾಗವಹಿಸಿದ್ದರು.

# ಉದ್ಯಮಶೀಲತಾ ಅಭಿವೃದ್ಧಿ ತರಬೇತಿ

**ಮಂಡ್ಯ:** ಬೆಂಗಳೂರು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಹಾಗೂ ಕೈಗಾರಿಕಾ ಕೇಂದ್ರ, ಮಂಡ್ಯ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವ ಎಲ್ಲಾ ವರ್ಗದ ಆಸಕ್ತ ಮಹಿಳಾ ಅಭ್ಯರ್ಥಿಗಳಿಗೆ ಹತ್ತು ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಸೆಪ್ಟೆಂಬರ್ 23 ರಂದು ಮಂಡ್ಯ ವಿ.ಸಿ ಫಾರಂ ಕೃಷಿ ವಿಜ್ಞಾನ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ. ಕನಿಷ್ಠ 18 ವರ್ಷ ವಯಸ್ಸಿನವರಾಗಿರಬೇಕು, ಕನಿಷ್ಠ ವಿದ್ಯಾರ್ಹತೆ 10 ನೇ ತರಗತಿ ಹೊಂದಿರಬೇಕು ಆಸಕ್ತ ಮಹಿಳಾ ಅಭ್ಯರ್ಥಿಗಳು ಸೆಪ್ಟೆಂಬರ್ 20 ರೊಳಗೆ ಮಂಡ್ಯ ಸಿಡಾಕ್ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಅರ್ಜಿಯನ್ನು ಪಡೆದು ಸಲ್ಲಿಸತಕ್ಕದ್ದು. ಈ ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸ ಬಯಸುವ ಆಸಕ್ತರಿಗೆ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ, ಮುಂದೆ ಕೈಗೊಳ್ಳಲಾಗುವ ಉದ್ಯಮಶೀಲತಾಭಿವೃದ್ಧಿ ತರಬೇತಿ ಬಗ್ಗೆ ಮಾಹಿತಿ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9008194396, 7760145784 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಲ್ಲಂಬಳ್ಳಿಯಲ್ಲಿ ಸ್ವಚ್ಛತಾ ಸೇವಾ ಹೀ ಆಂದೋಲನಕ್ಕೆ ಶಾಸಕ ಸಿ. ಪುಟ್ಟರಂಗಶೆಟ್ಟಿ ಚಾಲನೆ

**ಚಾಮರಾಜನಗರ:** ಸಾರ್ವಜನಿಕರಿಗೆ ಶುಚಿತ್ವ, ನೈರ್ಮಲ್ಯದ ಕುರಿತು ವ್ಯಾಪಕ ಅರಿವು ಮೂಡಿಸಲು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿರುವ 'ಸ್ವಚ್ಛತಾ ಹೀ ಸೇವಾ ಆಂದೋಲನ' ಕಾರ್ಯಕ್ರಮಕ್ಕೆ ಕೆಲ್ಲಂಬಳ್ಳಿಯಲ್ಲಿಂದು ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಚಾಲನೆ ನೀಡಿದರು.



ಚಾಮರಾಜನಗರ ತಾಲೂಕಿನ ಭೋಗಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆಲ್ಲಂಬಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ತಾಲೂಕು ಪಂಚಾಯತ್ ಹಾಗೂ ಭೋಗಾಪುರ ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಸ್ವಭಾವ ಸ್ವಚ್ಛತಾ-ಸಂಸ್ಕಾರ ಸ್ವಚ್ಛತಾ ಧ್ಯೇಯೋದ್ದೇಶದೊಂದಿಗೆ ಆಯೋಜಿಸಲಾಗಿದ್ದ ಸ್ವಚ್ಛತಾ ಹೀ ಸೇವಾ ಆಂದೋಲನ ಪಾಕ್ಷಿಕ ಆಚರಣೆ ಕಾರ್ಯಕ್ರಮವನ್ನು ಶಾಸಕರಾದ ಪುಟ್ಟರಂಗಶೆಟ್ಟಿ ಅವರು ಉದ್ಘಾಟಿಸಿದರು.

ಬಳಿಕ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ಇಂದಿನಿಂದ ಅಕ್ಟೋಬರ್ 2ರವರೆಗೆ ಸ್ವಚ್ಛತೆಗೆ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಸಾರ್ವಜನಿಕರು, ಮಹಿಳೆಯರು, ಮಕ್ಕಳಿಗೆ ಗ್ರಾಮಗಳ ಶುಚಿತ್ವ, ನೈರ್ಮಲ್ಯದ ಬಗ್ಗೆ ಜಾಗೃತಿ ಮೂಡಿಸುವುದೇ ಸ್ವಚ್ಛತಾ ಸೇವೆ ಪಾಕ್ಷಿಕ ಆಚರಣೆಯ ಉದ್ದೇಶವಾಗಿದೆ. 1917ರಲ್ಲಿಯೇ ಸ್ವಚ್ಛತಾ ಆಂದೋಲನ ಪ್ರಾರಂಭವಾಗಿದೆ ಎಂದರು.

ಮಹಾತ್ಮ ಗಾಂಧೀಜೀಯವರು ಗ್ರಾಮಗಳ ಸ್ವಚ್ಛತೆಯಿಂದ ದೇಶದ ಸರ್ವತೋಮುಖ ಅಭಿವೃದ್ಧಿಯ ಕನಸು ಕಂಡಿದ್ದರು. ಅವರ ಆಶಯಗಳನ್ನು ಈಡೇರಿಸುವ ನಿಟ್ಟಿನಲ್ಲಿ ಸರ್ಕಾರದ ನಿರ್ದೇಶನದನ್ವಯ ಪ್ರತಿವರ್ಷದಂತೆ ಈ ಬಾರಿಯೂ ಸ್ವಚ್ಛತಾ ಸಂಬಂಧ ವಿಶಿಷ್ಟ ಕಾರ್ಯಕ್ರಮಗಳನ್ನು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಸ್ವಚ್ಛತೆಯೇ ಸೇವೆ ಶೀರ್ಷಿಕೆಯಡಿ ಆಯೋಜಿಸಲಾಗುತ್ತಿದೆ. ಗ್ರಾಮಗಳ ಸ್ವಚ್ಛತಾ ಕಾರ್ಯದಲ್ಲಿ ಸಾರ್ವಜನಿಕರ ಸಹಭಾಗಿತ್ವ ಅವಶ್ಯವಾಗಿದೆ ಎಂದು ಶಾಸಕರು ತಿಳಿಸಿದರು.

ಗ್ರಾಮಗಳಲ್ಲಿ ಕುಡಿಯುವ ನೀರು, ರಸ್ತೆಗಳ ಅಭಿವೃದ್ಧಿಗೆ ಆದ್ಯತೆ ನೀಡಬೇಕು. ಆರೋಗ್ಯದ ಹಿತದೃಷ್ಠಿಯಿಂದ ಗ್ರಾಮೀಣ ಜನರು ಬಯಲು ಬಹಿರ್ದೆಸೆ ತ್ಯಜಿಸಿ ಶೌಚಾಲಯಗಳನ್ನು ಬಳಸಬೇಕು. ಸಾಮೂಹಿಕ ಶೌಚಾಲಯಗಳ ನಿರ್ವಹಣೆ ಸಮರ್ಪಕವಾಗಿರಬೇಕು. ಶೌಚಾಲಯ ನಿರ್ಮಾಣಕ್ಕಾಗಿ ಸರ್ಕಾರವು ಲಕ್ಷಾಂತರ ರೂ. ವೆಚ್ಚ ಮಾಡುತ್ತಿದೆ. ಸ್ವಚ್ಛತೆಗಾಗಿ ಬಿಡುಗಡೆಯಾಗುವ ಅನುದಾನ ಸದ್ಬಳಕೆಯಾಗಬೇಕು. ಈ ಬಗ್ಗೆ ಮಹಿಳೆಯರು, ಮಕ್ಕಳಿಗೆ ಹೆಚ್ಚಿನ ಅರಿವು ಮೂಡಿಸಬೇಕು. ಎಲ್ಲಾ ಗ್ರಾಮ ಪಂಚಾಯಿತಿ ಸದಸ್ಯರು ಸ್ವಚ್ಛತಾ ಕಾರ್ಯಕ್ರಮಗಳ ನೇತೃತ್ವ ವಹಿಸಿ ಆಯಾ ಗ್ರಾಮಗಳ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಪ್ರಭಾರ ಜಿಲ್ಲಾಧಿಕಾರಿ ಮೋನಾ ರೋತ್ ಅವರು ಮಾತನಾಡಿ ಗಾಂಧಿ ಜಯಂತಿ ಅಂಗವಾಗಿ ಪ್ರತಿವರ್ಷ ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಈ ಬಾರಿ ಸ್ವಚ್ಛತಾ ಹೀ ಸೇವಾ ಆಂದೋಲನ ಪಾಕ್ಷಿಕ ಆಚರಣೆಯ ಮೂಲಕ ಜಿಲ್ಲೆಯ 130 ಗ್ರಾಮ ಪಂಚಾಯಿತಿಗಳಲ್ಲಿಯೂ ಸ್ವಚ್ಛತೆಗೆ ಸಂಬಂಧಿಸಿದ ವೈಶಿಷ್ಟ್ಯಪೂರ್ಣ ಕಾರ್ಯಕ್ರಮಗಳ ಮೂಲಕ ಜಿಲ್ಲೆಯ ಸ್ವಚ್ಛತೆಗೆ ಹೆಚ್ಚಿನ ಗಮನ ಹರಿಸಲಾಗಿದೆ ಎಂದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಸೋಮಶೇಖರ್ ಅವರು ಕಾರ್ಯಕ್ರಮದಲ್ಲಿ ಸ್ವಚ್ಛತೆ ಬಗ್ಗೆ ಮಾತನಾಡಿದರು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ ಅವರು ಸ್ವಚ್ಛತೆಯ ಕುರಿತ ಪ್ರತಿಜ್ಞಾವಿಧಿ ಬೋಧಿಸಿದರು. ಗ್ರಾಮ ಪಂಚಾಯತ್ ಅಧ್ಯಕ್ಷರಾದ ರೂಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಇದೇ ವೇಳೆ ಶಾಲಾಮಕ್ಕಳು ಅನುಪಯುಕ್ತ ವಸ್ತುಗಳಿಂದ ತಯಾರಿಸಿದ ವಿವಿಧ ಅಲಂಕಾರಿಕ ಕಲಾಕೃತಿಗಳನ್ನು ಗಣ್ಯರು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ನಂತರ ಸಾರ್ವಜನಿಕರು ಹಾಗೂ ಶಾಲಾ ಮಕ್ಕಳನ್ನೊಳಗೊಂಡು ಗ್ರಾಮದಲ್ಲಿ ಏರ್ಪಡಿಸಲಾಗಿದ್ದ ಸ್ವಚ್ಛತೆ ಕುರಿತ ಜಾಗೃತಿ ಜಾಥಾಗೆ ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಹಸಿರು ನಿಶಾನೆ ತೋರಿದರು. ತದನಂತರ ಗ್ರಾಮದ ಸ್ವಚ್ಛತಾ ಶ್ರಮದಾನದಲ್ಲಿ ಪಾಲ್ಗೊಂಡರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಾನಸ, ಕುದೇರು ಪೊಲೀಸ್ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ಕುಮುದಾ, ಭೋಗಾಪುರ ಗ್ರಾಮ ಪಂಚಾಯಿತಿಯ ಎಲ್ಲಾ ಸದಸ್ಯರು, ಕೆಲ್ಲಂಬಳ್ಳಿ ಹಿರಿಯ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು, ಎಸ್.ಡಿ.ಎಂ.ಸಿ ಅಧ್ಯಕ್ಷರು, ಕೆಲ್ಲಂಬಳ್ಳಿ ಗ್ರಾಮಸ್ಥರು, ಮುಖಂಡರು, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಬಳಿಕ ಭೋಗಾಪುರ ಬಳಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ 10 ಲಕ್ಷ ರೂ.ಗಳ ವೆಚ್ಚದಲ್ಲಿ 'ಸ್ವಚ್ಛ ಸಂಕೀರ್ಣ ಉದ್ದೇಶಕ್ಕಾಗಿ ನಿರ್ಮಿಸಿರುವ ಘನತ್ಯಾಜ್ಯ ಸಂಪನ್ಮೂಲ ನಿರ್ವಹಣಾ ಘಟಕವನ್ನು ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಉದ್ಘಾಟಿಸಿದರು.

# ಸೆ.19 ರಂದು ವಿದ್ಯುತ್ ವ್ಯತ್ಯಯ

**ಹುಳಿಯಾರು:** ಕೆ.ಬಿ.ಕ್ರಾಸ್‌ನ 220 ಕೆವಿ ಸ್ವೀಕರಣಾ ಕೇಂದ್ರದ ತ್ರೈಮಾಸಿಕಾ ನಿರ್ವಾಹಣಾ ಕಾಮಗಾರಿ ಇರುವುದರಿಂದ ಸೆ.19 ಗುರುವಾರ ಬೆಳಿಗ್ಗೆ 10 ರಿಂದ ಸಂಜೆ 5 ರ ವರೆಗೆ 220 ಕೆವಿ ಸ್ವೀಕರಣಾ ಕೇಂದ್ರ, ಕೆ.ಬಿ.ಕ್ರಾಸ್‌ಯಿಂದ ಸರಬರಾಜಾಗುವ ಎಲ್ಲಾ ಔಟ್ ಗೋಯಿಂದ ಪೂರಕಗಳಾದ ಚಿಕ್ಕನಾಯಕನಹಳ್ಳಿ, ಶೆಟ್ಟಿಕೆರೆ.ಹಂದನಕೆರೆ, ತಿಮ್ಮನಹಳ್ಳಿ, ಹುಳಿಯಾರು ಕಾತ್ರಿಕೆಹಾಳ್ ಹಾಗೂ ದೊಡ್ಡಣ್ಣೆಗೆರೆ ವಿದ್ಯುತ್ ಉಪಸ್ಥಾವರದಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ 11 ಕೆವಿ ಪೂರಕಗಳಲ್ಲಿ ವಿದ್ಯುತ್ ಸರಬರಾಜು ಇರುವುದಿಲ್ಲ ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸಹಳ್ಳಿ ನಾಗೋಜಿರಾವ್ ನಿಧನ



**ಹುಳಿಯಾರು:** ಹುಳಿಯಾರು ಹೋಬಳಿ ಹೊಸಹಳ್ಳಿ ಗ್ರಾಮದ ಭಾಗವತರಾದ ಎಚ್.ಆರ್.ನಾಗೋಜಿರಾವ್ (85)ಅವರು ವಯೋಸಹಜ ಮಂಗಳವಾರ ಬೆಳಗ್ಗೆ ನಿಧನರಾಗಿದ್ದಾರೆ. ಮೃತರು ರಕ್ತಬೀಜಾಸುರ, ದೇವಿಮಹಾತ್ಮೆ ಸೇರಿದಂತೆ ಅನೇಕ ನಾಟಕಗಳನ್ನು ಕಲಿಸಿ ಆಡಿಸುತ್ತಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರಶಸ್ತಿ ಸಹ ಪಡೆದವರು. ಅಲ್ಲದೆ ಹಾವು ಕಡಿತಕ್ಕೆ ಔಷಧಿಯನ್ನು ಸಹ ನೀಡಿ ನೂರಾರು ಜನರ ಪ್ರಾಣವನ್ನು ಉಳಿಸಿರುತ್ತಾರೆ. ಮೃತರಿಗೆ ಇಬ್ಬರು ಗಂಡು ಮಕ್ಕಳು ಹಾಗೂ ಮೂವರು ಹೆಣ್ಣು ಮಕ್ಕಳು ಇದ್ದಾರೆ. ಹೊಸಹಳ್ಳಿಯ ಮೃತರ ಜಮೀನಿನಲ್ಲಿ ಮಂಗಳವಾರ ಅಂತ್ಯಕ್ರಿಯೆ ನೆರವೇರಿತು.

# ಕರ್ನಾಟಕ ಸಾಂಸ್ಕೃತಿಕ ಮುನ್ನೋಟ:ಚಿಂತನಾ ಸಮಾವೇಶ

**ಮೈಸೂರು:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮನ್ವಯ-ರಾಷ್ಟ್ರೀಯ ಸಂತ ಕವಿ ಕನಕದಾಸ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ, ಬೆಂಗಳೂರು ಇವರ ವತಿಯಿಂದ ಸೆಪ್ಟೆಂಬರ್ 21 ಮತ್ತು 22 ರಂದು ಬೆಳಿಗ್ಗೆ 10.30 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ''ಸುವರ್ಣ ಸಂಭ್ರಮ ಕರ್ನಾಟಕ 50 ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ, ಕರ್ನಾಟಕ ಸಾಂಸ್ಕೃತಿಕ ಮುನ್ನೋಟ:ಚಿಂತನಾ ಸಮಾವೇಶವನ್ನು'' ಹಮ್ಮಿಕೊಳ್ಳಲಾಗಿದೆ. ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದು, ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವರಾದ ಎಚ್.ಡಿ ಕುಮಾರಸ್ವಾಮಿ, ಉಪ ಮುಖ್ಯಮಂತ್ರಿಗಳಾದ ಡಿ.ಕೆ ಶಿವಕುಮಾರ್, ಸಮಾಜ ಕಲ್ಯಾಣ ಸಚಿವರು ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ ಮಹದೇವಪ್ಪ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್.ಎಸ್.ತಂಗಡಗಿ ಅವರು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ಹರೀಶ್ ಗೌಡ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವರಾದ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷರು ಹಾಗೂ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಕುಮಾರ್ .ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷರಾದ ಎ.ಬಿ ರಮೇಶ್ ಬಂಡಿ ಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ.ಪುಷ್ಪ ಅಮರನಾಥ್ ಅವರು ಗೌರವ ಉಪಸ್ಥಿತರಿರಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಶಾಸಕರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಶಾಸಕರಾದ ಸುನಿಲ್ ಬೋಸ್ ಅವರು ಆಗಮಿಸಲಿದ್ದಾರೆ.

ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ತನ್ವಿರ್ ಸೇಠ್, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಟಿ ದೇವೇಗೌಡ, ಕೃಷರಾಜನಗರ ವಿಧಾನಸಭಾ ಶಾಸಕರಾದ ರವಿಶಂಕರ್ ಡಿ, ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಟಿ.ಎಸ್.ಶ್ರೀವತ್ಸ, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ದ್ರುವನಾರಾಯಣ್, ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಡಿ ಹರೀಶ್ ಗೌಡ ಹಾಗೂ ವಿಧಾನ ಪರಿ?ತ್ನ ಸದಸ್ಯರುಗಳಾದ ಹೆಚ್. ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಯತಿಂದ್ರ.ಎಸ್ ಮತ್ತು ವಿವೇಕಾನಂದ.ಎಸ್ ಅವರು ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಮರೀಗೌಡ, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್ ಹಾಗೂ ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷರಾದ ಮರಿಸ್ವಾಮಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ವಿಶೇಷ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊಫೆಸರ್ ಶರಣಪ್ಪ ವಿ ಆಗಮಿಸಲಿದ್ದಾರೆ.

# ನಾಳೆ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟ

**ಮಂಡ್ಯ:** ಮಂಡ್ಯ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಹಾಗೂ ಆದರ್ಶ ಪದವಿ ಪೂರ್ವ ಕಾಲೇಜು ಇವರ ಸಹಯೋಗದೊಂದಿಗೆ 2024-25 ನೇ ಸಾಲಿನ ಮಂಡ್ಯ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟವನ್ನು ಸೆಪ್ಟೆಂಬರ್ 19 ರಂದು ರ ಗುರುವಾರ ಬೆಳಿಗ್ಗೆ 9.30 ಗಂಟೆಗೆ ಮಂಡ್ಯ ನಗರದ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರು ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರದ ಸಂಸದರು ಹೆಚ್.ಡಿ. ಕುಮಾರಸ್ವಾಮಿ ಅವರು ಕಾರ್ಯಕ್ರಮ ಘನ ಉಪಸ್ಥಿತಿ ವಹಿಸಲಿದ್ದು, ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ. ರವಿಕುಮಾರ್‌ಗೌಡ ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದು, ಅಧ್ಯಯನ ವಿದ್ಯಾ ಟ್ರಸ್ಟ್, ಆದರ್ಶ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಮೂರ್ತಿ ರವರು ಧ್ವಜಾರೋಹಣವನ್ನು ನೆರವೇರಿಸಲಿದ್ದಾರೆ. ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಯ ಉಪನಿರ್ದೇಶಕ ಸಿ, ಚಲುವಯ್ಯ ರವರ ಗೌರವ ಉಪಸ್ಥಿತಿಯಲ್ಲಿ ಪಿಇಟಿ ಅಧ್ಯಕ್ಷರಾದ ಕೆ.ಎಸ್. ವಿಜಯ್ ಆನಂದ್ ರವರು ಕ್ರೀಡಾಜ್ಯೋತಿ ಸ್ವೀಕರಿಸಲಿದ್ದಾರೆ. ಕ್ರೀಡಾ ಸಂಯೋಜಕರಾದ ಎಸ್. ಎಂ. ಗುರುಸ್ವಾಮಿ ರವರು ಪ್ರತಿಜ್ಞಾವಿಧಿ ಬೋಧಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಶಿವರಾಮೇಗೌಡ, ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಓಂಪ್ರಕಾಶ್, ಆದರ್ಶ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಎಸ್.ಡಿ. ದೊಡ್ಡಾಚಾರ್, ಅಧ್ಯಯನ ವಿದ್ಯಾ ಟ್ರಸ್ಟ್ ನ ಟ್ರಸ್ಟಿ ವೈ.ಎಸ್. ಮೂರ್ತಿ ರವರು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಮಂಡ್ಯ ಜಿಲ್ಲಾ ಪ.ಪೂ. ಕಾಲೇಜು ಪ್ರಾಂಶುಪಾಲರ ಸಂಘದ ಅಧ್ಯಕ್ಷ ನಟರಾಜು, ಪ್ರಧಾನ ಕಾರ್ಯದರ್ಶಿ ಪಿ ಕಾಂತರಾಜು, ಮಂಡ್ಯ ಜಿಲ್ಲಾ ಪ.ಪೂ. ಕಾಲೇಜು ಉಪನ್ಯಾಸಕರ ಸಂಘದ ಅಧ್ಯಕ್ಷ ಚನ್ನಕೃಷ್ಣಯ್ಯ, ನೋಡಲ್ ಅಧಿಕಾರಿ ಡಿ.ಗುರುಲಿಂಗೇಗೌಡ, ದಕ್ಷಿಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಸೌಭಾಗ್ಯಮ್ಮ, ಕ್ರೀಡಾ ಸಂಯೋಜಕ ಕೆ. ಮರೀಗೌಡ ಅವರುಗಳು ಭಾಗವಹಿಸಲಿದ್ದಾರೆ ಎಂದು ಮಂಡ್ಯ ಆದರ್ಶ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 20ರಂದು ನೇರ ಸಂದರ್ಶನ

**ಚಾಮರಾಜನಗರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಮೈಸೂರು ಜೆ.ಕೆ. ಟಯರ್ ಅಂಡ್ ಇಂಡಸ್ಟ್ರೀಸ್ ಲಿಮಿಟೆಡ್ ಹಾಗೂ ಚಾಮರಾಜನಗರದ ಚೈತನ್ಯ ಇಂಡಿಯಾ ಫೈನಾನ್ಸ್ ಕ್ರೆಡಿಟ್ ಪ್ರೈವೆಟ್ ಲಿಮಿಟೆಡ್ ಸಹಯೋಗದಲ್ಲಿ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಸೆಪ್ಟೆಂಬರ್ 20ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3.30 ಗಂಟೆಯವರೆಗೆ ನೇರ ಸಂದರ್ಶನವನ್ನು ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನಡೆಸಲಾಗುತ್ತದೆ. ಎಸ್.ಎಸ್.ಎಲ್.ಸಿ, ಪಿಯುಸಿ, ಐ.ಟಿ.ಐ, ಡಿಪ್ಲೊಮಾ ಹಾಗೂ ಪದವಿ ಉತ್ತೀರ್ಣರಾದ 18 ರಿಂದ 33 ವರ್ಷ ವಯೋಮಿತಿಯ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಸಂದರ್ಶನದಲ್ಲಿ ಭಾಗವಹಿಸಬಹುದು. ಮೈಸೂರು ಜೆ.ಕೆ. ಟಯರ್ ಅಂಡ್ ಇಂಡಸ್ಟ್ರೀಸ್ ಲಿಮಿಟೆಡ್‌ನಲ್ಲಿ ಎನ್‌ಎಪಿಎಸ್ ಟ್ರೈನಿ, ಟಿಪಿಎ-ಎಮ್/ಎಸ್ ಗ್ರಾಮೇಟ್ ಸರ್ವೀಸ್ ಪ್ರೈ.ಲಿ ಹುದ್ದೆಗೆ ಡಿಪ್ಲೊಮಾ (ಮೆಕ್ಯಾನಿಕಲ್, ಆಟೋಮೊಬೈಲ್, ಎಲೆಕ್ಟ್ರಿಕಲ್, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಮಿಕೇಷನ್, ಮೆಕೆಟ್ರಾನಿಕ್ಸ್, ಪಾಲಿಮರ್ ಸೈನ್ಸ್. ಜಿಟಿಟಿಸಿ) ವಿದ್ಯಾರ್ಹತೆ ಹೊಂದಿರುವ ಪುರುಷ ಅಭ್ಯರ್ಥಿಗಳು ಭಾಗವಹಿಸಬಹುದು. ಒಟ್ಟು 50 ಹುದ್ದೆಗಳಿವೆ. ಐಟಿಐ (ಫಿಟ್ಟರ್, ಟರ್ನರ್ ಮತ್ತು ವೆಲ್ಡರ್) ವಿದ್ಯಾರ್ಹತೆ ಹೊಂದಿರುವವರಿಗೆ 50 ಹುದ್ದೆಗಳಿದ್ದು, ಪುರುಷ ಅಭ್ಯರ್ಥಿಗಳು ಭಾಗವಹಿಸಬಹುದು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಹತೆ ಹೊಂದಿರುವವರಿಗೆ 200 ಹುದ್ದೆಗಳಿದ್ದು, ಪುರುಷ ಅಭ್ಯರ್ಥಿಗಳು ಮಾತ್ರ ಭಾಗವಹಿಸಬಹುದು. ಚಾಮರಾಜನಗರ ಚೈತನ್ಯ ಇಂಡಿಯಾ ಫೈನಾನ್ಸ್ ಕ್ರೆಡಿಟ್ ಪ್ರೈವೆಟ್ ಲಿಮಿಟೆಡ್ ಸಂಸ್ಥೆಯ ಕಸ್ಟಮರ್ ರಿಲೇಷನ್‌ಶಿಪ್ ಎಕ್ಸಿಕ್ಯೂಟಿವ್ ಹುದ್ದೆಗೆ ಎಸ್‌ಎಸ್‌ಎಲ್‌ಸಿ ಹಾಗೂ ಮೇಲ್ಪಟ್ಟವರಿಗೆ 40 ಹುದ್ದೆಗಳಿದ್ದು, ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಜಿಲ್ಲಾ ಉದ್ಯೋಗಾಧಿಕಾರಿಗಳನ್ನು ಅಥವಾ ದೂ.ಸಂ 08226-224430 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಂದೆ ಇಲ್ಲದ ಮಕ್ಕಳ ಖಾತೆಗೆ ಸ್ಕಾಲರ್‌ಶಿಪ್ ಸೌಲಭ್ಯ: ಮಕ್ಕಳ ರಕ್ಷಣಾ ಘಟಕದ ಸ್ಪಷ್ಟನೆ

**ಚಾಮರಾಜನಗರ:** ತಂದೆ ಇಲ್ಲದ ಮಕ್ಕಳ ಖಾತೆಗೆ ವರ್ಷಕ್ಕೆ 24 ಸಾವಿರ ರೂ. ಸ್ಕಾಲರ್‌ಶಿಪ್ ಸೌಲಭ್ಯ ಇರುವ ವಿಚಾರಕ್ಕೆ ಸಂಬಂಧಿಸಿದಂತೆ ಹಲವು ಮಾನದಂಡಗಳಿದ್ದು, ಈ ಸಂಬಂಧ ಸಾರ್ವಜನಿಕರು ಗೊಂದಲಕ್ಕೆ ಒಳಗಾಗಬಾರದೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದ್ದಾರೆ. ತಂದೆ ಇಲ್ಲದ ಮಕ್ಕಳ ಖಾತೆಗೆ ವರ್ಷಕ್ಕೆ 24 ಸಾವಿರ ರೂ. ಸ್ಕಾಲರ್‌ಶಿಪ್ ಸೌಲಭ್ಯವಿದ್ದು, ಜನ ಸಾಮಾನ್ಯರಿಗೆ ಈ ವಿಚಾರ ತಿಳಿದೇ ಇಲ್ಲ. ಆದುದರಿಂದ ತಮಗೆ ಗೊತ್ತಿರುವ ಯಾರಾದರೂ ತಂದೆ ಇಲ್ಲದ ಮಕ್ಕಳು ಇದ್ದಲ್ಲಿ ಅವರ ಪೋ?ಕರಿಗೆ ಕೂಡಲೇ ಅರ್ಜಿ ಸಲ್ಲಿಸಲು ತಿಳಿಸಿ ಎಂಬ ಸಂದೇಶ ವ್ಯಾಟ್ಸಪ್‌ನಲ್ಲಿ ಹರಿದಾಡುತ್ತಿದ್ದು ಜನರನ್ನು ಗೊಂದಲಕ್ಕೀಡು ಮಾಡಿದೆ. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ ದಕ್ಷಿಣ ಕನ್ನಡ ಎಂದು ಮೊಹರು ಹಾಕಿರುವ ಒಂದು ಅರ್ಜಿಯ ಫೋಟೋ ಹೊಂದಿರುವ ಈ ವ್ಯಾಟ್ಸಪ್ ಸಂದೇಶ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಈ ಸಂದೇಶವನ್ನು ನೋಡಿದ ಜನರು ಜಿಲ್ಲಾಧಿಕಾರಿಗಳ ಕಚೇರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಿಶು ಅಭಿವೃದ್ಧಿ ಯೋಜನಾ ಕಚೇರಿ ಹೀಗೆ ಹಲವು ಸರ್ಕಾರಿ ಕಚೇರಿಗಳಿಗೆ ಅಲೆದಾಡುತ್ತಿದ್ದು ಜನರನ್ನು ಗೊಂದಲಕ್ಕೀಡು ಮಾಡಿದೆ. ಆದರೆ ಪ್ರಾಯೋಜಕತ್ವ ಕಾರ್ಯಕ್ರಮವು ಮಕ್ಕಳನ್ನು ಸಂಸ್ಥೆಯ ವಾತಾವರಣದಿಂದ ಬೇರ್ಪಡಿಸಿ ಕುಟುಂಬದ ವಾತಾವರಣದಲ್ಲಿ ಬೆಳೆಸುವಂತೆ ಪ್ರೋತ್ಸಾಹಿಸುವ ಹಾಗೂ ವಿವಿಧ ಕಾರಣಗಳಿಂದ ಪೋ?ಕರಿಂದ ಬೇರ್ಪಟ್ಟು ಶೋಷಣೆಗೆ ಒಳಗಾಗುವುದನ್ನು ತಪ್ಪಿಸಿ ಮಕ್ಕಳು ಕೌಟುಂಬಿಕ ವ್ಯವಸ್ಥೆಯಲ್ಲಿಯೇ ಬೆಳೆಯಲು ನೆರವಾಗುವಂತೆ ತಾತ್ಕಾಲಿಕ ಅವಧಿಗೆ ಆರ್ಥಿಕ ಸಹಾಯ ನೀಡುವ ಯೋಜನೆಯಾಗಿದೆ.

ಪೂರಕ ಹಣಕಾಸು ಅಥವಾ ಇತರೆ ಸಹಕಾರ ಎಂದು ಮಕ್ಕಳ ನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ, 2015ರ ಕಲಂ 2(58)ರ ಪ್ರಕಾರ, ಪ್ರಾಯೋಜಕತ್ವವನ್ನು ಕುಟುಂಬಗಳಿಗೆ, ಮಗುವಿನ ವೈದ್ಯಕೀಯ, ಶೈಕ್ಷಣಿಕ ಹಾಗೂ ಅಭಿವೃದ್ಧಿಯ ಅಗತ್ಯಗಳನ್ನು ಬೆಂಬಲ, ಪೂರೈಸಲು ಅಗತ್ಯವಿರುವ ವ್ಯಾಖ್ಯಾನಿಸಲಾಗಿದೆ. ಪ್ರಾಯೋಜಕತ್ವ ಕಾರ್ಯಕ್ರಮದಡಿ ಅಭಿಯಾನವು ಮಗುವಿನ ಸಮರ್ಪಕ ಆರೈಕೆಗಾಗಿ ಪೋಷಣೆ ಹಾಗೂ ರಕ್ಷಣೆಯ ಅಗತ್ಯವಿರುವಂತೆ ಜೈವಿಕ ಕುಟುಂಬಗಳು ಅಥವಾ ವಿಸ್ತತ ಕುಟುಂಬಗಳಿಗೆ ಪೂರಕವಾಗಿರುತ್ತದೆ. ಸಮುದಾಯದಲ್ಲಿ ಸ್ಥಳಾಂತರವಿಲ್ಲದೆ ತಮ್ಮ ಸಾಮಾಜಿಕ ಹಾಗೂ ಸಾಂಸ್ಕೃತಿಕ ಪರಿಸರದಲ್ಲಿಯೇ ಮಕ್ಕಳು ಬೆಳೆಯಲು ಅವಕಾಶ ಪಡೆಯುವುದನ್ನು ಖಾತ್ರಿಪಡಿಸಲು ಇದೊಂದು ಷರತ್ತುಬದ್ಧ ಸಹಾಯವಾಗಿದೆ. ಈ ಬಗ್ಗೆ ಸಾರ್ವಜನಿಕರು ಗೊಂದಲಕ್ಕೀಡಾಗಬಾರದೆಂದು ಚಾಮರಾಜನಗರ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

## ಸಹಾಯಧನ ಸೌಲಭ್ಯಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ತೋಟಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಅಳವಡಿಕೆ ಮಾಡುವ ಎಲ್ಲಾ ವರ್ಗದ ರೈತರಿಗೆ ಶೇ.90 ರಂತೆ ಸಹಾಯಧನ ನೀಡಲಾಗುವುದು.

ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಪದ್ಧತಿ ಅಳವಡಿಕೆ ಮಾಡಲು ಇಚ್ಛಿಸುವ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸಂಬಂಧಪಟ್ಟ ಆಯಾ ತಾಲ್ಲೂಕಿನ ತೋಟಗಾರಿಕೆ ಕಚೇರಿಗಳಲ್ಲಿ ನೀಡಿ, ಹೆಸರನ್ನು ಇ-ಖಾಯಿಮುಖಿ ತಂತ್ರಾಂಶದಲ್ಲಿ ನೊಂದಣಿ ಮಾಡಿಸುವುದು. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ತಾಲ್ಲೂಕು ತೋಟಗಾರಿಕೆ ಕಚೇರಿಗಳಿಗೆ ಹಾಗೂ ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರಿಗಾಹಿಗಳಿಗೆ ಗುರುತಿನ ಚೀಟಿ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಸಂಚಾರಿ ಕುರಿಗಾಹಿಗಳು ಇರುವ ಜಾಗದಲ್ಲೇ ಅವರ ಕುರಿ/ಮೇಕೆಗಳಿಗೆ ಸರ್ಕಾರಿ ಪಶುವೈದ್ಯರಿಂದ ಲಸಿಕೆ ಹಾಕುವ ಹಲವಾರು ಸಂಚಾರಿ ಕುರಿಗಾಹಿಗಳಿಗೆ ಗುರುತಿನ ಚೀಟಿ ವಿತರಿಸುವ ಕಾರ್ಯಕ್ರಮವನ್ನು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಪೂರಕ ಅಂಗ ಸಂಸ್ಥೆಯಾದ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಆದ್ದರಿಂದ ಸಂಚಾರಿ ಕುರಿಗಾಹಿಗಳು ಸ್ಥಳೀಯ ಪಶುವೈದ್ಯಾಧಿಕಾರಿಗಳಿಂದ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಸಂಚಾರಿ ಕುರಿಗಾಹಿಗಳು ಸ್ಥಳೀಯ ಪಶುವೈದ್ಯಾಧಿಕಾರಿಗಳಿಂದ ಜಾನುವಾರು ಗಣತಿ/ಇಲಾಖೆಯ ದಾಖಲೆಗಳ ಆಧಾರದ ಮೇಲೆ ವಲಸೆ ಕುರಿಗಾರರು ಕನಿಷ್ಟ 20 ಕುರಿಗಳನ್ನು ಹೊಂದಿರುವ ಬಗ್ಗೆ ದೃಢೀಕರಣ ಪತ್ರ, ವಲಸೆ ಕುರಿಗಾರರು ಕುರಿಗಳೊಂದಿಗೆ ವಲಸೆ ಹೋಗುವುದಕ್ಕೆ ಸಂಬಂಧಪಟ್ಟಂತೆ ಸ್ಥಳೀಯ ಗ್ರಾಮ ಲೆಕ್ಕಾಧಿಕಾರಿಗಳಿಂದ ಪಡೆದ ಮಹಜರ್ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಪ್ರತಿ, ಫ್ರೂಟ್ಸ್ ಐಡಿ, ಪಡಿತರ ಚೀಟಿಯ ಪ್ರತಿ ಮತ್ತು ಅರ್ಜಿಯಲ್ಲಿ ತಿಳಿಸಿದ ನಿಗದಿತ ಅಗತ್ಯ ದಾಖಲಾತಿಗಳನ್ನು ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದೆಂದು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಂದು ಕೊರತೆಗಳ ಸಭೆ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 19 ರಂದು ಬೆಳಿಗ್ಗೆ 11:00 ಗಂಟೆಗೆ ಗೌರಿಬಿದನೂರು ತಾಲ್ಲೂಕಿಗೆ ಸಂಬಂಧಪಟ್ಟಂತೆ ಸಾರ್ವಜನಿಕರ ಕುಂದು ಕೊರತೆಗಳ ಸಭೆಯನ್ನು ಗೌರಿಬಿದನೂರು ತಾಲ್ಲೂಕು ಇಂಜಿನಿಯರ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡದೆ ವಿಳಂಬ ನಿರ್ಲಕ್ಷ್ಯ ಮಾಡುತ್ತಿದ್ದಲ್ಲಿ, ಸರ್ಕಾರಿ ಯೋಜನೆಗಳ ಅನುಷ್ಠಾನದಲ್ಲಿ ಅಕ್ರಮಗಳನ್ನು ನಡೆಸಿ ಹಣ ದುರುಪಯೋಗಪಡಿಸಿದ್ದಲ್ಲಿ ಆ ಬಗ್ಗೆ ಸಾರ್ವಜನಿಕರು ನಿರ್ದಿಷ್ಟ ಮಾಹಿತಿಯೊಂದಿಗೆ ಸದರಿ ಸಭೆಗೆ ಹಾಜರಾಗಿ ದೂರು ಅರ್ಜಿ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ನೀಡಬಹುದೆಂದು ಚಿಕ್ಕಬಳ್ಳಾಪುರ ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಆಂಟನಿ ಜಾನ್. ಜೆ.ಕೆ ತಿಳಿಸಿದ್ದಾರೆ.

## ಸದಸ್ಯರ ವಾರ್ಷಿಕ ಮಹಾಸಭೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕು ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿಯಮಿತ ವತಿಯಿಂದ 2023-24ನೇ ಸಾಲಿನ ಸರ್ವಸದಸ್ಯರ ವಾರ್ಷಿಕ ಮಹಾಸಭೆಯನ್ನು ಸೆಪ್ಟೆಂಬರ್ 21 ರಂದು ಬೆಳಿಗ್ಗೆ 11 ಗಂಟಗೆ ನಗರದ ಬಿ.ಬಿ.ರಸ್ತೆಯ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ. ತಾಲ್ಲೂಕು ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಅಧ್ಯಕ್ಷರಾದ ಎನ್. ಪ್ರಸಾದ್ ರವರು ಅಧ್ಯಕ್ಷತೆಯಲ್ಲಿ ಸಭೆಯನ್ನು ಏರ್ಪಡಿಸಲಾಗಿದೆ. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಬ್ಯಾಂಕಿನ ಸದಸ್ಯರಾದ ಡಾ. ಕೆ.ಸುಧಾಕರ್, ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕಿನ ಜಿಲ್ಲಾ ನಿರ್ದೇಶಕರಾದ ಸೊಣ್ಣೇಗೌಡ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

## ವಿವಿಧ ಹುದ್ದೆ ನೇಮಕಾತಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಸಿಬ್ಬಂದಿ ನೇಮಕಾತಿ ಆಯೋಗ (ಎಸ್.ಎಸ್.ಸಿ) ಮುಖಾಂತರ ಕೇಂದ್ರ ಸಶಸ್ತ್ರ ಪೊಲೀಸ್ ಮತ್ತು ಎಸ್.ಎಸ್.ಎಫ್ ಪಡೆಗಳಲ್ಲಿ ಕಾನ್ ಸ್ಟೆಬಲ್ (ಜಿಡಿ) ಮತ್ತು ಅಸ್ಸಾಂ ರೈಫಲ್ಸ್ ನಲ್ಲಿ, ರೈಫಲ್ ಮ್ಯಾನ್ (ಜಿಡಿ) ಹುದ್ದೆಗಳ ನೇಮಕಾತಿಗಾಗಿ ಕಂಪ್ಯೂಟರ್ ಆಧಾರಿತ ಪರೀಕ್ಷೆಯನ್ನು ನಡೆಸುತ್ತಿದ್ದು, ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿ ಅಭ್ಯರ್ಥಿಗಳು www.ssckkr.kar.nic.in ಮತ್ತುhttps://ssc,nic.in ನಲ್ಲಿ ಆನ್ ಲೈನ್ ಮೂಲಕ ಅಕ್ಟೋಬರ್ 14 ರೊಳಗೆ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 080-25502520, 8310004823 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಉದ್ಯೋಗಾಧಿಕಾರಿ ಎಂ.ಪ್ರಸಾದ್ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಯುವಜನೋತವ ಕಾರ್ಯಕ್ರಮ ಮುಂದೂಡಿಕೆ

**ಚಿಕ್ಕಬಳ್ಳಾಪುರ:** 2024-25 ನೇ ಸಾಲಿನ ಚಿಕ್ಕಬಳ್ಳಾಪುರ ಜಿಲ್ಲೆಯ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಸೆಪ್ಟೆಂಬರ್ 21 ರಂದು ಚಿಕ್ಕಬಳ್ಳಾಪುರ ನಗರದ ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿರುವ ಕಾರ್ಯಕ್ರಮವನ್ನು ಅನಿವಾರ್ಯ ಕಾರಣಗಳಿಂದಾಗಿ ಮುಂದೂಡಲಾಗಿದ್ದು, ಮುಂದಿನ ದಿನಾಂಕವನ್ನು ತಿಳಿಸಲಾಗುವುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವಕರ್ಮ ಗುರುಗಳ ಸಾಧನೆ, ಕೊಡುಗೆ ಅಪಾರ: ರವಿಕುಮಾರ್



**ಮಂಡ್ಯ:** ವಿಶ್ವಕರ್ಮ ಗುರುಗಳು ವಾಸ್ತು ಕಲೆಯನ್ನು ಪ್ರಪಂಚಕ್ಕೆ ಪರಿಚಯಿಸಿದ ಮೊದಲ ಇಂಜಿನಿಯರ್ ಆಗಿದ್ದು, ಇವರ ಸಾಧನೆ ಹಾಗೂ ಕೊಡುಗೆ ಅಪಾರ ಎಂದು ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ ರವಿಕುಮಾರ್ ಅವರು ತಿಳಿಸಿದರು.

ಮಂಡ್ಯ ನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಮಂಡ್ಯ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ನಡೆದ 2024-25 ನೇ ಸಾಲಿನ ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ವಿಶ್ವಕರ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದರು.

ವಿಶ್ವಕರ್ಮ ಸಮಾಜವು ಬಹಳ ದೊಡ್ಡ ಸಮಾಜವಾಗಿದೆ. ಜಗತ್ತಿನ ಸೃಷ್ಟಿಗೆ ಬ್ರಹ್ಮ ಕಾರಣವಾದರೆ, ಜಗತ್ತು ಹೇಗಿರಬೇಕು ಎಂದು ರೂಪಿಸಿದ ಶಿಲ್ಪಿ ವಿಶ್ವಕರ್ಮ. ಹಿಂದೂ ಸಂಪ್ರದಾಯದಲ್ಲಿ ದೇವತೆಗಳಿಗೆ ಸ್ವರ್ಗಲೋಕದಲ್ಲಿ ಅರಮನೆ ನಿರ್ಮಿಸಿದವರು ವಿಶ್ವಕರ್ಮ. ಜೊತೆಗೆ ದೇವರ ಆಯುಧಗಳನ್ನು ನಿರ್ಮಾಣ ಮಾಡಿದವರು ವಿಶ್ವ ಕರ್ಮ ಗುರುಗಳೇ ಎಂದು ತಿಳಿಸಿದರು. ನಮ್ಮ ಸರ್ಕಾರವು ಸಣ್ಣ ಸಮುದಾಯಗಳ ಏಳಿಗೆಗಾಗಿ ಶ್ರಮಿಸುತ್ತಿದೆ. ಇಂತಹ ಜಯಂತಿಗಳನ್ನು ಆಚರಿಸುವ ಮೂಲಕ ಎಲ್ಲಾ ಸಮುದಾಯದವರ ಕೊಡುಗೆಗಳನ್ನು ಸಮಾಜಕ್ಕೆ ತಿಳಿಸಬಹುದು ಎಂದರು.

### ವಿಶ್ವಕರ್ಮ ಜಯಂತಿಯು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ

ಜಿಲ್ಲಾಧಿಕಾರಿ ಡಾ ಕುಮಾರ ಅವರು ಮಾತನಾಡಿ ವಿಶ್ವಕರ್ಮ ಜಯಂತಿಯು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ. ಇಡೀ ವಿಶ್ವಕ್ಕೆ ಗುರುವಾದ, ದೇವಲೋಕ, ಸ್ವರ್ಗಲೋಕವನ್ನು ಹಾಗೂ ದೇವತೆಗಳಿಗೆ ವಾಹನಗಳನ್ನು ನಿರ್ಮಾಣ ಮಾಡಿ ಸೃಷ್ಟಿಕರ್ತ ಬ್ರಹ್ಮನಿಗೆ ಸಕಲ ಸೌಲಭ್ಯಗಳನ್ನು ಒದಗಿಸಿದ ನುರಿತ ಗುರು ವಿಶ್ವಕರ್ಮ. ಅವರ ಪ್ರಾಮುಖ್ಯತೆ ಹಾಗೂ ಮಹತ್ವವನ್ನು ಎಲ್ಲರೂ ಅರಿಯಬೇಕು ಎಂದು ತಿಳಿಸಿದರು.

ವಿಶ್ವಕರ್ಮ ಗುರುವು ವಾಸ್ತು ಶಿಲ್ಪ, ಕಲೆಯಲ್ಲಿ ಸಾಕಷ್ಟು ಕೊಡುಗೆ ನೀಡಿ ಅಪಾರ ಸಾಧನೆ ಮಾಡಿದ್ದು, ಅಂದಿನ ಕಾಲದಲ್ಲಿಯೇ ವಾಸ್ತುಶಿಲ್ಪ ಹೇಗಿರಬೇಕು ಎಂದು ಕಂಡುಕೊಂಡಿದ್ದರಿಂದ ಇಡೀ ಜಗತ್ತಿನ ಮೊದಲ ಇಂಜಿನಿಯರ್ ಎಂದು ಹೇಳಬಹುದು. ಅವರನ್ನು ಪ್ರತಿಯೊಬ್ಬರೂ ಆರಾಧಿಸಬೇಕು ಎಂದರು.

ಪಿ ಎಂ ವಿಶ್ವಕರ್ಮ ಯೋಜನೆಯಡಿಯಲ್ಲಿ ವಿಶ್ವಕರ್ಮ ಸಮುದಾಯದ ಕರಕುಶಲ ಕೌಶಲ್ಯ, ಬಡಿಗೆ, ಕಮ್ಮಾರಿಕೆ ಸೇರಿದಂತೆ 16 ಕ್ಕೂ ಹೆಚ್ಚು ಕೌಶಲ್ಯಗಳ ವೃತ್ತಿಪರರಿಗೆ ಸುಮಾರು 15 ರಿಂದ 20 ದಿನಗಳ ಕಾಲ ಉಚಿತವಾಗಿ ಸೂಕ್ತ ತರಬೇತಿಯನ್ನು ನೀಡಲಾಗುವುದು. ಜೊತೆಗೆ ಶೇ. 2% ರಷ್ಟು ಬಡ್ಡಿ ರಹಿತ ಸಾಲ ನೀಡಲಾಗುವುದು. ಈ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಸುಮಾರು 80,000 ಅರ್ಜಿಗಳು ಬಂದಿರುತ್ತದೆ ಎಂದರು.

ಒಂದು ಕಲ್ಲನ್ನು ಮೂರ್ತಿಯನ್ನಾಗಿ ಕೆತ್ತನೆ ಮಾಡಿ ಪೂಜಿಸುವಂತ ಸ್ಥಿತಿಗೆ ಕೊಂಡೊಯ್ಯುವ ಕಲೆ ದೈವದತ್ತವಾದದ್ದು, ಇಂತಹ ಪ್ರತಿಭೆಯನ್ನು ಗುರ್ತಿಸಿ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಇನ್ನೂ ಹೆಚ್ಚಿನ ದೊಡ್ಡ ಮಟ್ಟಕ್ಕೆ ತೆಗೆದುಕೊಂಡು ಹೋಗುವ ಕೆಲಸವಾಗಬೇಕು ಎಂದರು.ಶಿಲ್ಪಿಗಳಲ್ಲಿ ಸೃಜನಶೀಲತೆ, ಪರಿಶ್ರಮ ಹಾಗೂ ಕೌಶಲ್ಯ ಈ ಮೂರು ಅಂಶಗಳು ಇರುತ್ತವೆ. ಇವುಗಳ ಸೊಗಡು ಹಾಗೂ ಪರಂಪರೆಯನ್ನು ನಶಿಸಿ ಹೋಗಲು ಬಿಡದೆ ಮುಂದಿನ ಪೀಳಿಗೆಗೆ ಉಳಿಸಿಕೊಂಡು ಹೋಗುವ ಕೆಲಸವಾಗಬೇಕು ಎಂದರು.

# ವೃತ್ತಿಗಳಲ್ಲಿ ಕೌಶಲ ರೂಢಿಸಿಕೊಳ್ಳಿ

**ಚಿಕ್ಕಬಳ್ಳಾಪುರ:** ಸರ್ವ ಜನಾಂಗಕ್ಕೂ ಅವರ ಜೀವನವನ್ನು ರೂಪಿಸಿಕೊಳ್ಳಲು ಸಂಪ್ರದಾಯಿಕ ಕಸಬು ಇರುತ್ತದೆ ಅದರ ಜೊತೆಗೆ ಹೊಸ ಆವಿಷ್ಕಾರಗಳ ಕೌಶಲ್ಯಗಳನ್ನು ರೂಢಿಸಿಕೊಂಡರೆ ಜೀವನ ಮತ್ತಷ್ಟು ಉತ್ತಮವಾಗಲಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಡೆದ ''ವಿಶ್ವಕರ್ಮ ಜಯಂತಿ'' ಕಾರ್ಯಕ್ರಮದಲ್ಲಿ ವಿಶ್ವಕರ್ಮ ನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು. ಕೌಶಲ್ಯ ಎಂಬುದು ತಾಂತ್ರಿಕವಾಗಿ ನಿರಂತರವಾಗಿ ಬದಲಾವಣೆಯಾಗುತ್ತಿರುತ್ತದೆ. ಇರುವ ಕೌಶಲ್ಯಗಳ ಜೊತೆಗೆ ಹೊಸ ಪ್ರಯೋಗಗಳಿಂದ ನೂತನ ಆವಿಷ್ಕಾರಗಳನ್ನು ಕಾಣಬಹುದು. ವಾಸ್ತು ಶಿಲ್ಪಿಗಳನ್ನು ನಿಜವಾದ ಇಂಜಿನಿಯರ್ ಗಳು ಎಂದು ಕರೆಯಲಾಗುತ್ತದೆ. ದೈವಿಕ ವಾಸ್ತುಶಿಲ್ಪಿ ಮತ್ತು ಕುಶಲಕರ್ಮಿ ಎಂದು ಪರಿಗಣಿಸಲ್ಪಟ್ಟ ಭಗವಾನ್ ವಿಶ್ವಕರ್ಮನನ್ನು ಗೌರವಿಸುವ ಮಹತ್ವದ ದಿನವಾಗಿ ವಿಶ್ವಕರ್ಮ ಜಯಂತಿಯನ್ನು ಆಚರಿಸಲಾಗುತ್ತದೆ. ಉತ್ಪಾದನಾ ಕೆಲಸಗಾರರು, ಎಂಜಿನಿಯರ್‌ಗಳು, ವಾಸ್ತುಶಿಲ್ಪಿಗಳು, ಯಂತ್ರಶಾಸ್ತ್ರಜ್ಞರು ಮತ್ತು ಕುಶಲಕರ್ಮಿಗಳಂತಹ ವಿವಿಧ ವೃತ್ತಿಯಲ್ಲಿರುವ ಜನರಿಗೆ, ಈ ಆಚರಣೆಯು ಬಹಳ ಮುಖ್ಯವಾಗಿದೆ. ಸರ್ವಧರ್ಮದವರಿಗೂ ವಾಸ್ತುಶಿಲ್ಪಿಗಳು ಬೇಕಾಗಿದ್ದಾರೆ. ಸಮಾಜದಲ್ಲಿ ವಿಶ್ವಕರ್ಮ ಸಮುದಾಯದವರು ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಹಾಗೂ ಆರ್ಥಿಕವಾಗಿ ಸಬಲರಾಗಬೇಕು.



ಈ ಸಮುದಾಯದ ವಿದ್ಯಾರ್ಥಿಗಳು ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ ಶಿಕ್ಷಣವನ್ನೇ ಶಕ್ತಿಯನ್ನಾಗಿಸಿಕೊಂಡು ತಮ್ಮ ಜೀವನವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು. ಜಿಲ್ಲೆಯಲ್ಲಿ ಸಮುದಾಯದ ಅಭಿವೃದ್ಧಿಗೆ ಸೂಲಿಕುಂಟೆಯ ಬಳಿ 7 ಎಕರೆಯ ಭೂಮಿ ಮಂಜೂರು ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಭರವಸೆ ನೀಡಿದರು. ವಿಶ್ವಕರ್ಮ ಸಂಘದ ಅಧ್ಯಕ್ಷ ಸಿ.ಬಿ ನವೀನ್ ಕುಮಾರ್ ಅವರು ಮಾತನಾಡಿ ಬ್ರಹ್ಮ ಇಡಿ ಬ್ರಹ್ಮಾಂಡವನ್ನೇ ಸೃಷ್ಟಿಸಿದನು ಎಂಬುದನ್ನು ಹಿಂದೂ ಧರ್ಮದ ಗ್ರಂಥಗಳು ಹೇಳುತ್ತವೆ. ಅದೇ ರೀತಿ ಈ ಬ್ರಹ್ಮಾಂಡವನ್ನ ಒಂದು ರೂಪಕ್ಕೆ ಇಳಿಸಿದ್ದು ವಿಶ್ವಕರ್ಮ ಎಂದು ನಂಬಲಾಗಿದೆ. ಹೀಗಾಗಿ ವಿಶ್ವಕರ್ಮ ಜಯಂತಿಯೂ ಹುಟ್ಟಿಕೊಂಡಿತು. ಸ್ವರ್ಗಲೋಕದಲ್ಲಿ ದೇವತೆಗಳಿಗೆ ಅರಮನೆ ನಿರ್ಮಿಸಿದವನು ಈ ವಿಶ್ವಕರ್ಮ, ದೇವರ ಆಯುಧಗಳು ಅವರ ವಾಹನಗಳ ನಿರ್ಮಾತೃ ಕೂಡ ಇದೇ ವಿಶ್ವಕರ್ಮ ಎಂದು ತಿಳಿಸಿದರು.

ಅಕ್ಷರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಬಿ.ವಿ ಪ್ರಕಾಶ್ ವಿಶ್ವಕರ್ಮ ಜಯಂತಿಯ ಕುರಿತು ಉಪನ್ಯಾಸ ನೀಡಿದರು. ಈ ವೇಳೆಯಲ್ಲಿ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು ಹಾಗೂ ಸಮುದಾಯದ ಹಿರಿಯ ಮುಖಂಡರಾದ ಗೋವಿಂದ ಚಾರಿ, ಶ್ರೀನಿವಾಸ ಚಾರಿ, ಚಂದ್ರ ಶೇಖರ್, ಯತೀಶ್ ರವರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಯೋಜನ ನಿರ್ದೇಶಕರಾದ ಈಶ್ವರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಿ.ಎಂ ರವಿಕುಮಾರ್, ಸಂಘಟನಾ ಕಾರ್ಯದರ್ಶಿ ಎನ್. ಸುಬ್ರಹ್ಮಣ್ಯಚಾರಿ, ವಿಶ್ವಕರ್ಮ ಮಹಿಳಾ ಸಂಘದ ಅಧ್ಯಕ್ಷ ಸುಬ್ಬಲಕ್ಷ್ಮಿ ಬ್ರಹ್ಮಚಾರಿ, ಗೌರವಾಧ್ಯಕ್ಷ ಜಮುನಾ ರಾಮಕೃಷ್ಣ ಚಾರಿ, ಸಮುದಾಯದ ಮುಖಂಡರಾದ ಮಂಜುನಾಥ ಚಾರಿ, ಗೋಪಾಲ ಚಾರಿ, ಶ್ರೀ ಕೃಷ್ಣ, ನಂಜುಡಯ್ಯ ಉಪಸ್ಥಿತರಿದ್ದರು.

# ವಿದ್ಯುತ್ ವ್ಯತ್ಯಯ

**ಮೈಸೂರು:** ಸೆಪ್ಟೆಂಬರ್ 19 ರಂದು ಬೆಳಿಗ್ಗೆ 10 ರಿಂದ ಸಂಜೆ 5:30 ಗಂಟೆಯವರೆಗೆ ಎಫ್.ಟಿ.ಎಸ್, ಜ್ಯೋತಿನಗರ, ರಾಜೀವ್‌ನಗರ ಮತ್ತು ದೇವನೂರು ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಕ.ವಿ.ಪ್ರ.ನಿ.ನಿ ವತಿಯಿಂದ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದ್ದು ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ಅನಿಯಮಿತ ವ್ಯತ್ಯಯವಾಗಲಿದೆ.

ಎಫ್.ಟಿ.ಎಸ್ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ಮೊಹಮ್ಮದ್ ಸೇಠ್ ಬ್ಲಾಕ್, ಗಾಂಧಿನಗರ, ವೀರನಗೆರೆ, ಎ.ಜೆ ಬ್ಲಾಕ್, ನಾರ್ಥ್-ಈಸ್ಟ್ ಆಫ್ ಎನ್.ಆರ್ ಮೊಹಲ್ಲಾ, ರಾಜೇಂದ್ರನಗರ, ಸುಭಾಷ್‌ನಗರ, ಬಡಾಮಕಾನ್, ಸೋನಿಯಾ ಗಾಧಂಞ ಬಡಾವಣೆ, ಕೆಸರೆ 3ನೇ ಹಂತ, ಶಿವಾಜಿ ರಸ್ತೆ ಎ ಬಡಾವಣೆ ಮತ್ತು ಬಿ ಬಡಾವಣೆ, ಬಿ.ಟಿ ಮಿಲ್, ಎಲ್.ಐ.ಸಿ ಮತ್ತು ಮದರ್ ಬ್ಲಾಕ್, ತಿಲಕ್‌ನಗರ, ನೆಲ್ಸನ್ ಮಂಡೇಲಾ ರಸ್ತೆ, ಸಯ್ಯಾಜಿರಾವ್ ರಸ್ತೆ, ಭಾವನಾ ಮಾರ್ಬಲ್, 2ನೇ ಈದ್ಗಾ, ಬಿ.ಬಿ ಕೇರಿ, ಸಿ.ವಿ ರಸ್ತೆ, ಸೆಂಟ್ ಜೋಷೆಫ್ ಕಾಲೇಜು ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು.

ಜ್ಯೋತಿನಗರ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ಜಲಪುರಿ, ಗಾಯತ್ರಿಪುರಂ, ಜ್ಯೋತಿನಗರ, ಉದಯಗಿರಿ, ಕ್ಯಾತಮಾರನಹಳ್ಳಿ, ಶಾಂತಿನಗರ 1 ಮತ್ತು 2ನೇ ಹಂತ, ಗಣೇಶ್ ನಗರ, ಸತ್ಯನಗರ, ಮಹದೇವಪುರ ರಸ್ತೆ, ಜರ್ಮನ್ ಪ್ರೆಸ್, ಉಸ್ಮಾನಿಯಾ ಬ್ಲಾಕ್, ಗೌಸಿಯಾ ನಗರ, ರಾಘವೇಂದ್ರ ನಗರ, ಗಿರಿಯಾಬೋವಿ ಪಾಳ್ಯ, ಯರಗನಹಳ್ಳಿ, ಬನ್ನೂರು ರಸ್ತೆ, ಸಿದ್ಧಾರ್ಥನಗರ, ಆಲನಹಳ್ಳಿ ಬಡಾವಣೆ, ಕೆ.ಎಸ್.ಆರ್.ಟಿ.ಸಿ ಬಡಾವಣೆ, ಪೊಲೀಸ್ ಬಡಾವಣೆ 1ನೇ ಮತ್ತು 2ನೇ ಹಂತ, ಗಿರಿದರ್ಶಿನಿ ಬಡಾವಣೆ, ನಂದಿನ ಬಡಾವಣೆ 1ನೇ ಮತ್ತು 2ನೇ ಹಂತ, ನೇತಾಜಿ ಬಡಾವಣೆ, ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳು. ರಾಜೀವ್‌ನಗರ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ರಾಜೀವನಗರ 2ನೇ ಹಂತ, ಕ್ರಿಶ್ಚಿಯನ್ ಕಾಲೋನಿ, ಯಾಸಿನ್ ಮಸ್ಜಿದ್, ಎಸ್.ಬಡಾವಣೆ, ಸೂರ್ಯನಾರಾಯಣ ದೇವಸ್ಥಾನ ರಸ್ತೆ, ಆಲ್ ಬಜಾರ್ ಮಸ್ಜಿದ್ ವೃತ್ತ, ಅಂಬೇಡ್ಕರ್ ಭವನ ರಸ್ತೆ, ಕ್ಯಾಬಾ ಮಸ್ಜಿದ್ ವೃತ್ತ, ನಾರಾಯಣ ಹೃದಯಾಲಯ ಆಸ್ಪತ್ರೆ, ರಾಜೀವನಗರ 3ನೇ ಹಂತ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳು. ದೇವನೂರು ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ಬಿ.ಡಿ ಕಾಲೋನಿ, ಅಜೀಜ್ ಸೇಠ್ ನಗರ, 320 ಮನೆ, ಕೆಸರಿ ಕಾಲೋನಿ, ಮಹದೇವಪುರ ಮುಖ್ಯ ರಸ್ತೆ, ಶಕ್ತಿನಗರ, ರಾಜ್‌ಕುಮಾರ್ ರಸ್ತೆ, ಕಲ್ಯಾಣಗಿರಿ, ಅಕ್ಷಯ ಭಂಡಾರ್, ರಮ್ಮನಹಳ್ಳಿ, ಕಾಳಿಸಿದ್ದನಹುಂಡಿ, ಹಂಚ್ಯ, ಸಾತಗಳ್ಳಿ, ಗಳಿಗರಹುಂಡಿ, ನೆಹರು ನಗರ, ಸಾತಗಳ್ಳಿ ಗ್ರಾಮ, ಡಿ.ಟಿ.ಎಸ್ ರಾವ್ ನಗರ, ವಿ.ಟಿ.ಯೂ ಕಾಲೇಜು ಎದುರು, ಸನ್ ಫ್ಲ್ಯಾರ್ ಬಡಾವಣೆ, ಸಾತಗಳ್ಳಿ ಬಿ ಜೋನ್, ವಿಟಿಯೂ ಕಾಲೇಜು, ಭಾರತ್ ನಗರ, ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕು ಎಂದು ಚಾ.ವಿ.ಸ.ನಿ.ನಿ.ಯ ನ.ರಾ. ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ವಿದ್ಯುತ್ ವ್ಯತ್ಯಯ:** ಮೈಸೂರುವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ ದಟ್ಟಗಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 2ನೇ ತ್ರೈಮಾಸಿಕ ನಿರ್ವಹಣಾ ಕೆಲಸದ ನಿಮಿತ್ತ ಸೆಪ್ಟೆಂಬರ್ 19 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಕೆಳಕಂಡ ಪ್ರದೇಶಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು: ದಟ್ಟಗಳ್ಳಿ 3ನೇ ಹಂತ, ತ್ರಿವೇಣಿ ಸೂಪರ್ ಮಾರ್ಕೆಟ್ ಏರಿಯಾ, ಕದಂಬ ಬೇಕರಿ ಏರಿಯಾ, ದಟ್ಟಗಳ್ಳಿ 'ಐ' ಬ್ಲಾಕ್, ಮುಡಾ ಎಂಪ್ಲಾಯಿಸ್ ಲೇಔಟ್, ಆಂದೋಲನ ವೃತ್ತ, ಸಬ್ ರಿಜಿಸ್ಟ್ರಾರ್ ಆಫೀಸ್, ಕನಕದಾಸನಗರ, ಆದಿತ್ಯ ಸರ್ಕಲ್, ಸೋಮನಾಥನಗರ, ಮಹಾಲಕ್ಷ್ಮೀ ಬಡಾವಣೆ ಕೇರ್ಗಳ್ಳಿ, ಕಳ್ಳಿ ಬಡಾವಣೆ, ನಂದಿ ಸರ್ಕಲ್ ದಟ್ಟಗಳ್ಳಿ, ಜೋಡಿ ಬೇವಿನಮರ ದಟ್ಟಗಳ್ಳಿ, ರಾಮಕೃಷ್ಣನಗರ, ಆರ್ ಟಿ ನಗರ, ಲಿಂಗಾಬುದಿಪಾಳ್ಯ, ಯೂನಿವರ್ಸಿಟಿ ಲೇಔಟ್, ವಾಸು ಲೇಔಟ್, ಕೆ ಬ್ಲಾಕ್ ಆರ್ ಕೆ ನಗರ. ಮೂಗನಹುಂಡಿ, ನರ್ಗತಹಳ್ಳಿ, ದೇವಗಳ್ಳಿ, ಬಲ್ಲಳ್ಳಿ ಅನಗಳ್ಳಿ, ತಿಬ್ಬಯ್ಯನಹುಂಡಿ, ಬೀರಿಹುಂಡಿ ಐ.ಪಿ ಲಿಮಿಟ್ಸ್ ಚಾವಿಸನಿನಿ ಮುಖ್ಯ ಇಂಜಿನಿಯರ್ ಕಛೇರಿ, ಹೆಲ್ತ್ ಸಿಟಿ, ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು ಎಂದು ಚಾ.ವಿ.ಸ.ನಿ.ನಿ.ಯ ನ.ರಾ.ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜಕ್ಕೆ ವಿಶ್ವಕರ್ಮರ ಕೊಡುಗೆ ಅಪಾರ

**ಬೆಂಗಳೂರು ಗ್ರಾಮಾಂತರ:** ವಿಶ್ವಕರ್ಮ ಸಮುದಾಯವು ಕಲೆ ಮತ್ತು ವಾಸ್ತುಶಿಲ್ಪ ಕ್ಷೇತ್ರಕ್ಕೆ ಅವಿಸ್ಮರಣೀಯ ಕೊಡುಗೆ ನೀಡಿದೆ. ವಿಶ್ವಕರ್ಮರ ಕೊಡುಗೆ ಒಂದು ಸಮುದಾಯಕ್ಕೆ ಮಾತ್ರ ಸೀಮಿತವಲ್ಲ, ಅಖಂಡ ಸಮಾಜಕ್ಕೆ ಅಪಾರ ನೀಡಿದ್ದಾರೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಅವರು ಹೇಳಿದರು. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ದೇವನಹಳ್ಳಿ ಟೌನ್ ನಲ್ಲಿರುವ ತಾಲೂಕು ಆಡಳಿತ ಸೌಧದ ಒಳಾಂಗಣದಲ್ಲಿ ಹಮ್ಮಿಕೊಂಡಿದ್ದ, ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ವಿಶ್ವಕರ್ಮರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಪ್ರತಿನಿತ್ಯ ಜನರು ಬಳಸುವ ಕರಕುಶಲ ಸಾಮಗ್ರಿಗಳು, ಲೋಹ, ಕಬ್ಬಿಣ, ದೇವರ ವಿಗ್ರಹ, ಚಿತ್ರಪಟಗಳು, ಗೃಹಬಳಕೆ ವಸ್ತುಗಳು, ಸ್ಮಾರಕಗಳ ನಿರ್ಮಾಣದ ಕಾರ್ಯದಲ್ಲಿ ವಿಶ್ವಕರ್ಮರ ಕಲೆಯ ಜೀವಂತಿಕೆಯ ಅಸ್ತಿತ್ವವನ್ನು ಇಂದಿಗೂ ಉಳಿಸಿರುವುದೇ ಸಾಕ್ಷಿ. ಲೋಕವನ್ನು ವೈಭವೀಕರಿಸುವ ಸಾಂಸ್ಕೃತಿಕ ಪರಂಪರೆ, ಕಲೆ ಮತ್ತು ವಾಸ್ತಶಿಲ್ಪ ಕ್ಷೇತ್ರಕ್ಕೆ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ ಎಂದರು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ರಾಜಣ್ಣ ಮಾತನಾಡಿ, ರಾಜ್ಯ ಸರ್ಕಾರ ಸಾಕಷ್ಟು ಜನಪರ ಯೋಜನೆಗಳು ಜಾರಿಗೆ ತರುವ ಮೂಲಕ ಎಲ್ಲ ಸಮುದಾಯಗಳ ಅಭಿವೃದ್ಧಿಗೆ ಶ್ರಮಿಸುತ್ತಿದೆ. ವಿಶ್ವಕರ್ಮ ಸಮುದಾಯಕ್ಕೂ ವಿಶ್ವಕರ್ಮ ಅಭಿವೃದ್ಧಿ ನಿಗಮದ ಮೂಲಕ ಸಾಲ-ಸೌಲಭ್ಯಗಳನ್ನು ನೀಡುತ್ತಾ, ಆರ್ಥಿಕ ಅಭಿವೃದ್ಧಿಗೆ ನೆರವಾಗುತ್ತಿದೆ. ವಿಶ್ವಕರ್ಮರ ಕೆತ್ತನೆ ಕಾರ್ಯಗಳ ಕಲೆಯು ಇಂದಿನ ಸಮಾಜಕ್ಕೆ ಕೊಡುಗೆ ನೀಡಿರುವುದನ್ನು ನಾವೆಲ್ಲರೂ ಸ್ಮರಿಸಬೇಕಾಗಿದೆ ಎಂದರು. ಬೆಂಗಳೂರು ಗ್ರಾಮಾಂತರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತ ಅಧ್ಯಕ್ಷ ಕೃಷ್ಣಪ್ಪ ಅವರು ವಿಶ್ವಕರ್ಮರ ಕುರಿತು ವಿಶೇಷ ಉಪನ್ಯಾಸವನ್ನು ನೀಡಿದರು. ಕಾರ್ಯಕ್ರಮದಲ್ಲಿ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿಕಾರದ ಅಧ್ಯಕ್ಷ ವಿ. ಶಾಂತಕುಮಾರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ದೇವನಹಳ್ಳಿ ತಾಲೂಕು ಅಧ್ಯಕ್ಷ ಜಗನ್ನಾಥ, ದೇವನಹಳ್ಳಿ ತಹಶೀಲ್ದಾರ್ ಬಾಲಕೃಷ್ಣ ಸೇರಿದಂತೆ ಜಿಲ್ಲಾಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ವಿಶ್ವಕರ್ಮ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ಜವಾಹರ ನವೋದಯ ವಿದ್ಯಾಲಯದಲ್ಲಿ 6ನೇ ತರಗತಿ ಪ್ರವೇಶಾತಿ ಆರಂಭ

**ಮೈಸೂರು:** ಜವಾಹರ ನವೋದಯ ವಿದ್ಯಾಲಯದಲ್ಲಿ 2025-26 ನ ಶೈಕ್ಷಣಿಕ ಸಾಲಿನ 6 ನೇ ತರಗತಿ ಪ್ರವೇಶಾತಿಗಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಯ್ಕೆ ಬಯಸುವ ಅಭ್ಯರ್ಥಿಗಳು 2024-25 ನೇ ಸಾಲಿನಲ್ಲಿ 5ನೇ ತರಗತಿಯಲ್ಲಿ ಸರ್ಕಾರಿ/ ಅನುದಾನಿತ/ಸರ್ಕಾರಿ ಅನುಮತಿ/ ಮಾನ್ಯತೆ ಪಡೆದಿರುವ ಮೈಸೂರು ಜಿಲ್ಲೆಯ ಶಾಲೆಯಲ್ಲಿ ಅಧ್ಯಯನ ಮಾಡುತ್ತಿರಬೇಕು. ಅಭ್ಯರ್ಥಿಗಳು ಮೈಸೂರು ಜಿಲ್ಲೆಯ ನಿವಾಸಿಯಾಗಿದ್ದು, ದಿನಾಂಕ 01-05-2013 ರಿಂದ 31-07-2017 ರೊಳಗೆ ಜನಿಸಿರಬೇಕು. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 23 ಕೊನೆಯ ದಿನಾಂಕವಾಗಿದ್ದು, 18-01-2025 ರಂದು ಪರೀಕ್ಷೆ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ www.navodaya.gov.in ವೆಬ್ ಸೈಟ್ ಅಥವಾ ಸಹಾಯವಾಣಿ ಸಂಖ್ಯೆ: 9448413479 ಅನ್ನು ಸಂಪರ್ಕಿಸಬಹುದು ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಪಿಗಳಿಗೆ ಶಿಕ್ಷೆ ದಂಡ ವಿಧಿಸಿದ ನ್ಯಾ. ಪೂಜಾ

**ಚಿಕ್ಕಬಳ್ಳಾಪುರ:** ಸಿ.ಸಿ.ನಂ. 188/2015 ರಂತೆ ಪೋಲಿಸ್ ಉಪ ಆರಕ್ಷಕರಾದ ಅಯಾಕತ್ ಉಲ್ಲಾ ಪಿಎಸ್ಐ ರವರು ಕಲ:-143,147,148,323,324,504, 506 ರೆ/ವಿ 149 ಐಪಿಸಿ ಅಡಿಯಲ್ಲಿ ಶಿವ ಶಿವಣ್ಣ ಮತ್ತು 4 ಜನರು ಆರೋಪಿಗಳ ವಿರುದ್ಧ ಶಿಡ್ಲಘಟ್ಟ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಿನಾಂಕ:25-08-2014 ರಂದು ವೆಂಕಟಲಕ್ಷ್ಮಮ್ಮ ರವರು ನೀಡಿದ ದೂರಿನ ಮೇರಿಗೆ ತನಿಖೆ ಮಾಡಿ ದೋಷಾರೋಪಣಾ ಪತ್ರ ಸಲ್ಲಿಸಿದ್ದು, ದೂರುದಾರರಾದ ವೆಂಕಟಲಕ್ಷ್ಮಮ್ಮ ಮತ್ತು ಟಿ.ಕೆ ನಾಗರಾಜ್ ಎಂಬುವರನ್ನು ಆರೋಪಿಗಳು ಅಕ್ರಮ ಗುಂಪು ಕಟ್ಟಿಕೊಂಡು ಗಲಾಟೆ ಮಾಡಿ ಕೆಟ್ಟ ಮಾತುಗಳಿಂದ ಬೈದು ಹೆಂಗಸಿನ ಕೂದಲು ಹಿಡಿದು ಎಳಾದಾಡಿ ಮಾನ ಭಂಗ ಮಾಡುವ ಉದ್ದೇಶ ಸಾಬೀತಾಗಿದ್ದು ಮತ್ತು ನಾಗರಾಜ್ ಎಂಬುವರಿಗೆ ಕೈಗಳಿಂದ ಹೊಡೆದಿರುವುದು ಸಾಬೀತಗಿರುವ ಕಾರಣ ಮಾನ್ಯ ಘನ ನ್ಯಾಯಾಲಯ ಕಿರಿಯ ಶ್ರೇಣಿಯ ನ್ಯಾಯಧೀಶರಾದ ಪೂಜ ರವರು ಈ ಮೇಲಿನ ಪ್ರಕರಣದ ಸಾಕ್ಷಿ ವಿಚಾರಣೆ ಮಾಡಿ ವಾದ ವಿವಾದಗಳ ನಂತರ ತೀರ್ಮಾನವನ್ನು ನೀಡಿ ಆರೋಪಿಗಳಿಗೆ ಐಪಿಸಿ ಕಲಂ: 143 ರೆ/ವಿ 149 ಕ್ಕೆ ತಲ 5000/- ರೂ ಜುಲ್ಮೆನೆ ನಂತೆ ಅಥವಾ 3 ತಿಂಗಳ ಸಾದ ಶಿಕ್ಷೆ ಹಾಗೂ ಐಪಿಸಿ ಕಲಂ 144, ರೆ/ವಿ 149 ಆರೋಪಿಗಳಗೆ ತಲ 5000/- ರೂ ಜುಲ್ಮನೆಯಂತೆ ಹಾಗೂ ಐಪಿಸಿ ಕಲಂ:504 ರೆ/ವಿ 149 ತಲ 5000/- ರೂ ಗಳಂತೆ ಜುಲ್ಮನೆ ಅಥವಾ 3 ತಿಂಗಳ ಸಾದ ಶಿಕ್ಷೆ ಹಾಗೂ ಐಪಿಸಿ ಕಲಂ: 506 ರ/ಬಿ 149 ತಲ 5000 ರೂ ಅಥವಾ 3 ತಿಂಗಳ ಸಾದ ಶಿಕ್ಷೆ ಮತ್ತು ಆರೋಪಿ 2,3,5 ರವರಿಗೆ ಐಪಿಸಿ ಕಲಂ:323 ಕ್ಕೆ ತಲ 1000 ರೂ ನಂತೆ ಅಥವಾ 15 ದಿನ ಸಾದ ಶಿಕ್ಷೆಯನ್ನು ವಿಧಿಸಿ ಒಟ್ಟು ರೂ 2,03,000 ದಂಡ ವಿಧಿಸಿ ಹಾಗೂ ವಿಶೇಷವಾಗಿ ನೊಂದ ವ್ಯಕ್ತಿಗಳಾದ ವೆಂಕಟಲಕ್ಷ್ಮಮ್ಮ ಹಾಗೂ ಟಿ.ಕೆ. ನಾಗರಾಜು ರವರಿಗೆ ಪರಿಹಾರವಾಗಿ 50,000 ಸಾವಿರ ನೀಡುವಂತೆ ಮಾನ್ಯ ನ್ಯಾಯಾಧಿಶರು ನಿರ್ದೇಶನ ನೀಡಿರುತ್ತಾರೆ. ಈ ಪ್ರಕರಣವನ್ನು ಶಿಡ್ಲಘಟ್ಟ ನ್ಯಾಯಾಲಯದ ಸಹಾಯಕ ಸರ್ಕಾರಿ ಅಭಿಯೋಜಕರಾದ ಸುರೇಶ್ ಬಾಬು ರವರು ಫಿರ್ಯಾದಿದಾರರ ಪರವಾಗಿ ವಾದವನ್ನು ಮಂಡಿಸಿರುತ್ತಾರೆ ಎಂದು ಶಿಡ್ಲಘಟ್ಟ ಪ್ರಧಾನ ಸಿ.ಜೆ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯದ ಸಹಾಯಕ ಸರ್ಕಾರಿ ಅಭಿಯೋಜಕರಾದ ಸುರೇಶ್ ಬಾಬುರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಂದೆ ಇಲ್ಲದ ಮಕ್ಕಳ ಖಾತೆಗೆ 24 ಸಾವಿರ ರೂ. ಸ್ಕಾಲರ್ ಶಿಫ್ ಜಾಲತಾಣದಲ್ಲಿ ಹರುದಾಡುತ್ತಿರುವ ನಕಲಿ ಸುದ್ದಿ

**ಚಿಕ್ಕಬಳ್ಳಾಪುರ:** ತಂದೆ ಇಲ್ಲದ ಮಕ್ಕಳ ಖಾತೆ ಗೆ ವರ್ಷ ಕ್ಕೆ 24,000 ರೂ ಸ್ಕಾಲರ್ ಶಿಫ್ ಸೌಲಭ್ಯವಿದ್ದು, ಈ ವಿಚಾರ ಜನ ಸಾಮ್ಯಾನರಿಗೆ ತಿಳಿದೇ ಇಲ್ಲ, ಅದ್ದರಿಂದ ತಮಗೆ ಗೊತ್ತಿರುವ ಯಾರಾದರು ತಂದೆ ಇಲ್ಲದ ಮಕ್ಕಳು ಇದ್ದರೆ ಅವರ ಪೋಷಕರುಗೆ ಅರ್ಜಿ ಸಲ್ಲಿಸಲು ತಿಳಿಸಿ ಎಂಬ ಸಂದೇಶ ವಾಟ್ಸಪ್ ಮತ್ತು ಜಾಲತಾಣದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ದಕ್ಷಿಣ ಕನ್ನಡ, ಮಂಗಳೂರು ಎಂಬ ಮೊಹರು ಹಾಕಿರುವ ಅರ್ಜಿಯ ಫೋಟೋ ಹೊಂದಿರುವ ವಾಟ್ಸಪ್ ಸಂದೇಶ ಜನಸಾಮ್ಯಾನರ ಮೊಬೈಲ್ ಗಳಲ್ಲಿ ಹರಿದಾಡುತ್ತಿದೆ.

ಈ ಸಂದೇಶ ನೋಡಿದ ಜನರು ದಿನನಿತ್ಯ ಜಿಲ್ಲಾಧಿಕಾರಿಯವರ ಕಚೇರಿ, ತಹಸೀಲ್ದಾರ್ ಅವರ ಕಚೇರಿಗಳಿಗೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ನೂರಾರು ಜನರು ಬಂದು ಯೋಜನೆಯ ಬಗ್ಗೆ ವಿಚಾರಿಸುತ್ತಿರುವುದು ಹಾಗೂ ಸಾಕಷ್ಟು ಫೋನ್ ಕರೆಗಳು ಬರುತ್ತಿರುವುದು ಕಂಡು ಬರುತ್ತಿದೆ. ಅಲ್ಲದೆ, ಈ ಸಂದೇಶವನ್ನೇ ಬಂಡವಾಳವನ್ನಾಗಿ ಮಾಡಿಕೊಂಡ ಮಧ್ಯವರ್ತಿಗಳು ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಬಂದು 10-15 ಅರ್ಜಿಗಳನ್ನು ನೀಡಬೇಕೆಂದು ಗಲಾಟೆ ಮಾಡಿತ್ತಿದ್ದಾರೆ. ಇದರಿಂದ ಮುಗ್ದ ಜನರನ್ನು ಮರಳು ಮಾಡಿ ಹಣ ವಸೂಲಿ ಮಾಡುವ ತಂತ್ರವನ್ನು ರೂಪಿಸಿಕೊಂಡಿರುವುದು ಅನುಮಾನಕ್ಕೆ ದಾರಿ ಮಾಡಿಕೊಡುತ್ತಿದೆ. ಆದರೆ ಈ ಸೌಲಭ್ಯದ ವಾಸ್ತವತೆಯೇ ಬೇರೆಯೇ ಇದೆ. ಈ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಯೋಜನೆಯಾದ ಮಿಷನ್ ವಾತ್ಸಲ್ಯ ಯೋಜನೆ ಅಡಿ ಬರು ಪ್ರಾಯೋಜಕತ್ವ ಕಾರ್ಯಕ್ರಮವಾಗಿದ್ದು, ಮಕ್ಕಳ ನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015, ತಿದ್ದುಪಡಿ 21 ಕಲಂ 2(58)ರ ಪ್ರಕಾರ ಪ್ರಾಯೋಜಕತ್ವ ಕಾರ್ಯಕ್ರಮವು ಕುಟುಂಬದೊಂದಿಗೆ ಮಗುವಿನ ವೈದ್ಯಕೀಯ, ಶೈಕ್ಷಣಿಕ ಹಾಗೂ ಅಭಿವೃದ್ಧಿಯ ಅಗತ್ಯಗಳನ್ನು ಪೂರೈಸಲು ಅಗತ್ಯವಿರುವ ಪೂರಕ ಬೆಂಬಲ, ಹಣಕಾಸು ಅಥಾವ ಇತರೆ ಸಹಕಾರ ಎಂದು ವ್ಯಾಖ್ಯಾನಿಸಲಾಗಿದೆ. ಈ ಪ್ರಾಯೋಜಕತ್ವ ಕಾರ್ಯಕ್ರಮದಲ್ಲಿ ಎರಡು ವರ್ಗಗಳಿದ್ದು, ಅದರಲ್ಲಿ ಮೊದಲನೆಯವರು 18 ವರ್ಷದೊಳಗಿನ ಮಕ್ಕಳನ್ನು ಮಕ್ಕಳ ಪಾಲನಾ ಸಂಸ್ಥೆಯ ವಾತಾವರಣದಿಂದ ಬೇರ್ಪಡಿಸಿ ಕುಟುಂಬದ ವಾತಾವರಣದಲ್ಲಿ ಮುಂದುವರೆಸಲು ಪ್ರಾಯೋಜಕತ್ವ ಬೆಂಬಲವನ್ನು ಒದಗಿಸುವುದು. ಎರಡನೆಯದಾಗಿ ವಿವಿಧ ಕಾರಣಗಳಿಂದ ಪೋಷಕರಿಂದ ಬೇರ್ಪಟ್ಟು ಶೋಷಣೆ, ಸಂಕಷ್ಟಕ್ಕೀಡಾಗುವುದನ್ನು ತಪ್ಪಿಸಿ ಕೌಟುಂಬಿಕ ವ್ಯವಸ್ಥೆಯಲ್ಲಿಯೇ ಬೆಳೆಯಲು ಪ್ರತಿ ಮಾಹೆ ರೂ.4000/-ಗಳಂತೆ ಕನಿಷ್ಠ ಒಂದು ವರ್ಷದ ಅವಧಿಗೆ ಪ್ರಾಯೋಜಕತ್ವ ಬೆಂಬಲವನ್ನು ಒದಗಿಸುವುದಾಗಿದೆ.

**ಮಾನದಂಡಗಳು:** 1. ಮಕ್ಕಳ ಪಾಲನಾ ಸಂಸ್ಥೆಗಳಿಂದ ಕೌಟುಂಬಿಕ ವಾತಾವರಣಕ್ಕೆ ಬಿಡುಗಡೆ ಮಾಡಿದ ಮಕ್ಕಳು. 2. ಪಾಲನೆ ಮತ್ತುರಕ್ಷಣೆಯಅಗತ್ಯವಿರುವ ಮಕ್ಕಳನ್ನು ಬಾಲನ್ಯಾಯ ಮಂಡಳಿ ಮಕ್ಕಳ ಕಲ್ಯಾಣ ಸಮಿತಿಯ ಶಿಫಾರಸ್ಸು ಮಾಡಿದರಕ್ಷಣೆ ಮತ್ತು ಪಾಲನೆಯ ಅಗತ್ಯವುಳ್ಳ ಮಕ್ಕಳು. 3. ಮಕ್ಕಳ ಕಾಯ್ದೆ2015 ರ ಪ್ರಕಾರ ಮಕ್ಕಳು ಪೋಷಣೆ ಮತ್ತು ರಕ್ಷಣೆಯ ಅಗತ್ಯ ಹೊಂದಿದ್ದರೆ ಅಂದರೆ, ವಸತಿರಹಿತರು ಯಾವುದಾದರು ನೈಸರ್ಗಿಕ ವಿಕೋಪಗಳಿಗೆ ಒಳದಾದ ಸಂತ್ರಸ್ಥರು ಬಾಲಕಾರ್ಮಿಕರು, ಬಾಲ್ಯವಿವಾಹಕ್ಕೆ ಒಳಗಾದ ಸಂತ್ರಸ್ಥರು, ಮಾನವ ಕಳ್ಳ ಸಾಗಾಣಿಕೆ ಒಳಗಾದ ಸಂತ್ರಸ್ಥರು, ಹೆಚ್.ಐ.ವಿ/ ಮಾರಣಾಂತಿಕ ಕಾಯಿಲೆಗೆ ಒಳಗಾದ ಮಕ್ಕಳು, ವಿಶೇಷ ಚೇತನ ಮಕ್ಕಳು, ತಪ್ಪಿಸಿಕೊಂಡು ಅಥವಾ ಓಡಿ ಬಂದಿರುವ ಮಗು, ಬಾಲ ಭಿಕ್ಷಕರು ಅಥವಾ ಬೀದಿಯಲ್ಲಿ ವಾಸಿಸುತ್ತಿದ್ದರೆ, ಬೆಂಬಲ ಹಾಗೂ ಪುನರ್ವಸತಿಯ ಅಗತ್ಯವಿರುವಂತಹ ಹಿಂಸೆಗೆ ಒಳಪಟ್ಟ ಅಥವಾ ನಿಂದನೆ ಅಥವಾ ಶೋಷಿತ ಮಕ್ಕಳು. 4. ತಾಯಿ ವಿಧವೆ ಅಥವಾ ವಿಚ್ಛೇದಿತ ಅಥವಾ ಕುಟುಂಬದಿಂದ ಪರಿತ್ಯಜಿಸಲ್ಪಟ್ಟ ಮಕ್ಕಳು. 5. ಲೈಂಗಿಕ ದೌರ್ಜನ್ಯದಿಂದ ನೊಂದಮಕ್ಕಳು. 6. ವಿಸ್ತೃತ ಕುಟುಂಬದಲ್ಲಿರುವ ಅನಾಥ ಅರ್ಹ ಮಕ್ಕಳು. 7.ಪಿ.ಎಂ. ಕೇರ್ ಫಾರ್ ಚಿಲ್ಡನ್ ಯೋಜನೆಯಡಿ ಬರುವಂತಹ ಮಕ್ಕಳು. 8. ಜೈಲುವಾಸಿ ಪೋಷಕರ ಅರ್ಹ ಮಕ್ಕಳು.

ಈ ಮೇಲ್ಕಂಡ ಪಾಲನೆ ಮತ್ತು ರಕ್ಷಣೆ ಅಗತ್ಯವುಳ್ಳ ಮಗು ಎಂದು ಕಂಡುಬಂದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ,ಚಿಕ್ಕಬಳ್ಳಾಪುರ, ಎಫ್.ಬಿ-8, 1ನೇ ಮಹಡಿ, ಜಿಲ್ಲಾಡಳಿತ ಭವನ, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ ಕಚೇರಿಗೆ ಸಂಪರ್ಕಿಸಬಹುದು.

# ಆಧಾರ್ ಅಪ್ ಡೇಟ್ ಕಡ್ಡಾಯ

**ಮಂಡ್ಯ:** ಸರ್ಕಾರಿ ಸವಲತ್ತು, ಯೋಜನೆ, ಸಹಾಯಧನ ಪಡೆಯುವಾಗ, ಬ್ಯಾಂಕ್ ನಲ್ಲಿ ಖಾತೆಗೆ ಆಧಾರ್ ಜೋಡಣೆ ಮಾಡುವುದು ಸರ್ವೆ ಸಾಮಾನ್ಯ. ಆಧಾರ್ ಕಾಡ್9ನ್ನು ತಪ್ಪದೇ ಹತ್ತು ವರ್ಷಕ್ಕೆ ಒಮ್ಮೆಯಾದರು ಅಪ್ ಡೇಟ್ ಮಾಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ: ಹೆಚ್ ಎಲ್ ನಾಗರಾಜು ಅವರು ತಿಳಿಸಿದರು.



ಅವರು ಇತ್ತೀಚೆಗೆ ಆಧಾರ್ ಅಪ್ ಡೇಟ್ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿ ಮಾತನಾಡಿದರು. 10 ವರ್ಷಕೊಮ್ಮೆಯಾದರೂ ಆಧಾರ್ ಅಪ್ ಡೇಟ್ ಮಾಡಿಸಿಕೊಳ್ಳದಿದ್ದಲ್ಲಿ ಸರ್ಕಾರ ಆರ್.ಟಿ.ಜಿ.ಎಸ್ ಮೂಲಕ ನೀಡುವ ಸಹಾಯಧನ, ಪಿಂಚಣಿಗಳು ಖಾತೆಗೆ ಪಾವತಿಯಾಗದೇ ಇಲಾಖೆಗಳ ಬಳಿಯೇ ಉಳಿದು ತೊಂದರೆಯಾಗುತ್ತದೆ. ಈ ಹಿನ್ನಲೆಯಲ್ಲಿ ತಪ್ಪದೇ ಸಾರ್ವಜನಿಕರು ಆಧಾರ್ ಅಪಡೇಟ್ ಮಾಡಿಸಿ ಎಂದು ಮನವಿ ಮಾಡಿದರು. ಜಿಲ್ಲೆಯಲ್ಲಿ 1983248 ಜನರು ಆಧಾರ್ ಕಾಡ್9 ಹೊಂದಿದ್ದು, ಅದರಲ್ಲಿ 0-5 ವರ್ಷದೊಳಗಿನವರು-68783, 5-18 ವರ್ಷದೊಳಗಿನವರು-310032 ಹಾಗೂ 18 ವರ್ಷ ಮೇಲ್ಪಟ್ಟ- 1604433 ಜನರು ಆಧಾರ್ ಕಾರ್ಡ ಹೊಂದಿದ್ದಾರೆ ಎಂದರು. ಆಧಾರ್ ಕಾಡ್9ನಲ್ಲಿ ಮುಖ್ಯವಾಗಿ ಬಯೋಮೆಟ್ರಿಕ್ ಅಪ್ ಡೇಟ್ ಮಾಡಬೇಕಿದ್ದು, ಜಿಲ್ಲೆಯಲ್ಲಿ 5 ವರ್ಷ ಮೇಲ್ಪಟ್ಟ-84,637 ಹಾಗೂ 15 ವರ್ಷ ಮೇಲ್ಪಟ್ಟ- 56029 ಒಟ್ಟು 1,40,666 ಆಧಾರ್ ಕಾಡ್9 ಹೊಂದಿರುವವರ ಆಧಾರ್ ಕಾಡ್9 ಬಯೋಮೆಟ್ರಿಕ್ ಅಪ್ ಡೇಟ್ ಬಾಕಿ ಇರುತ್ತದೆ. ಆಧಾರ್ ಕಾಡ್9ಗೆ ಮೊಬೈಲ್ ಸಂಖ್ಯೆ ಜೋಡಣೆಗೆ ಸಂಬಂಧಿಸಿದಂತೆ 18,51,821 ಜನರು ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿದ್ದು, ಇನ್ನೂ1,31,427 ಜನರ ಮೊಬೈಲ್ ಸಂಖ್ಯೆ ಜೋಡಣೆ ಬಾಕಿ ಇರುತ್ತದೆ ಎಂದರು.

ಡಿ.14ರೊಳಗಾಗಿ ಆಧಾರ್ ಅಪ್ ಡೇಟ್ ಮಾಡಿಸಿ ಜಿಲ್ಲೆಯಲ್ಲಿ ಒಟ್ಟು 5,13,941 ಆಧಾರ್ ಅಪ್ ಡೇಟ್ ಆಗಬೇಕಿರುತ್ತದೆ. ಈವರೆಗೆ 1,44,148 ಜನರು ಮಾತ್ರ ಆಧಾರ್ ಅಪ್ ಡೇಟ್ ಮಾಡಿಸಿಕೊಂಡಿದ್ದು, ಉಳಿದವರು ಡಿಸೆಂಬರ್ 14 ರೊಳಗಾಗಿ ತಮ್ಮ ಆಧಾರ್ ಕಾಡ್9 ಗಳನ್ನು ಅಪ್ ಡೇಟ್ ಮಾಡಿಸಿಕೊಳ್ಳಿ ಎಂದರು. ಜಿಲ್ಲೆಯಲ್ಲಿ 141 ಆಧಾರ್ ಕೇಂದ್ರ ಗಳಿದ್ದು, 50 ರೂ ಪಾವತಿಸಿ ಆಧಾರ್ ಅಪ್ ಡೇಟ್ ಮಾಡಿಸಿಕೊಳ್ಳಬಹುದು.ಜಿಲ್ಲೆಯಲ್ಲಿ ಆಕ್ರಮ ಆಧಾರ್ ನೋಂದಣಿ ಕಂಡು ಬಂದಲ್ಲಿ ಆಧಾರ್ ಜಿಲ್ಲಾ ಸಮಿತಿಯವರ ಗಮನಕ್ಕೆ ತರಬೇಕು ಎಂದರು. ಸಭೆಯಲ್ಲಿ ಲೀಡ್ ಬ್ಯಾಂಕ್ ಮ್ಯಾನೇಜರ್ ಅರುಣ್ ಕುಮಾರ್, ಪೊಲೀಸ್ ಇನ್ಸ್ ಪೆಕ್ಟರ್ ಮಂಜೇಗೌಡ ಎಚ್.ಜಿ. ಇನ್ನಿತರರು ಉಪಸ್ಥಿತರಿದ್ದರು.

# ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಶಾಸಕ ತನ್ವೀರ್ ಸೇಠ್ ಕರೆ



**ಮೈಸೂರು:** ಪ್ರಜಾಪ್ರಭುತ್ವದ ಹಬ್ಬವನ್ನು ವಿಭಿನ್ನವಾಗಿ ಆಚರಿಸುವ ನಿಟ್ಟಿನಲ್ಲಿ ಮೈಸೂರಲ್ಲಿ 58 ಕಿ.ಮೀ ಐತಿಹಾಸಿಕ ಮಾನವ ಸರಪಳಿ ನಿರ್ಮಿಸಿ ಗಮನ ಸೆಳೆದರಲ್ಲದೇ ಗಜಪಡೆಯ ಆನೆಗಳು ಬಾಗವಹಿಸಿದ್ದು ವಿಶೇಷ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಬೃಹತ್ ಮಾನವ ಸರಪಳಿ ಕಾರ್ಯಕ್ರಮವನ್ನು ಕೋಟೆ ಆಂಜನೇಯ ಸ್ವಾಮಿ ದೇವಾಲಯದ ಮುಂಬಾಗ ಶಾಸಕ ತನ್ವೀರ್ ಸೇಠ್ ಉದ್ಘಾಟಿಸಿದರು. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ 60ಸಾವಿರಕ್ಕೂ ಮಂದಿ ಅಧಿಕ ಭಾಗಿಯಾಗಿದ್ದರು. ಪೌರ ಕಾರ್ಮಿಕರು, ಹೋಟೆಲ ಮಾಲೀಕರ ಸಂಘಟನೆ, ಆಟೋ ಚಾಲಕರ ಸಂಘಟನೆ, ಟ್ಯಾಕ್ಸಿ ಚಾಲಕರು, ದಲಿತ ಸಂಘರ್ಷ ಸಮಿತಿ, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಎಲ್ಲಾ ಇಲಾಖೆಯ ಸರ್ಕಾರಿ ನೌಕರರು ಸೇರಿ 30 ಕ್ಕೂ ಸಂಘಟನೆಗಳು ಭಾಗವಹಿಸಿ ಸಂಭ್ರಮಿಸಿದವು. ಬೆ.9.30 ರಿಂದ 9,37 ರವರಗೆ ಮಾನವ ಸರಪಳಿಯಲ್ಲಿ ಸರತಿ ಸಾಲಿನಲ್ಲಿ ನಿಂತರು. ಬಳಿಕ ನಾಡಗೀತೆ ಮಾಡಲಾಯಿತು. ಸಂವಿಧಾನದ ಪ್ರಸ್ತಾವನೆ ಓದಲಾಯಿತು. 10 ಗಂಟೆಗೆ ಮಾನವ ಸರಪಳಿಯಲ್ಲಿಯೇ ಏಕಕಾಲದಲ್ಲಿ ತಮ್ಮ ಎರಡೂ ಕೈಗಳನ್ನು ಮೇಲೆತ್ತಿ ಜೈಹಿಂದ್, ಜೈ ಕರ್ನಾಟಕ ಘೋಷಣೆ ಕೂಗಲಾಯಿತು.

ಎಲ್ಲೆಲ್ಲಿ: ತಾಲ್ಲೂಕಿನ ಕಳಸ್ತವಾಡಿ ಸಿದ್ದಲಿಂಗ ಪುರದಿಂದ ಪ್ರಾರಂಭವಾಗಿ ಮಣಿಪಾಲ್ ಆಸ್ಪತ್ರೆ, ಪೌಂಟನ್ ಸರ್ಕಲ್, ಗಾಂಧಿ ನಗರದ ಅಂಬೇಡ್ಕರ್ ವೃತ್ತ, ಟೌನ್ ಹಾಲ್, ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ, ಹಾರ್ಡಿಂಜ್ ಸರ್ಕಲ್, ಮೃಗಾಲಯ, ರೇಸ್ ಕೋರ್ಸ್ ಸರ್ಕಲ್, ಪೊಲೀಸ್ ಭವನ, ಸಂಗೊಳ್ಳಿ ರಾಯಣ್ಣ ಸರ್ಕಲ್, ಕಮಾನ್ ಗೇಟ್, ರಿಂಗ್ ರಸ್ತೆ, ವರುಣ ಗ್ರಾಮ, ಕೀಳನ ಪುರ, ಕೆಂಪಯ್ಯನ ಹುಂಡಿ, ಇಂಡುವಾಳು, ಗರ್ಗೇಶ್ವರಿ, ತಿ.ನರಸೀಪುರ ಟೌನ್, ಗಂಜಾಂ ನರಸಿಂಹ ಸ್ವಾಮಿ ದೇವಸ್ಥಾನ, ಅಲಗೂಡು, ಕುರಬೂರು, ಮಾಡ್ರಳ್ಳಿ ಗೇಟ್, ಮೂಗೂರು ಗ್ರಾಮದ ಮೂಲಕ ಚಾಮರಾಜನಗರ ಜಿಲ್ಲೆಯ ಗಡಿ ಪ್ರವೇಶಿಸಿತು. ನಗರದ ಅರಮನೆ ಉತ್ತರ ದ್ವಾರದ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಎದುರಿನ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ತನ್ವೀರ್ ಸೇಠ್, ಪ್ರಭಾಪ್ರಭುತ್ವದ ಗಟ್ಟಿಗೊಳ್ಳಬೇಕಾದರೆ ಮಾನವೀಯತೆ ಹಾಗೂ ಸಹಾಯ ಮಾಡುವ ಮೌಲ್ಯಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡ ಭಾರತ ಇಂದು ಪ್ರಜಾಪ್ರಭುತ್ವದ ಅತೀ ದೊಡ್ಡ ದೇಶವಾಗಿದೆ. ರಾಜ್ಯದ ಬೀದರಿಂದ ಹಿಡಿದು ಚಾಮರಾಜನಗರದ ವರೆಗೆ ಮಾನವ ಸರಪಳಿ ನಿರ್ಮಿಸಿ ಇತಿಹಾಸ ಸೃಷ್ಟಿಸುವುದಕ್ಕೆ ಸಾಕ್ಷಿ ಯಾಗಿದ್ದು ಇದರ ಉದ್ದೇಶ ಸಂವಿಧಾನವನ್ನು ಇನ್ನು ಗಟ್ಟಿಗೊಳಿಸಲು, ಅದರ ಅರಿವು ಮೂಡಿಸುವುದಾಗಿದೆ. 'ಡಾ.ಬಿ.ಆರ್. ಅಂಬೇಡ್ಕರ್ ದೇಶಕ್ಕೆ ಅತ್ಯುತ್ತಮ ಸಂವಿಧಾನವನ್ನು ನೀಡಿದ್ದಾರೆ. ಅದನ್ನು ನಾವೆಲ್ಲರೂ ನಮಗಾಗಿ ಅರ್ಪಿಸಿಕೊಂಡು ಶಾಸನವಾಗಿ ಒಪ್ಪಿಕೊಂಡಿದ್ದೇವೆ. ಕೈಹಿಡಿದು ನಿಲ್ಲುವುದರೊಂದಿಗೆ, ಪರಸ್ಪರ ಸಹಾಯ ಹಸ್ತ ಚಾಚುವುದನ್ನು ಎಲ್ಲರೂ ಮಾಡಬೇಕು ಎಂದರು.

# ದೂರದರ್ಶನ ಉಚಿತ ಡಿಶ್ ಸೇವೆ ಎಲ್ಲೆಡೆ ಲಭ್ಯ

**ಬೆಂಗಳೂರು:** ಪ್ರಸಾರ ಭಾರತಿ ಈಗ ಡಿಜಿಟಲ್ ಸೇವೆಯಡಿ ದೂರದರ್ಶನ ಉಚಿತ ಡಿಶ್ ಸೇವೆಯನ್ನು ಆರಂಭಿಸಿದೆ. ಡಿಡಿ ಉಚಿತ ಡಿಶ್ ಸೇವೆಯ 381 ಟಿವಿ ಚಾನೆಲ್ ಮತ್ತು 48 ರೇಡಿಯೋ ಚಾನೆಲ್‌ಗಳನ್ನು ದೇಶಾದ್ಯಂತ ಸುಮಾರು 5 ಕೋಟಿ ಮನೆಗಳನ್ನು ತಲುಪುತ್ತಿದೆ.

ಇತರೆ ಖಾಸಗಿ ಡಿಟಿಹೆಚ್ ವೇದಿಕೆಗಳಡಿ ಡಿಡಿ ಉಚಿತ ಡಿಶ್ ಚಾನೆಲ್‌ಗಳು ಮತ್ತು ದೂರದರ್ಶನ ತನ್ನ ಗ್ರಾಹಕರಿಗೆ ಯಾವುದೇ ತಿಂಗಳ ಶುಲ್ಕ ಅಥವಾ ಚಂದಾ ಹಣವನ್ನು ವಿಧಿಸುವುದಿಲ್ಲ. ಇವು ಉಚಿತ ಚಾನೆಲ್‌ಗಲಾಗಿದ್ದು, ಇದನ್ನು ಪಡೆಯಲು ಗ್ರಾಹಕರು ರೂ. 1500 ಡಿಡಿ ಉಚಿತ ಫ್ರೀ ಡಿಶ್ ಸೆಟ್ ಟಾಫ್ ಬಾಕ್ಸ್ ಮತ್ತು ಸಣ್ಣ ಡಿಶ್ ಆಂಟಿನಾವನ್ನು ಖರೀದಿಸಬೇಕು. ಇದು ಯಾವುದೇ ಕುಗ್ರಾಮದಲ್ಲಿ ಸಹ ಲಭ್ಯವಿರುತ್ತದೆ.

ಈ ಡಿಡಿ ಉಚಿತ ಡಿಶ್ ಸೇವೆಯು ಅತಿದೊಡ್ಡ ಡಿಟಿಹೆಚ್ ವೇದಿಕೆಯಾಗಿದ್ದು, ಇದು ಗ್ರಾಮೀಣ, ಗಡಿಭಾಗ, ಸಂಪರ್ಕವಿಲ್ಲದ ಪ್ರದೇಶಗಳಲ್ಲಿಯೂ ಲಭ್ಯವಿದೆ. ಡಿಡಿ ಉಚಿತ ಡಿಶ್ ಸೇವೆಯಿಂದ ಪ್ರಸಾರಭಾರತಿ ತನ್ನ ಸಾರ್ವಜನಿಕ ಸೇವೆ ಪ್ರಸಾರದ ಧ್ಯೇಯೋದ್ದೇಶವಾದ ಶಿಕ್ಷಣ, ಮನೋರಂಜನೆ ಮತ್ತು ಮಾಹಿತಿಯನ್ನು ದೇಶದ ಮೂಲ ಮೂಲೆಗೂ ತಲುಪಿಸುತ್ತಿದೆ. ಇದರಿಂದ ದೇಶದ ಕೆಳವರ್ಗದ ಜನರಿಗೂ ಈ ಸೇವೆ ಲಭ್ಯವಿದೆ. ಖಾಸಗಿ ಚಾನೆಲ್‌ಗಳಿಗೆ ಕೇಬಲ್, ಒಟಿಟಿಗಳಿಗೆ ಪಾವತಿಸುವ ದುಬಾರಿ ಹಣ, ಈ ಡಿಡಿ ಉಚಿತ ಡಿಶ್ ಸೇವೆ ಪಡೆದುಕೊಳ್ಳಲು ಪಾವತಿಸಬೇಕಿಲ್ಲ. ಈ ಹಿಂದೆ ಉಳ್ಳವರು ಪಡೆದುಕೊಳ್ಳುತ್ತಿರುವ ಡಿಡಿ ಡಿಶ್ ಸೇವೆ ಈಗ ಎಲ್ಲಾ ವರ್ಗದವರಿಗೂ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ. ಇದರಿಂದ ದೇಶದ ಜನರ ಸಬಲೀಕರಣ ಸಹ ಆಗಲಿದ್ದು, ಕಡಿಮೆ ವೆಚ್ಚದಲ್ಲಿ ಉತ್ತಮ ಮಾಹಿತಿ ಸಮಾಜಕ್ಕೆ ತಲುಪುತ್ತದೆ.

ಸದ್ಯ ಡಿಡಿ ಉಚಿತ ಡಿಶ್‌ನಲ್ಲಿ ದೂರದರ್ಶನ ಚಾನೆಲ್ ಗಳು ಸೇರಿದಂತೆ ಶೈಕ್ಷಣಿಕ ಚಾನೆಲ್‌ಗಳು, ಸುದ್ದಿಗಳು, ಭಕ್ತಿ, ಸಿನಿಮಾ, ಕ್ರೀಡಾ ಚಾನೆಲ್‌ಗಳು ಸೇರಿವೆ. ಶೈಕ್ಷಣಿಕ ಚಾನೆಲ್ ಗಳಾದ ''ಡಿಡಿ ಸ್ವಯಂ ಪ್ರಭ'', ''ಡಿಡಿ ಪಿಎಂ ಇ ವಿದ್ಯಾ'' ''ಡಿಡಿ ಡಿಜಿ ಶಾಲಾ'' ಮುಂತಾದವುಗಳು ಖ್ಯಾತಿಗಳಿಸಿವೆ. ಶೈಕ್ಷಣಿಕ ವಿಭಾಗಗಳಾದ ಕಲೆ, ವಿಜ್ಞಾನ, ಪ್ರದರ್ಶನ ಕಲೆ, ಸಾಮಾಜಿಕ ವೈಜ್ಞಾನಿಕ, ಕಲಾ ವಿಷಯಗಳು, ಇಂಜಿನಿಯರಿಂಗ್, ತಂತ್ರಜ್ಞಾನ, ಕಾನೂನು, ವೈದ್ಯಕೀಯ ಮತ್ತು ಕೃಷಿ ಮುಂತಾದ ವಿಷಯಗಳ ಕುರಿತು ಶಿಕ್ಷಕರು ವಿದ್ಯಾರ್ಥಿಗಳು ಹಾಗೂ ಆಸಕ್ತರಿಗೆ ದೇಶಾದ್ಯಂತ ತಲುಪುವಲ್ಲಿ ಯಶಸ್ವಿಯಾಗಿದೆ. ಇದರಲ್ಲಿನ ಕೆಲ ವಿಷಯಗಳನ್ನು ಎನ್‌ಸಿಇಆರ್‌ಟಿ, ಸಿಐಇಟಿ, ಐಐಟಿ ಮತ್ತು ಯುಜಿಸಿಯಿಂದ ಪಡೆದುಕೊಳ್ಳಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

### ಪ್ರಾಧಿಕಾರದ ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್ ಹೇಳಿಕೆ

# ಪ್ರಾಧಿಕಾರದ ನಿಯಮಾನುಸಾರ ನಿವೇಶನ

**ಮೈಸೂರು:** ಜ್ಞಾನಗಂಗಾ ಗೃಹನಿರ್ಮಾಣ ಸಹಕಾರ ಸಂಘಕ್ಕೆ ಒಂದೇ ದಿನದಲ್ಲಿ 848 ನಿವೇಶಗಳು ಬಿಡುಗಡೆಯಾಗಿಲ್ಲ. ಪ್ರಾಧಿಕಾರದ ನಿಯಮಗಳಂತೆ ನಿವೇಶನಗಳು ಬಿಡುಗಡೆಯಾಗಿವೆ. ಹಿಂದಿನ ಆಯುಕ್ತ ನಟೇಶ್ ಅವರ ಆರೋಪ ಸತ್ಯಕ್ಕೆ ದೂರವಾದುದು ಎಂದು ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್ ಸ್ಪಷ್ಟಪಡಿಸಿದರು.

ಪ್ರಮತಿ ಹಿಲ್ ವ್ಯೂ ಶಾಲೆಯಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಜ್ಞಾನಗಂಗಾ ಗೃಹ ನಿರ್ಮಾಣ ಸಹಕಾರ ಸಂಘಕ್ಕೆ ಒಂದೇ ದಿನದಲ್ಲಿ 848 ನಿವೇಶನಗಳನ್ನು ಬಿಡುಗಡೆ ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ದಾಖಲೆ ಸಮೇತ ವಿವರಣೆ ನೀಡಿದರು.

ಜ್ಞಾನಗಂಗಾ ಗೃಹ ನಿರ್ಮಾಣ ಸಹಕಾರ ಸಂಘದಿಂದ ಸದಸ್ಯರು ಕಟ್ಟಿದ ಹಣದಿಂದ ಸಕ್ರಮ ಬಡಾವಣೆ ರಚನೆ ಮಾಡಲಾಗಿದೆ. ಸಂಘದಲ್ಲಿ 3500 ಸದಸ್ಯರಿದ್ದಾರೆ. ಇದುವರೆಗೆ 2500 ನಿವೇಶನ ಹಂಚಿಕೆ ಮಾಡಲಾಗಿದೆ. ಕೃಷಿ ಭೂಮಿಯನ್ನು ಮಾಲೀಕರಿಂದ ನೇರವಾಗಿ ಮಾರುಕಟ್ಟೆ ದರದಲ್ಲಿ ಖರೀದಿ ಮಾಡಲಾಗಿದೆ. ಕೃಷಿ ಭೂಮಿಯಿಂದ ವಸತಿ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಲಾಗಿದೆ. ಯಾವುದೇ ಸರ್ಕಾರಿ, ಪಿಟಿಸಿಎಲ್, ಕಂದಾಯ ಭೂಮಿಯಲ್ಲಿ ಬಡಾವಣೆ ರಚಿಸಿಲ್ಲ. ಖಾಸಗಿ ಜಮೀನನ್ನು ಖರೀದಿಸಿ ಬಡಾವಣೆ ರಚನೆ ಮಾಡಲಾಗಿದೆಯೇ ಹೊರತು ಕಾನೂನುಬಾಹಿರವಾಗಿ ನಿರ್ಮಿಸಿಲ್ಲ ಎಂದರು.

ಜಯಪುರ ಹೋಬಳಿಯ ಬಲ್ಲಹಳ್ಳಿ, ಕೇರ್ಗಳ್ಳಿ ಹಾಗೂ ನಗರ್ತಹಳ್ಳಿ ಗ್ರಾಮಗಳಲ್ಲಿ 252 ಎಕರೆ ಪ್ರದೇಶದಲ್ಲಿ ನಾಲ್ಕು ಹಂತದ ಯೋಜನೆ ಮಾಡಲು ಭೂ ಪರಿವರ್ತನೆ, ಅನ್ಯಕ್ರಾಂತ ಮಾಡಿದ ಮೇಲೆ ನಕ್ಷೆ ಅನುಮೋದನೆ ಪಡೆಯಲಾಗಿದೆ. ಫೆರಿಫೆರಲ್ ರಿಂಗ್ ರಸ್ತೆ ಹಾದು ಹೋಗುವ ಸಾಧ್ಯತೆ ಇರುವುದನ್ನು ಅಂದಾಜಿಸಿ 13.4 ಎಕರೆ ಜಮೀನನ್ನು ಹೊರತುಪಡಿಸಿ ಪ್ಲಾನ್ಗೆ ಅನುಮೋದನೆ ಪಡೆಯಲಾಗಿದೆ. ಅಂದು ಫೆರಿಫೆರಲ್ ರಿಂಗ್ ರಸ್ತೆ ಹಾದು ಹೋಗುತ್ತದೆ ಎನ್ನುವ ಸುಳಿವೇ ಇಲ್ಲದಿದ್ದರೂ ನಗರದ ಬೆಳವಣಿಗೆ ದೃಷ್ಟಿಯಿಂದ ಜಾಗ ಬಿಡಲಾಗಿದೆ. ಒಂದು ಒಂದುವೇಳೆ ಕಾನೂನಾತ್ಮಕ ಸಮಸ್ಯೆ ಉಂಟಾಗಿದ್ದರೆ ಅದಕ್ಕೆ ಮುಡಾ ಕಾರಣ ಎಂದರು.

2016ರಲ್ಲಿ ನಾಲ್ಕು ಯೋಜನೆಗಳಿಗೆ ತಾತ್ಕಾಲಿಕ ನಕ್ಷೆ ಅಂಗೀಕಾರ ಮಾಡಿಕೊಡಲಾಗಿದೆ. ಅದಕ್ಕೆ 10.26 ಕೋಟಿ ರೂ ಪಾವತಿಸಲಾಗಿದೆ. 2018ರ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆದ ಬಳಿಕ ಸರ್ಕಾರದ ನಿಯಮಾವಳಿಗಳನ್ವಯ ಒಟ್ಟು ವಿಸ್ತೀರ್ಣದ ಪೈಕಿ ಶೇ.15ರಷ್ಟು ಉದ್ಯಾನವನಕ್ಕಾಗಿ, ಶೇ.5ರಷ್ಟು ನಾಗರಿಕ ಸೌಕರ್ಯ ನಿವೇಶನಕ್ಕಾಗಿ ಕಾಯ್ದಿರಿಸಲು ಹಾಗೂ ತಾತ್ಕಾಲಿಕ ಮಹಾಯೋಜನೆಯ ಪ್ರಸ್ತಾವನೆಗಳನ್ನು ಅಳವಡಿಸಲು ಸೂಚಿಸಲಾಗಿತ್ತು. ನಂತರ, ತಾಂತ್ರಿಕ ಸಮಿತಿಯ ವರದಿಯಂತೆ 2018ರಲ್ಲಿ ಮತ್ತೆ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯಲಾಗಿತ್ತು ಎಂದು ವಿವರಿಸಿದರು.




**ಶೇ.50:50 ಅನುಪಾತದ ನಿವೇಶನ ಹಂಚಿಕೆ ಪ್ರಾಧಿಕಾರದ ಸರ್ವಸಮ್ಮತದ ತೀರ್ಮಾನ. ಸಿದ್ದರಾಮಯ್ಯ ಅವರ ಪತ್ನಿಗೆ ಬದಲಿ ನಿವೇಶನ ಹಂಚಿಕೆ ಪ್ರಸ್ತಾಪದ ಬಗ್ಗೆಯೂ ಸುದೀರ್ಘ ಚರ್ಚೆ ನಡೆದಿದ್ದು, ಕಾನೂನು ಪ್ರಕಾರ ಕೊಡಲಾಗಿದೆ. ಆದರೆ, ಆಯುಕ್ತರು ಏಕಪಕ್ಷೀಯ ನಿರ್ಧಾರ ತೆಗೆದುಕೊಳ್ಳಲು ಆರಂಭಿಸಿದ ಬಳಿಕ ಭ್ರಷ್ಟಾಚಾರ ನಡೆದಿದೆ.**

**-ಎಚ್.ವಿ.ರಾಜೀವ್**
**ಮುಡಾ ಮಾಜಿ ಅಧ್ಯಕ್ಷ**

ರಾಮದಾಸ್ ಅಧ್ಯಕ್ಷತೆಯಲ್ಲಿ ತೀರ್ಮಾನ: ಜ್ಞಾನಗಂಗಾ ಗೃಹ ನಿರ್ಮಾಣ ಸಹಕಾರ ಸಂಘಕ್ಕೆ ನಿವೇಶನ ಬಿಡುಗಡೆ ಸಂಬಂಧ ನಡೆದ ಸಭೆಯಲ್ಲಿ ನಾನು ಭಾಗವಹಿಸಿರಲಿಲ್ಲ. ಶಾಸಕರಾಗಿದ್ದ ಎಸ್.ಎ.ರಾಮದಾಸ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚೆಯಾಗಿದೆ. ಸದಸ್ಯರಾದ ಎಲ್ .ನಾಗೇಂದ್ರ, ತನ್ವೀರ್‌ಸೇಠ್, ಕೆ.ಟಿ.ಶ್ರೀಕಂಠೇಗೌಡರು ಸರ್ಕಾರದ ನಿಯಮಾವಳಿಗಳಿಗೆ ತಕ್ಕಂತೆ ಇದ್ದರೆ ಅನುಮೋದನೆ ಕೊಡಬಹುದೆಂದು ತಿಳಿಸಿದ್ದರಿಂದ ಶೇ.30ರಷ್ಟು ಅಂದರೆ 848 ನಿವೇಶನಗಳನ್ನು ಬಿಡುಗಡೆ ಮಾಡಲು ಸಭೆಯಲ್ಲಿ ಸರ್ವಾನುಮತದ ನಿರ್ಧಾರವಾಗಿದೆ. ಇದರಲ್ಲಿ ಅಧ್ಯಕ್ಷರಾಗಿ ಯಾವುದೇ ಅಧಿಕಾರ ದುರುಪಯೋಗಪಡಿಸಿಕೊಳ್ಳುವ ಪ್ರಶ್ನೆಯೇ ಬರುವುದಿಲ್ಲ ಎಂದರು.

ಸಭೆಯಲ್ಲಿ ನಾಲ್ಕು ಯೋಜನೆಗಳಿಂದ 848 ನಿವೇಶನಗಳನ್ನು ಬಿಡುಗಡೆ ಮಾಡಲು ಒಪ್ಪಿಗೆ ಕೊಡಲಾಗಿದೆ. ಆದರೆ, ಬೇರೆ ಬೇರೆ ದಿನಾಂಕಗಳಲ್ಲಿ ಕಾಲಾನುಕಾಲವಾಗಿ ನಿವೇಶನಗಳನ್ನು ಬಿಡುಗಡೆ ಮಾಡಲಾಗಿದೆ. ಒಂದೇ ದಿನ ನಿವೇಶನ ಬಿಡುಗಡೆ ಮಾಡಲಾಗಿದೆ ಎನ್ನುವ ಆರೋಪ ಸುಳ್ಳು. ತಾಂತ್ರಿಕ ವರದಿಯ ಆಧಾರದ ಮೇಲೆ ತೀರ್ಮಾನವಾಗಿದೆ ಎನ್ನುವುದಕ್ಕೆ ದಾಖಲೆಗಳು ಇವೆ ಎಂದರು.

ಕಾನೂನುಬಾಹಿರ ತೀರ್ಮಾನ: ಮಾಜಿ ಆಯುಕ್ತರಾಗಿದ್ದ ಡಿ.ಬಿ.ನಟೇಶ್ ಮೂರು ಬಾರಿ ವರ್ಗಾವಣೆಯಾಗಿದ್ದರು. ಕೆಎಟಿಯಿಂದ ಮತ್ತೆ ಬಂದ ಮೇಲೆ ಸರ್ಕಾರಕ್ಕೆ ಪತ್ರ ಬರೆದಿರುವುದು ತಮ್ಮ ಗಮನಕ್ಕೆ ಬಂದಿಲ್ಲ. ಅಲ್ಲದೆ ನಮ್ಮ ಗೃಹ ನಿರ್ಮಾಣ ಸಹಕಾರ ಸಂಘಕ್ಕೆ ಸೇರಿದ ಕಡತಗಳನ್ನು ಸಭೆಗೆ ಹಾಜರುಪಡಿಸದೆ ನನ್ನ ಬಳಿ ಇಟ್ಟುಕೊಂಡಿರಲಿಲ್ಲ. ಸರ್ಕಾರದ ನಿಯಮಾವಳಿಗಳನ್ನು ಬದಿಗಿರಿಸಿ ಸಭೆಯ ಗಮನಕ್ಕೆ ಬಾರದೆ ತೀರ್ಮಾನ ಕೈಗೊಳ್ಳುತ್ತಿದ್ದ ಡಿ.ಬಿ.ನಟೇಶ್ ಅವರ ಕಾರ್ಯದ ಬಗ್ಗೆ ಅಂದಿನ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್, ಸರ್ಕಾರದ ಗಮನಕ್ಕೆ ತರಲಾಗಿತ್ತು. ಇದಲ್ಲದೆ, ಸದಸ್ಯರಾಗಿದ್ದ ಎಂ.ಎನ್.ನವೀನ್ ಕುಮಾರ್ ಲಿಖಿತವಾಗಿಯೂ ಪತ್ರ ಬರೆದಿದ್ದರು. ನಟೇಶ್ ಯಾವುದೇ ಮಾಹಿತಿ ಇಲ್ಲದೆ ಸರ್ಕಾರಕ್ಕೆ ಬರೆದಿದ್ದ ಪತ್ರದಿಂದಾಗಿ ಇಂತಹ ಗೊಂದಲ ಉಂಟಾಗಿದೆ. ಮುಡಾಗೆ ಕಳಂಕ ಬರಲು ಕಾರಣನಾದ ಮೂಲ ಪುರುಷನೇ ನಟೇಶ್ ಎಂದರು.

ಮಾಜಿ ಮೇಯರ್ ಬಿ.ಎಲ್.ಭೈರಪ್ಪ, ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ. ರಾಮು, ಮುಖಂಡ ಜಯಂತ್, ವಾಸು ಹಾಜರಿದ್ದರು.

### ಮುಡಾಗೆ ನಟೇಶ್ನಿಂದ ಅಪಖ್ಯಾತಿ

**ನಮ್ಮದೇ ಜಾಗದ ಖಾತೆಯನ್ನು ಜ್ಞಾನಗಂಗಾ ಗೃಹ ನಿರ್ಮಾಣ ಸಹಕಾರ ಸಂಘದ ಹೆಸರಿಗೆ ಮಾಡಲಾಗಿದೆಯೇ ಹೊರತು ಸಾರ್ವಜನಿಕರ ಹೆಸರಿಗೆ ಮಾಡಿಲ್ಲ. ಖಾತೆ ಮಾಡುವ ಅಧಿಕಾರ ಪ್ರಾಧಿಕಾರಕ್ಕೆ ಇಲ್ಲ. ಅಲ್ಲದೆ ನಾನು ಯಾವುದೇ ರಾಜಕೀಯ ಪ್ರಭಾವ ಬಳಸಿಲ್ಲ. ನಟೇಶ್ ವರ್ಗಾವಣೆಯಾದ ಸಂದರ್ಭದಲ್ಲಿ ಈ ಪತ್ರ ಬರೆದಿದ್ದಾರೆ. ಒಂದೇ ದಿನದಲ್ಲಿ ಬಿಡುಗಡೆಯಾಗಿಲ್ಲ ಎಂದು ತಾಂತ್ರಿಕ ಸಮಿತಿಯೇ ವರದಿ ನೀಡಿದೆ. ಮೇಲಿಂದ ಮೇಲೆ ಭ್ರಷ್ಟಾಚಾರ ಮಾಡುತ್ತಿದ್ದ ಅವರನ್ನು ನಮ್ಮ ಸರ್ಕಾರ ವರ್ಗಾವಣೆ ಮಾಡಿದ್ದರಿಂದ ಅದಕ್ಕೆ ಕೋಪಗೊಂಡು ಈ ರೀತಿ ಪತ್ರ ಬರೆದಿದ್ದಾರೆ. ಮುಡಾ ಅಪಖ್ಯಾತಿಗೆ ನಟೇಶ್ ಕಾರಣ ಎಂದು ರಾಜೀವ್ ದೂರಿದರು.**

# ಸಹಕಾರಿ ಕ್ಷೇತ್ರದಲ್ಲಿ ಸರ್ಕಾರದ ಹಸ್ತಕ್ಷೇಪ ಸರಿಯಲ್ಲ: ಬಸವರಾಜ ಹೊರಟ್ಟಿ

**ಮೈಸೂರು:** ಸಹಕಾರಿ ಕ್ಷೇತ್ರದಲ್ಲಿ ಸರ್ಕಾರ ಮತ್ತು ರಾಜಕಾರಣಿಗಳು ಹಸ್ತಕ್ಷೇಪ ಮಾಡಬಾರದು ಎಂಬ ದೃಷ್ಠಿಯಿಂದ ಸಹಕಾರಿ ಕ್ಷೇತ್ರಕ್ಕೆ ನಿಯಮಕ್ಕೆ ತಿದ್ದುಪಡಿ ತಂದಿದ್ದ ಕಾಯ್ದೆಯನ್ನು ವಿಧಾನ ಪರಿಷತ್ತಿನಲ್ಲಿ ತಡೆಹಿಡಿಯಲಾಗಿತ್ತು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ಮೈಸೂರಿನ ಮಹಾರಾಜ ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ನಡೆದ 99ನೇ ಸರ್ವ ಸದಸ್ಯರ ವಾರ್ಷಿಕ ಸಭೆ ಮತ್ತು ಸಹಕಾರ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರಿಗಳಲ್ಲಿ ಒಬ್ಬರಿಗೊಬ್ಬರು ತಿಳುವಳಿಕೆಯಿಂದ ಸಹಕಾರ ನೀಡುತ್ತಾ ಹೋದರೆ ದೊಡ್ಡದಾಗಿ ಬೆಳೆಯಲಿದೆ ಎಂದರು.

ಇಂತಹ ಸಂದರ್ಭದಲ್ಲಿ ಶ್ರೀ ಕೃಷ್ಣರಾಜೇಂದ್ರ ಸಹಕಾರ ಸಂಘ 99 ವರ್ಷ ಪೂರೈಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಸಕ ಜಿ.ಡಿ.ಹರೀಶ್ ಗೌಡ ಮಾತನಾಡಿ, ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಹಸ್ತಕ್ಷೇಪ ಇರಬಾರದು. ರಾಜಕೀಯ ಹಸ್ತಕ್ಷೇಪವಾದರೇ ಉಳಿವಿಗೆ ಬಹಳ ದೊಡ್ಡ ಹೊಡೆತ ಬೀಳಲಿದೆ. ಸರ್ಕಾರಿ ಹಸ್ತಕ್ಷೇಪ ಇಲ್ಲದೆ ಸ್ವಾಯತತೆ ಇರಬೇಕು. ಈ ಕುರಿತು ಸದನದಲ್ಲಿ ನಾನು ಮಾತನಾಡಿದ್ದೇನೆ ಎಂದರು.




ಸರ್ಕಾರದ ಹೂಡಿಕೆಯಿಂದ ಸಹಕಾರ ಸಂಘಗಳು ನಡೆಯುತ್ತಿಲ್ಲ. ತಮ್ಮ ಸ್ವಂತ ಹಣದಿಂದ ಸಹಕಾರಿ ಸಂಘಗಳು ಮುನ್ನಡೆಯುತ್ತಿವೆ. ಇತ್ತೀಚೆಗೆ ಸಹಕಾರಿ ಕ್ಷೇತ್ರದಲ್ಲಿ ಬದಲಾವಣೆಗೊಂಡಿವೆ. ವಿಧಾನಸಭಾ, ಲೋಕಸಭಾ ಚುನಾವಣೆಯ ಮಾದರಿಯಲ್ಲಿ ಚುನಾವಣೆಗಳು ನಡೆಯುತ್ತಿದೆ. ಆದರೆ, ಕಳೆದ ಹತ್ತು ವರ್ಷಗಳಿಂದ ಹಿಂದೆ ಸಾಮಾನ್ಯವಾಗಿ ಚುನಾವಣೆಗಳು ನಡೆದು ಪದಾಧಿಕಾರಿಗಳು ಆಯ್ಕೆ ಆಗುತ್ತಿದ್ದರು ಎಂದು ಸ್ಮರಿಸಿದರು.

ಸರ್ವ ಸದಸ್ಯರ ಸಭೆಗಳಿಂದ ಸಹಕಾರಿ ಸಂಘಗಳು ಯಶಸ್ವಿಯಾಗಿ ನಡೆಯಲು ಸಾಧ್ಯ. ಚುನಾವಣೆಗಳು ನಡೆದ ಬಳಿಕ ಮನಸ್ತಾಪಗಳನ್ನು ಬಿಟ್ಟು ಒಂದುಗೂಡಿ ಕೆಲಸ ಮಾಡಬೇಕು. ಆಗ ಸಂಘವು ಮುಂದುವರಿಯಲಿದೆ ಎಂದರು.

ಸಹಕಾರ ರತ್ನ ಪ್ರಶಸ್ತಿ : ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳಾದ ಕೆ.ವಿ.ನರಸಿಂಹಶೆಟ್ಟಿ, ಬಿ.ಪುಟ್ಟಸ್ವಾಮಿ, ಎಸ್ .ಬಿ.ವಿಜಯಕುಮಾರ್, ಎಸ್.ಸದಾನಂದ, ಎಂ.ಕೆ.ಪುಟ್ಟಸ್ವಾಮಿ, ಸಿದ್ದರಾಜು, ಪಿ.ಸಿ.ನಾಗರಾಜನ್, ಕೆ.ಎಲ್.ಅನಂತರಾಮಯ್ಯ, ಎನ್.ನಾಗರಾಜು, ಡಿ.ರಾಮು, ಜಿ.ಕೃಷ್ಣ, ಕೆ.ಚಂದ್ರ, ಚನ್ನಯ್ಯ, ಬಾಲಂಬ, ಕಾತ್ಯಾಯಿನಿ, ಎನ್.ಜಯಲಕ್ಷ್ಮಿ, ಕೆ.ಆರ್. ಸೀತಾಲಕ್ಷ್ಮಿ, ಸುಶೀಲಮ್ಮ, ಡಿ.ಆಶಾ ಕುಮಾರಿ, ಕೆ.ಎಸ್.ಸುನಂದ ಅವರಿಗೆ ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ವೇಳೆ ಶ್ರೀ ಕುಂದೂರು ಮಠದ ಅಧ್ಯಕ್ಷ ಡಾ.ಶ್ರೀ ಶರತ್ಚಂದ್ರ ಸ್ವಾಮೀಜಿ, ಶ್ರೀ ಕೃಷ್ಣರಾಜೇಂದ್ರ ಸಹಕಾರಿ ಬ್ಯಾಂಕ್ನ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ.ಬಸವರಾಜು (ಬಸಪ್ಪ), ನಿರ್ದೇಶಕರಾದ ಎಂ.ಡಿ.ಪಾರ್ಥಸಾರಥಿ, ಸರ್ವಮಂಗಳ, ನವೀನ್ ಕುಮಾರ್, ಎಚ್.ವಿ.ಭಾಸ್ಕರ್, ಅರುಣ್ ಸಿದ್ದಪ್ಪ, ನಾಗೇಂದ್ರ ಪ್ರಸಾದ್ ವಾಟಾಳ್, ಬಿ.ನಾಗರಾಜು ಉಪಸ್ಥಿತರಿದ್ದರು.

**ಶಾಸಕ ಜಿ.ಟಿ.ದೇವೇಗೌಡ ಮತ್ತು ನಾನು ಆತ್ಮೀಯರು. ಆದರೆ, ಅವರ ಪುತ್ರರ ಬಗ್ಗೆ ತಿಳಿದಿರಲಿಲ್ಲ. ವಿಧಾನ ಸಭಾ ಚುನಾವಣೆಯಲ್ಲಿ ಆರಿಸಿ ಬಂದ ನಂತರ ತಿಳಿಯಿತು. ಯೋಗ್ಯ ಶಾಸಕರನ್ನು ಆಯ್ಕೆ ಮಾಡಿದ ಹುಣಸೂರು ಜನತೆಗೆ ಕೃತಜ್ಞತೆ ಸಲ್ಲಿಸುತ್ತೇನೆ.**

**। ಬಸವರಾಜ ಹೊರಟ್ಟಿ** ವಿಧಾನ ಪರಿಷತ್ ಸಭಾಪತಿ

## ಇ-ಟೆಂಡರ್ ಆಹ್ವಾನ

**ಬೆಂಗಳೂರು:** ಬೆಂಗಳೂರು ಸಿಟಿ ಸಿವಿಲ್ ಕೋರ್ಟ್, ಕಚೇರಿಯ ಪುಸ್ತಕ / ಸೂಟ್ ರಿಜಿಸ್ಟರ್‌ಗಳನ್ನು ಬೈಂಡ್ ಮಾಡಿಸಲು ಇ- ಟೆಂಡರ್‌ನ್ನು ಆಹ್ವಾನಿಸಿದೆ. ಟೆಂಡರ್‌ನ ಅಂದಾಜು ಮೊತ್ತ ರೂ. 1,73,000 ಇದ್ದು, ಟೆಂಡರ್ ದಾಖಲೆಗಳನ್ನು ಸೆಪ್ಟೆಂಬರ್ 13 ರ ಸಂಜೆ 5.30 ರಿಂದ ಡೌನ್ ಲೋಡ್ ಮಾಡಿಕೊಳ್ಳಬಹುದು. ಸೆಪ್ಟೆಂಬರ್ 25 ರ ಸಂಜೆ 4 ಗಂಟೆಗೆ ಪ್ರಿ ಬಿಡ್ ಸಭೆ ಹಾಗೂ ಟೆಂಡರ್‌ಗಳನ್ನು ಸಲ್ಲಿಸಲು ಸೆಪ್ಟೆಂಬರ್ 27 ಸಂಜೆ 4 ಗಂಟೆ ಅಂತಿಮ ದಿನವಾಗಿರುತ್ತದೆ. ಹೆಚ್ಚಿನ ವಿವರಗಳಿಗೆ https://kppp/karnataka.gov.in/#/portal/auction/live ಜಾಲತಾಣವನ್ನು ವೀಕ್ಷಿಸಬಹುದಾಗಿದೆ ಎಂದು ಸಿಟಿ ಸಿವಿಲ್ ಕೋರ್ಟ್‌ನ ವಿಲೇಖನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಮಕಾತಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ಕೇಂದ್ರ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗವು ಕೇಂದ್ರ ಸಶಸ್ತ್ರ ಪೊಲೀಸ್ (ಸಿಎಪಿಎಫ್) ಮತ್ತು ಎಸ್‌ಎಸ್‌ಎಫ್ ಪಡೆಗಳಲ್ಲಿ ಕಾನ್‌ಸ್ಟೇಬಲ್ (ಜಿಡಿ) ಮತ್ತು ಅಸ್ಸಾಂ ರೈಫಲ್ಸ್‌ನಲ್ಲಿ ರೈಫಲ್‌ಮ್ಯಾನ್ (ಜಿಡಿ) ಹುದ್ದೆಗಳ ನೇಮಕಾತಿಗಾಗಿ ಮುಕ್ತ ಸ್ಪರ್ಧಾತ್ಮಕ ಕಂಪ್ಯೂಟರ್ ಆಧಾರಿತ ಪರೀಕ್ಷೆಯನ್ನು ನಡೆಸುತ್ತಿದೆ. ಪರೀಕ್ಷೆಯು ಜನವರಿ – ಫೆಬ್ರವರಿ 2025 ರಲ್ಲಿ ನಡೆಯಲಿದೆ. ಪರೀಕ್ಷೆಯ ನಿಖರ ದಿನಾಂಕವನ್ನು ನಂತರ ಎಸ್‌ಎಸ್‌ಸಿ ವೆಬ್‌ಸೈಟ್ ಮೂಲಕ ತಿಳಿಸಲಾಗುವುದು. ಅರ್ಜಿಯನ್ನು ಎಸ್‌ಎಸ್‌ಸಿ ಪ್ರಧಾನ ಕಚೇರಿಯ ಅಧಿಕೃತ ವೆಬ್‌ಸೈಟ್ https://ssc.nic.in ನಲ್ಲಿ ಆನ್ ಲೈನ್‌ನಲ್ಲಿ ಅಕ್ಟೋಬರ್ 14 ರ ರಾತ್ರಿ 11 ಗಂಟೆಯೊಳಗಾಗಿ ಸಲ್ಲಿಸುವುದು. ಅರ್ಜಿ ಸಲ್ಲಿಸುವವರ ವಿದ್ಯಾರ್ಹತೆ ಮಾನ್ಯತೆ ಪಡೆದ ಮಂಡಳಿಯಿಂದ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಎಸ್‌ಎಸ್‌ಸಿ ಮುಖ್ಯ ಕಚೇರಿ ನವದೆಹಲಿಯ ವೆಬ್‌ಸೈಟ್ https://ssc.nic.in ಮತ್ತು ಎಸ್‌ಎಸ್‌ಸಿ ಸ್ಥಳೀಯ ಕಚೇರಿ ಬೆಂಗಳೂರಿನ (ಕರ್ನಾಟಕ-ಕೇರಳ) ವೆಬ್‌ಸೈಟ್ www.ssckkr.kar.nic.in ಸಂಪರ್ಕಿಸಬಹುದು.

## ನ.14 ರಿಂದ 17ರವರೆಗೆ ಕೃಷಿಮೇಳ

**ಬೆಂಗಳೂರು:** ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ ಜಿಕೆವಿಕೆ ಆವರಣದಲ್ಲಿ ನವೆಂಬರ್ 14 ರಿಂದ 17 ರವರೆಗೆ '' ಹವಾಮಾನ ಚತುರ ಡಿಜಿಟಲ್ ಕೃಷಿ'' ಎಂಬ ಘೋಷವಾಕ್ಯದೊಂದಿಗೆ ''ಕೃಷಿ ಮೇಳ- 2024'' ನ್ನು ಆಯೋಜಿಸಲಾಗಿದೆ. ಕೃಷಿ ಮೇಳದಲ್ಲಿ ನಾಲ್ಕು ನೂತನ ತಳಿಗಳು ಮತ್ತು ಹತ್ತೊಂಭತ್ತು ಹೊಸ ತಾಂತ್ರಿಕತೆಗಳನ್ನು ಬಿಡುಗಡೆ ಮಾಡಲಾಗುವುದು. ಮಳಿಗೆಗಳ ಕಾಯ್ದಿರಿಸುವಿಕೆಯು ಸೆಪ್ಟೆಂಬರ್ 23 ರಿಂದ ಪ್ರಾರಂಭವಾಗಲಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-23638883 / 23330153 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸೆಪ್ಟೆಂಬರ್ 17 ರಿಂದ ಅ.02 ರವರೆಗೆ ಸ್ವಚ್ಛತಾ ಹೀ ಸೇವಾ ವಿಶೇಷ ಆಂದೋಲನ

## ಸ್ವಚ್ಛತಾ ಜಾಗೃತಿಗಾಗಿ ಜಾಥಾ

**ಬೆಂಗಳೂರು ಗ್ರಾಮಾಂತರ:** ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಜನರಲ್ಲಿ ನೈರ್ಮಲ್ಯ ಶುಚಿತ್ವ ಕುರಿತು ಅರಿವು ಮೂಡಿಸುವ ಉದ್ದೇಶದೊಂದಿಗೆ ಪ್ರತಿ ವರ್ಷವು 'ಸ್ವಚ್ಛತಾ ಹೀ ಸೇವಾ ಪಾಕ್ಷಿಕ' ವನ್ನು ಆಯೋಜಿಸಲಾಗುತ್ತಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 02 ರ ವರೆಗೆ ಹಮ್ಮಿಕೊಂಡಿರುವ 'ಸ್ವಚ್ಛತಾ ಹೀ ಸೇವಾ ಪಾಕ್ಷಿಕ-2024 ಆಂದೋಲನ' ಕಾರ್ಯಕ್ರಮಕ್ಕೆ ದೇವನಹಳ್ಳಿ ಟೌನ್ ನ ಪುರಸಭೆ ಮುಂಭಾಗದಲ್ಲಿ ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ಅವರು ಹಸಿರು ನಿಶಾನೆ ತೋರಿಸುವ ಮೂಲಕ ವಿಶೇಷಚೇತನರ ಬೈಕ್ ಜಾಥಾಗೆ ಚಾಲನೆ ನೀಡಿದರು. ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಜರಗುವ ''ಸ್ವಚ್ಛತೆಯೇ ಸೇವೆ'' ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ನಗರಗಳನ್ನು ಸ್ವಚ್ಛವಾಗಿಡಲು ಪ್ರತಿಜ್ಞೆ ಕೈಗೊಳ್ಳಬೇಕು ಹಾಗೂ ತಮ್ಮ ತಾಯಿಯ ಹೆಸರಿನಲ್ಲಿ ನಗರದ ವಿವಿಧ ಬಡಾವಣೆಗಳಲ್ಲಿರುವ ಉದ್ಯಾನವನಗಳಲ್ಲಿ ಹಾಗೂ ಮನೆಯ ಸುತ್ತಮುತ್ತಲಿನಲ್ಲಿ ಒಂದು ಸಸಿಯನ್ನು ನೆಟ್ಟು ಪೋಷಿಸಿ ಪರಿಸರ ಸಂರಕ್ಷಣೆಯಲ್ಲಿ ಸಹ ಭಾಗಿತ್ವವನ್ನು ಮೆರೆಯಲು ಸಾರ್ವಜನಿಕರಲ್ಲಿ ಕೋರಿದರು.

## ಎಂಬ್ರಾಯರಿ ಹಾಗೂ ಆರಿ ವರ್ಕ್ ಉಚಿತ ತರಬೇತಿ

**ಬೆಂಗಳೂರು ಗ್ರಾಮಾಂತರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್ ಸೆಟ್ ಸಂಸ್ಥೆಯ ವತಿಯಿಂದ ಎಂಬ್ರಾಯ್ಡರಿ, ಆರಿ ವರ್ಕ್ ಹಾಗೂ ಫ್ಯಾಬ್ರಿಕ್ ಪೇಟಿಂಗ್ ಕುರಿತ 30 ದಿನಗಳ ಉಚಿತ ತರಬೇತಿಯು ನವೆಂಬರ್ 05 ರಿಂದ ಆರಂಭವಾಗಲಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್‌ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು. ಆಸಕ್ತರು ಹೆಸರು ನೋಂದಾಯಿಸಲು ಅಕ್ಟೋಬರ್ 08 ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ 9740982585, 9380162042 ಅನ್ನು ಸಂಪರ್ಕಿಸಬಹುದಾಗಿದೆ.

# 170ನೇ ವಿಶ್ವಧರ್ಮಯಾತ್ರೆ ಪೂರೈಸಿದ ಸ್ವಾಮೀಜಿಗೆ ಗುರುವಂದನಾ ಕಾರ್ಯಕ್ರಮ

**ಮೈಸೂರು:** ನಾವು ನಮ್ಮ ಧರ್ಮವನ್ನು ಉಳಿಸಿಕೊಳ್ಳಬೇಕಾದರೆ ಸಮುದ್ರಾಲೋಂಘನವನ್ನಾದರೂ ಮಾಡಿ ಧರ್ಮ ಪ್ರಚಾರ ನಡೆಸಬೇಕು ಎಂದು ಅವಧೂತ ದತ್ತಪೀಠದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಹೇಳಿದರು. ಜಿಲ್ಲಾ ಬ್ರಾಹ್ಮಣ ಮಹಾಸಭಾ ದತ್ತ ಸೇನೆ ಹಾಗೂ ಮೈಸೂರು ನಾಗರೀಕರು ಆಶ್ರಮದ ನಾದಮಂಟಪದಲ್ಲಿ 170ನೇ ವಿಶ್ವಧರ್ಮ ವಿಜಯ ಯಾತ್ರೆ ಪೂರೈಸಿದ ಸಲುವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಗುರುವಂದನೆ ಸ್ವೀಕರಿಸಿ ಮಾತನಾಡಿದರು. ಪ್ರತಿಯೊಬ್ಬರೂ ಎಲ್ಲಾ ಧರ್ಮವನ್ನು ಗೌರವಿಸಬೇಕು. ಸತ್ಯ ಮತ್ತು ದಯೆ ಇರಬೇಕು. ಯಾರೋ ನಿರಾಶ್ರಿತರಿಗೆ ಆಶ್ರಯ ಕಲ್ಪಿಸಿದರೆ, ಅವರು ಮನೆಯೇ ನಮ್ಮದು ಎಂದಾಗ ಸುಮ್ಮನಿರಬಾರದು. ಇನ್ನೊಬ್ಬರನ್ನು ಒಡೆದು ಬದುಕುವುದನ್ನು ಒಪ್ಪಲಾಗದು. ಹಿಂದುಗಳು ಮಕ್ಕಳನ್ನು ಪಡೆಯಿರಿ. ಮನೆಗೆ ಒಂದು ಮಗು ಸಾಕು ಎಂಬುದು ತಪ್ಪು. ಹಾಗೆ ಮಾಡುತ್ತ ಹೋದರೆ ಧರ್ಮ ಹೊರಟು ಹೋಗುತ್ತದೆ. ಹೆಚ್ಚು ಮಕ್ಕಳು ಯಾಕಾಗಬಾರದು ಎಂದು ಅವರು ಪ್ರಶ್ನಿಸಿದರು. ದತ್ತ ಜನಾಂಗದವರೆಲ್ಲ ಒಂದಾಗಬೇಕು. ನಾವು ಎಂಟು ಚರ್ಚ್ ಖರೀದಿಸಿ ಆಶ್ರಮ ಕಟ್ಟಿದ್ದೇವೆ. ವಿದೇಶಿಗರು ಅಲ್ಲಿ ಆಶ್ರಮಕಟ್ಟಲು 58 ಕೋಟಿ ಕೊಟ್ಟಿದ್ದಾರೆ. ಮನೆ ಕೂಡ ಇಲ್ಲದವರೂ ದೇಣಿಗೆ ನೀಡಿದ್ದಾರೆ. ನಾವು ಉಳಿಸಬೇಕಿರುವುದು ಜನಗಳ ಧರ್ಮವನ್ನು. ಇಲ್ಲವಾದರೆ ನಿಮ್ಮ ಮೊಮ್ಮಕ್ಕಳ ಕಾಲಕ್ಕೆ ಪರಿಣಾಮ ಏನಾಗುತ್ತದೆಯೋ ನೋಡಿ ಎಂದರು. ನಾವು 1976 ರಿಂದ ವಿದೇಶಕ್ಕೆ ಹೋಗುತ್ತಿದ್ದೇನೆ. ಮೊದಲು ನಾನು ವೆಸ್ಟ್ ಇಂಡಿಸ್ನ ಗಯಾನ ಮುಂತಾದ ಕಡೆ ಹೋಗಿದ್ದೆ. ಅಲ್ಲಿ ಹೆಚ್ಚು ಹಿಂದುಗಳು ಇದ್ದಾರೆ. ಸುಮಾರು 180 ವರ್ಷದಿಂದ ಅಲ್ಲಿಯೇ ಇದ್ದಾರೆ. ಅವರೆಲ್ಲರೂ ಬಡವರು. ಗಯಾನದಲ್ಲಿ ಪ್ರಸಿದ್ಧ ಹಿಂದೂ ದೇವಾಲಯವಿದ್ದು, ಅಲ್ಲಿ ಬಲಿ ನೀಡಲಾಗುತ್ತಿತ್ತು. ನಮ್ಮನ್ನು ಆಹ್ವಾನಿಸಿದಾಗ ಬಲಿ ನಿಷೇಧಿಸಿದರೆ ಬರುವುದಾಗಿ ಷರತ್ತು ವಿಧಿಸಿದ್ದೆ. ಅದಕ್ಕೆ ಒಪ್ಪಿ ಅಲ್ಲಿ ಬಲಿ ನಿಷೇಧಿಸಿದ್ದಾಗಿ ಹೇಳಿದರು. ಸನ್ಯಾಸಿಗಳು ಎಂದರೆ ಕೇವಲ ಭಜನೆ, ಉಪನ್ಯಾಸ ಮಾಡುವುದು ಮಾತ್ರವಲ್ಲ. ನಾನು ಕೊಟ್ಟದ್ದನ್ನು ನಿರ್ವಹಿಸಿಕೊಂಡು ಹೋಗಬೇಕು ಎಂದು ಕಿರಿಯ ಶ್ರೀಗಳಿಗೆ ಕಿವಿಮಾತು ಹೇಳಿದರು. ಕನ್ನಡಪ್ರಭ ಪ್ರಧಾನ ಸಂಪಾದಕ ರವಿ ಹೆಗಡೆ ಮಾತನಾಡಿದರು. ವಿ.ಡಾ.ಪಾವಗಡ ಪ್ರಕಾಶರಾವ್ ಉಪನ್ಯಾಸ ನೀಡಿದರು. ವೇದಿಕೆಯಲ್ಲಿ ಶ್ರೀ ದತ್ತ ವಿಜಯಾನಂದ ಸ್ವಾಮೀಜಿ, ಭಾನುಪ್ರಕಾಶ ಶರ್ಮ, ಶಾಸಕ ಟಿ.ಎಸ್. ಶ್ರೀವತ್ಸ, ಮಹೇಶ್ ಶೆಣೈ, ಬ್ರಾಹ್ಮಣ ಮಹಾಸಭಾದ ಉಪಾಧ್ಯಕ್ಷ ನಟರಾಜ ಜೋಯ್ಸ್, ಮುಖಂಡ ರಘುರಾಂ ವಾಜಪೇಯಿ, ದತ್ತಸೇನೆ ಅಧ್ಯಕ್ಷ ಆರ್.ಎನ್. ಸತ್ಯನಾರಾಯಣ, ಕಾರ್ಯದರ್ಶಿ ಮುರಳಿ, ಅರಿವು ಸಂಸ್ಥೆ ಅಧ್ಯಕ್ಷ ಎಚ್.ಎನ್. ಶ್ರೀಕಾಂತ್ ಕಶ್ಯಪ್, ಅಮರ ವಿಪ್ರ ಬಳಗ ಅಧ್ಯಕ್ಷ ರಾಜ್ಕುಮಾರ್ ಮೊದಲಾದವರು ಇದ್ದರು. ಆಕಾಶವಾಣಿಯ ಮಂಜುನಾಥ್ ಕಾರ್ಯಕ್ರಮ ನಿರೂಪಿಸಿದರು.



# ವಿಶ್ವಕರ್ಮ ಜಯಂತಿ ಸಂಭ್ರಮ



**ಬೆಂಗಳೂರು:** ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ನಾಗಪುರ ಬಿಬಿಎಂಪಿ ಶಾಸಕರ ಕಛೇರಿ ಆವರಣದಲ್ಲಿ ವಿಶ್ವಕರ್ಮ ಜಯಂತಿಯನ್ನು ಆಚರಿಸಲಾಯಿತು. . ಕಾರ್ಯಕ್ರಮದಲ್ಲಿ ಸಮುದಾಯದ ಸ್ವಾಮೀಜಿಗಳು ಹಾಗೂ ಕ್ಷೇತ್ರದ ಜನಪ್ರಿಯ ಶಾಸಕರಾದ ಕೆ ಗೋಪಾಲಯ್ಯ ಅವರು ವಿಶ್ವಕರ್ಮ ದೇವರಿಗೆ ಪುಷ್ಪಾರ್ಚನೆ ಸಲ್ಲಿಸಿದರು. ಶಾಸಕರು ಸಮಸ್ತ ವಿಶ್ವಕರ್ಮ ಸಮುದಾಯದ ಬಾಂಧವರಿಗೆ ವಿಶ್ವಕರ್ಮ ಜಯಂತಿಯ ಶುಭಾಶಯಗಳನ್ನು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ನೆಲ ನರೇಂದ್ರಬಾಬು, ಬಿಜೆಪಿಯ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷರು ಮಾಜಿ ಉಪ ಮಹಾಪೌರರಾದ ಎಸ್. ಹರೀಶ್, ಉಪಾಧ್ಯಕ್ಷರು ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್ ಅಧ್ಯಕ್ಷರಾದ ಜಯರಾಮಯ್ಯ, ಬೆಂಗಳೂರು ಉತ್ತರ ಜಿಲ್ಲಾ ಖಅ ಮೋರ್ಚಾ ಪ್ರಧಾನ ಕಾರ್ಯದರ್ಶಿ ನಿಸರ್ಗ ಜಗದೀಶ್, ಬಿಜೆಪಿ ಮುಖಂಡರಾದ ರಾಘವೇಂದ್ರ, ನಾಗರಾಜ್ ಉಪಸ್ಥಿತರಿದ್ದರು

# ಸಂಜೆ ಟಿಪ್ಸ್




## ಹೊಚ್ಚ ಹೊಸ ವೀರೋ ಬಿಡುಗಡೆ ಮಾಡಿದ ಮಹೀಂದ್ರಾ

ಭಾರತದಲ್ಲಿನ ಯುಟಿಲಿಟಿ ವೆಹಿಕಲ್ ಗಳ ಪ್ರಮುಖ ತಯಾರಕರು ಮತ್ತು ಎಲ್ಸಿವಿ 3.5 ಟನ್ ವಿಭಾಗದ ವಾಹನ ತಯಾರಕರಲ್ಲಿ ಮುಂಚೂಣಿಯಲ್ಲಿರುವ ಮಹೀಂದ್ರಾ, ಮಹೀಂದ್ರಾ ಲಿಮಿಟೆಡ್ ಇಂದು ಮಹೀಂದ್ರಾ ವೀರೋ ಎಂಬ ಹೊಸ ವಾಹನವನ್ನು ಬಿಡುಗಡೆ ಮಾಡಿದೆ. ಮಹೀಂದ್ರಾ ವೀರೋ ಆರಂಭಿಕ ಬೆಲೆ 7.99 ಲಕ್ಷ ಆಗಿದೆ. ಎಲ್ಸಿವಿ 3.5 ಟನ್ ವಿಭಾಗಕ್ಕೆ ಹೊಸತನ ನೀಡಲೆಂದೇ ವಿನ್ಯಾಸಗೊಳಿಸಲಾಗಿರುವ ಮಹೀಂದ್ರಾ ವೀರೋ ವಿಭಾಗದಲ್ಲಿಯೇ ಅತ್ಯುತ್ತಮವಾದ ಮೈಲೇಜ್ ಒದಗಿಸುತ್ತಿದ್ದು, ಗ್ರಾಹಕರು ಅತಿ ಹೆಚ್ಚು ಉಳಿತಾಯ ಮಾಡುವಂತೆ ನೋಡಿಕೊಳ್ಳುತ್ತದೆ. ಹಲವು ವಿಧಗಳ ದೃಢವಾದ ಎಂಜಿನ್ ಆಯ್ಕೆಗಳಲ್ಲಿ ಲಭ್ಯವಿರುವ ಈ ಹೊಸ ವಾಹನವು ಅಸಾಧಾರಣ ಕಾರ್ಯಕ್ಷಮತೆ, ಉದ್ಯಮ ಶ್ರೇಷ್ಠ ಸುರಕ್ಷತಾ ಫೀಚರ್ ಗಳು, ಗ್ರಾಹಕ ರಕ್ಷಣೆ ಮತ್ತು ಪ್ರೀಮಿಯಂ ಕ್ಯಾಬಿನ್ ಅನುಭವ ಒದಗಿಸುವಂತೆ ರೂಪುಗೊಂಡಿದೆ. ಮಹೀಂದ್ರಾ ಹೊಸತಾಗಿ ತನ್ನ ಹೊಸ ಅರ್ಬನ್ ಪ್ರಾಸ್ಪರ್ ಪ್ಲಾಟ್‌ಫಾರ್ಮ್ (ಯುಪಿಪಿ) ಪರಿಚಯಿಸಿದ್ದು, ಇದು ಭಾರತದ ಮೊದಲ ಗ್ರೌಂಡ್- ಅಪ್ ಮಲ್ಟಿ-ಎನರ್ಜಿ ಮಾಡ್ಯುಲರ್ ಸಿವಿ ಪ್ಲಾಟ್‌ಫಾರ್ಮ್ ಆಗಿದೆ. ವಿಭಾಗದಲ್ಲಿಯೇ ಅತ್ಯುತ್ತಮವಾದ ಮಾಲೀಕತ್ವ ವೆಚ್ಚ ಮತ್ತು ನಿಬಂಧನೆಗಳನ್ನು ಮೀರಿದ ವಿಭಾಗ ಶ್ರೇಷ್ಠ ಸುರಕ್ಷತಾ ಫೀಚರ್ ಗಳನ್ನು ನೀಡುವಂತೆ ವಿನ್ಯಾಸಗೊಳಿಸಲಾಗಿರುವ ಈ ವೇದಿಕೆಯು ಉದ್ಯಮದಲ್ಲಿಯೇ ಹೊಸ ಮಾನದಂಡವನ್ನು ಸ್ಥಾಪಿಸುತ್ತದೆ. ವಾಹನ ಬಿಡುಗಡೆ ಸಂದರ್ಭದಲ್ಲಿ ಮಾತನಾಡಿದ ಮಹೀಂದ್ರಾ ಅಂಡ್ ಮಹೀಂದ್ರಾ ಲಿಮಿಟೆಡ್ ನ ಆಟೋಮೋಟಿವ್ ವಿಭಾಗದ ಅಧ್ಯಕ್ಷ ವಿಜಯ್ ನಕ್ರಾ ಅವರು, ''ಎಲ್ಸಿವಿ 3.5 ಟನ್ ವಿಭಾಗದಲ್ಲಿ ಬಿಡುಗಡೆ ಆಗಿರುವ ಮಹೀಂದ್ರಾ ವೀರೋ ಆ ವಿಭಾಗದಲ್ಲಿ ನಾವು ಹೊಂದಿರುವ ನಾಯಕತ್ವವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ. ಗ್ರಾಹಕರಿಗೆ ಹೆಚ್ಚು ಆದಾಯ ಗಳಿಸಲು ಸಹಾಯ ಮಾಡುವಂತೆ ಈ ವಾಹನವನ್ನು ನಿರ್ಮಿಸಲಾಗಿದೆ. ಇದು ವಿಭಾಗ ಶ್ರೇಷ್ಠ ಪೇಲೋಡ್ ಸಾಮರ್ಥ್ಯ, ಆತ್ಯಾಕರ್ಷಕ ಮೈಲೇಜ್ ಮತ್ತು ಅತ್ಯುನ್ನತ ಕುಶಲತೆ ಹೊಂದಿದೆ ಎಂದು ಹೇಳಿದರು.

## ದಹಿಪುರಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

6 ಪುರಿ, ಬೇಯಿಸಿ ಸಿಪ್ಪೆ ತೆಗೆದ ಅರ್ಧ ಆಲೂಗಡ್ಡೆ, ಗಟ್ಟಿಯಾದ ತಾಜಾ ಮೊಸರು 1 ಕಪ್, 1 ಚಮಚ ಸಕ್ಕರೆ, ಸಣ್ಣಗೆ ಹೆಚ್ಚಿದ ಅರ್ಧ ಈರುಳ್ಳಿ, ಸಣ್ಣಗೆ ಹೆಚ್ಚಿದ ಅರ್ಧ ಟೊಮೆಟೋ, ಅರ್ಧ ಕಪ್ ಸೇವು, 5 ಚಮಚ ಹುಣಿಸೆ ರಸ, 3 ಚಮಚ ಗ್ರೀನ್ ಚಟ್ನಿ, ಚಿಟಿಕೆ ಕೆಂಪು ಮೆಣಸಿನ ಪುಡಿ, ಚಿಟಿಕೆ ಚಾಟ್ ಮಸಾಲ, ರುಚಿಗೆ ತಕ್ಕಷ್ಟು ಉಪ್ಪು, 3 ಚಮಚ ಸಣ್ಣಗೆ ಹೆಚ್ಚಿದ ಕೊತ್ತಂಬರಿ ಸೊಪ್ಪು.

### ಮಾಡುವ ವಿಧಾನ

ನಿಮ್ಮ ಬೆರಳಿನಿಂದ ಪುರಿಯ ಮಧ್ಯೆ ತೂತು ಮಾಡಿಕೊಳ್ಳಿ. ಪ್ರತಿ ಪುರಿಯಲ್ಲೂ ಅರ್ಧ ಚಮಚದಷ್ಟು ಸ್ಮಾಶ್ ಮಾಡಿಟ್ಟ ಆಲೂಗಡ್ಡೆ ತುಂಬಿಸಿ. ಒಂದು ಕಪ್ ಮೊಸರು ತೆಗೆದುಕೊಂಡು ಅದಕ್ಕೆ ಒಂದು ಚಮಚ ಸಕ್ಕರೆ ಹಾಕಿ ಕದಡಿ. ಆ ಮಿಶ್ರಣವನ್ನು ಪುರಿಯಲ್ಲಿ ಸ್ವಲ್ಪ ಸ್ವಲ್ಪ ಹಾಕಿ. ಬಳಿಕ ಸ್ವಲ್ಪ ಹೆಚ್ಚಿದ ಈರುಳ್ಳಿ, ಟೊಮೆಟೋ ಹಾಕಿ. ನಂತರ ಎಲ್ಲಾ ಪುರಿಗಳ ಮೇಲೂ ಸೇವು ಉದುರಿಸಿ, ಅದಾದ ಮೇಲೆ ಹುಣಸೆ ಹಣ್ಣಿನ ರಸವನ್ನು ಹಾಕಿ. ಹಸಿರು ಚಟ್ನಿಯನ್ನೂ ಹಾಕಿದ ಬಳಿಕ ಮತ್ತೊಮ್ಮೆ ಎಲ್ಲಾ ಪುರಿಗಳಲ್ಲೂ ಸ್ವಲ್ಪ ಸ್ವಲ್ಪ ಮೊಸರು ಹಾಕಿಕೊಳ್ಳಿ. ಅದರ ಮೇಲೆ ಸ್ವಲ್ಪ ಕೆಂಪು ಮೆಣಸಿನ ಪುಡಿ, ಚಾಟ್ ಮಸಾಲಾ, ಚಿಟಿಕೆ ಉಪ್ಪು, ಹೆಚ್ಚಿದ ಕೊತ್ತಂಬರಿ ಸೊಪ್ಪನ್ನು ಹಾಕಿ ಅಲಂಕರಿಸಿದ್ರೆ ರುಚಿಯಾದ ದಹಿ ಪುರಿ ಸಿದ್ಧ.



## ಕರೀನಾ ಕಪೂರ್ ಸಿನಿ ಜರ್ನಿಗೆ 25 ವರ್ಷ!

ಬಾಲಿವುಡ್‌ನಲ್ಲಿ ನಟಿ ಕರೀನಾ ಕಪೂರ್ 25 ವರ್ಷ ಪೂರೈಸಿದ ಹೆಗ್ಗಳಿಕೆಗೆ ಪಾತ್ರವಾಗಿದ್ದಾರೆ .ಅನೇಕ ಚಿತ್ರಗಳಲ್ಲಿ ನಟಿಸಿ ತಮ್ಮ ಸೌಂದರ್ಯದಿಂದ ಮತ್ತು ನಟನೆಯಿಂದ ಅಭಿಮಾನಿಗಳ ಮನ ಗೆದ್ದ ಕರೀನಾ ಕಪೂರ್ ಅವರು ಹಿಂದಿ ಚಲನಚಿತ್ರೋದ್ಯಮದ ಅತಿದೊಡ್ಡ ತಾರೆಗಳಲ್ಲಿ ಒಬ್ಬರು ಅಂತ ಹೇಳಿದರೆ ತಪ್ಪಾಗುವುದಿಲ್ಲ. ಅವರ ದಶಕಗಳ ಸುದೀರ್ಘ ವೃತ್ತಿಜೀವನದಲ್ಲಿ ಅಭಿಮಾನಿಗಳಲ್ಲಿ ನೆಚ್ಚಿನವರಾಗಿದ್ದಾರೆ. ಅವರ ಇತ್ತೀಚಿನ ಬಿಡುಗಡೆಯಾದ ಚಿತ್ರ 'ದಿ ಬಕಿಂಗ್ಹ್ಯಾಮ್ ಮರ್ಡರ್ಸ್' ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಿದೆ, ಅವರ ವೃತ್ತಿಜೀವನದಲ್ಲಿ ಒಂದು ಮೈಲಿಗಲ್ಲು ಸಾಧಿಸಿದೆ. ಸದ್ಯ ಅವರೀಗ ಬಾಲಿವುಡ್ನಲ್ಲಿ 25 ವರ್ಷಗಳನ್ನು ಪೂರೈಸಿದ್ದಾರೆ. ಈ ಸಾಧನೆಯನ್ನು ಆಚರಿಸಲು ಪಿವಿಆರ್ ಸಿನಿಮಾಸ್ ಅವರ ಹೆಸರಿನಲ್ಲಿ ಚಲನಚಿತ್ರೋತ್ಸವವನ್ನು ಆಯೋಜಿಸಿದೆ.

ಪಿವಿಆರ್ ಆಯೋಜಿಸಲಿರುವ ಈ ಚಲನಚಿತ್ರೋತ್ಸವವು ನಟಿಯ ಸುಪ್ರಸಿದ್ಧ ವೃತ್ತಿಜೀವನಕ್ಕೆ ಗೌರವ ಸಲ್ಲಿಸುತ್ತದೆ ಮತ್ತು ಮತ್ತೊಮ್ಮೆ ದೊಡ್ಡ ಪರದೆಯ ಮೇಲೆ ಅವರ ಅತ್ಯಂತ ಮೆಚ್ಚುಗೆ ಪಡೆದ ಮತ್ತು ಪ್ರಶಂಸೆಗೆ ಪಾತ್ರವಾದ ಕೆಲವು ಪ್ರದರ್ಶನಗಳನ್ನು ಸಹ ಪ್ರದರ್ಶಿಸುತ್ತದೆ. ಭಾರತದಲ್ಲಿ ಒಬ್ಬ ನಟಿಗೆ ಈ ಗೌರವ ಸಿಗುತ್ತಿರುವುದು ಇದು ಮೊದಲನೆಯ ಬಾರಿಯಾಗಿದೆ. ಹಿರಿಯ ನಟ ದಿಲೀಪ್ ಕುಮಾರ್ ಮತ್ತು ಬಿಗ್ ಬಿ ಅಂತಾನೆ ಖ್ಯಾತಿ ಪಡೆದಿರುವ ಅಮಿತಾಭ್ ಬಚ್ಚನ್ ಅವರಿಗೆ ಮಾತ್ರ ಈ ರೀತಿಯ ಚಲನಚಿತ್ರೋತ್ಸವವನ್ನು ಏರ್ಪಡಿಸಲಾಗಿತ್ತು.

ಚಲನಚಿತ್ರೋತ್ಸವದ ಟ್ರೈಲರ್ ಅನ್ನು ಈಗಾಗಲೇ ಪಿವಿಆರ್ ಅವರು ಬಿಡುಗಡೆ ಮಾಡಿದ್ದಾರೆ, ಇದರಲ್ಲಿ ಕರೀನಾ ಅವರ ಅತ್ಯಂತ-ಪ್ರೀತಿಯ ಚಲನಚಿತ್ರಗಳು ಮತ್ತು ಪಾತ್ರಗಳ ತುಣುಕುಗಳು ಸೇರಿವೆ, ಕಭಿ ಖುಷಿ ಕಭಿ ಗಮ್ನ ಪೂ, ಜಬ್ ವಿ ಮೆಟ್ನ ಗೀತ್ ಮತ್ತು ಚಮೇಲಿಯಲ್ಲಿ ಶೀರ್ಷಿಕೆ ಪಾತ್ರದ ತುಣುಕುಗಳನ್ನು ಇದು ಹೊಂದಿದೆ.

ಪಿವಿಆರ್ ಕೊಟ್ಟ ಈ ಗೌರವಕ್ಕೆ ತಮ್ಮ ಪ್ರತಿಕ್ರಿಯೆಯನ್ನು ಹಂಚಿಕೊಳ್ಳುತ್ತಾ ಕರೀನಾ ತಮ್ಮ ಇನ್ಸ್ಟಾಗ್ರಾಮ್ ಖಾತೆಯ ಪುಟದಲ್ಲಿ ಶೀರ್ಷಿಕೆಯಲ್ಲಿ, ಅವರು ನನ್ನ ಕೆಲಸವನ್ನು ನಾನು ತುಂಬಾನೇ ಪ್ರೀತಿಸುತ್ತೇನೆ. ಈ ಸುಂದರ ಫೆಸ್ಟಿವಲ್ ಅನ್ನು ಆಯೋಜಿಸಿದ್ದಕ್ಕಾಗಿ ಪಿವಿಆರ್ ಸಿನೆಮಾಸ್ ಮತ್ತು ಐನಾಕ್ಸ್ ಮೂವೀಸ್ ಅವರಿಗೆ ತುಂಬಾನೇ ಧನ್ಯವಾದಗಳು ಅಂತ ಬರೆದುಕೊಂಡಿದ್ದಾರೆ.

2000 ರಲ್ಲಿ ಜೆಪಿ ದತ್ತಾ ಅವರ ರೆಫ್ಯೂಜಿ ಚಿತ್ರದ ಮೂಲಕ ಕರೀನಾ ತಮ್ಮ ನಟನೆಯನ್ನು ಪ್ರಾರಂಭಿಸಿದರು. ಅಂದಿನಿಂದ ಅವರು ಚಮೇಲಿ, ಕಭಿ ಖುಷಿ ಕಭಿ ಗಮ್, ಓಂಕಾರ, ಜಬ್ ವಿ ಮೆಟ್, ಹೀರೋಯಿನ್, 3 ಈಡಿಯಟ್ಸ್, ಕುರ್ಬಾನ್, ಮುಂತಾದ ಚಲನಚಿತ್ರಗಳಲ್ಲಿ ನಟಿಸಿರುವ ಮೂಲಕ 50ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಟಿಸಿದ್ದಾರೆ.

## ನಿದ್ರೆಯ ಸಮಸ್ಯೆ ಹೋಗಲಾಡಿಸಲು ಪರಿಹಾರ



### ಹೆಲ್ತ್ ಟಿಪ್ಸ್

ನಿದ್ದೆ ಬಾರದೇ ತೊಂದರೆಗೊಳಗಾದವರು ಕೆಲವು ಸರಳ ಆಯುರ್ವೇದ ಪರಿಹಾರಗಳನ್ನು ಅಳವಡಿಸಿಕೊಳ್ಳಬೇಕು. ಇದು ನಿದ್ದೆ ಮಾತ್ರೆಯಷ್ಟೇ ಪರಿಣಾಮಕಾರಿಯಾಗಿದೆ.

ಆಯುರ್ವೇದದ ಪ್ರಕಾರ ನಿದ್ರೆ, ಆಹಾರ ಮತ್ತು ಬ್ರಹ್ಮಚರ್ಯ ಆರೋಗ್ಯದ ಮೂರು ಮುಖ್ಯ ಸ್ತಂಭಗಳು. ಒಳ್ಳೆಯ ನಿದ್ದೆ ಜೀರ್ಣಶಕ್ತಿಯನ್ನು ಹೆಚ್ಚಿಸಿ ದೇಹವನ್ನು ಆರೋಗ್ಯವಾಗಿರಿಸುತ್ತದೆ. ಅಷ್ಟಾಂಗ ಹೃದಯಂ ಎಂಬ ಪ್ರಾಚೀನ ಆಯುರ್ವೇದ ಗ್ರಂಥದಲ್ಲಿ ನಿದ್ರೆಯ ಮಹತ್ವವನ್ನು ಒತ್ತಿಹೇಳಲಾಗಿದೆ.

ಉತ್ತಮ ನಿದ್ರೆಯು ಜೀರ್ಣಾಂಗ ವ್ಯವಸ್ಥೆಯನ್ನು ಆರೋಗ್ಯಕರವಾಗಿರಿಸುತ್ತದೆ. ದೇಹವು ಅಗತ್ಯವಾದ ಪೋಷಕಾಂಶಗಳನ್ನು ಪಡೆಯುತ್ತದೆ. ಇದು ಒತ್ತಡವನ್ನು ಕಡಿಮೆ ಮಾಡುತ್ತದೆ ಮತ್ತು ದೇಹಕ್ಕೆ ರೋಗಗಳ ವಿರುದ್ಧ ಹೋರಾಡುವ ಸಾಮರ್ಥ್ಯವನ್ನು ನೀಡುತ್ತದೆ.

**ಮಲಗುವ ಮುನ್ನ ಸ್ನಾನ ಮಾಡಿ :** ಮಲಗುವ ಮುನ್ನ ಉಗುರು ಬೆಚ್ಚಗಿನ ನೀರಿನಿಂದ ಸ್ನಾನ ಮಾಡುವುದರಿಂದ ದೇಹದಿಂದ ಆಯಾಸ ದೂರವಾಗುತ್ತದೆ ಮತ್ತು ಉತ್ತಮ ನಿದ್ರೆ ಬರುತ್ತದೆ.

**ಮಲಗುವ ಮುನ್ನ ತಿನ್ನಬೇಡಿ :** ಮಲಗುವ ಕನಿಷ್ಠ ಎರಡು ಗಂಟೆಗಳ ಮೊದಲು ಊಟವನ್ನು ಸೇವಿಸಿ. ಮಲಗುವ ಕೆಲವೇ ನಿಮಿಷಗಳ ಮೊದಲು ಆಹಾರ ಸೇವನೆ ಮಾಡುವುದರಿಂದ ಜೀರ್ಣಕ್ರಿಯೆಯ ಪ್ರಕ್ರಿಯೆಯು ನಿದ್ದೆಗೆ ಅಡ್ಡಿಪಡಿಸುತ್ತದೆ.

**ವಜ್ರಾಸನದಲ್ಲಿ ಕುಳಿತುಕೊಳ್ಳಿ:** ಆಹಾರ ಸೇವಿಸಿದ ನಂತರ 15-20 ನಿಮಿಷಗಳ ಕಾಲ ವಜ್ರಾಸನದಲ್ಲಿ ಕುಳಿತುಕೊಳ್ಳಬೇಕು. ಈ ರೀತಿ ಮಾಡುವುದರಿಂದ ಜೀರ್ಣಕ್ರಿಯೆ ಸುಧಾರಿಸುತ್ತದೆ ಮತ್ತು ನಿದ್ರೆಗೆ ತೊಂದರೆಯಾಗುವುದಿಲ್ಲ.

**ಉಗುರು ಬೆಚ್ಚಗಿನ ನೀರಿನಲ್ಲಿ ಪಾದಗಳನ್ನು ನೆನೆಸಿ:** ಮಲಗುವ ಮೊದಲು ಪಾದಗಳನ್ನು ಸ್ವಲ್ಪ ಸಮಯದವರೆಗೆ ಉಗುರು ಬೆಚ್ಚಗಿನ ನೀರಿನಲ್ಲಿ ನೆನೆಸಿಡಿ. ಇದರಿಂದ ರಕ್ತ ಪರಿಚಲನೆ ಸುಧಾರಿಸುತ್ತದೆ.

**ಕಾಲಗಳಿಗೆ ಮಸಾಜ್:** ಪಾದಗಳ ಲಘು ಮಸಾಜ್ನಿಂದ ರಕ್ತ ಪರಿಚಲನೆ ಸುಧಾರಿಸುತ್ತದೆ ಮತ್ತು ಉತ್ತಮ ನಿದ್ರೆಗೆ ಸಹಾಯ ಮಾಡುತ್ತದೆ. ಎಳ್ಳಿನ ಎಣ್ಣೆಯಿಂದ ಮಸಾಜ್ ಮಾಡುವುದು ಉತ್ತಮ.

**ಪುಸ್ತಕ ಓದಿ:** ಮಲಗುವ ಮುನ್ನ ಒಳ್ಳೆಯ ಪುಸ್ತಕ ಓದುವುದರಿಂದ ಮನಸ್ಸು ಶಾಂತವಾಗುತ್ತದೆ ಮತ್ತು ಒಳ್ಳೆಯ ನಿದ್ರೆ ಬರುತ್ತದೆ.

## ಸೌಂದರ್ಯ'ಕ್ಕೆ ಬಳಸಿ ಗೋಧಿ ಮೊಳಕೆ ತೈಲ

### ಬ್ಯೂಟಿ ಟಿಪ್ಸ್




ಗೋಧಿ ಭಾರತೀಯರಿಗೆ ಅಪರೂಪದ ವಸ್ತುವೇನಲ್ಲ. ಗೋಧಿಯಿಂದ ಮಾಡಿದ ಪದಾರ್ಥಗಳು ಆರೋಗ್ಯಕ್ಕೆ ಬೆಸ್ಟ್ ಅನ್ನೋದು ವೈದ್ಯರ ಅಭಿಪ್ರಾಯ.

**ಆಯಂಟಿ ಒಕ್ಸಿಡೆಂಟ್‌ಗಳ ಸಮೃದ್ಧ ಮೂಲ:** ಗೋಧಿ ಮೊಳಕೆಯ ತೈಲದಲ್ಲಿ ವಿಟಮಿನ್ ಇ ಹೇರಳವಾಗಿದೆ, ಇದೊಂದು ಉತ್ತಮ ಆಯಂಟಿ ಒಕ್ಸಿಡೆಂಟ್. 22 ಬಗೆಯ ಪೋಷಕಾಂಶಗಳು ಇದರಲ್ಲಿವೆ. ಇದು ನಿಮ್ಮಲ್ಲಿರುವ ಒತ್ತಡ ಕಡಿಮೆ ಮಾಡುತ್ತದೆ. ಚರ್ಮದ ಆರೋಗ್ಯಕ್ಕಂತೂ ಹೇಳಿ ಮಾಡಿಸಿದಂತಹ ಮದ್ದು.

**ಉತ್ತಮ ಫೇಸ್ ಕ್ಲೆನ್ಸರ್ :** ಗೋಧಿ ಮೊಳಕೆಯ ತೈಲ ನೈಸರ್ಗಿಕ ಎಣ್ಣೆಯಾಗಿರುವುದರಿಂದ ನಿಮ್ಮ ಮುಖವನ್ನು ಸ್ವಚ್ಛಗೊಳಿಸುತ್ತದೆ. ಮುಖದ ಮೃದುತ್ವವನ್ನು ಕಾಪಾಡುತ್ತದೆ. ಮೊಡವೆ ಬಾರದಂತೆ ತಡೆಗಟ್ಟುತ್ತದೆ. ಕೆಲವೇ ಹನಿಗಳಷ್ಟು ಗೋಧಿ ಮೊಳಕೆಯ ಎಣ್ಣೆಯಿಂದ ಮುಖಕ್ಕೆ ಮಸಾಜ್ ಮಾಡಿಕೊಳ್ಳಿ. ಅಥವಾ ಫೇಸ್ ಪ್ಯಾಕ್ ನಂತೆ ಬಳಸಬಹುದು. ಆಯ್ಲಿ ಸ್ಕಿನ್ ಇರುವವರು ವೈದ್ಯರ ಸಲಹೆ ಬಳಿಕ ಬಳಸುವುದು ಉತ್ತಮ.

**ಕೊಲೆಸ್ಟ್ರಾಲ್ ಕಡಿಮೆ ಮಾಡುತ್ತದೆ :** ಗೋಧಿ ಮೊಳಕೆಯ ಎಣ್ಣೆಯಲ್ಲಿ ಒಕ್ಟಾಕೋಸಾನೊಲ್ ಪ್ರಮಾಣ ಅಧಿಕವಾಗಿದೆ. ಅದು ದೇಹಕ್ಕೆ ಶಕ್ತಿ ಹಾಗೂ ಸ್ಟಾಮಿನಾ ಕೊಡುವುದರ ಜೊತೆಗೆ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುತ್ತದೆ.

**ಚರ್ಮದ ಮೇಲಿನ ಕಲೆಗಳಿಗೆ ಮದ್ದು:** ಗೋಧಿ ಮೊಳಕೆ ತೈಲದಲ್ಲಿ ವಿಟಮಿನ್-ಇ ಹೇರಳವಾಗಿರುವುದರಿಂದ ನಿಮ್ಮ ಚರ್ಮಕ್ಕೂ ಕಾಂತಿ ಮತ್ತು ಶಕ್ತಿ ಬರುತ್ತದೆ. ನಿರಂತರವಾಗಿ ಈ ಎಣ್ಣೆಯನ್ನು ಹಚ್ಚುತ್ತಾ ಬಂದರೆ ಚರ್ಮದ ಮೇಲಿನ ಕಲೆಗಳು ಮಾಯವಾಗುತ್ತವೆ. ಆದ್ರೆ ಎಣ್ಣೆ ನೂರಕ್ಕೆ ನೂರರಷ್ಟು ನೈಸರ್ಗಿಕವಾಗಿರಬೇಕು. ನಿಮ್ಮ ಚರ್ಮವನ್ನು ಹೈಡ್ರೈಟ್ ಮಾಡುವ ಮೂಲಕ ಹೊಳಪು ತುಂಬುತ್ತದೆ.

**ಕೂದಲಿನ ಕಾಂತಿಗಾಗಿ:** ಆರೋಗ್ಯಕರ ತಲೆಗೂದಲಿಗೆ ಗೋಧಿ ಮೊಳಕೆ ತೈಲ ಬೆಸ್ಟ್. ಇದರಲ್ಲಿ ಲಿನೊಲಿಯಿಕ್ ಆಮ್ಲ ಇರುವುದರಿಂದ ನಿಮ್ಮ ಕೂದಲ ಪೋಷಣೆಗೆ ಸಹಕರಿಸುತ್ತದೆ. ಎಳ್ಳೆಣ್ಣೆ ಅಥವಾ ಆಲಿವ್ ಆಯಿಲ್ ಜೊತೆಗೆ 10 ರಲ್ಲಿ ಒಂದು ಭಾಗದಷ್ಟು ಗೋಧಿ ಮೊಳಕೆ ತೈಲವನ್ನು ಮಿಕ್ಸ್ ಮಾಡಿ ಕೂದಲ ಬುಡಕ್ಕೆ ಹಚ್ಚಿಕೊಳ್ಳಿ. ಸ್ವಲ್ಪ ಸಮಯ ಬಿಟ್ಟು ತಲೆಸ್ನಾನ ಮಾಡಿ.

# ಭೂಮಿಜಾ ಪ್ರಸ್ತುತಪಡಿಸುವ ಜ್ಯಾಕ್ ಫ್ರೂಟ್ ಉತ್ಸವ



ಭೂಮಿಜಾ ಪ್ರಸ್ತುತಪಡಿಸುವ ಜನಪ್ರಿಯ ಮಕ್ಕಳ ಸಂಗೀತೋತ್ಸವವನ್ನು ಮತ್ತೊಮ್ಮೆ ಆನಂದಿಸುವ ಸಮಯ ಬಂದಿದೆ. ಪ್ರತಿಷ್ಠಿತ ಶಾಸ್ತ್ರೀಯ ಸಂಗೀತ ವಿದುಷಿ ಶುಭಾ ಮುದ್ಗಲ್ ಅವರು ಮತ್ತೊಮ್ಮೆ ಉತ್ಸವದ ಆರನೇ ಆವೃತ್ತಿಯ ಉತ್ಸವ ನಿರ್ದೇಶಕರಾಗಿದ್ದಾರೆ. ಜ್ಯಾಕ್ ಫ್ರೂಟ್ 2024 ಉತ್ಸವವನ್ನು ಇಂಡಿಯನ್ ಎಕ್ಸ್ಪೀರಿಯನ್ಸ್ ಮ್ಯೂಸಿಯಂ ಅವರ ಸಹಯೋಗದಲ್ಲಿ ಮತ್ತು ಅರುಂಧತಿ ಮೂರ್ತಿ ಫಿಲಾಂತ್ರೊಫಿ ಅವರ ಬೆಂಬಲದೊಂದಿಗೆ ಏರ್ಪಡಿಸಲಾಗಿದೆ. ಉತ್ಸವವು 20, 21 ಮತ್ತು 22 ಸೆಪ್ಟೆಂಬರ್, 2024 ರಂದು ಜೆ ಪಿ ನಗರದ ಇಂಡಿಯನ್ ಎಕ್ಸ್ಪೀರಿಯನ್ಸ್ ಮ್ಯೂಸಿಯಂ ಮತ್ತು ಎಂ ಎಲ್ ಆರ್ ಕನ್ವೆಷನ್ ಸೆಂಟರ್ ನಲ್ಲಿ ನಡೆಯಲಿದೆ.

ಪ್ರಸ್ತುತ ವರ್ಷದ ಉತ್ಸವದ ವಿಶೇಷತೆ ಎಂದರೆ ಉದ್ಘಾಟನಾ ಕಚೇರಿಯನ್ನು ಸೃಷ್ಟಿ ಸ್ಪೆಷಲ್ ಅಕಾಡೆಮಿಯ ವಿದ್ಯಾರ್ಥಿಗಳು / ಕಲಾವಿದರು ನಡೆಸಿಕೊಡುತ್ತಾರೆ. ಸಮಾನ ಅವಕಾಶಕ್ಕೆ ಸಾಕ್ಷಿಯಾದ ಸನ್ನಿ ಸಿಂಫೋನಿ ಎನ್ನುವ ಈ ಪ್ರದರ್ಶನವನ್ನು ಖ್ಯಾತ ಸಂಗೀತ ಕಲಾವಿದೆಯಾದ ಎಂ ಡಿ ಪಲ್ಲವಿ ಅವರು ನಿರ್ದೇಶಿಸಿದ್ದಾರೆ. ಜನಪ್ರಿಯ ಕನ್ನಡ ಮತ್ತಿತರ ಪ್ರಾದೇಶಿಕ ಹಾಡುಗಳನ್ನು ಈ ಎಳೆಯ ಕಲಾವಿದರು ಹಾಡಲಿದ್ದಾರೆ. ಎಂ ಡಿ ಪಲ್ಲವಿ ಅವರು ಸ್ವತಃ ರಂಗದ ಮೇಲೆ ಇದನ್ನು ನಿರ್ವಹಿಸಲಿದ್ದಾರೆ. ಸನ್ನಿ ಸಿಂಫೋನಿ ಶುಕ್ರವಾರ 20 ಸೆಪ್ಟೆಂಬರ್, 2024ರಂದು ಸಂಜೆ 6 ಗಂಟೆಗೆ ನಡೆಯಲಿದೆ.

ಎಂ ಡಿ ಪಲ್ಲವಿ, ಉದ್ಘಾಟನಾ ಕಚೇರಿಯ ನಿರ್ದೇಶಕರು ಮತ್ತು ನಿರ್ವಾಹಕರು ಹೇಳುತ್ತಾರೆ - ಸೃಷ್ಟಿ ಸ್ಪೆಷಲ್ ಅಕಾಡೆಮಿಯ ವಿದ್ಯಾರ್ಥಿಗಳ ಉದ್ಘಾಟನಾ ಕಚೇರಿಯನ್ನು ನಿರ್ದೇಶಿಸುವುದು ನಿಜಕ್ಕೂ ಕಲೆಯಲ್ಲಿ ಒಳಗೊಳ್ಳುವಿಕೆಯ ಗಾಢ ಸಾಕ್ಷಾತ್ಕಾರವಾಗಿದೆ. ಸಂಗೀತವು ಎಲ್ಲಾ ಸರಹದ್ದುಗಳನ್ನು ಮೀರುತ್ತದೆ ಮತ್ತು ಭಾಗವಹಿಸುವ ಪ್ರತಿಯೊಬ್ಬ ಕಲಾವಿದರಿಗೆ, ಅವರ ಹಿನ್ನೆಲೆಯ ಪರಿಗಣಿಸದೇ, ತಮ್ಮ ಪ್ರತಿಭೆಯನ್ನು ಹೊಳೆಯಿಸುವ ಅವಕಾಶ ನೀಡುತ್ತದೆ.

ಕಳೆದ ಜ್ಯಾಕ್ ಫ್ರೂಟ್ ಉತ್ಸವದಲ್ಲಿ, ಭವಿಷ್ಯದತ್ತ ಹಾಡುಗಾರಿಕೆ ಎನ್ನುವ ವಿಶಿಷ್ಟ ಕಾರ್ಯಕ್ರಮ ನಿರ್ದೇಶಿಸಿದ್ದ ವಿದುಷಿ ಶುಭಾ ಮುದ್ಗಲ್ ಅವರು ಈ ಬಾರಿ ಸಿಂಗಿಂಗ್ ಇನ್ ಟು ದ ಫ್ಯೂಚರ್ 2. 0 ಎನ್ನುವ ರೋಮಾಂಚನಗೊಳಿಸುವ ಪ್ರಸ್ತುತಿ ನೀಡುತ್ತಿದ್ದಾರೆ. ಈ ವರ್ಷದ ಬಾಲ ಪ್ರತಿಭೆಗಳ ಮುಂಚೂಣಿಯಲ್ಲಿ ಜನಪ್ರಿಯ ಕಲಾವಿದರಾದ ಜಯೇಶ್ ಖಾರೆ (ಮುಂಬೈ) ಮತ್ತು ಸೂರ್ಯ ನಾರಾಯಣನ್ ಹರಿಹರನ್ (ಚೆನ್ನೈ) ಇದ್ದಾರೆ. ಈ ಕಚೇರಿ ಭಾನುವಾರ 22 ಸೆಪ್ಟೆಂಬರ್ 2024ರಂದು ಸಂಜೆ 7 ಗಂಟೆಗೆ ನಡೆಯಲಿದೆ.

ಹದಿಮೂರು ವರ್ಷದ ಜಯೇಶ್ ಖಾರೆ ಈಗಾಗಲೇ ಇಂಟರ್ ನೆಟ್ ಸೆನ್ಸೇಷನ್ ಆಗಿದ್ದಾರೆ. ಪ್ರಸಿದ್ಧ ಸಂಗೀತಗಾರ ಜೋಡಿ ಅತುಲ್ - ಅಜಯ್ ಮುಂತಾದವರ ಜೊತೆ ಕೆಲಸ ಮಾಡಿದ್ದಾರೆ. ಅವರ ಸುವರ್ಣ ಕಂಠದಿಂದಾಗಿ ಈಗಾಗಲೇ ದೇಶದ ಉದಯೋನ್ಮುಖ ಕಲಾವಿದರ ಸಾಲಿನಲ್ಲಿ ತಮ್ಮ ಹೆಸರನ್ನು ಸ್ಥಾಪಿಸಿಕೊಂಡಿದ್ದಾರೆ.

ವಿಶ್ವದ ಹಲವಾರು ಪ್ರತಿಷ್ಠಿತ ವೇದಿಕೆಗಳಲ್ಲಿ ಕಚೇರಿ ನಡೆಸಿಕೊಟ್ಟಿರುವ ಈ ಯೂ ಟ್ಯೂಬ್ ಸ್ಟಾರ್ ಈಗಾಗಲೇ ಗಮನಾರ್ಹ ಪ್ರಶಸ್ತಿಗಳಾದ ರೋಟರಿ ಕ್ಲಬ್ ಯುವ ಸಾಧಕ ಪ್ರಶಸ್ತಿ, ಶ್ರೀ ಷಣ್ಮುಖಾನಂದ ಫೈನ ಆರ್ಟ್ಸ್ ಅಂಡ್ ಸಂಗೀತ ಸಭಾ ಕೊಡಮಾಡುವ ಸ್ವರ ಸಾಮ್ರಾಜ್ಞಿ ಎಂ ಎಸ್ ಸುಬ್ಬಲಕ್ಷ್ಮಿ ಫೆಲೋಶಿಪ್ ಪ್ರಶಸ್ತಿ ಹಾಗೂ ಶಂಕರ ಟಿ ವಿ ಅವರ ಯುವ ಶಕ್ತಿ ಪ್ರಶಸ್ತಿ ಇತ್ಯಾದಿಗಳನ್ನು ಪಡೆದುಕೊಂಡಿದ್ದಾರೆ.

ಸಿಂಗಿಂಗ್ ಇನ್ ಟು ದ ಫ್ಯೂಚರ್ 2.0 ನಲ್ಲಿ ಜನಪ್ರಿಯ ಸಂಗೀತಗಾರರಾದ ಅನಿಲ್ ಶ್ರೀನಿವಾಸನ್ ಅವರ ರ್ಯಾಪ್ಸೋಡಿ ಮ್ಯೂಸಿಕ್ ಫೌಂಡೇಶನ್ (ಚೆನ್ನೈ) ಮತ್ತು ಹಿಂದುಸ್ಥಾನಿ ಮ್ಯೂಸಿಕ್ ಮೇಳ (ಪುಣೆ), ವಿದುಷಿ ಅನುರಾಧಾ ಕುಬೇರ್ ಅವರ ಶಿಷ್ಯರು ಹಾಗೂ ಕಲಕತ್ತೆಯ (ಸೌರೇಂದ್ರೋ -ಸೌಮ್ಯೋಜಿತ್ ಅಕಾಡೆಮಿ) ಕಲಾವಿದರು ಭಾಗವಹಿಸಲಿದ್ದಾರೆ.ವಾಸಂತಿ ಹರಿಪ್ರಕಾಶ್, ಪ್ರಶಸ್ತಿ ವಿಜೇತ ಪತ್ರಕರ್ತೆ, ರೇಡಿಯೋ ಮತ್ತು ಟಿವಿ ತಜ್ಞೆ, ಪಿಕಲ್ ಜಾರ್ ಮೀಡಿಯಾ ಸ್ಥಾಪಕ್- ಸಿ ಈ ಓ, ಈ ಪ್ರದರ್ಶನದ ಸೂತ್ರಧಾರರಾಗಿ ಬಾಲಕಲಾವಿದರ ಸಂಗೀತವನ್ನು ಸುಂದರವಾಗಿ ಹೆಣೆದು ಪ್ರಸ್ತುತಪಡಿಸಲಿದ್ದಾರೆ.

ಶ್ರೇಷ್ಠ ಗುರುಗಳಾದ ವಿದುಷಿ ಶ್ರುತಿ ಸದೋಲಿಕರ್, ವಿದುಷಿ ರತ್ನಮಾಲಾ ಪ್ರಕಾಶ್, ಪಂಡಿತ್ ಅನೀಶ್ ಪ್ರಧಾನ್, ಪಂಡಿತ್ ಪುರ್ಬಯಾನ್ ಚಟರ್ಜಿ, ಮತ್ತು ಬೆಂಗಳೂರಿನ 'ಬೀಟ್ ಬಾಕ್ಸಿಂಗ್ ಸೆನ್ಸೇಷನ್' ವಿನೀತ್ ವಿನ್ಸೆಂಟ್ ಅವರುಗಳು ಇವನ್ನು ನಡೆಸಿಕೊಡುತ್ತಾರೆ. ಭೂಮಿಜಾ ಮತ್ತು ಐ ಎಂ ಇ ಅವರ ಔಟ್ ರೀಚ್ ಉಪಕ್ರಮಗಳ ಅಂಗವಾಗಿ ಸುಪ್ರಸಿದ್ಧ ಸಂಗೀತಗಾರರಾದ ಪಂಡಿತ್ ಜಯಚಂದ್ರ ರಾವ್ ಮತ್ತು ವಾಸು ದೀಕ್ಷಿತ್ ಅವರು ವಿವಿಧ ಶೈಕ್ಷಣಿಕ ಸಂಸ್ಥೆಗಳ ಆವರಣಗಳಲ್ಲಿ ಕಮ್ಮಟಗಳನ್ನು ನಡೆಸಿಕೊಡುತ್ತಾರೆ.

ವರ್ಷ ನಾವು ಸೃಷ್ಟಿ ಸ್ಪೆಷಲ್ ಅಕಾಡೆಮಿಯ ದಿವ್ಯಾಂಗ ಮಕ್ಕಳ ಅಭೂತಪೂರ್ವ ಕಚೇರಿಯಿಂದ ಉತ್ಸವವನ್ನು ಉದ್ಘಾಟಿಸುತ್ತಿದ್ದೇವೆ. ನಮ್ಮ ಪ್ರಧಾನ ಕಚೇರಿಗಾಗಿ ನಾವು ಯೋಚಿಸಿ, ಕಾಳಜಿವಹಿಸಿ ದೇಶದಾದ್ಯಂತ ಹುಡುಕಿ ಬಾಲ ಪ್ರತಿಭೆಗಳನ್ನು ಆರಿಸಿ ಯುವ ಪ್ರತಿಭೆಗಳ ಶ್ರೀಮಂತ ಭಂಡಾರವನ್ನು ಸಿದ್ಧಪಡಿಸಿದ್ದೇವೆ. ಈ ಯುವಪ್ರತಿಭೆಗಳ ಗುರುಗಳೂ ಕೂಡಾ ನಮ್ಮ ಆಹ್ವಾನವನ್ನು ಮನ್ನಿಸಿ ಉದಾರಮನಸ್ಸಿನಿಂದ ಆಗಮಿಸಿರುವುದಕ್ಕೆ ನಾವು ಕೃತಜ್ಞರಾಗಿದ್ದೇವೆ. ವಯೋಮಾನದ ಪರಿವೆಯಿಲ್ಲದೇ ಯುವಕರು ಮತ್ತು ಹಿರಿಯರು ಮಹಾನ್ ಗುರುಗಳಿಂದ ನೇರವಾಗಿ ಕಲಿಯಲು ಕಮ್ಮಟಗಳ ಸರಣಿ ವೇದಿಕೆಯಾಗಿದೆ. ವೈವಿಧ್ಯಮಯ ಧ್ವನಿಗಳನ್ನು ಪೋಷಿಸಿ, ಪ್ರತಿಯೊಂದೂ ಸಂಪ್ರದಾಯಕ್ಕೆ ಯೋಗ್ಯ ಮರ್ಯಾದೆಯನ್ನು ನೀಡುತ್ತಾ ಅದನ್ನು ಪರಿಶೋಧಿಸುವ ಪ್ರಯತ್ನದೆಡೆಗೆ ನಮಗಿರುವ ಬದ್ಧತೆಯನ್ನು ಈ ಉತ್ಸವ ಪ್ರತಿನಿಧಿಸುತ್ತದೆ ಎನ್ನುತ್ತಾರೆ ವಿದುಷಿ ಶುಭಾ ಮುದ್ಗಲ್, ಉತ್ಸವ ನಿರ್ದೇಶಕರು.ಪ್ರದರ್ಶನಗಳಿಗೆ ಟಿಕೆಟ್ ಹಾಗೂ ಕಮ್ಮಟಗಳಿಗೆ ನೋಂದಣಿ ಬುಕ್ ಮೈ ಶೋದಲ್ಲಿ ಲಭ್ಯವಿದೆ.

ಹೆಚ್ಚಿನ ವಿವರಗಳಿಗೆ: contact@bhoomija.org/ 9743734630.



**ಜಯಶ್ರೀ.ಬಿ.ಆರ್**

ಖ್ಯಾತ ಜ್ಯೋತಿಷಿ

ದೂರವಾಣಿ–9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ವ್ಯಾಪಾರ ವ್ಯವಹಾರಗಳಲ್ಲಿ ಅಭಿವೃದ್ಧಿ, ಕುಟುಂಬ ಸೌಖ್ಯ, ಮನಶಾಂತಿ, ಆರ್ಥಿಕ ಪರಿಸ್ಥಿತಿ ಚೇತರಿಕೆ.

**ವೃಷಭ:** ಬಂಧು ಮಿತ್ರರಲ್ಲಿ ವಿರೋಧ, ಅಧಿಕ ಖರ್ಚು, ಕುಟುಂಬದಲ್ಲಿ ತೊಂದರೆ, ಕೆಲಸಗಳಲ್ಲಿ ಪ್ರಗತಿ.

**ಮಿಥುನ:** ಹಣಕಾಸಿನ ತೊಂದರೆ, ಪರಸ್ಥಳವಾಸ, ಆರೋಗ್ಯದಲ್ಲಿ ತೊಂದರೆ, ಮಿತ್ರರಲ್ಲಿ ಕಲಹ, ಚೋರಾಗ್ನಿ ಭೀತಿ.

**ಕಟಕ:** ಯತ್ನ ಕಾರ್ಯಸಿದ್ಧಿ, ಕೃಷಿಕರಿಗೆ ಅಲ್ಪ ಲಾಭ, ಬಂಧು ಮಿತ್ರರ ಸಹಾಯ, ಆರೋಗ್ಯದ ಸಮಸ್ಯೆ, ಅಕಾಲ ಭೋಜನ.

**ಸಿಂಹ:** ಕೆಲಸ ಕಾರ್ಯಗಳಲ್ಲಿ ಜಯ, ಸಾರ್ವಜನಿಕ ಕ್ಷೇತ್ರದಲ್ಲಿ ಗೌರವ, ದ್ರವ್ಯ ಲಾಭ, ದೇವತಾ ಕಾರ್ಯ, ಅಧಿಕ ತಿರುಗಾಟ.

**ಕನ್ಯಾ:** ಅಧಿಕಾರಿಗಳಿಂದ ನಿಂದನೆ, ಧನವ್ಯಯ, ಮಾತಿನ ಮೇಲೆ ಹಿಡಿತವಿರಲಿ, ಸಾಲ ಮಾಡುವ ಸಾಧ್ಯತೆ, ವಿದ್ಯಾರ್ಥಿಗಳಲ್ಲಿ ಪ್ರಶಂಸೆ.

**ತುಲಾ:** ಕೆಲಸ ಕಾರ್ಯಗಳಲ್ಲಿ ವಿಳಂಬ, ವಿರೋಧಿಗಳಿಂದ ಕುತಂತ್ರ, ಉದ್ಯೋಗದಲ್ಲಿ ಬಡ್ತಿ, ದಾಂಪತ್ಯದಲ್ಲಿ ಪ್ರೀತಿ.

**ವೃಶ್ಚಿಕ:** ಆಪ್ತರಿಂದ ಸಹಾಯ, ವಾಹನ ಅಪಘಾತ, ಅಲ್ಪ ಆದಾಯ ಅಧಿಕ ಖರ್ಚು, ಹಿತ ಶತ್ರು ಭಾದೆ.

**ಧನಸ್ಸು:** ದೂರ ಪ್ರಯಾಣ, ಕುಲದೇವರಿಂದ ಕಾರ್ಯಸಿದ್ಧಿ, ಅಧಿಕಾರ ಪ್ರಾಪ್ತಿ, ಗೊಂದಲಮಯ ವಾತಾವರಣ.

**ಮಕರ:** ಕೆಲಸ ಕಾರ್ಯಗಳಲ್ಲಿ ಜಯ, ಮಾತಿಗೆ ಮರುಳಾಗದಿರಿ, ದುರಭ್ಯಾಸಕ್ಕೆ ಖರ್ಚು, ಸಣ್ಣ ಮಾತಿನಿಂದ ಮನಸ್ತಾಪ.

**ಕುಂಭ:** ಎಲೆಕ್ಟ್ರಾನಿಕ್ ಉಪಕರಣಗಳಿಂದ ನಷ್ಟ, ಆಲಸ್ಯ ಮನೋಭಾವ, ಪರರ ಧನಪ್ರಾಪ್ತಿ, ಅತಿಯಾದ ನಿದ್ರೆ.

**ಮೀನ:** ಪ್ರತಿಷ್ಠಿತ ಜನರ ಪರಿಚಯ, ಬಾಕಿ ವಸೂಲಿ, ಚಂಚಲ ಮನಸ್ಸು, ವಿವಾಹಕ್ಕೆ ಅಡಚಣೆ, ಪ್ರತಿಭೆಗೆ ತಕ್ಕ ಫಲ.

## ವಿಶ್ವ ಜಲ ಮಾನಿಟರಿಂಗ್ ದಿನ

ಪ್ರತಿ ವರ್ಷ, ಸುಮಾರು 150 ದೇಶಗಳು ಸೆಪ್ಟೆಂಬರ್ 18 ರಂದು ವಿಶ್ವ ಜಲ ಮಾನಿಟರಿಂಗ್ ದಿನವನ್ನು ಗೌರವಿಸಲು ಒಟ್ಟಾಗಿ ಸೇರುತ್ತವೆ. ನಾವು ಚಿಕ್ಕ ವಯಸ್ಸಿನಿಂದಲೂ ಕಲಿಯುತ್ತಿರುವಂತೆ ನೀರು, ಎಲ್ಲಾ ಜೀವಿಗಳನ್ನು ಜೀವಂತವಾಗಿ ಮತ್ತು ಉತ್ತಮವಾಗಿಡಲು ಅತ್ಯಂತ ಪ್ರಮುಖ ಮೂಲವಾಗಿದೆ. ನೀವು ದೀರ್ಘಕಾಲದವರೆಗೆ (ಸುಮಾರು ಮೂರು ವಾರಗಳು) ಆಹಾರವಿಲ್ಲದೆ ಇರಬಹುದು, ಆದರೆ ನೀವು ಅಲ್ಪಾವಧಿಗೆ (ಸುಮಾರು ಮೂರರಿಂದ ನಾಲ್ಕು ದಿನಗಳು) ಸಾಕಷ್ಟು ನೀರಿನ ಸೇವನೆಯನ್ನು ಹೊಂದಿಲ್ಲದಿದ್ದರೆ ನಿಮ್ಮ ದೇಹವು ಸ್ಥಗಿತಗೊಳ್ಳುವ ಲಕ್ಷಣಗಳನ್ನು ತೋರಿಸಲು ಪ್ರಾರಂಭಿಸುತ್ತದೆ. . ಮಾನವ ದೇಹವು 60% ರಿಂದ 70% ರಷ್ಟು ನೀರಿನಿಂದ ಮಾಡಲ್ಪಟ್ಟಿದೆ. ನೀರು ಎಷ್ಟು ಮುಖ್ಯವಾದುದು ಎಂದರೆ ಬಾಹ್ಯಾಕಾಶ ಪರಿಶೋಧನೆಯ ಬಜೆಟ್ನ ಹೆಚ್ಚಿನ ಭಾಗವು ಇತರ ಗ್ರಹಗಳಲ್ಲಿನ ನೀರಿನ ಮೂಲಗಳನ್ನು ಹುಡುಕಲು ಮಾತ್ರ ಮೀಸಲಿಡಲಾಗಿದೆ. ಭೂಮಿಯ ಪರಿಸರ ವ್ಯವಸ್ಥೆಯ ಒಂದು ದೊಡ್ಡ ಭಾಗವು ನೀರಿನಿಂದ ಕೂಡಿದೆ, ಲೆಕ್ಕವಿಲ್ಲದಷ್ಟು ಜೀವಿಗಳು ಅದರ ಮೇಲೆ ಅವಲಂಬಿತವಾಗಿವೆ. ಆದರೂ, ಜಲ ಮಾಲಿನ್ಯ ಮತ್ತು ಹವಾಮಾನ ಬದಲಾವಣೆಯಂತಹ ವಿಷಯಗಳು ನಮ್ಮ ನೀರಿನ ಮೂಲಗಳಿಗೆ ಬೆದರಿಕೆ ಹಾಕುತ್ತಿವೆ, ಅದಕ್ಕಾಗಿಯೇ ನಮ್ಮ ಸುತ್ತಲಿನ ಜಲಮೂಲಗಳನ್ನು ನಿಯಮಿತವಾಗಿ ಮೇಲ್ವಿಚಾರಣೆ ಮಾಡುವುದು ಎಂದಿಗಿಂತಲೂ ಈಗ ಹೆಚ್ಚು ಮುಖ್ಯವಾಗಿದೆ. ವಿಶ್ವ ಜಲ ಮಾನಿಟರಿಂಗ್ ದಿನವನ್ನು ಮೊದಲ ಬಾರಿಗೆ 2003 ರಲ್ಲಿ ಅಮೆರಿಕದ ಕ್ಲೀನ್ ವಾಟರ್ ಫೌಂಡೇಶನ್ (ಂಅಫಾಈ) ಅಸ್ತಿತ್ವಕ್ಕೆ ತರಲಾಯಿತು. ತಮ್ಮ ನೀರಿನ ಮೂಲಗಳನ್ನು ನಿಯಮಿತವಾಗಿ ಮೇಲ್ವಿಚಾರಣೆ ಮಾಡುವ ಮಹತ್ವದ ಬಗ್ಗೆ ನಾಗರಿಕರಲ್ಲಿ ಜಾಗೃತಿ ಮೂಡಿಸುವ ಗುರಿಯನ್ನು ಸಂಸ್ಥೆ ಹೊಂದಿದೆ. ಜಾಗತಿಕ ಔಟ್ರೀಚ್ ಕಾರ್ಯಕ್ರಮದ ದಿನಾಂಕವು ಆರಂಭದಲ್ಲಿ ಅಕ್ಟೋಬರ್ 18 ಆಗಿತ್ತು. 1972 ರ ಗ.ಖ. ಕ್ಲೀನ್ ವಾಟರ್ ಆಕ್ಟ್ ಅನ್ನು ಕಾಂಗ್ರೆಸ್ ಅಂಗೀಕರಿಸಿದ್ದಕ್ಕಾಗಿ ಇದು ಗೌರವವನ್ನು ಸಲ್ಲಿಸುತ್ತದೆ ಎಂದು ಅಕ್ಟೋಬರ್ 18 ಅನ್ನು ಆದರ್ಶವೆಂದು ಪರಿಗಣಿಸಲಾಗಿದೆ. ಆದಾಗ್ಯೂ, ಂಅಫಾಈ ಶೀಘ್ರದಲ್ಲೇ ಕೆಲವು ದೇಶಗಳು ವಿಶ್ವ ಜಲ ಮಾನಿಟರಿಂಗ್ ದಿನದಲ್ಲಿ ಭಾಗವಹಿಸಲು ಸಾಧ್ಯವಾಗುವುದಿಲ್ಲ ಎಂದು ಅರಿತುಕೊಂಡ ದೇಶಗಳಲ್ಲಿ ಜಲಮೂಲಗಳು ಅಕ್ಟೋಬರ್ನಲ್ಲಿ ಹೆಪ್ಪುಗಟ್ಟುತ್ತದೆ. ಹೀಗಾಗಿ, ಭಾಗವಹಿಸುವವರು ಮತ್ತು ಭಾಗವಹಿಸುವ ದೇಶಗಳ ಸಂಖ್ಯೆಯನ್ನು ಗರಿಷ್ಠಗೊಳಿಸಲು, ಅಧಿಕೃತ ದಿನಾಂಕವನ್ನು ಒಂದು ತಿಂಗಳು ಹಿಂದಕ್ಕೆ ಸರಿಸಲಾಗಿದೆ. ಪ್ರತಿ ವರ್ಷ ಸುಮಾರು ಒಂದು ಮಿಲಿಯನ್ ಅಥವಾ ಅದಕ್ಕಿಂತ ಹೆಚ್ಚು ಜನರು ಉಪಕ್ರಮದಲ್ಲಿ ಪಾಲ್ಗೊಳ್ಳುತ್ತಾರೆ. ನೀರಿನ ಪರೀಕ್ಷಾ ಕಿಟ್ಗಳನ್ನು ಬಳಸಿ, ಅವರು ಕರಗಿದ ಆಮ್ಲಜನಕ, ಆಮ್ಲೀಯತೆ, ತಾಪಮಾನ ಮತ್ತು ಸ್ಪಷ್ಟತೆಗಾಗಿ ನೀರನ್ನು ಪರೀಕ್ಷಿಸುತ್ತಾರೆ. ವರ್ಷಗಳಲ್ಲಿ, ವಿಶ್ವ ಜಲ ಮಾನಿಟರಿಂಗ್ ದಿನದ ಪ್ರಾಯೋಜಕರು ಸ್ಥಿರವಾಗಿ ಬದಲಾಗಿದ್ದಾರೆ. ಪ್ರಸ್ತುತ ಸಂಘಟಕರು ಇಚಿಡಿಣಣಇಛಿಠ ಇಂಟರ್ನ್ಯಾಶನಲ್ಗೆ ಸೇರಿದವರು. ಇದು ಲಾಭೋದ್ದೇಶವಿಲ್ಲದ ಪರಿಸರ ಸಂಸ್ಥೆಯಾಗಿದ್ದು, ಪ್ರಸಿದ್ಧ ಸಮುದ್ರಶಾಸ್ತ್ರಜ್ಞರಾದ ಫಿಲಿಪ್ ಕೌಸ್ಟೊ ಅವರನ್ನು ಗೌರವಿಸಲು ಸ್ಥಾಪಿಸಲಾಗಿದೆ. ದಿವಂಗತ ಕೂಸ್ಟಿಯೊ ಕುಟುಂಬವು ಫಿಲಿಪ್ ಕೌಸ್ಟಿಯೊ ಫೌಂಡೇಶನ್ ಅನ್ನು ರಚಿಸಿತು, ಆದರೆ ಕೌಸ್ಟಿಯೊ ಸೊಸೈಟಿಯೊಂದಿಗಿನ ಹೆಸರಿನ ವಿವಾದಗಳ ನಂತರ, ಹೆಸರನ್ನು ಅರ್ಥ್ ಎಕೋ ಇಂಟರ್ನ್ಯಾಷನಲ್ ಎಂದು ಬದಲಾಯಿಸಲಾಯಿತು.



## ಜಿಂಬಾಬ್ವೆಯಲ್ಲಿ 200 ಆನೆಗಳ ಹತ್ಯೆ

**ಹರಾರೆ:** ನಮೀಬಿಯಾದಲ್ಲಿ ಬರಗಾಲದ ಹಿನ್ನೆಲೆಯಲ್ಲಿ ವನ್ಯಜೀವಿಗಳ ಹತ್ಯೆ ಆರಂಭವಾಗಿರುವಂತೆಯೇ, ಜಿಂಬಾಬ್ವೆಯಲ್ಲೂ ಜನರ ಹಸಿವು ನೀಗಿಸಲು 200 ಆನೆಗಳನ್ನು ಕೊಲ್ಲಲು ಸರ್ಕಾರ ನಿರ್ಧರಿಸಿದೆ.

ಹತ್ಯೆ ಬಳಿಕ ಮಾಂಸವನ್ನು ಜನರಿಗೆ ವಿತರಿಸಲಾಗುತ್ತದೆ. ಇದೊಂದು ಕಠಿಣ ನಿರ್ಧಾರ. ಆದರೂ ಅನಿವಾರ್ಯ ಎಂದು ಸರ್ಕಾರ ಪ್ರಕಟಿಸಿದೆ.

ದೇಶದ ಮೃಗಾಲಯಗಳಲ್ಲಿ 84,000 ಆನೆಗಳು ಇವೆ. ಆಹಾರಕ್ಕಾಗಿ ಆನೆಗಳನ್ನು ಕೊಂದ ಬಳಿಕ ಅವುಗಳ ಸಂಖ್ಯೆಯಲ್ಲಿ ಇಳಿಮುಖವಾಗಲಿದೆ.

## ಟಿಬೆಟ್ ಪ್ರತ್ಯೇಕತಾವಾದಿಗಳ ವಿರುದ್ಧ ಕಠಿಣ ಕ್ರಮಕ್ಕೆ ಚೀನಾ ಸೂಚನೆ



**ಬೀಜಿಂಗ್:** ಕಳೆದ ವಾರ ಟಿಬೆಟ್ಗೆ ಭೇಟಿ ನೀಡಿದ್ದ ಚೀನಾದ ಉನ್ನತ ಭದ್ರತಾ ಅಧಿಕಾರಿ ಟಿಬೆಟ್ನಲ್ಲಿ ಪ್ರತ್ಯೇಕತಾವಾದಿಗಳ ವಿರುದ್ಧ ದೃಢ ನಿಗ್ರಹ ಕ್ರಮ ಕೈಗೊಳ್ಳುವಂತೆ ಸ್ಥಳೀಯ ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ವರದಿಯಾಗಿದೆ.

ಕಳೆದ ವಾರ ಚೀನಾದ ಆಡಳಿತಾರೂಢ ಕಮ್ಯುನಿಸ್ಟ್ ಪಕ್ಷದ ಉನ್ನತ ಭದ್ರತಾ ಸಂಸ್ಥೆ 'ದಿ ಸೆಂಟ್ರಲ್ ಪೊಲಿಟಿಕಲ್ ಆಯಂಡ್ ಲೀಗಲ್ ಅಫೇರ್ಸ್ ಕಮಿಷನ್'ನ ಮುಖ್ಯಸ್ಥ ಚೆನ್ ವೆಂಕ್ವಿಂಗ್ ಟಿಬೆಟಿಯನ್ ಸ್ವಾಯತ್ತ ಪ್ರದೇಶಗಳು ಹಾಗೂ ಯುನಾನ್, ಸಿಚುವಾನ್, ಗಾನ್ಸು ಮತ್ತು ಕ್ವಿಂಘಾಯ್ನಾದ್ಯಂತ 10 ಪ್ರಾಂತಗಳಿಗೆ ಭೇಟಿ ನೀಡಿ ಭದ್ರತೆಯನ್ನು ಪರಿಶೀಲಿಸಿದರು.

ಪ್ರತ್ಯೇಕತಾವಾದಿಗಳ ವಿರುದ್ಧ ದೃಢ ನಿಗ್ರಹ ಕ್ರಮಗಳಿಗೆ ಕರೆ ನೀಡಿದ ಅವರು, ಸ್ಥಿರತೆ ಕಾಪಾಡಿಕೊಳ್ಳಲು ಮತ್ತು ಸ್ವಾತಂತ್ರ್ಯ ಚಟುವಟಿಕೆಗಳ ಬಗ್ಗೆ ಗಮನ ಹರಿಸುವಂತೆ ಸ್ಥಳೀಯ ಅಧಿಕಾರಿಗಳಿಗೆ ಸೂಚಿಸಿರುವುದಾಗಿ 'ಚೀನಾ ಮಾರ್ನಿಂಗ್ ಪೋಸ್ಟ್' ಸೋಮವಾರ ವರದಿ ಮಾಡಿದೆ.

ಅಕ್ಟೋಬರ್ 1ರಂದು 'ಪೀಪಲ್ಸ್ ರಿಪಬ್ಲಿಕ್'ನ 75ನೇ ವರ್ಷಾಚರಣೆಯ ಹಿನ್ನೆಲೆಯಲ್ಲಿ ಟಿಬೆಟ್ನಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗುತ್ತಿದೆ. ಚೀನಾದ ಉನ್ನತ ನ್ಯಾಯಾಧೀಶರು ಮತ್ತು ನ್ಯಾಯಾಂಗ ಅಧಿಕಾರಿಗಳೂ ಟಿಬೆಟ್ಗೆ ಭೇಟಿ ನೀಡಿ ಭದ್ರತೆಯನ್ನು ಪರಿಶೀಲಿಸಿದ್ದಾರೆ.

ಕಳೆದ ವಾರ ಟಿಬೆಟ್ನ ನ್ಯಾಯಾಲಯಕ್ಕೆ ಭೇಟಿ ನೀಡಿದ್ದ ಚೀನಾದ ಸುಪ್ರೀಂಕೋರ್ಟ್ ಅಧ್ಯಕ್ಷ ಝೂಂಗ್ ಜುನ್ ' ಹಿಂಸಾತ್ಮಕ ಭಯೋತ್ಪಾದನೆ, ಜನಾಂಗೀಯ ಪ್ರತ್ಯೇಕತಾವಾದ ಮತ್ತು ಇತರ ಗಂಭೀರ ಕ್ರಿಮಿನಲ್ ಅಪರಾಧಗಳ ಬಗ್ಗೆ ಸೂಕ್ತ ಗಮನ ವಹಿಸಿ ಕಠಿಣ ಶಿಕ್ಷೆ ವಿಧಿಸುವುದು ಅಗತ್ಯವಾಗಿದೆ ಎಂದಿದ್ದರು.

## ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣೆ

**ಜಮ್ಮು-ಕಾಶ್ಮೀರ:** ಇಂದು ಜಮ್ಮು-ಕಾಶ್ಮೀರದ 7 ಜಿಲ್ಲೆಗಳಲ್ಲಿ ವಿಧಾನಸಭಾ ಚುನಾವಣೆಗೆ ಮೊದಲ ಹಂತದ ಮತದಾನ ಆರಂಭಗೊಂಡಿದೆ. ಪಿರ್ ಪಂಜಾಲ್ ಪರ್ವತ ಶ್ರೇಣಿಯ ಎರಡೂ ಬದಿಯಲ್ಲಿರುವ ಜಮ್ಮು ಮತ್ತು ಕಾಶ್ಮೀರದ ಏಳು ಜಿಲ್ಲೆಗಳು 10 ವರ್ಷಗಳಲ್ಲಿ ಮೊದಲ ಬಾರಿಗೆ ವಿಧಾನಸಭಾ ಚುನಾವಣೆಯಲ್ಲಿ ಮತ ಚಲಾಯಿಸಲಿವೆ. ಜಮ್ಮು ಪ್ರದೇಶದ ಮೂರು ಜಿಲ್ಲೆಗಳಲ್ಲಿ ಎಂಟು ಮತ್ತು ಕಾಶ್ಮೀರ ಕಣಿವೆಯ ನಾಲ್ಕು ಜಿಲ್ಲೆಗಳಲ್ಲಿ 16 ಸೇರಿದಂತೆ 24 ವಿಧಾನಸಭಾ ಕ್ಷೇತ್ರಗಳಿಗೆ ಸ್ಪರ್ಧಿಸುತ್ತಿರುವ 90 ಸ್ವತಂತ್ರರು ಸೇರಿದಂತೆ 219 ಅಭ್ಯರ್ಥಿಗಳ ಭವಿಷ್ಯವನ್ನು 23 ಲಕ್ಷಕ್ಕೂ ಹೆಚ್ಚು ಮತದಾರರು ನಿರ್ಧರಿಸಲಿದ್ದಾರೆ. 2019 ರ ಆಗಸ್ಟ್ನಲ್ಲಿ 370 ನೇ ವಿಧಿಯನ್ನು ರದ್ದುಪಡಿಸಿದ ನಂತರ ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆಯುತ್ತಿರುವ ಮೊದಲ ವಿಧಾನಸಭಾ ಚುನಾವಣೆ ಇದಾಗಿದೆ. ಮೊದಲ ಹಂತದಲ್ಲಿ 11,76,462 ಪುರುಷರು, 11,51,058 ಮಹಿಳೆಯರು ಮತ್ತು 60 ತೃತೀಯ ಲಿಂಗಿ ಮತದಾರರು ಸೇರಿದಂತೆ ಒಟ್ಟು 23,27,580 ಮತದಾರರು ಮತ ಚಲಾಯಿಸಲು ಅರ್ಹರಾಗಿದ್ದಾರೆ ಎಂದು ಚುನಾವಣಾ ಆಯೋಗ ತಿಳಿಸಿದೆ.



# ಸುಭದ್ರಾ ಯೋಜನೆಗೆ ಮೋದಿ ಚಾಲನೆ



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಒಡಿಶಾ ಸರ್ಕಾರದ ಪ್ರಮುಖ ಯೋಜನೆಗಳಲ್ಲಿ ಒಂದಾದ ಸುಭದ್ರಾ ಯೋಜನೆಗೆ ಚಾಲನೆ ನೀಡಿದ್ದಾರೆ. ಒಡಿಶಾ ಸರ್ಕಾರದ ಮಹತ್ವದ ಯೋಜನೆ ಇದಾಗಿದ್ದು, ಪ್ರತಿ ವರ್ಷ 21 ರಿಂದ 60 ವರ್ಷ ವಯಸ್ಸಿನ ಅರ್ಹ ಮಹಿಳಾ ಫಲಾನುಭವಿಗಳ ರಾಜ್ಯ ಖಾತೆಗೆ 10,000 ರೂ.ನೀಡಲಾಗುತ್ತದೆ.

ಒಡಿಶಾದ ಮಹಿಳೆಯರು ಮಾತ್ರ ಈ ಯೋಜನೆಯ ಲಾಭವನ್ನು ಪಡೆಯಲಿದ್ದಾರೆ. ಆರ್ಥಿಕವಾಗಿ ದುರ್ಬಲರಾಗಿರುವ ಮಹಿಳೆಯರು ಈ ಯೋಜನೆಯ ಲಾಭ ಪಡೆಯಬಹುದು. ಸರ್ಕಾರಿ ಉದ್ಯೋಗ ಮಾಡುವ ಮತ್ತು ಆದಾಯ ತೆರಿಗೆ ಪಾವತಿಸುವ ಮಹಿಳೆಯರು ಈ ಯೋಜನೆಗೆ ಒಳಪಡುವುದಿಲ್ಲ. ಮಹಿಳೆಯು ಯಾವುದೇ ಇತರ ಸರ್ಕಾರಿ ಯೋಜನೆಗಳಿಂದ ಪ್ರತಿ ವರ್ಷ 15,000 ರೂ. ಅಥವಾ ಅದಕ್ಕಿಂತ ಹೆಚ್ಚಿನ ಹಣವನ್ನು ಪಡೆದರೆ ಈ ಯೋಜನೆ ಅನ್ವಯವಾಗುವುದಿಲ್ಲ.

**ಎಷ್ಟು ಮಹಿಳೆಯರಿಗೆ ಸಿಗಲಿದೆ ಇದರ ಲಾಭ?:** ಒಡಿಶಾ ವಿಧಾನಸಭೆ ಚುನಾವಣೆಗೆ ಬಿಜೆಪಿ ತನ್ನ ಪ್ರಣಾಳಿಕೆಯಲ್ಲಿ ಈ ಯೋಜನೆಯನ್ನು ಪ್ರಸ್ತಾಪಿಸಿತ್ತು. ಒಂದು ಕೋಟಿಗಿಂತಲೂ ಅಧಿಕ ಮಹಿಳೆಯರು ಈ ಯೋಜನೆಯಿಂದ ಪ್ರಯೋಜನ ಪಡೆಯಲಿದ್ದಾರೆ. ಈ ಯೋಜನೆಯಡಿ ರಾಜ್ಯ ಸರ್ಕಾರವು ಮಹಿಳೆಯರಿಗೆ ಎರಡು ಕಂತುಗಳಲ್ಲಿ ವರ್ಷಕ್ಕೆ ಒಟ್ಟು ಹತ್ತು ಸಾವಿರ ರೂ. ನೀಡುತ್ತದೆ.

### ಮೋದಿಗೆ ಪತ್ರ ಬರೆದ ಖರ್ಗೆ



**ನವದೆಹಲಿ:** ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯನ್ನು ಓಂ ಸದಸ್ಯರು ಟೀಕಿಸಿದ ರೀತಿಯನ್ನು ಖಂಡಿಸಿ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದಿದ್ದಾರೆ. ಎನ್ ಡಿ ಎ ನಾಯಕರ ಟೀಕೆಗಳ ಸ್ವರೂಪದ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿರುವ ಮಲ್ಲಿಕಾರ್ಜುನ ಖರ್ಗೆ ಕೇಂದ್ರ ಸಚಿವ ರವನೀತ್ ಬಿಟ್ಟು ರಾಹುಲ್ ಗಾಂಧಿಯನ್ನು ನಂಬರ್ ಒನ್ ಭಯೋತ್ಪಾದಕ ಎಂದು ಟೀಕಿಸಿದ್ದನ್ನು ತೀವ್ರವಾಗಿ ಖಂಡಿಸಿದ್ದಾರೆ ಮತ್ತು ಬಿಜೆಪಿ ಮಾಜಿ ಶಾಸಕ ರಾಹುಲ್ ಗಾಂಧಿಗೆ ಜೀವ ಬೆದರಿಕೆ ಹಾಕಿದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಈ ರೀತಿಯ ಟೀಕೆಗಳು ಭಾರತದ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಆಶಯಗಳಿಗೆ ಮಾರಕವಾಗಿದ್ದು ಈ ಬಗ್ಗೆ ಗಂಭೀರವಾಗಿ ಚರ್ಚಿಸಬೇಕಾಗಿದೆ ಎಂದಿರುವ ಖರ್ಗೆ ಈ ರೀತಿಯ ಟೀಕೆಗಳನ್ನು ಎದುರಿಸಲು ಮಹಾತ್ಮ ಗಾಂಧಿ ಇಂದಿರಾಗಾಂಧಿ ರಾಜೀವ್ ಗಾಂಧಿ ದೇಶಕ್ಕಾಗಿ ಪ್ರಾಣತ್ಯಾಗ ಮಾಡಬೇಕಾಯಿತೆ ಎಂದು ಕಟುವಾಗಿ ಬಿಜೆಪಿ ನಾಯಕರ ನಡೆಯನ್ನು ಖಂಡಿಸಿದ್ದಾರೆ.

### ಮೋದಿಯನ್ನು ಭೇಟಿಯಾಗುತ್ತೇನೆ: ಡೊನಾಲ್ಡ್ ಟ್ರಂಪ್

**ನವದೆಹಲಿ:** ಮುಂದಿನ ವಾರ ಅಮೆರಿಕಕ್ಕೆ ಭೇಟಿ ನೀಡುವ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾಗುವುದಾಗಿ ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಹೇಳಿದ್ದಾರೆ.

ರಿಪಬ್ಲಿಕನ್ ಅಧ್ಯಕ್ಷೀಯ ಅಭ್ಯರ್ಥಿ ಮಿಚಿಗನ್ ನಲ್ಲಿ ಪ್ರಚಾರ ಮಾಡುವಾಗ ಈ ಘೋಷಣೆ ಮಾಡಿದ್ದಾರೆ.

ಪ್ರಧಾನಿ ಮೋದಿ ಅದ್ಭುತ ಎಂದು ಟ್ರಂಪ್ ಹೇಳಿದ್ದಾರೆ. ಅವರು ಮುಂದಿನ ವಾರ ನನ್ನನ್ನು ಭೇಟಿಯಾಗಲು ಬರಲಿದ್ದಾರೆ'' ಎಂದು ಟ್ರಂಪ್ ಜನಸಮೂಹಕ್ಕೆ ತಿಳಿಸಿದರು ಆದರೆ ಅವರ ಭೇಟಿಯ ಹೆಚ್ಚಿನ ವಿವರಗಳನ್ನು ನೀಡಿಲ್ಲ.

ಪ್ರಧಾನಿ ಮೋದಿ ಸೆಪ್ಟೆಂಬರ್ 21 ರಿಂದ 23 ರವರೆಗೆ ಯುನೈಟೆಡ್ ಸ್ಟೇಟ್ಸ್ಗೆ ಭೇಟಿ ನೀಡಲಿದ್ದು, ಈ ಸಮಯದಲ್ಲಿ ಅವರು ಕ್ವಾಡ್ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ ಮತ್ತು ನ್ಯೂಯಾರ್ಕ್ನಲ್ಲಿ ನಡೆಯಲಿರುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ 'ಭವಿಷ್ಯದ ಶೃಂಗಸಭೆ' ಉದ್ದೇಶಿಸಿ ಮಾತನಾಡಲಿದ್ದಾರೆ.



ಇದು ಯುಎಸ್ ಅಧ್ಯಕ್ಷ ಜೋ ಬೈಡನ್ ಆತಿಥ್ಯ ವಹಿಸಿರುವ ಡೆಲಾವೇರ್ನ ವಿಲ್ಮಿಂಗ್ಟನ್ನಲ್ಲಿ ನಡೆಯಲಿರುವ ನಾಲ್ಕನೇ ಕ್ವಾಡ್ ನಾಯಕರ ಶೃಂಗಸಭೆಯಾಗಿದೆ. ಅವರು ಭಾನುವಾರ ನ್ಯೂಯಾರ್ಕ್ ನಲ್ಲಿ ಭಾರತೀಯ ಸಮುದಾಯದ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

### ಕ್ವಾಡ್ ಶೃಂಗಸಭೆಗೆ ಮೋದಿಯನ್ನು ಆಹ್ವಾನಿಸಿದ ಜೋ ಬಿಡೆನ್

**ಅಮೆರಿಕ:** ಭಾರತದ ಪ್ರಧಾನಿ ನರೇಂದ್ರ ಮೋದಿ ಸೆಪ್ಟೆಂಬರ್ 21 ರಿಂದ 23 ರವರೆಗೆ ಕ್ವಾಡ್ ಶೃಂಗಸಭೆಯಲ್ಲಿ ಭಾಗವಹಿಸುವ ಸಲುವಾಗಿ ಅಮೆರಿಕಕ್ಕೆ ಭೇಟಿ ನೀಡಲಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಮಂಗಳವಾರ ತಿಳಿಸಿದೆ. ಈ ಪ್ರವಾಸದ ಸಮಯದಲ್ಲಿ, ಪ್ರಧಾನಿ ಮೋದಿ ಯುಎಸ್ ಅಧ್ಯಕ್ಷ ಜೋ ಬಿಡೆನ್ ಆಯೋಜಿಸಿರುವ ಕ್ವಾಡ್ ಶೃಂಗಸಭೆಯಲ್ಲಿ ಇತರ ವಿಶ್ವ ನಾಯಕರ ಜೊತೆಗೆ ಭಾಗಿಯಾಗಲಿದ್ದಾರೆ. ಇನ್ನುಳಿದಂತೆ ಶೃಂಗಸಭೆಯಲ್ಲಿ ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಮತ್ತು ಜಪಾನಿನ ಪ್ರಧಾನಿ ಫ್ಯೂಮಿಯೊ ಕಿಶಿಡಾ ಕೂಡ ಭಾಗಿಯಾಗಲಿದ್ದು ಡೆಲವೇರ್ನ ವಿಲ್ಮಿಂಗ್ಟನ್ನಲ್ಲಿ ಈ ಶೃಂಗ ಸಭೆ ನಡೆಯಲಿದೆ. ಈ ಶೃಂಗಸಭೆಯಲ್ಲಿ ಭಾಗವಹಿಸಲಿರುವ ನಮೋ, ಭಾರತೀಯ ಸಮುದಾಯದ ಕಾರ್ಯಕ್ರಮವನ್ನು ಉದ್ದೇಶಿಸಿ ಮತ್ತು ಜಾಗತಿಕ ನಾಯಕರೊಂದಿಗೆ ಚರ್ಚೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.




## ಅ.1ರವರೆಗೆ 'ಬುಲ್ಡೋಜರ್ ಕಾರ್ಯಾಚರಣೆ'ಗೆ ಸುಪ್ರೀಂ ತಡೆ

**ನವದೆಹಲಿ:** ದೇಶದಲ್ಲಿ ಅಕ್ಟೋಬರ್ 1 ರ ವರೆಗೆ ಬುಲ್ಡೋಜರ್ ಕಾರ್ಯಾಚರಣೆಗೆ (ಬುಲ್ಡೋಜರ್ ನ್ಯಾಯ) ಸುಪ್ರೀಂ ಕೋರ್ಟ್ ತಡೆ ನೀಡಿದೆ. ಮುಂದಿನ ವಾದಗಳನ್ನು ಆಲಿಸುವ ವರೆಗೆ ದೇಶದ ಯಾವುದೇ ಸ್ಥಳದಲ್ಲಿ ಖಾಸಗಿ ಆಸ್ತಿಯ ವಿರುದ್ಧ ಅನಧಿಕೃತ ಬುಲ್ಡೋಜರ್ ಕ್ರಮ ಬೇಡ ಎಂದು ಕೋರ್ಟ್ ಸೂಚಿಸಿದೆ.ನ್ಯಾಯಮೂರ್ತಿ ಬಿ.ಆರ್. ಗವಾಯಿ ಮತ್ತು ಕೆ.ವಿ.ವಿಶ್ವನಾಥನ್ ಅವರಿದ್ದ ಪೀಠ ವಿಚಾರಣೆ ನಡೆಸಿತು. 'ಬುಲ್ಡೋಜರ್ ಕಾರ್ಯಾಚರಣೆ'ಯು ಸರಿಯಾದ ಪ್ರಕ್ರಿಯೆಗಳ ನಂತರ ನೆಲಸಮಕ್ಕೆ ಮಂಜೂರು ಮಾಡುವಂತಹ ಕ್ರಮಗಳ ಮೇಲೆ ಪರಿಣಾಮ ಬೀರುತ್ತದೆ. ಮುಂದಿನ ವಿಚಾರಣೆಯ ತನಕ ನಿಮ್ಮ ಕೈಗಳನ್ನು ನಿಯಂತ್ರಿಸಿ. ಇದರಿಂದ ಸ್ವರ್ಗವೇ ಧರೆಗೆ ಬೀಳುವುದಿಲ್ಲ ಎಂದು ನ್ಯಾಯಾಲಯ ಚಾಟಿ ಬೀಸಿದೆ. ಸರ್ಕಾರದ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಾದಿಸಿದರು. ಬುಲ್ಡೋಜರ್ ಕಾರ್ಯಾಚರಣೆ ಕ್ರಮವನ್ನು ನ್ಯಾಯಾಲಯ ಗಂಭೀರವಾಗಿ ಪರಿಗಣಿಸಿದೆ. ಈ ಕ್ರಮ ಅದ್ಭುತ ಎಂದು ವೈಭವೀಕರಿಸುವವರ ವಿರುದ್ಧ ಕೋರ್ಟ್ ಎಚ್ಚರಿಕೆ ಸಂದೇಶ ರವಾನಿಸಿದೆ. ನ್ಯಾಯಾಲಯದ ಅನುಮತಿ ಇಲ್ಲದೇ ಮುಂದಿನ ದಿನಾಂಕದ ವರೆಗೆ ಯಾವುದೇ ಕಾರ್ಯಾಚರಣೆ ನಡೆಸದಂತೆ ಸೂಚಿಸಿದೆ. ಇದೇ ವೇಳೆ, ಕ್ರಿಮಿನಲ್ ಪ್ರಕರಣಗಳಲ್ಲಿ ಆರೋಪಿ ಅಥವಾ ಶಿಕ್ಷೆಗೊಳಗಾದ ವ್ಯಕ್ತಿಗಳಿಗೆ ಸೇರಿದ ಮನೆಗಳು ಮತ್ತು ವಾಣಿಜ್ಯ ಆಸ್ತಿಗಳ ಬುಲ್ಡೋಜಿಂಗ್ ವಿರುದ್ಧದ ಅರ್ಜಿಗಳನ್ನು ನ್ಯಾಯಾಲಯ ಆಲಿಸಿತು. ರಸ್ತೆಗಳು, ರೈಲ್ವೆ ಹಳಿಗಳು ಮತ್ತು ಜಲಮೂಲಗಳಂತಹ ಸಾರ್ವಜನಿಕ ಸ್ಥಳಗಳಲ್ಲಿನ ಅತಿಕ್ರಮಣಗಳನ್ನು ತೆರವುಗೊಳಿಸಲು ಈ ಆದೇಶ ಅನ್ವಯಿಸುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

## ಲೆಬನಾನ್‌ನಲ್ಲಿ ಸ್ಫೋಟ: 8 ಮಂದಿ ಬಲಿ

**ಬೈರುತ್:** ಲೆಬನಾನ್ ಮೂಲದ ಉಗ್ರಗಾಮಿ ಗುಂಪು ಹೆಜ್ಬುಲಾದೊಂದಿಗೆ ಸಂಪರ್ಕ ಹೊಂದಿದ್ದ ಸಂವಹನ ವಾಹಕ 'ಪೇಜರ್'ಗಳು ಸ್ಫೋಟಗೊಂಡ ಪರಿಣಾಮ ಕನಿಷ್ಠ 8 ಮಂದಿ ಮೃತಪಟ್ಟಿದ್ದು, ಸುಮಾರು 2,700ಕ್ಕೂ ಅಧಿಕ ಮಂದಿ ಗಾಯಗೊಂಡಿರುವ ಘಟನೆ ವರದಿಯಾಗಿದೆ. ಈ ಘಟನೆಯಲ್ಲಿ ಲೆಬನಾನ್ ಪರ ಹೋರಾಟಗಾರರು ಮತ್ತು ವೈದ್ಯರು ಗಂಭೀರವಾಗಿ ಗಾಯಗೊಂಡಿದ್ದು, ಅವರು ಸಂವಹನ ಮಾಡಲು ಬಳಸುತ್ತಿದ್ದ ಪೇಜರ್ಗಳು ಇದ್ದಕ್ಕಿದ್ದಂತೆ ಸ್ಫೋಟಗೊಂಡಿವೆ. ಇಸ್ರೇಲ್ ಮತ್ತಿ ಹಮಾಸ್ ನಡುವೆ ನಡೆಯುತ್ತಿರುವ ಯುದ್ಧವು ಭುಗಿಲೆದ್ದ ನಂತರ ನಡೆದ ಅತಿದೊಡ್ಡ 'ಭದ್ರತಾ ಉಲ್ಲಂಘನೆ' ಇದು ಎಂದು ಸುದ್ದಿ ಸಂಸ್ಥೆ ರಾಯಿಟರ್ಸ್ ವರದಿ ಮಾಡಿದೆ. ಅತ್ಯಾಧುನಿಕ ತಂತ್ರಜ್ಞಾನದ ಬಳಕೆಯ ಮೂಲಕ ಪೇಜರ್ಗಳ ಸ್ಫೋಟ ಮಾಡಲಾಗಿದ್ದು, ಸ್ಫೋಟ ನಡೆದ ತಕ್ಷಣ ನೂರಾರು ಮಂದಿ ಗಾಯಗೊಂಡಿದ್ದಾರೆ. ನಂತರ ಗಾಯಗೊಂಡ ಜನರನ್ನು ರಾಜಧಾನಿ ಬೈರುತ್ನ ದಕ್ಷಿಣ ಉಪನಗರಗಳ ಮೂಲಕ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದು ವರದಿ ಮಾಡಿದೆ.




## ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಅತಿಶಿ ಮರ್ಲೆನಾ ಆಯ್ಕೆ ಅಂತಿಮ!



**ದೆಹಲಿ:** ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ರಾಜೀನಾಮೆ ಘೋಷಿಸಿದ್ದಾರೆ. ಈ ಹಿನ್ನಲೆ ನೂತನ ಸಿಎಂ ಆಗಿ ಆಪ್ ನಾಯಕಿ ಅತಿಶಿ ಮರ್ಲೆನಾ ಮಾಡಲಾಗಿದೆ. ಇನ್ನೇನು ಕೆಲವೇ ಕ್ಷಣಗಳಲ್ಲಿ ಲೆಫ್ಟಿನೆಂಟ್ ಗವರ್ನರ್ ವಿಕೆ ಸಕ್ಸೇನಾ ಭೇಟಿಯಾಗಿ ಅರವಿಂದ್ ಕೇಜಿವಾಲ್ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದಾರೆ.

ಸಿಎಂ ಸ್ಥಾನದಿಂದ ಕೇಬ್ರಿವಾಲ್ ಅಧಿಕೃತವಾಗಿ ಹಿಂದೆ ಸರಿಯುವ ನಿರ್ಧಾರ ಘೋಷಿಸಿದ ನಂತರ, ಆಪ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಈ ನಿರ್ದಾರ ಕೈಗೊಳ್ಳಲಾಗಿದೆ. ದೆಹಲಿಯ ಕಲ್ಕಾಜಿ ಕ್ಷೇತ್ರದ ಶಾಸಕಿಯಾಗಿರುವ ಅತಿಶಿ, ದೆಹಲಿಯ ಮುಂದಿನ ಸಿಎಂ ಎಂಬ ಮಾತು ಕಳೆದ ಎರಡು ದಿನಗಳಿಂದ ಕೇಳಿಬಂದಿತ್ತು. ಇದೀಗ ಅತಿಶಿ ಅವರನ್ನೇ ಸಿಎಂ ಆಗಿ ಆಯ್ಕೆ ಮಾಡಲಾಗಿದೆ.

## ತುರ್ತು ಸಂದರ್ಭದಲ್ಲಿ ಪಿಎಫ್ ಹಣ ಹಿಂಪಡೆಯುವ ಮಿತಿ ಹೆಚ್ಚಳ



**ದೆಹಲಿ:** ಉದ್ಯೋಗಿಗಳಿಗೆ ನೆರವಾಗಲು ಕಾರ್ಮಿಕ ಇಲಾಖೆ ಆಗಾಗ್ಗೆ ತನ್ನ ನೀತಿ ನಿಯಮಗಳಲ್ಲಿ ಬದಲಾವಣೆ ತಂದಿದ್ದು ಇದೀಗ ಮತ್ತೊಂದು ಮಹತ್ವದ ಘೋಷಣೆ ಮಾಡಿದೆ. ಉದ್ಯೋಗಿಗಳ ಭವಿಷ್ಯ ನಿಧಿ ಸಂಸ್ಥೆಯ ಚಂದಾದಾರರು, ಸರ್ಕಾರಿ ನಿವೃತ್ತಿ ಉಳಿತಾಯ ವ್ಯವಸ್ಥಾಪಕರು ಈಗ ತಮ್ಮ ಖಾತೆಗಳಿಂದ ವೈಯಕ್ತಿಕ ಹಣಕಾಸಿನ ಅಗತ್ಯಗಳಿಗಾಗಿ 1 ಲಕ್ಷ ರೂಪಾಯಿವರೆಗೆ ಖಾತೆಯಿಂದ ಒಮ್ಮೆಲೇ ಹಿಂಪಡೆಯಬಹುದಾಗಿದೆ.

ಈ ಬಗ್ಗೆ ಕೇಂದ್ರ ಕಾರ್ಮಿಕ ಸಚಿವ ಮನ್ಸುಖ್ ಮಾಂಡವಿಯಾ ಘೋಷಿಸಿದ್ದಾರೆ. ಇದನ್ನು ಮೊದಲು 50,000 ರೂಪಾಯಿಗೆ ಮಿತಿಗೊಳಿಸಲಾಗಿತ್ತು.

ಕಾರ್ಮಿಕ ಸಚಿವಾಲಯವು ಹೊಸ ಡಿಜಿಟಲ್ ಆರ್ಕಿಟೆಕ್ಚರ್ ಸೇರಿದಂತೆ ಇಪಿಎಫ್ಒ ಕಾರ್ಯಾಚರಣೆಗಳಲ್ಲಿ ಹಲವಾರು ಬದಲಾವಣೆಗಳನ್ನು ಪರಿಚಯಿಸಿದೆ, ಜೊತೆಗೆ ಉದ್ಯೋಗಿಗಳು/ಕಾರ್ಮಿಕರು ಅನಾನುಕೂಲತೆಗಳನ್ನು ಎದುರಿಸದಂತೆ ಅವರಿಗೆ ಸ್ಪಂದಿಸುವಂತೆ ಮಾಡಲು ನಿಯಮಾವಳಿಗಳನ್ನು ಪರಿಚಯಿಸಿದೆ ಎಂದು ಸಚಿವರು ಹೇಳಿದರು. ಹೊಸ ಉದ್ಯೋಗಿಗಳು ಮತ್ತು ಪ್ರಸ್ತುತ ತಮ್ಮ ಉದ್ಯೋಗದಲ್ಲಿ ಆರು ತಿಂಗಳುಗಳನ್ನು ಪೂರ್ಣಗೊಳಿಸದ ಉದ್ಯೋಗಿಗಳು ಸಹ ಈಗ ಮೊತ್ತವನ್ನು ಹಿಂಪಡೆಯಲು ಅರ್ಹರಾಗಿದ್ದಾರೆ. ಈ ಮುನ್ನ ಅವರಿಗೆ ಇಂತಹ ಅವಕಾಶವಿರಲಿಲ್ಲ. ''ಮದುವೆ ಮತ್ತು ವೈದ್ಯಕೀಯ ಚಿಕಿತ್ಸೆ ಇತ್ಯಾದಿಗಳಂತಹ ವೆಚ್ಚಕ್ಕಾಗಿ ಜನರು ಸಾಮಾನ್ಯವಾಗಿ ತಮ್ಮ ಇಪಿಎಫ್ಒ ಉಳಿತಾಯದಲ್ಲಿ ಹಣ ಹಿಂಪಡೆಯುತ್ತಾರೆ. ನಾವು ಒಂದು ಬಾರಿಗೆ 1 ಲಕ್ಷ ರೂ.ಗೆ ಹಿಂಪಡೆಯುವ ಮಿತಿಯನ್ನು ಹೆಚ್ಚಿಸಿದ್ದೇವೆ'' ಎಂದು ಕೇಂದ್ರ ಸರ್ಕಾರದ 100 ದಿನಗಳ ಸಂಭ್ರಮಾಚರಣೆಯಲ್ಲಿ ಸಂದರ್ಭದಲ್ಲಿ ಸಚಿವ ಮನ್ಸುಖ್ ಮಾಂಡವಿಯಾ ಹೇಳಿದರು.

## ಸಿಖ್‌ರ ಅವಹೇಳನ ಆರೋಪ: ಚಂಡೀಗಢ ಕೋರ್ಟ್‌ನಿಂದ ಕಂಗನಾಗೆ ಎಮರ್ಜೆನ್ಸಿ ನೋಟಿಸ್!

**ಚಂಡೀಗಢ:** ಬಾಲಿವುಡ್ ನಟಿ ಹಾಗೂ ಸಂಸದೆ ಕಂಗನಾ ರಣಾವತ್ ಅವರು ಸದ್ಯ ಟೆನ್ಶನ್‌ನಲ್ಲಿದ್ದಾರೆ. ಭಾರತದ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರಿಗೆ ಸಂಬಂಧಿಸಿದ 'ಎಮರ್ಜೆನ್ಸಿ' ಸಿನಿಮಾವನ್ನು ನಟಿ ಕಂಗನಾ ಅವರು ನಿರ್ದೇಶಿಸಿ, ನಿರ್ಮಾಣ ಮಾಡಿದ್ದಾರೆ. ಜೊತೆಗೆ ಇದರಲ್ಲಿ ಇಂದಿರಾ ಗಾಂಧಿ ಪಾತ್ರವನ್ನು ಕೂಡ ಅವರೇ ನಿಭಾಯಿಸಿದ್ದಾರೆ. ಆದರೆ ಅಂದುಕೊಂಡ ಸಮಯಕ್ಕೆ ಈ ಸಿನಿಮಾ ಬಿಡುಗಡೆ ಮಾಡಲು ಆಗಿಲ್ಲ. ಒಂದಿಲ್ಲೊಂದು ವಿವಾದಗಳ ಸುಳಿಗೆ ಸಿನಿಮಾ ಸಿಲುಕುತ್ತಲೇ ಇದೆ. ಈ ನಡುವೆ ಹೊಸದೊಂದಿ ಟೆನ್ಶನ್ ಶುರುವಾಗಿದೆ. ವಿವಾದಾತ್ಮಕ ಚಿತ್ರ ಎಮರ್ಜೆನ್ಸಿಗೆ ಸಂಬಂಧಿಸಿದಂತೆ ಕಂಗನಾ ಅವರಿಗೆ ಚಂಡೀಗಢದ ಜಿಲ್ಲಾ ನ್ಯಾಯಾಲಯ ನೋಟಿಸ್ ಜಾರಿ ಮಾಡಿದೆ. ಜಿಲ್ಲಾ ವಕೀಲರ ಸಂಘದ ಮಾಜಿ ಅಧ್ಯಕ್ಷ ವಕೀಲ ರವೀಂದರ್ ಸಿಂಗ್ ಬಸ್ಸಿ ಅವರು, ಈ ಚಿತ್ರದಲ್ಲಿ ಸಿಖ್ಖರ ಪ್ರತಿಷ್ಠೆಯನ್ನು ಹಾಳು ಮಾಡಲು ಪ್ರಯತ್ನಿಸಿದ್ದಾರೆ ಎಂದು ಆರೋಪಿಸಿ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಸಿಖ್ಖರ ಚಿತ್ರಣವನ್ನು ತಪ್ಪಾಗಿ ಪ್ರದರ್ಶಿಸಲಾಗಿದೆ. ಜೊತೆಗೆ ಸಿಖ್ ಸಮುದಾಯದ ವಿರುದ್ಧ ಸುಳ್ಳು ಆರೋಪಗಳನ್ನು ಮಾಡಲಾಗಿದೆ. ಹಾಗಾಗಿ ಕಂಗನಾ ವಿರುದ್ಧ ಕೇಸ್ ದಾಖಲಿಸಬೇಕು ಎಂದು ಅರ್ಜಿಯಲ್ಲಿ ಕೋರಿದ್ದಾರೆ.

ಈ ಹಿನ್ನೆಲೆಯಲ್ಲಿ ಅರ್ಜಿ ವಿಚಾರಣೆಯನ್ನು ಕೈಗೆತ್ತಿಕೊಂಡ ಕೋರ್ಟ್ ಕಂಗನಾ ಅವರಿಗೆ ನೋಟಿಸ್ ನೀಡಿದೆ. ಈ ಪ್ರಕರಣದ ಮುಂದಿನ ವಿಚಾರಣೆಯನ್ನು ಡಿಸೆಂಬರ್ 5ಕ್ಕೆ ಮುಂದೂಡಿದೆ.

**ಸಿಖ್ ಸಂಘಟನೆಗಳಿಂದಲೂ ವ್ಯಾಪಕ ವಿರೋಧ:** ಎಮರ್ಜೆನ್ಸಿ ಸಿನಿಮಾ ಆರಂಭದಿಂದಲೂ ವಿವಾದದ ಸುಳಿಯಲ್ಲಿ ಸಿಲುಕಿದೆ. ಈ ನಡುವೆ ಶಿರೋಮಣಿ ಅಕಾಲಿ ದಳ ಸೇರಿದಂತೆ ಅನೇಕ ಸಿಖ್ ಸಂಘಟನೆಗಳು ವ್ಯಾಪಕ ವಿರೋಧ ವ್ಯಕ್ತಪಡಿಸಿವೆ. ಆರಂಭದಿಂದಲೂ ಸಿಖ್ ಸಮುದಾಯವನ್ನು ತಪ್ಪಾಗಿ ಬಿಂಬಿಸಲಾಗಿದೆ, ಸಿಖ್ಖರ ಸಮುದಾಯಗಳ ಬಗೆಗಿನ ನೈಜತೆಯನ್ನು ತಿರುಚಲಾಗಿದೆ ಎಂದು ಆರೋಪಿಸಿವೆ.

**'ಎಮರ್ಜೆನ್ಸಿ' ಸಿನಿಮಾ ಪೋಸ್ಟ್‌ಪೋನ್:** 'ಎಮರ್ಜೆನ್ಸಿ' ಚಿತ್ರವನ್ನು ಸೆ.6ರಂದು ರಿಲೀಸ್ ಮಾಡಬೇಕಿತ್ತು. ಆದರೆ ಅದು ಸಾಧ್ಯವಾಗಲಿಲ್ಲ. ಬಿಡುಗಡೆಗೆ ಹಲವು ಅಡ್ಡಿ ಆತಂಕಗಳು ಎದುರಾಗಿವೆ. ಸೆನ್ಸಾರ್‌ಗೆ ಸಂಬಂಧಿಸಿದ ಸಮಸ್ಯೆಗಳಿಂದ ತೊಂದರೆ ಸಿಲುಕಿಕೊಂಡಿರುವ ಈ ಸಿನಿಮಾಗೆ ಇನ್ನೂ ಕೂಡ ಪ್ರಮಾಣ ಪತ್ರ ಸಿಕ್ಕಿಲ್ಲ. ಹಾಗಾಗಿ, ಕಂಗನಾ ಸಂಕಷ್ಟಕ್ಕೆ ಈಡಾಗಿದ್ದಾರೆ. ಅದೇ ಬೇಸರದಲ್ಲಿ ಅವರು ಒಂದಿಷ್ಟು ಹೇಳಿಕೆಗಳನ್ನು ನೀಡಿದ್ದಾರೆ. ಈ ಹಿಂದೆ ಸೆನ್ಸಾರ್ ಸಮಸ್ಯೆಗೆ ಸಿಲುಕಿದ್ದ ದೀಪಿಕಾ ಪಡುಕೋಣೆ ಅವರ 'ಪದ್ಮಾವತ್' ಮತ್ತು ಆಲಿಯಾ ಭಟ್ ಅವರ 'ಉಡ್ತಾ ಪಂಜಾಬ್' ಸಿನಿಮಾಗಳನ್ನು ಕಂಗನಾ ನೆನಪು ಮಾಡಿದ್ದಾರೆ.

ಇತ್ತೀಚೆಗೆ ನಟಿ ಕಂಗನಾ ಸಿನಿಮಾಗಾಗಿ ಬಾಂದ್ರಾದ ಪಾಲಿ ಹಿಲ್‌ನಲ್ಲಿರುವ ತಮ್ಮ ಬಂಗಲೆಯನ್ನೇ 32 ಕೋಟಿ ರೂ.ಗೆ ಮಾರಾಟ ಮಾಡಿರುವ ಬಗ್ಗೆ ವರದಿಯಾಗಿತ್ತು.



## ಯುಪಿಯಲ್ಲಿ ಪಟಾಕಿ ಕಾರ್ಖಾನೆ ಸ್ಫೋಟ: ಇಬ್ಬರು ಮಕ್ಕಳು ಸೇರಿ ಐವರು ಸಾವು



**ಫಿರೋಜಾಬಾದ್:** ಪಟಾಕಿ ಕಾರ್ಖಾನೆ ಯೊಂದರಲ್ಲಿ ಸ್ಫೋಟ ಸಂಭವಿಸಿ, ಇಬ್ಬರು ಮಕ್ಕಳು, ಮಹಿಳೆ ಸೇರಿದಂತೆ ಐವರು ಸಾವನ್ನಪ್ಪಿದ್ದು ಹಲವು ಮಂದಿ ಗಾಯಗೊಂಡಿರುವ ಘಟನೆ ಉತ್ತರ ಪ್ರದೇಶದ ಫಿರೋಜಾಬಾದ್ ಜಿಲ್ಲೆಯಲ್ಲಿ ನಡೆದಿದೆ.

ಶಿಕೋಹಾಬಾದ್ ಪೊಲೀಸ್ ಠಾಣಾ ವ್ಯಾಪ್ತಿಯ ನೌಶೇರಾ ಪ್ರದೇಶದಲ್ಲಿರುವ ಕಾರ್ಖಾನೆಯಲ್ಲಿ ಸೋಮವಾರ ರಾತ್ರಿ 10:30ರ ಸುಮಾರಿಗೆ ಈ ಘಟನೆ ನಡೆದಿದೆ. ಘಟನೆಯಲ್ಲಿ ಹಲವು ಮಂದಿ ಗಾಯಗೊಂಡಿದ್ದಾರೆ. ಮೃತರ ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಮಾಹಿತಿ ಪ್ರಕಾರ ಚಂದ್ರಪಾಲ್ ಎಂಬವರ ಖಾಲಿ ಮನೆಯಲ್ಲಿ ಪಟಾಕಿ ವ್ಯಾಪಾರಿಯೊಬ್ಬರು ಬಾಡಿಗೆ ಪಡೆದು ಪಟಾಕಿ ವ್ಯಾಪಾರ ಮಾಡುತ್ತಿದ್ದರು. ಅದರಲ್ಲಿ ಭಾರೀ ಪ್ರಮಾಣದ ಗನ್ ಪೌಡರು ಶೇಖರಿಸಲಾದ್ದು ಅದರಿಂದ ಸ್ಫೋಟ ಸಂಭವಿಸಿದೆ. ಇದರಿಂದಾಗಿ ಮನೆ ಮೇಲ್ಛಾವಣಿ ಕುಸಿದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಮೃತರನ್ನು ಮೀರಾದೇವಿ(52), ಅಮನ್ (20), ಗೌತಮ್ ಕುಶ್ವಾಹ(18), ಇಚ್ಛಾ ಕುಮಾರಿ(03) ಮತ್ತು ಅಭಿನೇಯ (1.5) ವರ್ಷ ಎಂದು ಗುರುತಿಸಲಾಗಿದ್ದು, ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ.

ಅಗ್ನಿಶಾಮಕ, ಪೊಲೀಸ್ ಇಲಾಖೆ ಮತ್ತು ಜಿಲ್ಲಾಡಳಿತ ತಂಡ ಸ್ಥಳದಲ್ಲಿದ್ದು, ರಕ್ಷಣಾ ಕಾರ್ಯಾಚರಣೆ ತ್ವರಿತಗತಿಯಲ್ಲಿ ನಡೆಯುತ್ತಿದೆ ಎಂದು ಫಿರೋಜಾಬಾದ್ ಜಿಲ್ಲಾ ಮ್ಯಾಜಿಸ್ಟ್ರೇಟ್ ರಮೇಶ್ ರಂಜನ್ ತಿಳಿಸಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಲೇಡಿ ಸೂಪರ್ ಸ್ಟಾರ್‌ಗೆ ತಮಿಳು ಡೈರೆಕ್ಟರ್ ಸುಂದರ್ ಸಿ. ಆಕ್ಷನ್ ಕಟ್

ತಮಿಳಿನ ಲೇಡಿ ಸೂಪರ್ ಸ್ಟಾರ್ ನಯನತಾರಾ ಅವರು ನಟಿ, ನಿರ್ಮಾಪಕಿಯಾಗಿ ಬ್ಯುಸಿಯಾಗಿದ್ದಾರೆ. ಇದೀಗ ಡೈರೆಕ್ಟರ್ ಸುಂದರ್ ಸಿ. ಜೊತೆ ಸಿನಿಮಾ ಮಾಡಲು ನಟಿ ಮುಂದಾಗಿದ್ದಾರೆ.

ಶಾರುಖ್ ಖಾನ್ ಜೊತೆ 'ಜವಾನ್' ಸಿನಿಮಾದಲ್ಲಿ ನಯನತಾರಾ ನಟಿಸಿದ ಮೇಲೆ ಅವರ ಬೇಡಿಕೆ ಹೆಚ್ಚಾಗಿದೆ. ಬಹುಭಾಷೆಗಳಲ್ಲಿ ನಟಿಸುತ್ತಾ ನಟಿ ಆಕ್ಟಿವ್ ಆಗಿದ್ದಾರೆ. ಸದ್ಯ ಅವರು 'ಮೂಕುತಿ ಅಮ್ಮನ್ 2' ಸಿನಿಮಾದಲ್ಲಿ ನಟಿಸಲು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಈ ಕುರಿತು ಚಿತ್ರತಂಡ ಅಧಿಕೃತವಾಗಿ ತಿಳಿಸಿದೆ.

ಇನ್ನೂ ನಯನತಾರಾಗೆ ಸುಂದರ್ ಸಿ. ನಿರ್ದೇಶನ ಮಾಡಲಿದ್ದಾರೆ. ಮತ್ತೊಂದು ದೇವಿ ಕುರಿತು ವಿಭಿನ್ನ ಕಥೆ ತರಲು ಅವರು ಸಿದ್ಧತೆ ಮಾಡಿಕೊಂಡಿದ್ದಾರೆ.

ಇದರ ಮೊದಲ ಭಾಗ 'ಮೂಕುತಿ ಅಮ್ಮನ್' ಸಿನಿಮಾದಲ್ಲಿ ನಯನತಾರಾ ಪ್ರಮುಖ ಪಾತ್ರದಲ್ಲಿ ನಟಿಸಿದ್ದರು. ಈಗ ಪಾರ್ಟ್ 2ನಲ್ಲಿಯೂ ಕೂಡ ಅವರು ಸಾಥ್ ನೀಡಲಿದ್ದಾರೆ.






## ಮೋಷನ್ ಪೋಸ್ಟರ್ ಸತ್ಯದೇವ್ ಜೊತೆ ಡಾಲಿ

# ದೀಪಾವಳಿಗೆ ಜೀಬ್ರಾ

ನಟರಾಕ್ಷಸ ಡಾಲಿ ಧನಂಜಯ್ ಹಾಗೂ ತೆಲುಗಿನ ಪ್ರತಿಭಾನ್ವಿತ ನಾಯಕ ಸತ್ಯದೇವ್ ನಟನೆಯ ಬಹುನಿರೀಕ್ಷಿತ ಮಲ್ಟಿಸ್ಟಾರ್ ಸಿನಿಮಾ ಜೀಬ್ರಾ. ಫಸ್ಟ್ ಲುಕ್ ಮೂಲಕ ಗಮನಸೆಳೆದಿದ್ದ ಜೀಬ್ರಾದ ಮೋಷನ್ ಪೋಸ್ಟರ್ ಬಿಡುಗಡೆಯಾಗಿದೆ. ಮೋಷನ್ ಪೋಸ್ಟರ್‌ನಲ್ಲಿ ಸತ್ಯರಾಜ್, ಸತ್ಯ ಅಕ್ಕಲಾ, ಜೆನ್ನಿಫರ್ ಪಿಕ್ಕಿನಾಟೊ, ಸುನಿಲ್, ಪ್ರಿಯಾ ಭವಾನಿ ಶಂಕರ್, ಡಾಲಿ ಧನಂಜಯ್ ಮತ್ತು ಸತ್ಯ ದೇವ್ ಅವರನ್ನು ಪರಿಚಯಿಸಲಾಗಿದೆ.




ಮೋಷನ್ ಪೋಸ್ಟರ್ ನಲ್ಲಿ ಚೆಸ್ ಆಟ, ಕಾಯಿನ್ ಫ್ಲಿಪ್ಪಿಂಗ್, ಕರೆನ್ಸಿ ನೋಟುಗಳು ಮತ್ತು ಫ್ಲೈಓವರ್ ನಿಂದ ಕಾರ್ ಇಳಿಯುವ ದೃಶ್ಯಗಳು ಆಕರ್ಷಕವಾಗಿವೆ. ಬಹಳ ಕ್ರಿಯೇಟಿವಿಟಿಯಾಗಿ ಮೋಷನ್ ಪೋಸ್ಟರ್‌ನ್ನು ಚಿತ್ರೀಕರಿಸಲಾಗಿದೆ. ಜೀಬ್ರಾ ಸಿನಿಮಾವನ್ನ ಈಶ್ವರ್ ಕಾರ್ತಿಕ್ ಡೈರೆಕ್ಷನ್ ಮಾಡಿದ್ದಾರೆ. ಕ್ರೈಂ ಮತ್ತು ಥ್ರಿಲ್ಲರ್ ಕಂಟೆಂಟ್ ಇರೋ ಚಿತ್ರ ಇದಾಗಿದೆ.

ಪದ್ಮಜಾ ಫಿಲಂಸ್ ಪ್ರೈವೇಟ್ ಲಿಮಿಟೆಡ್ ಮತ್ತು ಓಲ್ಡ್ ಟೌನ್ ಪಿಕ್ಚರ್ಸ್ ಬ್ಯಾನರ್‌ಗಳ ಅಡಿಯಲ್ಲಿ ಎಸ್‌ಎನ್ ರೆಡ್ಡಿ, ಎಸ್ ಪದ್ಮಜಾ, ಬಾಲ ಸುಂದರಂ ಮತ್ತು ದಿನೇಶ್ ಸುಂದರಂ ನಿರ್ಮಾಣ ಮಾಡಲಾಗಿದೆ. ಕೆಜಿಎಫ್ ಮತ್ತು ಸಲಾರ್ ಖ್ಯಾತಿಯ ರವಿ ಬಸ್ರೂರ್ ಚಿತ್ರಕ್ಕೆ ಸಂಗೀತ ನೀಡಿದ್ದು, ಸತ್ಯ ಪೊನ್ಮಾರ್ ಅವರ ಛಾಯಾಗ್ರಹಣವಿದೆ. ಎಸ್ ಶ್ರೀಲಕ್ಷ್ಮಿ ರೆಡ್ಡಿ ಸಹ ನಿರ್ಮಾಪಕಿ. ಅನಿಲ್ ಕ್ರಿಶ್ ಸಂಕಲನ,ಮೀರಾಖ್ ಸಂಭಾಷಣೆ ಇದೆ. ಅಶ್ವಿನಿ ಮುಲ್ಪುರಿ, ಗಂಗಾಧರ ಬೊಮ್ಮರಾಜು ಕಾಸ್ಟ್ಯೂಮ್ ಡಿಸೈನರ್ ಆಗಿ ದುಡಿದಿದ್ದಾರೆ. ಮೋಷನ್ ಪೋಸ್ಟರ್ ಜೊತೆಗೆ ಚಿತ್ರತಂಡ ಬಿಡುಗಡೆ ದಿನಾಂಕ ಕೂಡ ಘೋಷಣೆ ಮಾಡಿದೆ. ಬೆಳಕಿನ ಹಬ್ಬ ದೀಪಾವಳಿಗೆ ಜೀಬ್ರಾ ತೆರೆಗೆ ಬರಲಿದೆ.




# ಉತ್ತಮ ಕಥೆ ಸಿಕ್ಕರೆ ಕನ್ನಡದಲ್ಲಿ ರಕ್ಷಿತ್ ಶೆಟ್ಟಿ ಜೊತೆ ನಟಿಸಲು ಸಿದ್ಧ: ಕೃತಿ ಶೆಟ್ಟಿ



ಕರಾವಳಿ ಬೆಡಗಿ ಕೃತಿ ಶೆಟ್ಟಿ ಅವರು ಸಾಲು ಸಾಲು ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಡುವ ಕುರಿತು ನಟಿ ಮಾತನಾಡಿದ್ದಾರೆ. ಸಿಂಪಲ್ ಸ್ಟಾರ್ ರಕ್ಷಿತ್ ಶೆಟ್ಟಿ ನಟನೆ ಎಂದರೆ ಇಷ್ಟ, ಅವರೊಂದಿಗೆ ಸಿನಿಮಾ ಮಾಡಲು ರೆಡಿ ಎಂದು ಕೃತಿ ಮಾತನಾಡಿದ್ದಾರೆ.

'ಉಪ್ಪೇನಾ' ಸೇರಿದಂತೆ ಹಲವು ಸಿನಿಮಾಗಳ ಮೂಲಕ ಮೋಡಿ ಮಾಡಿರುವ ನಟಿ ಕೃತಿ ಇದೀಗ ನೀಡಿರುವ ಹೇಳಿಕೆಯೊಂದು ಸಖತ್ ಸದ್ದು ಮಾಡುತ್ತಿದೆ. ಕೃತಿ ಮೂಲತಃ ಕರ್ನಾಟಕದವರು, ಮಾತೃಭಾಷೆ ತುಳು ಆಗಿದ್ದರೂ ಕೂಡ ಕನ್ನಡ ಭಾಷೆಯ ಮೇಲೆ ಅವರಿಗೆ ಅಭಿಮಾನವಿದೆ. ಅದರಂತೆ ಉತ್ತಮ ಕಥೆ ಸಿಕ್ಕರೆ ಖಂಡಿತವಾಗಿಯೂ ಕನ್ನಡ ಚಿತ್ರದಲ್ಲಿ ನಟಿಸುತ್ತೇನೆ ಎಂದು ನಟಿ ಸಂದರ್ಶನವೊಂದರಲ್ಲಿ ಹೇಳಿದ್ದಾರೆ.

ಯಾರೊಂದಿಗೆ ಕೆಲಸ ಮಾಡಲು ಇಷ್ಟಪಡುತ್ತೀರಿ ಎಂದು ಎದುರಾದ ಪ್ರಶ್ನೆಗೆ ನಟಿ ಥಟ್ ಅಂತ ರಕ್ಷಿತ್ ಶೆಟ್ಟಿ ಹೆಸರು ಹೇಳಿದ್ದಾರೆ. ರಕ್ಷಿತ್ ಸರ್ ಅವರ ಆಕ್ಟಿಂಗ್ ಎಂದರೆ ತುಂಬಾ ಇಷ್ಟ. ಬಹಳ ಸಮಯದಿಂದ ಅವರ ಕೆಲಸವನ್ನು ಗಮನಿಸುತ್ತಿದ್ದೇನೆ. ಅವರ ಜೊತೆ ಕೆಲಸ ಮಾಡಲು ಆಸಕ್ತಿಯಿದೆ. ಅವಕಾಶ ಸಿಕ್ಕರೆ ನಟಿಸುತ್ತೇನೆ ಎಂದು 'ಉಪ್ಪೇನಾ' ನಟಿ ಮಾತನಾಡಿದ್ದಾರೆ. ಅವರ ಮಾತು ಕೇಳಿ ಕನ್ನಡಿಗರು ಮೆಚ್ಚುಗೆ ಸೂಚಿಸಿದ್ದಾರೆ.



ಅಂದಹಾಗೆ, ಸೆ.12ರಂದು 'ಎಆರ್‌ಎಂ' ಸಿನಿಮಾ ರಿಲೀಸ್ ಆಗಿದೆ. ಮಲಯಾಳಂ ಸಿನಿಮಾದಲ್ಲಿ ನಾಯಕಿಯಾಗಿ ಕೃತಿ ಈ ಚಿತ್ರದ ಮೂಲಕ ಪಾದಾರ್ಪಣೆ ಮಾಡಿದ್ದಾರೆ. ಅವರ ನಟನೆಗೆ ಪ್ರಶಂಸೆ ವ್ಯಕ್ತವಾಗಿದೆ.

## ಅತಿಥೇಯ ಚೀನಾಗೆ ಸೋಲು

# 5ನೇ ಬಾರಿ ಭಾರತ ಚಾಂಪಿಯನ್

ಅತಿಥೇಯ ಚೀನಾವನ್ನು ಸೋಲಿಸಿ ಭಾರತ ಏಷ್ಯನ್ ಚಾಂಪಿಯನ್ಸ್ ಟ್ರೋಫಿಯನ್ನು ಗೆದ್ದುಕೊಂಡಿದೆ. ಇಂದು ನಡೆದ ಫೈನಲ್ ಪಂದ್ಯವನ್ನು ಭಾರತ 1-0 ಅಂತರದಿಂದ ಗೆಲ್ಲುವುದರ ಮೂಲಕ ಐದನೇ ಬಾರಿ ಹಾಕಿ ಚಾಂಪಿಯನ್ ಆಗಿ ಹೊರಹೊಮ್ಮಿತು.

ಅಜೇಯವಾಗಿ ಫೈನಲ್ ಪ್ರವೇಶಿಸಿದ್ದ ಭಾರತಕ್ಕೆ ಚೀನಾ ಭಾರೀ ಪೈಪೋಟಿ ನೀಡಿತ್ತು. ಎರಡೂ ತಂಡಗಳು ಜಿದ್ದಿಗೆ ಬಿದ್ದಂತೆ ಆಡಿದ್ದವು. ಮೊದಲ ಮೂರು ಕ್ವಾರ್ಟರ್ ನಲ್ಲಿ ಇತ್ತಂಡಗಳಿಗೆ ಗೋಲು ಗಳಿಸಲು ಸಾಧ್ಯವಾಗಲಿಲ್ಲ. ಆದರೆ 51ನೇ ನಿಮಿಷದಲ್ಲಿ ಜುಗ್ರಾಜ್ ಸಿಂಗ್ ಅವರು ಗೋಲು ಹೊಡೆದು ಭಾರತಕ್ಕೆ ಮುನ್ನಡೆ ತಂದುಕೊಟ್ಟರು.




ಈ ಮುನ್ನಡೆಯನ್ನು ಕಾಯ್ದುಕೊಂಡ ಭಾರತ ಕೊನೆಗೆ ವಿಜಯ ಸಾಧಿಸಿತು. ಹಲವು ಬಾರಿ ಚೀನಾ ಆಟಗಾರರು ಪ್ರಯತ್ನ ಪಟ್ಟರೂ ಗೋಲು ಹೊಡೆಯಲು ಭಾರತದ ಆಟಗಾರರು ಬಿಡಲಿಲ್ಲ. ಟೂರ್ನಿಯಲ್ಲಿ ಅತ್ಯುತ್ತಮ ಆಟವಾಡಿದ ನಾಯಕ ಹರ್ಮನ್‌ಪ್ರೀತ್ ಅರ್ಹವಾಗಿ ಸರಣಿಶ್ರೇಷ್ಠ ಆಟಗಾರ ಗೌರವಕ್ಕೆ ಪಾತ್ರವಾದರು.

ಟೂರ್ನಿಯ ಆರಂಭಿಕ ಪಂದ್ಯದಲ್ಲಿ ಭಾರತ ಮತ್ತು ಚೀನಾ ತಮ್ಮ ಪರಸ್ಪರ ಮುಖಾಮುಖಿಯಾಗಿದ್ದವು. ಈ ಪಂದ್ಯವನ್ನು 3-0 ಅಂತರದಿಂದ ಭಾರತ ಗೆದ್ದುಕೊಂಡಿತ್ತು.

ಉತ್ತಮ ಫಾರ್ಮ್‌ನಲ್ಲಿರುವ ಭಾರತ 2020ರ ಟೋಕಿಯೋ ಮತ್ತು ಈ ವರ್ಷ ಪ್ಯಾರಿಸ್‌ನಲ್ಲಿ ನಡೆದ ಒಲಿಂಪಿಕ್ಸ್ ಹಾಕಿಯಲ್ಲಿ ಕಂಚಿನ ಪದಕವನ್ನು ಗೆದ್ದು ಬೀಗಿತ್ತು.

## ದರ್ಶನ್ ಗ್ಯಾಂಗ್‌ಗೆ ನ್ಯಾಯಾಂಗ ಬಂಧನ ಅವಧಿ ಮತ್ತೆ ವಿಸ್ತರಣೆ

# ಇನ್ನೂ 14 ದಿನ ಜೈಲೇ ಗತಿ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟ ದರ್ಶನ್ ಮತ್ತು ಗ್ಯಾಂಗ್‌ಗೆ ನ್ಯಾಯಾಂಗ ಬಂಧನ ಅವಧಿ ಮತ್ತೆ ವಿಸ್ತರಿಸಲಾಗಿದೆ. 14 ದಿನಗಳವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ 24ನೇ ಎಸಿಎಂಎಂ ಕೋರ್ಟ್ ಆದೇಶ ಹೊರಡಿಸಿದೆ.

ದರ್ಶನ್, ಪವಿತ್ರಗೌಡ ಸೇರಿದಂತೆ ಎಲ್ಲಾ ಆರೋಪಿಗಳನ್ನ ಮಂಗಳವಾರ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿತ್ತು. ಈ ವೇಳೆ ತನಿಖಾಧಿಕಾರಿಗಳು ನ್ಯಾಯಾಧೀಶರಿಗೆ ಟೆಕ್ನಿಕಲ್ ಸಾಕ್ಷ್ಯಗಳನ್ನು ಸಲ್ಲಿಸಿದರು. ಹಾರ್ಡ್ ಡಿಸ್ಕ್‌ನಲ್ಲಿ ಟೆಕ್ನಿಕಲ್ ಎವಿಡೆನ್ಸನ್ನು ನ್ಯಾಯಾಧೀಶರಿಗೆ ಸಲ್ಲಿಕೆ ಮಾಡಿದರು.



ದರ್ಶನ್‌ಗೆ ಬ್ಯಾಕ್‌ಪೇನ್ ಇದೆ. ಚೇರ್ ಕೊಡುವಂತೆ ಕೇಳಿದ್ದು, ಚೇರ್ ಕೊಟ್ಟಿಲ್ಲ ಅಂತಾ ದರ್ಶನ್ ಪರ ವಕೀಲರು, ನ್ಯಾಯಾಧೀಶರ ಗಮನಕ್ಕೆ ತಂದರು. ಅಲ್ಲದೇ ಕುಟುಂಬ, ಸ್ನೇಹಿತರ ಭೇಟಿಗೆ ಅವಕಾಶ ಕೊಡುತ್ತಿಲ್ಲ ಎಂದು ಸಹ ದೂರಿದರು. ಭೇಟಿಗೆ ಸಮಯ ಕೊಡಬೇಕು ಎಂದು ನ್ಯಾಯಾಧೀಶರು ಆದೇಶಿಸಿದರು.

ಯಾವ ಆಧಾರದಲ್ಲಿ ಕಾನೂನು ಮಾಡ್ಕೊಂಡ್ರು ಇವರು? ಬೆಳಗಾವಿ ಜೈಲು ನಿಯಮಗಳ ಪ್ರಕಾರ ರೂಲ್ಸ್ ಮಾಡಿಕೊಂಡಿದ್ದಾರೆ. ಕೋರ್ಟ್ ಪರ್ಮಿಷನ್ ಇಲ್ದೆ ಹೇಗೆ ನಿಯಮ ಮಾಡ್ಕೊಂಡ್ರು ಇವ್ರು? ಸ್ನೇಹಿತರು, ಕುಟುಂಬದವರು ಭೇಟಿಯಾಗೋದು ತಪ್ಪಾ? ಯಾರನ್ನೂ ಬಿಡ್ತಿಲ್ಲ ಅವರು. ಯಾವ ಪ್ರೊಸೀಜರ್ ಫಾಲೋ ಮಾಡ್ತಿದ್ದಾರೆ ಅವ್ರು? ದರ್ಶನ್ ಏನು ಕೋಕಾ ಅಪರಾಧಿನಾ? ಅವರು ಕೊಲೆ ಆರೋಪಿ ಅಷ್ಟೆ. ಕುಳಿತುಕೊಳ್ಳೋಕೆ ಒಂದು ಚೇರ್ ಕೊಡಲ್ಲ ಅಂದ್ರೆ, ಹೇಗೆ ಎಂದು ದರ್ಶನ್ ಪರ ವಕೀಲರು ವಾದಿಸಿದರು. ಅಗತ್ಯ ವಸ್ತುಗಳನ್ನ ನಿಯಮದಡಿಯಲ್ಲಿ ನೀಡುವಂತೆ ಜಡ್ಜ್, ಬಳ್ಳಾರಿ ಜೈಲಾಧಿಕಾರಿಗೆ ಆದೇಶ ನೀಡಿದರು.

ಸಿಎಸ್ ಎಫ್‌ಎಲ್ ರಿಪೋರ್ಟ್ ಮುಚ್ಚಿದ ಲಕೋಟೆಯಲ್ಲಿ ನೀಡಿದ್ದೇವೆ. ನೀವು ಅನುಮತಿ ಕೊಟ್ರೆ 17 ಆರೋಪಿಗಳಿಗೂ ಸೀಲ್ ಓಪನ್ ಮಾಡಿ ಜೆರಾಕ್ಸ್ ನೀಡಿ ಕೊಡ್ತೀವಿ. ಆರ್ಡರ್ ಪಾಸ್ ಮಾಡಿಕೊಟ್ರೆ ಜೆರಾಕ್ಸ್ ಮಾಡಿ ಕೊಡ್ತೀವಿ ಎಂದ ಪಬ್ಲಿಕ್ ಪ್ರಾಸಿಕ್ಯೂಟರ್ ವಾದಿಸಿದರು.

ಎಷ್ಟು ದಿನದಲ್ಲಿ ಕೊಡ್ತೀರಾ ಜಡ್ಜ್ ಕೇಳಿದರು. ಒಂದು ವಾರದಲ್ಲಿ ಕೊಡ್ತೀವಿ ಎಂದು ತನಿಖಾಧಿಕಾರಿ ಪ್ರತ್ಯುತ್ತರ ನೀಡಿದರು. ಸೆ.30 ರ ವರಗೆ ದರ್ಶನ್ ಗ್ಯಾಂಗ್‌ಗೆ ನ್ಯಾಯಾಂಗ ಬಂಧನ ಅವಧಿ ವಿಸ್ತರಿಸಿ ಕೋರ್ಟ್ ಆದೇಶಿಸಿತು. ಮುಂದಿನ ವಿಚಾರಣೆಯ ಒಳಗೆ ಸಿಎಸ್‌ಎಫ್‌ಎಲ್ ಜೆರಾಕ್ಸ್ ಪ್ರತಿ ನೀಡುವಂತೆ ನ್ಯಾಯಾಧೀಶರಿಂದ ಇದೇ ವೇಳೆ ಆದೇಶಿಸಿದರು.

# ಕರ್ನಾಟಕ ರಣಜಿ ತಂಡದ ಸಂಭವನೀಯರ ಪಟ್ಟಿಯಲ್ಲಿ ಸಮಿತ್ ದ್ರಾವಿಡ್‌ಗೆ ಸ್ಥಾನ

ಅಕ್ಟೋಬರ್ 11 ರಿಂದ ಶುರುವಾಗಲಿರುವ ರಣಜಿ ಟ್ರೋಫಿಗಾಗಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಸಂಭವನೀಯ ಆಟಗಾರರ ಪಟ್ಟಿಯನ್ನು ಪ್ರಕಟಿಸಿದೆ. 37 ಸದಸ್ಯರನ್ನು ಒಳಗೊಂಡಿರುವ ಈ ಪಟ್ಟಿಯಲ್ಲಿ ರಾಹುಲ್ ದ್ರಾವಿಡ್ ಅವರ ಸುಪುತ್ರ ಸಮಿತ್ ದ್ರಾವಿಡ್ ಕೂಡ ಕಾಣಿಸಿಕೊಂಡಿರುವುದು ವಿಶೇಷ. ಇನ್ನು ಕೃಷ್ಣಪ್ಪ ಗೌತಮ್, ರೋನಿತ್ ಮೋರೆ ಸೇರಿದಂತೆ ಕೆಲ ಅನುಭವಿ ಆಟಗಾರರು ರಣಜಿ ತಂಡದ ಸಂಭಾವ್ಯ ಪಟ್ಟಿಯಲ್ಲಿ ಸ್ಥಾನ ಪಡೆಯುವಲ್ಲಿ ವಿಫಲರಾಗಿದ್ದಾರೆ.

ಹಾಗೆಯೇ ಈ ಪಟ್ಟಿಯಲ್ಲಿ ಮಯಾಂಕ್ ಅಗರ್ವಾಲ್, ಮನೀಶ್ ಪಾಂಡೆ, ಕೆಎಲ್ ರಾಹುಲ್, ಪ್ರಸಿದ್ಧ್ ಕೃಷ್ಣ, ವೈಶಾಖ್ ವಿಜಯಕುಮಾರ್, ಶ್ರೇಯಸ್ ಗೋಪಾಲ್ ಸೇರಿದಂತೆ ಹಲವು ಅನುಭವಿ ಆಟಗಾರರು ಕಾಣಿಸಿಕೊಂಡಿದ್ದಾರೆ. ಇವರೊಂದಿಗೆ ಬಿಸಿಸಿಐ ವಯೋಮಿತಿ ಪಂದ್ಯಾವಳಿಯಲ್ಲಿ ಉತ್ತಮ ಪ್ರದರ್ಶನ ನೀಡಿದ ಸಮಿತ್ ದ್ರಾವಿಡ್, ಸಮರ್ಥ್ ನಾಗರಾಜ್, ಸ್ಮರಣ್ ಆರ್, ಕೃತಿಕ್ ಕೃಷ್ಣ, ಜಾಸ್ಪರ್ ಇ.ಜೆ ಸೇರಿದಂತೆ ಹಲವು ಯುವ ಆಟಗಾರರಿಗೆ ಈ ಬಾರಿ ಮಣೆ ಹಾಕಲಾಗಿದೆ.

ಇನ್ನು ಸಂಭವನೀಯ ತಂಡದಲ್ಲಿ ವಿಕೆಟ್ ಕೀಪರ್‌ಗಳಾಗಿ ನಾಲ್ವರು ಕಾಣಿಸಿಕೊಂಡಿದ್ದಾರೆ. ಅವರೆಂದರೆ ಲವ್‌ನೀತ್ ಸಿಸೋಡಿಯಾ, ಶ್ರೀಜಿತ್ ಕೆಎಲ್, ಸುಜಯ್ ಎಸ್ ಹಾಗೂ ಕೃತಿಕ್ ಕೃಷ್ಣ. ಈ ನಾಲ್ವರಲ್ಲಿ ಇಬ್ಬರಿಗೆ ಸ್ಥಾನ ಸಿಗುವುದು ಬಹುತೇಕ ಖಚಿತ ಎನ್ನಬಹುದು.



**15 ಆಟಗಾರರಿಗೆ ಚಾನ್ಸ್:** ಸಂಭವನೀಯ ತಂಡದಲ್ಲಿ ಒಟ್ಟು 37 ಆಟಗಾರರ ಹೆಸರಿದ್ದರೂ, ಇವರಲ್ಲಿ ಕೇವಲ 15 ಆಟಗಾರರು ಮಾತ್ರ ರಣಜಿ ಟೂರ್ನಿಗೆ ಆಯ್ಕೆಯಾಗಲಿದ್ದಾರೆ. ಈ ಬಾರಿ ಕಿರಿಯ ಆಟಗಾರರಿಗೆ ಹೆಚ್ಚಿನ ಮಣೆ ಹಾಕಿರುವುದರಿಂದ ಅನುಭವಿ ಹಾಗೂ ಯುವ ಆಟಗಾರರನ್ನು ಒಳಗೊಂಡ ಕರ್ನಾಟಕ ತಂಡವನ್ನು ನಿರೀಕ್ಷಿಸಬಹುದು. ಅದರಂತೆ ಈ ಬಾರಿ ಕರ್ನಾಟಕ ಪರ ರಣಜಿ ಆಡಲಿರುವ ಆಟಗಾರರು ಯಾರೆಂಬುದು ಶೀಘ್ರದಲ್ಲೇ ಗೊತ್ತಾಗಲಿದೆ.

**ಸಂಭವನೀಯ ಆಟಗಾರರಿಗೆ ಮಣೆ:** ರಣಜಿ ಟೂರ್ನಿಗೆ 15 ಸದಸ್ಯರು ಆಯ್ಕೆಯಾದರೂ, ಸಂಭವನೀಯ ಆಟಗಾರರ ಪಟ್ಟಿಯಿಂದ ಕೆಲ ಆಟಗಾರರಿಗೆ ಮತ್ತೆ ಅವಕಾಶ ಸಿಗಬಹುದು. ಅಂದರೆ ಟೂರ್ನಿಯ ವೇಳೆ ಯಾವುದಾದರು ಆಟಗಾರರು ಗಾಯಗೊಂಡರೆ ಅಥವಾ ಇನ್ನಿತರ ಕಾರಣಗಳಿಂದ ಹೊರಗುಳಿದರೆ ಸಂಭವನೀಯ ಪಟ್ಟಿಯಲ್ಲಿ ಕಾಣಿಸಿಕೊಂಡಿದ್ದ ಆಟಗಾರರನ್ನೇ ಬದಲಿಯಾಗಿ ಆಯ್ಕೆ ಮಾಡಲಿದ್ದಾರೆ.

**ಕರ್ನಾಟಕ ರಣಜಿ ತಂಡದ ಸಂಭವನೀಯ ಆಟಗಾರರ ಪಟ್ಟಿ:** ಮಯಾಂಕ್ ಅಗರ್‌ವಾಲ್, ಕೆ.ಎಲ್ ರಾಹುಲ್, ಮನೀಶ್ ಪಾಂಡೆ, ದೇವದತ್ ಪಡಿಕ್ಕಲ್, ಪ್ರಸಿದ್ಧ್ ಕೃಷ್ಣ, ವಿದ್ವತ್ ಕಾವೇರಪ್ಪ, ವೈಶಾಖ್ ವಿಜಯ್‌ಕುಮಾರ್, ನಿಕಿನ್ ಜೋಸ್, ಸ್ಮರಣ್ ಆರ್, ಕಿಶನ್ ಬೆಡಾರೆ, ಅನೀಶ್ ಕೆ.ವಿ, ಶರತ್ ಶ್ರೀನಿವಾಸ್, ಸುಜಯ್ ಸತೇರಿ, ಕೃತಿಕ್ ಕೃಷ್ಣ, ವಾಸುಕಿ ಕೌಶಿಕ್, ಅಭಿಲಾಷ್ ಶೆಟ್ಟಿ, ವೆಂಕಟೇಶ್ ಎಂ, ಶ್ರೇಯಸ್ ಗೋಪಾಲ್, ಹಾರ್ದಿಕ್ ರಾಜ್, ಶುಭಾಂಗ್ ಹೆಗಡೆ, ರೋಹಿತ್ ಕುಮಾರ್, ಧೀರಜ್ ಗೌಡ, ಮೊಹ್ಸಿನ್ ಖಾನ್, ಶಶಿಕುಮಾರ್ ಕೆ, ಅಧೋಕ್ಷ್ ಹೆಗ್ಡೆ, ಶಿಖರ್ ಶೆಟ್ಟಿ, ಯಶೋವರ್ಧನ್, ವಿಶಾಲ್ ಓನತ್, ಜಾಸ್ಪರ್ ಇ.ಜೆ, ಸಮಿತ್ ದ್ರಾವಿಡ್, ಕಾರ್ತಿಕೇಯ ಕೆ.ಪಿ, ಸಮರ್ಥ್ ನಾಗರಾಜ್, ಲವ್‌ನೀತ್ ಸಿಸೋಡಿಯಾ, ಚೇತನ್ ಎಲ್.ಆರ್, ಅಭಿನವ್ ಮನೋಹರ್, ಧನುಷ್ ಗೌಡ.

## ಕಿಡಿಗೇಡಿಗಳ ಅಟ್ಟಹಾಸಕ್ಕೆ ನಲುಗಿದ ನಾಗಮಂಗಲ

# ಬೀದಿ ಪಾಲಾದ ಬದುಕು.. ಒಟ್ಟು 2.66 ಕೋಟಿ ನಷ್ಟ!

**ಮಂಡ್ಯ:** ಮಂಡ್ಯ ಜಿಲ್ಲೆಯ ನಾಗಮಂಗಲದ ಗಲಭೆಯಲ್ಲಿ ಹಲವು ಅಂಗಡಿಗಳು ಸಂಪೂರ್ಣ ಸುಟ್ಟು ಕರಕಲಾಗಿವೆ. ಇದರಿಂದ ಹಲವರ ಬದುಕು ಬೀದಿಗೆ ಬಂದಿದೆ. ಸದ್ಯ ಇವರಿಗೆ ಸರ್ಕಾರ ಪರಿಹಾರ ನೀಡಲು ಮುಂದಾಗಿದ್ದು, ಮಂಡ್ಯ ಜಿಲ್ಲಾಡಳಿತ ಗಲಭೆಯಿಂದ ನಷ್ಟವಾಗಿರುವ ಆಸ್ತಿ ಮೌಲ್ಯವನ್ನು ಅಂದಾಜಿಸಿದೆ.

ಮಂಡ್ಯ ಜಿಲ್ಲೆ ನಾಗಮಂಗಲದ ಗಲಭೆಯಲ್ಲಿ ಕಿಡಿಗೇಡಿಳು ಹಚ್ಚಿದ ಬೆಂಕಿಯಿಂದ ಇಡೀ ಪಟ್ಟಣದಲ್ಲಿ ಅಶಾಂತಿ ಉಂಟಾದರೆ, ಇದರಿಂದ ಹಲವು ಜನರ ಬದುಕು ಬೀದಿಗೆ ಬಂದಿದೆ. ತಮ್ಮ ಬದುಕು ರೂಪಿಸಿಕೊಳ್ಳಲು ಲಕ್ಷಾಂತರ ರೂಪಾಯಿ ಬಂಡವಾಳ ಹೂಡಿಕೆ ಮಾಡಿ ತಮಗಿಷ್ಟದ ವ್ಯಾಪಾರ ಮಾಡಿ ಬದುಕು ಕಟ್ಟಿಕೊಂಡಿದ್ದರು ಇಲ್ಲಿನ ಜನ. ಇದೀಗ ಕೋಮು ದಳ್ಳುರಿಗೆ ಗಲಭೆಕೋರರು ಹಚ್ಚಿದ ಬೆಂಕಿಯಿಂದ ಇಲ್ಲಿನ ಹಲವು ವ್ಯಾಪಾರಿಗಳ ಕನಸು ಬೆಂಕಿಯಲ್ಲಿ ಸುಟ್ಟು ಕರಕಲಾಗಿದೆ.




ಇದರಿಂದ ಈ ವ್ಯಾಪರವನ್ನೇ ನಂಬಿಕೊಂಡಿದ್ದ ಜನರ ಬದುಕು ಬೀದಿಗೆ ಬಂದಿದೆ. ಸದ್ಯ ಈ ಜನರಿಗೆ ಕೇಂದ್ರ ಸಚಿವ ಕುಮಾರಸ್ವಾಮಿ ವೈಯಕ್ತಿಕವಾಗಿ ಅವರ ಒಂದಿಷ್ಟು ಪರಿಹಾರ ನೀಡಿದ್ದಾರೆ. ಈ ಬೆನ್ನಲ್ಲೇ ರಾಜ್ಯ ಸರ್ಕಾರವೂ ಹಾನಿಗೊಳಗಾದ ಕಟ್ಟದ ಮಾಲೀಕರು ಹಾಗೂ ವ್ಯಾಪಾರಸ್ಥರಿಗೆ ಪರಿಹಾರ ನೀಡಲು ಮುಂದಾಗಿದೆ. ಈ ಸಂಬಂಧ ಮಂಡ್ಯ ಜಿಲ್ಲಾಡಳಿತ ಸಮೀಕ್ಷೆ ಮಾಡಿ ಹಾನಿಯಾದ ಕಟ್ಟಡ ಹಾಗೂ ವಸ್ತುಗಳಿಗೆ ಮೌಲ್ಯವನ್ನು ಅಂದಾಜು ಮಾಡಿ ವರದಿಯೊಂದನ್ನು ಸಿದ್ಧಪಡಿಸಿದೆ.

ಈ ಸಂಬಂಧ ನಾಗಮಂಗಲ ತಹಶೀಲ್ದಾರ್ ನೇತೃತ್ವದಲ್ಲಿ ಪಿಡಬ್ಲ್ಯುಡಿ ಸೇರಿದಂತೆ ಇತರೆ ಇಲಾಖೆ ಅಧಿಕಾರಿಗಳನ್ನು ಒಳಗೊಂಡ ಒಂದು ತಂಡ ರಚನೆ ಮಾಡಲಾಗಿತ್ತು. ಈ ತಂಡ ಎಸ್‌ಆರ್ ರೇಟ್ ಪ್ರಕಾರ ಹಾನಿಯ ಅಂದಾಜನ್ನು ಮಾಡಿದ್ದಾರೆ. ಎಸ್‌ಆರ್ ರೇಟ್ ಪ್ರಕಾರ ಗಲಭೆಯಿಂದ ಹಾನಿಗೆ ಒಳಗಾಗಿರುವ ಕಟ್ಟದ ಪ್ರಮಾಣ ಮೌಲ್ಯ 1.47 ಕೋಟಿ ರೂ. ಹಾಗೂ ಬೆಂಕಿಯ ಕೆನ್ನಾಲೆಗೆ ಸುಟ್ಟು ಕರಕಲಾದ ಸರಕಿನ ಮೌಲ್ಯ 1.18 ಕೋಟಿ ರೂ. ಎಂದು ಅಂದಾಜು ಮಾಡಲಾಗಿದೆ. ಈ ವರದಿಯನ್ನು ಸರ್ಕಾರಕ್ಕೆ ನೀಡಿ, ಸೂಕ್ತ ಪರಿಹಾರ ನೀಡವಂತೆ ಮಂಡ್ಯ ಡಿಸಿ ಡಾ.ಕುಮಾರ್ ಪತ್ರ ಬರೆದಿದ್ದಾರೆ.

ನಾಗಮಂಗಲ ಗಲಭೆಯಿಂದ ಅಪಾರ ಪ್ರಮಾಣ ಕಟ್ಟಡ ಹಾಗೂ ಸರಕುಗಳು ಹಾನಿಯಾಗಿವೆ. ಸರ್ಕಾರ ಈ ವರದಿಯನ್ನು ಆಧರಿಸಿ ಎಷ್ಟು ಪರಿಹಾರವನ್ನು ಘೋಷಣೆ ಮಾಡಲಿದೆಯೇ ಅನ್ನೋದನ್ನು ಕಾದುನೋಡಬೇಕಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com